# ಯಾಜಕಕಾಂಡ

## ಮುನ್ನುಡಿ

ಪ್ರಾಚೀನ ಇಸ್ರಯೇಲರಲ್ಲಿ ರೂಢಿಯಲ್ಲಿದ್ದ ಆರಾಧನಾವಿಧಿಗಳು, ಧಾರ್ಮಿಕ ನಿಯಮಗಳು, ಅವರ ಯಾಜಕರ ಆಚಾರ–ವಿಚಾರಗಳು, ಇವುಗಳ ಸೂಕ್ಷ್ಮ ಪರಿಚಯ ಬೈಬಲ್ಲಿನ ಈ ಮೂರನೇ ಪುಸ್ತಕದಲ್ಲಿ ಸಿಗುತ್ತದೆ.

ಇಸ್ರಯೇಲರ ದೇವರು ಮಹಾ ಪರಿಶುದ್ಧರು, ಪರಮ ಪೂಜ್ಯರು, ಶ್ರೀ ಸರ್ವೇಶ್ವರ! ಅವರ ಆರಾಧಕರು ಪುನೀತರಾಗಿರಬೇಕು ಎಂಬುದು ಈ ಕಾಂಡದ ತಿರುಳು.

“ನಿನ್ನ ನೆರೆಯವನನ್ನು ನಿನ್ನಂತೆಯೇ ಪ್ರೀತಿಸು” ಎಂಬ ಆಜ್ಞೆಯನ್ನು ಪ್ರಭು ಯೇಸು ಎರಡನೇ ಆಜ್ಞೆ ಎಂದು ಕರೆದಿದ್ದಾರೆ. ವಿಶ್ವವಿಖ್ಯಾತವಾದ ಈ ನುಡಿಯ ಮೂಲವನ್ನು ಇಲ್ಲಿಯ 19ನೇ ಅಧ್ಯಾಯದ 18ನೇ ವಚನದಲ್ಲಿ ಕಾಣಬಹುದು.

### ಪರಿವಿಡಿ


| | | | | |
|---|---|---|---|---|
| ಕಾಣಿಕೆ ಮತ್ತು ಬಲಿದಾನಗಳನ್ನು ಕುರಿತ ನಿಯಮಗಳು | – | 1.1 | – | 7.38 |
| ಆರೋನನ ಮತ್ತು ಅವನ ಮಕ್ಕಳ ಯಾಜಕಾಭಿಷೇಕ | – | 8.1 | – | 10.20 |
| ಧಾರ್ಮಿಕ ಶುದ್ಧಾಶುದ್ಧತೆಗಳು | – | 11.1 | – | 15.33 |
| ಪಾಪಪರಿಹಾರಕ ದಿನ | – | 16.1 | – | 16.34 |
| ಪುನೀತ ಜೀವನ ಮತ್ತು ದೇವಾರಾಧನೆ | – | 17.1 | – | 27.34 |


### ದಹನ ಬಲಿಗಳು

**1** ಸರ್ವೇಶ್ವರಸ್ವಾಮಿ ಮೋಶೆಯನ್ನು ಕರೆದು, ದೇವದರ್ಶನದ ಗುಡಾರದಿಂದ ಅವನ ಸಂಗಡ ಮಾತಾಡಿ,
ಇಸ್ರಯೇಲರಿಗೆ ಹೀಗೆ ಆಜ್ಞಾಪಿಸಬೇಕೆಂದು ತಿಳಿಸಿದರು: 2“ನಿಮ್ಮಲ್ಲಿ ಯಾರಾದರೂ ಸರ್ವೇಶ್ವರನಿಗೆ ಒಂದು
ಪ್ರಾಣಿಯನ್ನು ಸಮರ್ಪಿಸಲು ಆಶಿಸಿದರೆ, ಅದನ್ನು ದನಕರುಗಳಿಂದಾಗಲಿ, ಆಡುಕುರಿಗಳಿಂದಾಗಲಿ
ಆಯ್ದುಕೊಂಡು ಸಮರ್ಪಿಸಲಿ. 3ಅಂಥವನು ದನ ಕರುಗಳನ್ನು ದಹನಬಲಿಯನ್ನಾಗಿ ಸಮರ್ಪಿಸುವುದಾದರೆ
ಆ ಪ್ರಾಣಿ ಕಳಂಕರಹಿತವಾದ ಗಂಡಾಗಿರಬೇಕು. ಸರ್ವೇಶ್ವರನಿಗೆ ಒಪ್ಪಿಗೆಯಾಗುವಂತೆ ಅದನ್ನು
ದೇವದರ್ಶನದ ಗುಡಾರದ ಬಳಿಗೆ ತರಬೇಕು. 4ಅರ್ಪಿಸುವವನು ಆ ಪ್ರಾಣಿಯ ತಲೆಯ ಮೇಲೆ
ಕೈಯಿಡಬೇಕು. ಆಗ ಅದು ಅವನ ಪಾಪಕ್ಕೆ ಪ್ರಾಯಶ್ಚಿತ್ತವಾಗಿ ಅಂಗೀಕೃತವಾಗುವುದು. 5ಅವನು ಅದನ್ನು
ಸರ್ವೇಶ್ವರನ ಎದುರಿನಲ್ಲಿ ವಧಿಸಬೇಕು. ಆರೋನನ ವಂಶಜರಾದ ಯಾಜಕರು ಅದರ ರಕ್ತವನ್ನು
ತೆಗೆದುಕೊಂಡು ದೇವದರ್ಶನದ ಗುಡಾರದ ಬಾಗಿಲಿಗೆ ಎದುರಾಗಿರುವ ಬಲಿಪೀಠದ ಸುತ್ತಲೂ
ಚಿಮುಕಿಸಬೇಕು. 6ಅದೂ ಅಲ್ಲದೆ ಅರ್ಪಿಸುವವನು ಆ ಪ್ರಾಣಿಯ ಚರ್ಮವನ್ನು ಸುಲಿದು ಅದರ ದೇಹವನ್ನು
ತುಂಡು ತುಂಡಾಗಿ ಕಡಿಯಬೇಕು. 7ಆರೋನನ ವಂಶಜರಾದ ಯಾಜಕರು ಬಲಿಪೀಠದ ಮೇಲೆ
ಬೆಂಕಿಯನ್ನಿಟ್ಟು 8ಅದರ ಮೇಲೆ ಕಟ್ಟಿಗೆಯನ್ನು ಪೇರಿಸಬೇಕು. ಪ್ರಾಣಿಯ ಆ ತುಂಡುಗಳನ್ನೂ ತಲೆಯನ್ನೂ
ಕೊಬ್ಬನ್ನೂ ಅದರ ಮೇಲೆ ಕ್ರಮವಾಗಿ ಇಡಬೇಕು. 9ಅದರ ಕರುಳುಗಳನ್ನೂ ಕಾಲುಗಳನ್ನೂ ನೀರಿನಲ್ಲಿ

ತೊಳೆದ ನಂತರ ಯಾಜಕನು ಅದನ್ನು ಪೂರ್ತಿಯಾಗಿ ಬಲಿಪೀಠದ ಮೇಲೆ ಹೋಮಮಾಡಬೇಕು. ಅದು
ದಹನಬಲಿ. ಸರ್ವೇಶ್ವರನಿಗೆ ಪ್ರಿಯವಾದ ಸುಗಂಧಕರ ಬಲಿ.

10 “ಒಬ್ಬನು ಆಡನ್ನಾಗಲಿ, ಕುರಿಯನ್ನಾಗಲಿ ದಹನಬಲಿದಾನ ಮಾಡಬೇಕೆಂದಿದ್ದರೆ ಅಂಥವನು
ಕಳಂಕರಹಿತವಾದ ಗಂಡನ್ನು ತರಲಿ. 11ಅದನ್ನು ಸರ್ವೇಶ್ವರನ ಸನ್ನಿಧಿಯಲ್ಲಿ ಬಲಿಪೀಠದ ಉತ್ತರದ ಕಡೆ
ವಧಿಸಲಿ. ತರುವಾಯ ಆರೋನನ ವಂಶಜರಾದ ಯಾಜಕರು ಅದರ ರಕ್ತವನ್ನು ಬಲಿಪೀಠದ ಸುತ್ತಲೂ
ಚಿಮುಕಿಸಲಿ. 12ಅರ್ಪಿಸುವವನು ಆ ಪ್ರಾಣಿಯ ದೇಹವನ್ನು ತುಂಡುತುಂಡಾಗಿ ಕಡಿದ ಮೇಲೆ ಯಾಜಕನು
ಆ ತುಂಡುಗಳನ್ನೂ ತಲೆಯನ್ನೂ ಕೊಬ್ಬನ್ನೂ ಬಲಿಪೀಠ ಮೇಲಿನ ಬೆಂಕಿಯಲ್ಲಿ ಕಟ್ಟಿಗೆಯ ಮೇಲೆ ಕ್ರಮವಾಗಿ
ಇಡಬೇಕು. 13ಅದರ ಕರುಳುಗಳನ್ನೂ ಕಾಲುಗಳನ್ನೂ ನೀರಿನಲ್ಲಿ ತೊಳೆಸಿದ ನಂತರ ಯಾಜಕನು ಅದನ್ನು
ಪೂರ್ತಿಯಾಗಿ ಬಲಿಪೀಠದ ಮೇಲೆ ಹೋಮ ಮಾಡಬೇಕು. ಅದು ದಹನಬಲಿ. ಸರ್ವೇಶ್ವರನಿಗೆ ಪ್ರಿಯವಾದ
ಸುಗಂಧಕರ ಬಲಿ.

14 “ಸರ್ವೇಶ್ವರನಿಗೆ ದಹನಬಲಿಯಾಗಿ ಸಮರ್ಪಿಸುವಂಥದ್ದು ಪಕ್ಷಿ ಜಾತಿಯಾಗಿದ್ದರೆ ಅದು
ಬೆಳವಕ್ಕಿಯಾಗಿರಲಿ ಅಥವಾ ಮರಿ ಪಾರಿವಾಳ ಆಗಿರಲಿ. 15ಯಾಜಕನು ಅದನ್ನು ಬಲಿಪೀಠದ ಬಳಿಗೆ ತಂದು
ಕುತ್ತಿಗೆ ಮುರಿದು ಬಲಿಪೀಠದ ಮೇಲೆ ಹೋಮಮಾಡಲಿ; ಅದರ ರಕ್ತವನ್ನು ಬಲಿಪೀಠದ ಪಕ್ಕದಲ್ಲಿ ಹಿಂಡಲಿ.
16ಅದರ ಕರುಳುಗಳನ್ನೂ ಗರಿಗಳನ್ನೂ ತೆಗೆದುಬಿಟ್ಟು ಬಲಿಪೀಠದ ಪೂರ್ವ ದಿಕ್ಕಿನಲ್ಲಿರುವ ಬೂದಿಯ
ಎಡೆಯಲ್ಲಿ ಬಿಸಾಡಲಿ. 17ಯಾಜಕನು ಆ ಹಕ್ಕಿಯ ದೇಹವನ್ನು ಇಬ್ಭಾಗವಾಗಿ ಸೀಳಲಿ; ಒಂದೊಂದು
ಭಾಗದಲ್ಲಿ ಒಂದು ರೆಕ್ಕೆ ಇರುವಂತೆ ಸೀಳಲಿ. ಅನಂತರ ಅದನ್ನು ಬಲಿಪೀಠದ ಮೇಲಿನ ಬೆಂಕಿಯಲ್ಲಿರುವ
ಕಟ್ಟಿಗೆಯ ಮೇಲೆ ಹೋಮಮಾಡಲಿ. ಅದು ದಹನಬಲಿ. ಸರ್ವೇಶ್ವರನಿಗೆ ಪ್ರಿಯವಾದ ಸುಗಂಧಕರ ಬಲಿ.

## ಧಾನ್ಯನೈವೇದ್ಯ

**2** “ಯಾರಾದರು ಸರ್ವೇಶ್ವರಸ್ವಾಮಿಗೆ ಧಾನ್ಯವನ್ನು ನೈವೇದ್ಯ ಮಾಡಬೇಕೆಂದಿದ್ದರೆ ಅದು ಗೋದಿ
ಹಿಟ್ಟಾಗಿರಬೇಕು. ಅದರ ಮೇಲೆ ಎಣ್ಣೆ ಹೊಯ್ದು, ಸಾಂಬ್ರಾಣಿಯನ್ನಿಟ್ಟು, ಅದನ್ನು ಆರೋನನ ವಂಶಜರಾದ
ಯಾಜಕರ ಬಳಿಗೆ ತರಬೇಕು. 2ಅದು ದೇವರಿಗೆ ಸಮರ್ಪಿತವಾದುದೆಂದು ಸೂಚಿಸುವುದಕ್ಕಾಗಿ ಯಾಜಕನು
ಆ ಎಣ್ಣೆ ಬೆರೆಸಿದ ಹಿಟ್ಟಿನಲ್ಲಿ ಒಂದು ಹಿಡಿಯನ್ನು ಹಾಗು ಇಡೀ ಸಾಂಬ್ರಾಣಿಯನ್ನು ತೆಗೆದುಕೊಂಡು
ಬಲಿಪೀಠದ ಮೇಲೆ ಹೋಮಮಾಡಲಿ. ಅದು ಸರ್ವೇಶ್ವರನಿಗೆ ಪ್ರಿಯವಾದ ಸುಗಂಧಕರ ದಹನಬಲಿ. 3ಈ
ಕಾಣಿಕೆಯಲ್ಲಿ ಮಿಕ್ಕದ್ದು ಆರೋನನಿಗೂ ಅವನ ವಂಶದವರಿಗೂ ಸೇರತಕ್ಕದ್ದು. ಸರ್ವೇಶ್ವರನಿಗೆ
ಸಮರ್ಪಿತವಾಗಿ ಉಳಿಯುವ ಹೋಮಶೇಷವು ಮಹಾಪರಿಶುದ್ಧವಾದುದು.

4 “ನೀವು ಒಲೆಯಲ್ಲಿ ಅಡಿಗೆಮಾಡಿದ್ದನ್ನು ನೈವೇದ್ಯವಾಗಿ ಸಮರ್ಪಿಸಬೇಕಾದರೆ ಅದು ಎಣ್ಣೆ
ಬೆರೆಸಿದ ಹುಳಿಯಿಲ್ಲದ ಗೋದಿಹಿಟ್ಟಿನ ಹೋಳಿಗೆಗಳಾಗಿರಲಿ ಅಥವಾ ಎಣ್ಣೆ ಹಾಕಿದ ಹುಳಿಯಿಲ್ಲದ
ಕಡುಬುಗಳಾಗಿರಲಿ. 5ನೀವು ಅರ್ಪಿಸುವುದು ಕಬ್ಬಿಣದ ಹೆಂಚಿನ ಮೇಲೆ ಸುಟ್ಟದ್ದಾದರೆ ಅದು ಎಣ್ಣೆ ಬೆರೆಸಿದ
ಹುಳಿಯಿಲ್ಲದ ಗೋದಿಹಿಟ್ಟಿನದಾಗಿರಬೇಕು. 6ಅದನ್ನು ಚೂರುಚೂರಾಗಿ ಮುರಿದು ಅದರ ಮೇಲೆ ಎಣ್ಣೆ
ಹೊಯ್ದು ಕಾಣಿಕೆಯಾಗಿ ಕೊಡಬೇಕು. 7ನೀವು ಅರ್ಪಿಸುವುದು ಬಾಂಡ್ಲಿಯಲ್ಲಿ ಪಕ್ವಮಾಡಿದ್ದಾದರೆ ಅದು
ಎಣ್ಣೆ ಹೊಯ್ದ ಗೋದಿ ಹಿಟ್ಟಿನದಾಗಿರಬೇಕು. 8ನೀವು ಈ ಮೂರು ವಿಧವಾದ ನೈವೇದ್ಯವನ್ನು
ಸಮರ್ಪಿಸುವುದಾದರೆ ಅವುಗಳನ್ನು ಯಾಜಕನಿಗೆ ಒಪ್ಪಿಸಬೇಕು. ಅವನೇ ಅದನ್ನು ಬಲಿಪೀಠದ ಬಳಿಗೆ
ತರಲಿ. 9ಯಾಜಕನು ಅದು ಸಮರ್ಪಿತವಾದುದೆಂದು ಸೂಚಿಸುವುದಕ್ಕಾಗಿ ಅದರಲ್ಲಿ ಸ್ವಲ್ಪ ಭಾಗವನ್ನು
ಪ್ರತ್ಯೇಕಿಸಿ ಬಲಿಪೀಠದ ಮೇಲೆ ಹೋಮಮಾಡಲಿ. ಅದು ಸರ್ವೇಶ್ವರನಿಗೆ ಪ್ರಿಯವಾದ ಸುಗಂಧಕರ
ದಹನಬಲಿ. 10ಈ ಕಾಣಿಕೆಯಲ್ಲಿ ಮಿಕ್ಕದ್ದು ಆರೋನನಿಗೂ ಅವನ ವಂಶಜರಿಗೂ ಸೇರತಕ್ಕದ್ದು.
ಸರ್ವೇಶ್ವರನಿಗೆ ಸಮರ್ಪಿತವಾಗಿ ಉಳಿಕೆಯಾದದ್ದು ಮಹಾ ಪರಿಶುದ್ಧವಾದುದು.

11 “ನೀವು ಸರ್ವೇಶ್ವರನಿಗೆ ಕಾಣಿಕೆಯಾಗಿ ಸಮರ್ಪಿಸುವ ಯಾವ ಧಾನ್ಯದ ಪದಾರ್ಥವನ್ನಾಗಲಿ
ಹುಳಿಹಿಟ್ಟಿನಿಂದ ಮಾಡಬಾರದು. ಯಾವ ಹುಳಿಪದಾರ್ಥವನ್ನಾಗಲಿ ಸಿಹಿಪದಾರ್ಥವನ್ನಾಗಲಿ ಸರ್ವೇಶ್ವರನಿಗೆ

ಹೋಮ ಮಾಡಕೂಡದು. 12ಅವುಗಳನ್ನು ಪ್ರಥಮ ಫಲವಾಗಿ ಸರ್ವೇಶ್ವರನಿಗೆ ಸಮರ್ಪಿಸಬಹುದೇ ಹೊರತು
ಬಲಿಪೀಠದ ಮೇಲೆ ಸುವಾಸನೆಯನ್ನುಂಟು ಮಾಡುವುದಕ್ಕಾಗಿ ಹೋಮ ಮಾಡಕೂಡದು. 13ನೈವೇದ್ಯವಾಗಿ
ಸಮರ್ಪಿಸುವ ಎಲ್ಲ ಆಹಾರ ಪದಾರ್ಥಗಳಿಗೂ ಉಪ್ಪು ಹಾಕಿಯೆ ಸಮರ್ಪಿಸಬೇಕು. ಉಪ್ಪು ಸರ್ವೇಶ್ವರನ
ಸಂಗಡ ನಿಮಗಿರುವ ಒಡಂಬಡಿಕೆಯ ಸೂಚನೆ. ಆದ್ದರಿಂದ ಯಾವ ನೈವೇದ್ಯ ದ್ರವ್ಯವಾದರೂ ಉಪ್ಪಿಲ್ಲದೆ
ಇರಬಾರದು. ನೀವು ಅರ್ಪಿಸುವ ಎಲ್ಲ ಪದಾರ್ಥಗಳಲ್ಲಿಯೂ ಉಪ್ಪು ಸೇರಿಸಿಯೇ ಇರಬೇಕು.
14 “ನೀವು ಸರ್ವೇಶ್ವರನಿಗೆ ಪ್ರಥಮ ಧಾನ್ಯ ನೈವೇದ್ಯವನ್ನು ಮಾಡಬೇಕಾದರೆ ಅದು ಬೆಂಕಿಯಲ್ಲಿ
ಸುಟ್ಟ ಗೋದಿಯ ಹಸಿ ತೆನೆಗಳಾಗಿರಬೇಕು. 15ಅದು ನೈವೇದ್ಯ ವಸ್ತುವಾದುದರಿಂದ ಅದರ ಮೇಲೆ ಎಣ್ಣೆ
ಹೊಯ್ಯಬೇಕು; ಸಾಂಬ್ರಾಣಿ ಇಡಬೇಕು. 16ಯಾಜಕನು ಅದು ದೇವರಿಗೆ ಸಮರ್ಪಿತವಾದುದೆಂದು
ಸೂಚಿಸುವುದಕ್ಕಾಗಿ ಆ ಗೋದಿ ತೆನೆಯಿಂದಲೂ ಎಣ್ಣೆಯಿಂದಲೂ ಸ್ವಲ್ಪ ಭಾಗವನ್ನು ತೆಗೆದುಕೊಂಡು
ಸಾಂಬ್ರಾಣಿಯನ್ನೆಲ್ಲ ಅದಕ್ಕೆ ಸೇರಿಸಿ ಅಗ್ನಿಯ ಮೂಲಕ ಸರ್ವೇಶ್ವರನಿಗೆ ಹೋಮಮಾಡಲಿ.

## ಶಾಂತಿ ಸಮಾಧಾನಕ್ಕಾಗಿ ಬಲಿದಾನ

**3** “ಯಾರಾದರು ಶಾಂತಿಸಮಾಧಾನಕ್ಕಾಗಿ ಬಲಿದಾನ ಮಾಡಬೇಕಾದರೆ ಅಂಥವನು ಸಮರ್ಪಿಸುವ ಪ್ರಾಣಿ
ದನಕರುವಾಗಿದ್ದಲ್ಲಿ, ಅದು ಗಂಡಾಗಿರಲಿ ಅಥವಾ ಹೆಣ್ಣಾಗಿರಲಿ, ಕಳಂಕರಹಿತವಾಗಿರಬೇಕು. 2ಅವನು ಆ
ಪ್ರಾಣಿಯನ್ನು ಸರ್ವೇಶ್ವರನ ಸನ್ನಿಧಿಗೆ ತಂದು ಅದರ ತಲೆಯ ಮೇಲೆ ಕೈಯಿಡಬೇಕು; ದೇವದರ್ಶನದ
ಗುಡಾರದ ಬಾಗಿಲಲ್ಲಿ ವಧಿಸಬೇಕು. ಆರೋನನ ವಂಶದವರಾದ ಯಾಜಕರು ಅದರ ರಕ್ತವನ್ನು ಬಲಿಪೀಠದ
ಸುತ್ತಲೂ ಚಿಮುಕಿಸಬೇಕು. 3-4ಆ ಬಲಿಪ್ರಾಣಿಯ ಈ ಭಾಗಗಳನ್ನು: ಕರುಳ ಸುತ್ತಲಿನ ಕೊಬ್ಬನ್ನೂ
ಮೂತ್ರಪಿಂಡಗಳನ್ನೂ ಮತ್ತು ಅವುಗಳ ಮೇಲಿನ ಕೊಬ್ಬನ್ನೂ ಕಾಳಿಜದ ಉತ್ತಮ ಭಾಗವನ್ನೂ ತೆಗೆದು
ಸರ್ವೇಶ್ವರನಿಗೆ ಹೋಮಮಾಡಬೇಕು. 5ಆರೋನನ ವಂಶಜರಾದ ಯಾಜಕರು ಅದನ್ನು ಬಲಿಪೀಠದಲ್ಲಿ
ಉರಿಯುವ ಕಟ್ಟಿಗೆಯ ಮೇಲಿರುವ ದಹನಬಲಿಪದಾರ್ಥಗಳೊಡನೆ ಹೋಮಮಾಡಬೇಕು. ಅದು
ಸರ್ವೇಶ್ವರನಿಗೆ ಪ್ರಿಯವಾದ ಸುಗಂಧ ಬಲಿಯಾಗಿರುವುದು.
6 “ಶಾಂತಿಸಮಾಧಾನಕ್ಕಾಗಿ ಸರ್ವೇಶ್ವರನಿಗೆ ಸಮರ್ಪಿಸುವ ಬಲಿಪ್ರಾಣಿ ಕುರಿ ಅಥವಾ ಆಡು
ಆಗಿದ್ದರೆ, ಅದು ಗಂಡಾಗಿರಲಿ ಅಥವಾ ಹೆಣ್ಣಾಗಿರಲಿ, ಕಳಂಕರಹಿತವಾಗಿರಬೇಕು.
7 “ಅದು ಕುರಿಯಾಗಿದ್ದರೆ ತಂದವನು ಅದನ್ನು ಸರ್ವೇಶ್ವರನ ಸನ್ನಿಧಿಗೆ ತೆಗೆದುಕೊಂಡು ಬಂದು
ಅದರ ತಲೆಯ ಮೇಲೆ ಕೈಯಿಟ್ಟು 8ದೇವದರ್ಶನದ ಗುಡಾರದ ಎದುರಿಗೆ ಅದನ್ನು ವಧಿಸಬೇಕು. ಆರೋನನ
ವಂಶದವರಾದ ಯಾಜಕರು ಅದರ ರಕ್ತವನ್ನು ಬಲಿಪೀಠದ ಸುತ್ತಲು ಚಿಮುಕಿಸಬೇಕು.
9ಶಾಂತಿಸಮಾಧಾನಕ್ಕಾಗಿ ಅರ್ಪಿಸುವ ಆ ಬಲಿಪ್ರಾಣಿಯ ಕೊಬ್ಬನ್ನು ಸರ್ವೇಶ್ವರನಿಗೆ ಹೋಮವಾಗಿ
ಸಮರ್ಪಿಸಬೇಕು. 10ಹೇಗೆಂದರೆ, ಬಾಲದ ಕೊಬ್ಬನ್ನೆಲ್ಲಾ ಬೆನ್ನೆಲುವಿನ ಬಳಿಯಿಂದ ತೆಗೆದುಬಿಟ್ಟು ಅದನ್ನೂ
ಕರುಳ ಸುತ್ತಲಿನ ಕೊಬ್ಬನ್ನೂ ಮೂತ್ರಪಿಂಡಗಳನ್ನೂ ಅವುಗಳ ಮೇಲಿನ ಕೊಬ್ಬನ್ನು ಮತ್ತು ಕಾಳಿಜದ ಉತ್ತಮ
ಭಾಗವನ್ನೂ 11ಯಾಜಕನು ಬಲಿಪೀಠದ ಮೇಲೆ ಹೋಮಮಾಡಬೇಕು. ಅದು ಸರ್ವೇಶ್ವರನಿಗೆ
ದಹನಬಲಿಯ ಆಹಾರವಾಗುವುದು.
12 “ಸಮರ್ಪಿಸುವಂಥದ್ದು ಆಡಾಗಿದ್ದರೆ ಅರ್ಪಿಸುವವನು ಅದನ್ನು ಸರ್ವೇಶ್ವರನ ಸನ್ನಿಧಿಗೆ
ತೆಗೆದುಕೊಂಡು ಬರಬೇಕು. 13ಅದರ ತಲೆಯ ಮೇಲೆ ಕೈಯಿಟ್ಟು ದೇವದರ್ಶನದ ಗುಡಾರದ ಎದುರಿಗೆ
ವಧಿಸಬೇಕು. ಆರೋನನ ವಂಶಜರಾದ ಯಾಜಕರು ಅದರ ರಕ್ತವನ್ನು ಬಲಿಪೀಠದ ಸುತ್ತಲು
ಚಿಮುಕಿಸಬೇಕು. 14ಅದರ ಕರುಳ ಸುತ್ತಲಿನ ಕೊಬ್ಬನ್ನೂ ಮೂತ್ರಪಿಂಡಗಳನ್ನೂ 15ಮತ್ತು ಅವುಗಳ ಮೇಲಿನ
ಕೊಬ್ಬನ್ನೂ ಕಾಳಿಜದ ಉತ್ತಮ ಭಾಗವನ್ನೂ ಸರ್ವೇಶ್ವರನಿಗೆ ಅಗ್ನಿಯ ಮೂಲಕ ಸಮರ್ಪಿಸಬೇಕು.
16ಯಾಜಕನು ಅದನ್ನು ಬಲಿಪೀಠದ ಮೇಲೆ ಹೋಮಮಾಡಬೇಕು. ಅದು ಸುಗಂಧ ಹೋಮ ರೂಪವಾಗಿ
ಸರ್ವೇಶ್ವರನಿಗೆ ಆಹಾರವಾಗಿರುವುದು. ಬಲಿಪ್ರಾಣಿಗಳ ಕೊಬ್ಬೆಲ್ಲವು ಸರ್ವೇಶ್ವರನದು. 17ಕೊಬ್ಬನ್ನಾಗಲಿ,

ರಕ್ತವನ್ನಾಗಲಿ ತಿನ್ನಕೂಡದು ಎಂಬುದು ನಿಮಗೂ ನಿಮ್ಮ ಸಂತತಿಯವರಿಗೂ ನೀವು ವಾಸಿಸುವ ಎಲ್ಲ ಸ್ಥಳಗಳಲ್ಲಿಯೂ ಶಾಶ್ವತ ನಿಯಮವಾಗಿದೆ.”

### ತಿಳಿಯದೆ ಮಾಡಿದ ದೋಷಗಳಿಗೆ ಪರಿಹಾರ ಬಲಿದಾನ

**4** ಸರ್ವೇಶ್ವರಸ್ವಾಮಿ ಮೋಶೆಗೆ ಹೀಗೆಂದರು: [2]“ನೀನು ಇಸ್ರಯೇಲರ ಸಂಗಡ ಮಾತಾಡಿ ಹೇಳಬೇಕಾದುದು
ಏನೆಂದರೆ: ಯಾರೇ ಆಗಲಿ ಸರ್ವೇಶ್ವರನು ನಿಷೇಧಿಸಿದ ಕಾರ್ಯಗಳಲ್ಲಿ ಯಾವುದನ್ನಾದರು ತಿಳಿಯದೆಮಾಡಿ
ದೋಷಿಯಾದರೆ ಆ ದೋಷಪರಿಹಾರಕ್ಕಾಗಿ ಈ ಕ್ರಮಗಳನ್ನು ಅನುಸರಿಸಬೇಕು:

3 “ಅಭಿಷಿಕ್ತನಾದ ಯಾಜಕನೇ ಅಂಥ ದೋಷಿಯಾಗಿ ಜನರೆಲ್ಲರನ್ನು ಅಪರಾಧಕ್ಕೆ ಒಳಪಡಿಸಿದರೆ
ತನ್ನ ದೋಷಪರಿಹಾರಕ್ಕಾಗಿ ಅವನು ಕಳಂಕರಹಿತವಾದ ಪ್ರಾಯದ ಹೋರಿಯೊಂದನ್ನು ಸರ್ವೇಶ್ವರನಿಗೆ
ಸಮರ್ಪಿಸಬೇಕು. [4]ಅವನು ಆ ಹೋರಿಯನ್ನು ಸರ್ವೇಶ್ವರನ ಸನ್ನಿಧಿಗೆ, ದೇವದರ್ಶನದ ಗುಡಾರದ
ಬಾಗಿಲಿಗೆ, ತಂದು ಅದರ ತಲೆಯ ಮೇಲೆ ಕೈಯಿಟ್ಟು ಸರ್ವೇಶ್ವರನ ಸನ್ನಿಧಿಯಲ್ಲಿ ಅದನ್ನು ವಧಿಸಬೇಕು.
[5]ಅಭಿಷಿಕ್ತ ಯಾಜಕನು ಆ ಹೋರಿಯ ರಕ್ತದಲ್ಲಿ ಸ್ವಲ್ಪವನ್ನು ತೆಗೆದುಕೊಂಡು ದೇವದರ್ಶನದ ಗುಡಾರದೊಳಗೆ
ಬರಬೇಕು; [6]ಆ ರಕ್ತದಲ್ಲಿ ಬೆರಳನ್ನು ಅದ್ದಿ ಮಹಾ ಪವಿತ್ರ ಸ್ಥಾನದ ಮುಂದಿನ ತೆರೆಯ ಎದುರಿಗೆ,
ಸರ್ವೇಶ್ವರನ ಸನ್ನಿಧಿಯಲ್ಲಿ ಏಳು ಸಾರಿ ಚಿಮುಕಿಸಬೇಕು. [7]ಬಳಿಕ ಯಾಜಕನು ದೇವದರ್ಶನದ
ಗುಡಾರದೊಳಗೆ ಸರ್ವೇಶ್ವರನ ಸನ್ನಿಧಿಯಲ್ಲಿರುವ ಪರಿಮಳ ಧೂಪವೇದಿಕೆಯ ಕೊಂಬುಗಳಿಗೆ ಆ ರಕ್ತವನ್ನು
ಹಚ್ಚಿ ಹೋರಿಯ ಮಿಕ್ಕ ರಕ್ತವನ್ನೆಲ್ಲ ದೇವದರ್ಶನದ ಗುಡಾರದ ಬಾಗಿಲಿಗೆ ಎದುರಾಗಿ ದಹನಬಲಿ ಕೊಡುವ
ಬಲಿಪೀಠದ ಬುಡದಲ್ಲಿ ಸುರಿಯಬೇಕು. [8]ಆ ದೋಷಪರಿಹಾರಕ ಬಲಿಹೋರಿಯ ಕೊಬ್ಬನ್ನೆಲ್ಲಾ, ಅಂದರೆ
ಕರುಳ ಸುತ್ತಲಿನ ಕೊಬ್ಬನ್ನೂ [9]ಮೂತ್ರಪಿಂಡಗಳನ್ನೂ ಅವುಗಳ ಮೇಲಿನ ಕೊಬ್ಬನ್ನೂ ಕಾಳಿಜದ ಉತ್ತಮ
ಭಾಗವನ್ನೂ [10]ಶಾಂತಿಸಮಾಧಾನದ ಬಲಿಪ್ರಾಣಿಯಲ್ಲಿ ಪ್ರತ್ಯೇಕಿಸಿದಂತೆಯೇ ಇದರಲ್ಲೂ ಪ್ರತ್ಯೇಕಿಸಿ,
ದಹನಬಲಿಪೀಠದ ಮೇಲೆ ಹೋಮಮಾಡಬೇಕು. [11]ಆ ಹೋರಿಯಲ್ಲಿ ಮಿಕ್ಕದ್ದನ್ನೆಲ್ಲಾ, ಅಂದರೆ ಅದರ
ಚರ್ಮ, ಮಾಂಸ, ತಲೆ, ಕಾಲುಗಳು, ಕರುಳುಗಳು [12]ಹಾಗು ಕರುಳುಗಳಲ್ಲಿರುವ ಕಲ್ಮಶ ಇವುಗಳನ್ನೆಲ್ಲ
ಪಾಳೆಯದ ಹೊರಗೆ, ವೇದಿಕೆಯ ಬೂದಿಯನ್ನು ಹಾಕುವ ಶುದ್ಧವಾದ ಸ್ಥಳಕ್ಕೆ ತೆಗೆದುಕೊಂಡು ಹೋಗಿ,
ಕಟ್ಟಿಗೆಯ ಮೇಲಿರಿಸಿ, ಬೆಂಕಿಯಲ್ಲಿ ಸುಡಿಸಿಬಿಡಬೇಕು. ಬೂದಿಯನ್ನು ಹಾಕುವ ಸ್ಥಳದಲ್ಲೇ ಅದನ್ನು
ಸುಡಿಸಿಬಿಡಬೇಕು.

13 “ಇಸ್ರಯೇಲರ ಸಮಾಜವೆಲ್ಲ ತಿಳಿಯದೆ ದೋಷಿಗಳಾದರೆ, ಅಂದರೆ ಸರ್ವೇಶ್ವರನು ನಿಷೇಧಿಸಿದ
ಕಾರ್ಯಗಳಲ್ಲಿ ಅವರು ಯಾವುದನ್ನಾದರು ಮಾಡಿ ದೋಷಕ್ಕೆ ಗುರಿಯಾದರೆ, [14]ಮೊದಲು ತಮಗೂ
ಮರೆಯಾಗಿದ್ದ ಆ ದೋಷವು ತಿಳಿದು ಬಂದ ನಂತರ ಅದನ್ನು ಪರಿಹರಿಸಿಕೊಳ್ಳುವುದಕ್ಕಾಗಿ
ಹೋರಿಯೊಂದನ್ನು ಸಮರ್ಪಿಸಬೇಕು. ಆ ಹೋರಿಯನ್ನು ದೇವದರ್ಶನದ ಗುಡಾರದ ಬಾಗಿಲಿಗೆ
ತರಿಸಿದಾಗ ಸಮಾಜದ ಹಿರಿಯರು [15]ಸರ್ವೇಶ್ವರನ ಸನ್ನಿಧಿಯಲ್ಲಿ ಅದರ ತಲೆಯ ಮೇಲೆ ತಮ್ಮ
ಕೈಗಳನ್ನಿಡಬೇಕು. ಸರ್ವೇಶ್ವರನ ಸನ್ನಿಧಿಯಲ್ಲಿ ಅದನ್ನು ವಧಿಸಬೇಕು. [16]ಅಭಿಷಿಕ್ತಯಾಜಕನು ಅದರ ರಕ್ತದಲ್ಲಿ
ಸ್ವಲ್ಪವನ್ನು ದೇವದರ್ಶನದ ಗುಡಾರದೊಳಗೆ ತಂದು [17]ಅದರಲ್ಲಿ ಬೆರಳನ್ನು ಅದ್ದಿ ತೆರೆಯ ಮುಂದೆ
ಸರ್ವೇಶ್ವರನ ಸನ್ನಿಧಿಯಲ್ಲಿ ಅದನ್ನು ಏಳು ಸಾರಿ ಚಿಮುಕಿಸಬೇಕು. [18]ಆ ರಕ್ತದಲ್ಲಿ ಸ್ವಲ್ಪವನ್ನು ದೇವದರ್ಶನದ
ಗುಡಾರದೊಳಗೆ ಸರ್ವೇಶ್ವರನ ಸನ್ನಿಧಿಯಲ್ಲಿರುವ ಧೂಪವೇದಿಕೆಯ ಕೊಂಬುಗಳಿಗೆ ಹಚ್ಚಬೇಕು.
[19]ಮಿಕ್ಕದ್ದನ್ನೆಲ್ಲಾ ದೇವದರ್ಶನದ ಗುಡಾರದ ಬಾಗಿಲಿಗೆ ಎದುರಾಗಿರುವ ಬಲಿಪೀಠದ ಬುಡದಲ್ಲಿ ಸುರಿದು
ಬಿಡಬೇಕು. [20]ಅಭಿಷಿಕ್ತ ಯಾಜಕನು ದೋಷಪರಿಹಾರಕ ಹೋರಿಯ ವಿಷಯದಲ್ಲಿ ಹೇಗೆ ಮಾಡಬೇಕೆಂದು
ವಿಧಿಸಲಾಯಿತೋ ಹಾಗೆಯೆ, ಇದರ ವಿಷಯದಲ್ಲೂ ಮಾಡಬೇಕು. ಯಾಜಕನು ಅವರಿಗೋಸ್ಕರ
ದೋಷಪರಿಹಾರ ಮಾಡಿದ ನಂತರ ಅವರಿಗೆ ಕ್ಷಮಾಪಣೆಯಾಗುವುದು. [21]ಆ ಮೊದಲನೆಯ ಹೋರಿಯನ್ನು
ಪಾಳೆಯದ ಹೊರಗೆ ತೆಗೆದುಕೊಂಡು ಹೋಗಿ ಸುಡಿಸಿ ಬಿಟ್ಟಂತೆಯೇ ಈ ಹೋರಿಯನ್ನೂ ಸುಡಿಸಿಬಿಡಬೇಕು.
ಇದು ಜನ ಸಮಾಜದ ದೋಷಪರಿಹಾರಕ ಬಲಿ.

22 “ಮುಖ್ಯಾಧಿಕಾರಿಯೊಬ್ಬನು ತನ್ನ ದೇವರಾದ ಸರ್ವೇಶ್ವರನು ನಿಷೇಧಿಸಿದ ಕಾರ್ಯಗಳಲ್ಲಿ ಯಾವುದನ್ನಾದರೂ ತಿಳಿಯದೆ ಮಾಡಿ ದೋಷಿಯಾದರೆ [23]ತನ್ನ ತಪ್ಪು ತನಗೆ ತಿಳಿದು ಬಂದಾಗ ಅವನು ಕಳಂಕರಹಿತವಾದ ಒಂದು ಹೋತವನ್ನು ತಂದು ಸಮರ್ಪಿಸಬೇಕು. [24]ಅವನು ಆ ಹೋತದ ತಲೆಯ ಮೇಲೆ ಕೈಯಿಟ್ಟು ಸರ್ವೇಶ್ವರನ ಸನ್ನಿಧಿಯಲ್ಲಿ, ದಹನಬಲಿಪ್ರಾಣಿಗಳನ್ನು ವಧಿಸುವ ಸ್ಥಳದಲ್ಲೇ ಅದನ್ನು ವಧಿಸಬೇಕು. ಅದು ದೋಷಪರಿಹಾರಕ ಬಲಿ. [25]ಯಾಜಕನು ಆ ಪ್ರಾಣಿಯ ರಕ್ತದಲ್ಲಿ ಸ್ವಲ್ಪವನ್ನು ಬೆರಳಿನಿಂದ ತೆಗೆದುಕೊಂಡು ಬಲಿಪೀಠದ ಕೊಂಬುಗಳಿಗೆ ಹಚ್ಚಿ, ಮಿಕ್ಕ ರಕ್ತವನ್ನು ಬಲಿಪೀಠದ ಬುಡದಲ್ಲಿ ಸುರಿದುಬಿಡಬೇಕು. [26]ಶಾಂತಿ ಸಮಾಧಾನದ ಬಲಿಪ್ರಾಣಿಯ ಕೊಬ್ಬನ್ನು ಅವನು ಹೋಮಮಾಡುವ ಪ್ರಕಾರವೇ ಇದರ ಎಲ್ಲ ಕೊಬ್ಬನ್ನೂ ಹೋಮಮಾಡಬೇಕು. ಹೀಗೆ ಯಾಜಕನು ಅವನಿಗೋಸ್ಕರ ದೋಷಪರಿಹಾರವನ್ನು ಮಾಡುವುದರಿಂದ ಅವನಿಗೆ ಕ್ಷಮೆ ದೊರಕುವುದು.

27 “ನಿಮ್ಮ ನಾಡಿನವರಲ್ಲಿ ಬೇರೆ ಯಾರಾದರು ಸರ್ವೇಶ್ವರನು ನಿಷೇಧಿಸಿದ ಕಾರ್ಯಗಳಲ್ಲಿ ಯಾವುದನ್ನಾದರೂ ತಿಳಿಯದೆ ಮಾಡಿ ದೋಷಿಯಾದರೆ [28]ತನ್ನ ತಪ್ಪು ತನಗೆ ತಿಳಿದು ಬಂದಾಗ ಆ ದೋಷಪರಿಹಾರಕ್ಕಾಗಿ ಕಳಂಕರಹಿತವಾದ ಒಂದು ಹೆಣ್ಣು ಮೇಕೆಯನ್ನು ತಂದು ಸಮರ್ಪಿಸಬೇಕು. [29]ಅವನು ಅದರ ತಲೆಯ ಮೇಲೆ ಕೈಯಿಟ್ಟ ನಂತರ ದಹನಬಲಿಪ್ರಾಣಿಗಳನ್ನು ವಧಿಸುವ ಸ್ಥಳದಲ್ಲೇ ಅದನ್ನು ವಧಿಸಬೇಕು. [30]ಯಾಜಕನು ಅದರ ರಕ್ತದಲ್ಲಿ ಸ್ವಲ್ಪವನ್ನು ಬೆರಳಿನಿಂದ ತೆಗೆದುಕೊಂಡು ಬಲಿಪೀಠದ ಕೊಂಬುಗಳಿಗೆ ಹಚ್ಚಿ ಮಿಕ್ಕ ರಕ್ತವನ್ನೆಲ್ಲಾ ಬಲಿಪೀಠದ ಬುಡದಲ್ಲಿ ಸುರಿದುಬಿಡಲಿ. [31]ಶಾಂತಿ ಸಮಾಧಾನದ ಬಲಿಪ್ರಾಣಿಗಳ ಕೊಬ್ಬನ್ನು ಪ್ರತ್ಯೇಕಿಸುವ ಪ್ರಕಾರ ಯಾಜಕನು ಇದರ ಎಲ್ಲ ಕೊಬ್ಬನ್ನು ಪ್ರತ್ಯೇಕಿಸಿ ಸರ್ವೇಶ್ವರನಿಗೆ ಸುವಾಸನೆಯನ್ನುಂಟು ಮಾಡಲು ಬಲಿಪೀಠದ ಮೇಲೆ ಹೋಮಮಾಡಲಿ. ಹೀಗೆ ಯಾಜಕನು ಅವನಿಗೋಸ್ಕರ ದೋಷಪರಿಹಾರ ಮಾಡುವುದರಿಂದ ಅವನಿಗೆ ಕ್ಷಮೆ ದೊರಕುವುದು.

32 “ಅವನು ತನ್ನ ದೋಷಪರಿಹಾರಾರ್ಥವಾಗಿ ತರುವುದು ಒಂದು ಕುರಿಯಾದರೆ ಅದು ಕಳಂಕರಹಿತವಾದ ಹೆಣ್ಣಾಗಿರಬೇಕು. [33]ಅವನು ಅದರ ತಲೆಯ ಮೇಲೆ ಕೈಯಿಟ್ಟನಂತರ ದಹನ ಬಲಿ ಪ್ರಾಣಿಗಳನ್ನು ವಧಿಸುವ ಸ್ಥಳದಲ್ಲೇ ಅದನ್ನು ದೋಷಪರಿಹಾರಾರ್ಥವಾಗಿ ವಧಿಸಬೇಕು. [34]ಯಾಜಕನು ಅದರ ರಕ್ತದಲ್ಲಿ ಸ್ವಲ್ಪವನ್ನು ಬೆರಳಿನಿಂದ ತೆಗೆದುಕೊಂಡು ಬಲಿಪೀಠದ ಕೊಂಬುಗಳಿಗೆ ಹಚ್ಚಿ ಮಿಕ್ಕ ರಕ್ತವನ್ನೆಲ್ಲಾ ಬಲಿಪೀಠದ ಬುಡದಲ್ಲಿ ಸುರಿದುಬಿಡಲಿ. [35]ಶಾಂತಿ ಸಮಾಧಾನದ ಬಲಿಪ್ರಾಣಿಗಳ ಕೊಬ್ಬನ್ನು ಪ್ರತ್ಯೇಕಿಸುವ ಪ್ರಕಾರ ಯಾಜಕನು ಇದರ ಎಲ್ಲ ಕೊಬ್ಬನ್ನು ಪ್ರತ್ಯೇಕಿಸಿ ಬಲಿಪೀಠದಲ್ಲಿ ಉರಿಯುವ ಹೋಮದ್ರವ್ಯಗಳ ಮೇಲೆ ಸರ್ವೇಶ್ವರನಿಗೆ ಹೋಮಮಾಡಲಿ. ಅವನ ತಪ್ಪಿನ ನಿಮಿತ್ತ ಯಾಜಕನು ಹೀಗೆ ಅವನಿಗೋಸ್ಕರ ದೋಷಪರಿಹಾರ ಮಾಡುವುದರಿಂದ ಅವನಿಗೆ ಕ್ಷಮೆ ದೊರಕುವುದು.

**ದೋಷಪರಿಹಾರಕ ಬಲಿದಾನಗಳು**

**5** “ಈ ಕೆಳಕಂಡ ಸಂದರ್ಭಗಳಲ್ಲಿ ಪಾಪ ಪರಿಹಾರಕ ಬಲಿಗಳನ್ನು ಒಪ್ಪಿಸಬೇಕಾಗುತ್ತದೆ: ಒಬ್ಬನು ತಾನು ಕಂಡು ಕೇಳಿದ್ದಕ್ಕೆ ನ್ಯಾಯಸ್ಥಾನದಲ್ಲಿ ಸಾಕ್ಷಿಹೇಳಬೇಕೆಂದು ಅಧಿಕೃತವಾದ ಕರೆಯಿದ್ದರೂ ಸಾಕ್ಷಿ ಹೇಳದೆ ಹೋದರೆ ಅವನು ಪಾಪಕ್ಕೆ ಗುರಿಯಾಗುವನು.

2 “ಒಬ್ಬನಿಗೆ ಅಶುದ್ಧವಾದ ಕಾಡುಮೃಗ, ಪಶು, ಜಂತು ಇವುಗಳ ಹೆಣವಾಗಲಿ, ಬೇರೆ ಯಾವ ಅಶುದ್ಧ ವಸ್ತುವಾಗಲಿ ತಗಲಿದರೆ, ಅವನಿಗೆ ತಿಳಿಯದೆ ಹೋದರೂ, ಅವನು ಅಶುದ್ಧನೂ ದೋಷಿಯೂ ಆಗುತ್ತಾನೆ.

3 “ಮನುಷ್ಯ ದೇಹದಿಂದುಂಟಾದ ಯಾವುದಾದರು ಒಂದು ಅಶುದ್ಧ ವಸ್ತು ತಗುಲಿದ್ದು, ಅವನಿಗೆ ತಿಳಿಯದೆ ಹೋದರೂ, ತಿಳಿದು ಬಂದಾಗ ಅವನು ದೋಷಿಯಾಗುತ್ತಾನೆ.

4 “ಯಾರಾದರು ಆಲೋಚಿಸದೆ ಒಳಿತಿಗಾಗಲಿ, ಕೇಡಿಗಾಗಲಿ ಏನಾದರು ಆಣೆಯಿಟ್ಟು ಕೊಂಡರೆ, ಅದು ಅವನಿಗೆ ತಿಳಿಯದೆ ಹೋದರೂ, ತಿಳಿದು ಬಂದಾಗ ಅವನು ಇದರಿಂದಲೂ ದೋಷಿಯಾಗುತ್ತಾನೆ.

5 “ಈ ವಿಷಯಗಳಲ್ಲಿ ಯಾರಾದರು ದೋಷಿಯಾದಾಗ ತಾನು ಮಾಡಿದ ತಪ್ಪನ್ನು ಒಪ್ಪಿಕೊಳ್ಳಬೇಕು.
6ಇಂಥ ದೋಷದ ಪ್ರಾಯಶ್ಚಿತ್ತಕ್ಕಾಗಿ ಒಂದು ಹೆಣ್ಣು ಕುರಿಯನ್ನಾಗಲಿ, ಒಂದು ಮೇಕೆಯನ್ನಾಗಲಿ
ಸರ್ವೇಶ್ವರನಿಗೆ ಸಮರ್ಪಿಸಬೇಕು. ಯಾಜಕನು ಅವನಿಗೋಸ್ಕರ ದೋಷಪರಿಹಾರ ಮಾಡುವನು.
7 “ಆಡುಕುರಿಯನ್ನು ಕೊಡಲು ಅವನಿಂದ ಆಗದಿದ್ದಲ್ಲಿ ದೋಷದ ಪ್ರಾಯಶ್ಚಿತ್ತಕ್ಕಾಗಿ ಎರಡು
ಬೆಳವಕ್ಕಿಗಳನ್ನಾಗಲಿ, ಎರಡು ಮರಿಪಾರಿವಾಳಗಳನ್ನಾಗಲಿ ತೆಗೆದುಕೊಂಡು ಬಂದು ದಹನಬಲಿಯಾಗಿ
ಒಂದನ್ನೂ ದೋಷಪರಿಹಾರಕ ಬಲಿಯಾಗಿ ಮತ್ತೊಂದನ್ನೂ ಸರ್ವೇಶ್ವರನಿಗೆ ಸಮರ್ಪಿಸಲಿ. 8ಅವನು
ಅವುಗಳನ್ನು ಯಾಜಕನ ಬಳಿಗೆ ತಂದಾಗ ಯಾಜಕನು ಮೊದಲು ದೋಷಪರಿಹಾರಾರ್ಥಕ ಆದದ್ದನ್ನು
ಸಮರ್ಪಿಸಬೇಕು. ಅವನು ಅದರ ಕುತ್ತಿಗೆ ಮುರಿಯಬೇಕು. ಅದರ ತಲೆಯನ್ನು ಪೂರಾ ತೆಗೆದುಬಿಡಬಾರದು.
9ಬಳಿಕ ದೋಷಪರಿಹಾರಾರ್ಥಕವಾದ ಆ ಹಕ್ಕಿಯ ರಕ್ತದಲ್ಲಿ ಸ್ವಲ್ಪವನ್ನು ಬಲಿಪೀಠದ ಬುಡದಲ್ಲಿ ಹಿಂಡಬೇಕು.
ಅದು ದೋಷಪರಿಹಾರಕ ಬಲಿ. 10ಮತ್ತೊಂದನ್ನು ವಿಧಿಯಾನುಸಾರ ದಹನಬಲಿ ಮಾಡಬೇಕು. ಅವನ
ತಪ್ಪಿನ ನಿಮಿತ್ತ ಯಾಜಕನು ಹೀಗೆ ದೋಷ ಪರಿಹಾರವನ್ನು ಮಾಡಿದಾಗ ಅವನಿಗೆ ಕ್ಷಮೆ ದೊರಕುವುದು.
11 “ಎರಡು ಬೆಳವಕ್ಕಿಗಳನ್ನಾಗಲಿ, ಎರಡು ಮರಿಪಾರಿವಾಳಗಳನ್ನಾಗಲಿ ಕೊಡಲು ಅವನಿಂದ ಆಗದೆ
ಹೋದಲ್ಲಿ ಅವನು ದೋಷಪರಿಹಾರಕ್ಕಾಗಿ ಮೂರು ಸೇರು ಗೋದಿಹಿಟ್ಟನ್ನು ತರಬೇಕು. ಆ ಹೋಮದ್ರವ್ಯವು
ದೋಷಪರಿಹಾರಾರ್ಥ ಆದ್ದರಿಂದ ಅದರ ಮೇಲೆ ಎಣ್ಣೆ ಹೊಯ್ಯಕೂಡದು. ಸಾಂಬ್ರಾಣಿಯನ್ನು
ಇಡಕೂಡದು. 12ಅವನು ಯಾಜಕನ ಬಳಿಗೆ ಅದನ್ನು ತಂದ ನಂತರ ಅದು ದೇವಾರ್ಪಿತವೆಂದು
ಸೂಚಿಸುವುದಕ್ಕಾಗಿ ಯಾಜಕನು ಅದರಲ್ಲಿ ಒಂದು ಹಿಡಿಯನ್ನು ತೆಗೆದುಕೊಂಡು ಸರ್ವೇಶ್ವರನಿಗೆ
ಸಮರ್ಪಿಸಿದ ಹೋಮ ದ್ರವ್ಯಗಳ ಮೇಲೆ ಬಲಿಪೀಠದಲ್ಲಿ ಹೋಮಮಾಡಬೇಕು. ಅದು ದೋಷಪರಿಹಾರಕ
ಬಲಿ. 13ಮೇಲೆ ಕಂಡ ವಿಷಯಗಳಲ್ಲಿ ಯಾವ ವಿಧವಾಗಿ ಅವನು ದೋಷಿಯಾದರೂ ಯಾಜಕನು
ಅವನಿಗೋಸ್ಕರ ಹೀಗೆ ದೋಷಪರಿಹಾರವನ್ನು ಮಾಡಿದ ನಂತರ ಅವನಿಗೆ ಕ್ಷಮೆ ದೊರಕುವುದು. ನೈವೇದ್ಯ
ದ್ರವ್ಯಗಳಲ್ಲಿ ಮಿಕ್ಕದ್ದು ಹೇಗೆ ಯಾಜಕನಿಗೆ ಸೇರತಕ್ಕದ್ದೋ ಹಾಗೆಯೆ ಇದರಲ್ಲಿಯೂ ಮಿಕ್ಕದ್ದು ಯಾಜಕನಿಗೆ
ಸೇರತಕ್ಕದ್ದು.”

## ಪ್ರಾಯಶ್ಚಿತ್ತ ಬಲಿದಾನಗಳು

14 ಮೋಶೆಗೆ ಸರ್ವೇಶ್ವರ ಹೀಗೆಂದರು: 15“ಯಾರಾದರು ಸರ್ವೇಶ್ವರನಿಗೆ ಸಲ್ಲಿಸಬೇಕಾದ ಪವಿತ್ರ
ವಸ್ತುಗಳನ್ನು ಸಮರ್ಪಿಸುವುದರಲ್ಲಿ ಅಜಾಗ್ರತೆಯಿಂದ ದ್ರೋಹಮಾಡಿ ದೋಷಕ್ಕೆ ಒಳಗಾದರೆ, ಅಂಥವರು
ಆ ಅಪರಾಧಕ್ಕೆ ಪರಿಹಾರ ಮಾಡಬೇಕು; ದೇವರ ಸೇವೆಗೆ ನೇಮಕವಾದ ನಾಣ್ಯದ ಮೇರೆಗೆ ಎರಡು ಅಥವಾ
ಹೆಚ್ಚು ನಾಣ್ಯ ಬೆಲೆಬಾಳುವುದೆಂದು ತೋರುವ ಕಳಂಕರಹಿತವಾದ ಒಂದು ಟಗರನ್ನು ಆಡುಕುರಿಗಳ
ಹಿಂಡಿನಿಂದ ತೆಗೆದುಕೊಂಡು ಬಂದು ಸರ್ವೇಶ್ವರನಿಗೆ ಸಮರ್ಪಿಸಬೇಕು. 16ತಾವು ಅನ್ಯಾಯವಾಗಿ
ಇಟ್ಟುಕೊಂಡಿರುವ ದೇವವಸ್ತುಗಳನ್ನು ಮಾತ್ರವಲ್ಲದೆ ಐದನೆಯ ಒಂದು ಭಾಗವನ್ನು ಹೆಚ್ಚಾಗಿ ಯಾಜಕನಿಗೆ
ತಂದುಕೊಡಬೇಕು. ಅವನು ಪರಿಹಾರಾರ್ಥವಾಗಿ ತಂದ ಟಗರಿನಿಂದ ಯಾಜಕನು ಅವರಿಗೋಸ್ಕರ
ದೋಷಪರಿಹಾರ ಮಾಡಿದಾಗ ಅವನಿಗೆ ಕ್ಷಮೆ ದೊರಕುವುದು.
17 “ನಿಮ್ಮಲ್ಲಿ ಯಾರಾದರು ಸರ್ವೇಶ್ವರನು ನಿಷೇಧಿಸಿದ ಕಾರ್ಯಗಳಲ್ಲಿ ಯಾವುದನ್ನಾದರು ಮಾಡಿ
ದೋಷಕ್ಕೆ ಒಳಗಾದರೆ, ಅದು ಅವರಿಗೆ ತಿಳಿಯದೆ ಹೋದರೂ, ಅವರು ಅದರಿಂದ ಅಪರಾಧಿಯಾಗಿ ತಮ್ಮ
ಪಾಪಫಲವನ್ನು ಅನುಭವಿಸಬೇಕು. 18ಅಂಥವರು ಪರಿಹಾರಕ್ಕಾಗಿ ಹಿಂಡಿನಿಂದ ಕಳಂಕರಹಿತವಾದ
ಟಗರೊಂದನ್ನು ಅಥವಾ ಅದಕ್ಕೆ ಸರಿಸಮಾನವಾದುದನ್ನು ಯಾಜಕನ ಬಳಿಗೆ ತೆಗೆದುಕೊಂಡು ಬರಬೇಕು.
ಅವರು ತಿಳಿಯದೆ ಮಾಡಿದ ತಪ್ಪನ್ನು ಪರಿಹರಿಸುವುದಕ್ಕಾಗಿ ಯಾಜಕನು ಅವರಿಗೋಸ್ಕರ ದೋಷಪರಿಹಾರ
ಮಾಡಬೇಕು; ಆಗ ಅವರಿಗೆ ಕ್ಷಮೆದೊರಕುವುದು. 19ಅವರು ಅಪರಾಧಿಗಳಾದುದರಿಂದ ಸರ್ವೇಶ್ವರನ
ಸನ್ನಿಧಿಯಲ್ಲಿ ಈ ಪರಿಹಾರ ಬಲಿಯನ್ನು ಅರ್ಪಿಸಬೇಕು.”

**6** ಸರ್ವೇಶ್ವರಸ್ವಾಮಿ ಮೋಶೆಗೆ ಹೀಗೆಂದರು: 2“ನಿಮ್ಮಲ್ಲಿ ಯಾರಾದರು ಮತ್ತೊಬ್ಬನಿಂದ ತಮ್ಮ ವಶಕ್ಕೆ
ಕೊಡಲಾದ ವಸ್ತುವಿನ ವಿಷಯದಲ್ಲಾಗಲಿ, ತಮ್ಮ ಬಳಿಯಲ್ಲಿ ಇಡಲಾದ ಅಡವಿನ ವಿಷಯದಲ್ಲಾಗಲಿ, ತಾನು
ಮಾಡಿದ ಕಳವಿನ ವಿಷಯದಲ್ಲಾಗಲಿ, ಸುಳ್ಳಾಡಿಯೋ, ಮತ್ತೊಬ್ಬನನ್ನು ಮೋಸಗೊಳಿಸಿಯೋ 3ಮತ್ತೊಬ್ಬನು
ಕಳೆದುಕೊಂಡದ್ದನ್ನು ತಾವು ಕಂಡು ಬೊಂಕಿಯೋ, ಸುಳ್ಳಾಣೆಯಿಟ್ಟೋ ಅವುಗಳನ್ನು ಹಿಂದಿರುಗಿಸದೆ ತಮ್ಮಲ್ಲೇ
ಇಟ್ಟುಕೊಂಡರೆ, ಇಂಥ ವಿಷಯಗಳಲ್ಲಿ ಪಾಪಮಾಡಿ, ಸರ್ವೇಶ್ವರನಿಗೆ ದ್ರೋಹಿಗಳಾಗಿ ದೋಷಕ್ಕೆ
ಒಳಗಾಗುತ್ತಾರೆ. 4–5ಅಂಥವರು ಆಯಾ ವಸ್ತುಗಳನ್ನು, ಅಂದರೆ ಕದ್ದದ್ದನ್ನು, ಮೋಸದಿಂದ ಪಡೆದದ್ದನ್ನು,
ತಮ್ಮ ವಶಕ್ಕೆ ತೆಗೆದುಕೊಂಡದ್ದನ್ನು ಪೂರ್ತಿಯಾಗಿ ಹಿಂದಕ್ಕೆ ತಂದುಕೊಡಬೇಕು. ಅದೂ ಅಲ್ಲದೆ, ಐದನೆಯ
ಒಂದು ಪಾಲನ್ನು ಹೆಚ್ಚಾಗಿ ಸೇರಿಸಿಕೊಡಬೇಕು. ಅವರು ಪರಿಹಾರ ಮಾಡುವ ದಿನದಲ್ಲೆ ಅದನ್ನು ಅದರ
ನಿಜವಾದ ಒಡೆಯನಿಗೆ ಹಿಂದಕ್ಕೆ ಕೊಡಬೇಕು. 6ಅವರು ಪರಿಹಾರಕ್ಕಾಗಿ, ತಮ್ಮ ಹಿಂಡಿನಿಂದ
ಕಳಂಕರಹಿತವಾದ ಒಂದು ಟಗರನ್ನು ಅಥವಾ ಅದಕ್ಕೆ ಸರಿಸಮಾನವಾದುದ್ದನ್ನು ತಂದು ಯಾಜಕನಿಗೆ
ಒಪ್ಪಿಸಬೇಕು. 7ಯಾಜಕನು ಅವರಿಗೋಸ್ಕರ ಸರ್ವೇಶ್ವರನ ಸನ್ನಿಧಿಯಲ್ಲಿ ದೋಷಪರಿಹಾರವನ್ನು ಮಾಡಿದಾಗ
ಅವರು ಯಾವ ವಿಷಯದಲ್ಲಿ ಅಪರಾಧಕ್ಕೆ ಒಳಗಾದರೋ ಆ ವಿಷಯದಲ್ಲಿ ಅವರಿಗೆ ಕ್ಷಮೆ ದೊರಕುವುದು.”

### ದಹನಬಲಿ ನಿಯಮಗಳು

8 ಮೋಶೆಗೆ ಸರ್ವೇಶ್ವರ ಹೀಗೆಂದರು: 9“ನೀನು ಆರೋನನಿಗೂ ಅವನ ವಂಶದವರಿಗೂ ಕೆಳಕಂಡ
ದಹನಬಲಿಯ ಈ ನಿಯಮಗಳನ್ನು ಆಜ್ಞಾಪಿಸು: ದಹನಬಲಿ ದ್ರವ್ಯವು ರಾತ್ರಿಯೆಲ್ಲಾ, ಮರುದಿನದ
ಬೆಳಗಿನವರೆಗೂ ಬಲಿಪೀಠದ ಮೇಲೆ ಉರಿಯುತ್ತಿರಬೇಕು. ಅದರಿಂದಲೇ ಬಲಿಪೀಠದ ಮೇಲಿನ ಬೆಂಕಿ
ಹೊತ್ತಿ ಉರಿಯುತ್ತಿರಬೇಕು. 10ಯಾಜಕನು ನಾರುಮಡಿಯ ನಿಲುವಂಗಿಯನ್ನು ಧರಿಸಿಕೊಂಡು,
ಮಾನರಕ್ಷಕವಾದ ನಾರುಮಡಿ ಚಡ್ಡಿಯನ್ನು ಹಾಕಿಕೊಂಡು, ಬಲಿಪೀಠದ ಮೇಲಿನ ದಹನಬಲಿ ದ್ರವ್ಯದ
ಬೂದಿಯನ್ನು ಎತ್ತಿ ವೇದಿಕೆಯ ಬಳಿ ಇಡಬೇಕು. 11ಅನಂತರ ತನ್ನ ವಸ್ತ್ರಗಳನ್ನು ಬದಲಾಯಿಸಿಕೊಂಡು ಆ
ಬೂದಿಯನ್ನು ಪಾಳೆಯದ ಹೊರಗೆ ಶುದ್ಧವಾದ ಒಂದು ಸ್ಥಳಕ್ಕೆ ತೆಗೆದುಕೊಂಡು ಹೋಗಬೇಕು.
12ಬಲಿಪೀಠದ ಮೇಲಿನ ಬೆಂಕಿ ದಹನಬಲಿ ದ್ರವ್ಯದಿಂದ ಉರಿಯುತ್ತಲೇ ಇರಬೇಕು. ಅದು
ಆರಿಹೋಗಬಾರದು. ಪ್ರತೀದಿನ ಬೆಳಿಗ್ಗೆ ಯಾಜಕನು ಕಟ್ಟಿಗೆಯನ್ನು ತಂದುಹಾಕಿ ಉರಿಸಿ, ಅದರ ಮೇಲೆ
ದಹನದ್ರವ್ಯವನ್ನು ಕ್ರಮಪಡಿಸಿ, ಶಾಂತಿಸಮಾಧಾನ ಬಲಿಪ್ರಾಣಿಗಳ ಕೊಬ್ಬನ್ನು ಅದರ ಮೇಲೆ
ಹೋಮಮಾಡಬೇಕು. 13ಬಲಿಪೀಠದ ಮೇಲೆ ಬೆಂಕಿ ಯಾವಾಗಲೂ ಉರಿಯುತ್ತಿರಬೇಕು,
ಆರಿಹೋಗಬಾರದು.

### ಧಾನ್ಯನೈವೇದ್ಯ ನಿಯಮಗಳು

14 “ಧಾನ್ಯನೈವೇದ್ಯದ ಬಗ್ಗೆ ನಿಯಮಗಳಿವು: ಆರೋನನ ವಂಶಜರು ನೈವೇದ್ಯದ್ರವ್ಯವನ್ನು
ಸರ್ವೇಶ್ವರನ ಸನ್ನಿಧಿಯಲ್ಲಿ ಬಲಿಪೀಠದ ಎದುರಿಗೇ ಸಮರ್ಪಿಸಬೇಕು. 15ಅವರಲ್ಲಿ ಒಬ್ಬನು
ನೈವೇದ್ಯವಾದುದನ್ನು ಸೂಚಿಸುವುದಕ್ಕಾಗಿ ಎಣ್ಣೆಹೊಯ್ದ ಹಿಟ್ಟಿನಲ್ಲಿ ಒಂದು ಹಿಡಿಯನ್ನೂ ಅದರ ಮೇಲಿರುವ
ಸಾಂಬ್ರಾಣಿಯೆಲ್ಲವನ್ನೂ ತೆಗೆದುಗೊಂಡು ಬಲಿಪೀಠದ ಮೇಲೆ ಹೋಮಮಾಡಿ ಸರ್ವೇಶ್ವರನಿಗೆ
ಸುವಾಸನೆಯನ್ನುಂಟುಮಾಡಬೇಕು. 16ಮಿಕ್ಕದ್ದನ್ನು ಆರೋನನೂ ಅವನ ವಂಶಜರೂ ತಿನ್ನಬಹುದು. ಅವರು
ಅದರಿಂದ ಹುಳಿಯಿಲ್ಲದ ರೊಟ್ಟಿಗಳನ್ನು ಮಾಡಿಸಿಕೊಂಡು ಪವಿತ್ರಸ್ಥಳದೊಳಗೆ, ಅಂದರೆ ದೇವದರ್ಶನದ
ಗುಡಾರದ ಅಂಗಳದಲ್ಲಿ ತಿನ್ನಬೇಕು. 17ಸರ್ವೇಶ್ವರನಿಗೆ ಹೋಮರೂಪವಾಗಿ ಸಮರ್ಪಿಸಿದ ದ್ರವ್ಯಗಳಲ್ಲಿ
ಅದನ್ನು ಅವರ ಪಾಲಿಗೆ ಬಿಡಲಾಗಿದೆ. ಅದಕ್ಕೆ ಹುಳಿಕಲಸಿ ಸುಡಕೂಡದು. ದೋಷಪರಿಹಾರಕ ಬಲಿಯಂತೆ
ಹಾಗು ಪ್ರಾಯಶ್ಚಿತ್ತ ಬಲಿದ್ರವ್ಯದಂತೆ ಅದು ಸಹ ಮಹಾಪರಿಶುದ್ಧವಾದುದು. 18ಆರೋನನ ವಂಶಜರಾದ
ಗಂಡಸರೆಲ್ಲರು ಅದನ್ನು ತಿನ್ನಬಹುದು. ಸರ್ವೇಶ್ವರನಿಗೆ ಹೋಮವಾಗಿ ಅರ್ಪಿತವಾದ ದ್ರವ್ಯಗಳಲ್ಲಿ ಅದು

ಶಾಶ್ವತ ನಿಯಮವಾಗಿ ಆರೋನನ ಸಂತತಿಗೆ ಸಲ್ಲತಕ್ಕದ್ದು. ಆ ದ್ರವ್ಯಗಳಿಗೆ ಸೋಂಕಿದೆಲ್ಲವೂ ಪರಿಶುದ್ಧವಾಗುವುದು.

19 ಮೋಶೆಗೆ ಸರ್ವೇಶ್ವರ ಹೀಗೆಂದು ತಿಳಿಸಿದರು: [20]"ಆರೋನನಿಗೆ ಅಭಿಷೇಕವಾದ ದಿನ ಮೊದಲ್ಗೊಂಡು ಅವನೂ ಅವನ ವಂಶಜರೂ ಸರ್ವೇಶ್ವರನಿಗೆ ಸಮರ್ಪಿಸಬೇಕಾದ ಧಾನ್ಯ ನೈವೇದ್ಯದ ಕ್ರಮ ಇದು: ಅವರು ದಿನನಿತ್ಯವೂ ಮೂರು ಸೇರು ಗೋದಿಹಿಟ್ಟನ್ನು, ಬೆಳಿಗ್ಗೆ ಅರ್ಧ, ಸಂಜೆ ಅರ್ಧ, ಸಮರ್ಪಿಸಬೇಕು. [21]ಕಬ್ಬಿಣದ ಹೆಂಚಿನ ಮೇಲೆ ಎಣ್ಣೆ ಸವರಿ ಅದನ್ನು ಸುಡಬೇಕು. ಅದನ್ನು ತರುವಾಗ ಅದು ಎಣ್ಣೆಯಿಂದ ನೆನೆದೇ ಇರಬೇಕು. ಅದನ್ನು ಭಾಗಭಾಗವಾಗಿ ಮಾಡಿ ಸರ್ವೇಶ್ವರನಿಗೆ ಸುವಾಸನೆಯುಳ್ಳ ನೈವೇದ್ಯವನ್ನಾಗಿ ಸಮರ್ಪಿಸಬೇಕು. [22]ಆರೋನನ ಸಂತತಿಯವರಲ್ಲಿ ಯಾವನು ಅವನ ತರುವಾಯ ಅಭಿಷಿಕ್ತ ಯಾಜಕಪಟ್ಟಕ್ಕೆ ಬರುತ್ತಾನೋ ಅವನೇ ಅದನ್ನು ಸಮರ್ಪಿಸಬೇಕು. ಇದು ಶಾಶ್ವತ ನಿಯಮ.

23 "ಯಾಜಕರು ತಮಗೋಸ್ಕರ ಸಮರ್ಪಿಸುವ ನೈವೇದ್ಯ ದ್ರವ್ಯಗಳನ್ನು ನಿಶ್ಶೇಷವಾಗಿ ಹೋಮಮಾಡಿಬಿಡಬೇಕು; ಅದನ್ನು ತಿನ್ನಲೇಕೂಡದು."

## ದೋಷಪರಿಹಾರಕ ಬಲಿನಿಯಮಗಳು

24 ಮೋಶೆಗೆ ಸರ್ವೇಶ್ವರ ಹೀಗೆಂದರು: [25]"ನೀನು ಆರೋನನಿಗೂ ಅವನ ವಂಶಜರಿಗೂ ದೋಷಪರಿಹಾರಕ ಬಲಿನಿಯಮಗಳ ಬಗ್ಗೆ ಹೀಗೆ ಆಜ್ಞಾಪಿಸು: ದಹನ ಬಲಿಪ್ರಾಣಿಯನ್ನು ವಧಿಸುವ ಸ್ಥಳದಲ್ಲೇ ದೋಷಪರಿಹಾರಕ ಬಲಿಪ್ರಾಣಿಗಳನ್ನು ಸರ್ವೇಶ್ವರನ ಸನ್ನಿಧಿಯಲ್ಲಿ ವಧಿಸಬೇಕು. [26]ಅದು ಮಹಾಪರಿಶುದ್ಧವಾದ್ದರಿಂದ ಸಮರ್ಪಿಸುವ ಯಾಜಕನು ಅದರ ಮಾಂಸವನ್ನು ಊಟಮಾಡಬೇಕು. ಅದನ್ನು ಪವಿತ್ರ ಸ್ಥಳದೊಳಗೆ, ಅಂದರೆ ದೇವದರ್ಶನದ ಗುಡಾರದ ಅಂಗಳದಲ್ಲಿ ಊಟಮಾಡಬೇಕು. [27]ಆ ಪ್ರಾಣಿಯ ಮಾಂಸಕ್ಕೆ ಸೋಂಕಿದೆಲ್ಲವೂ ಪರಿಶುದ್ಧವಾಗುವುದು. ಅದರ ರಕ್ತದಲ್ಲಿ ಸ್ವಲ್ಪವಾದರೂ ಬಟ್ಟೆಯ ಮೇಲೆ ಬಿದ್ದರೆ ಆ ಬಟ್ಟೆಯನ್ನು ಪವಿತ್ರ ಸ್ಥಳದಲ್ಲೇ ಒಗೆದುಕೊಳ್ಳಬೇಕು. [28]ಅದನ್ನು ಬೇಯಿಸಿದ ಮಣ್ಣಿನ ಪಾತ್ರೆಯನ್ನು ಒಡೆದುಬಿಡಬೇಕು. ತಾಮ್ರದ ಪಾತ್ರೆಯಲ್ಲಿ ಬೇಯಿಸಿದ್ದಾದರೆ ಆ ಪಾತ್ರೆಯನ್ನು ಬೆಳಗಿ ನೀರಿನಿಂದ ತೊಳೆಯಬೇಕು. [29]ಯಾಜಕರಲ್ಲಿ ಗಂಡಸರೆಲ್ಲರು ಅದನ್ನು ತಿನ್ನಬಹುದು; ಅದು ಮಹಾಪರಿಶುದ್ಧವಾದುದು. [30]ಆದರೆ ದೋಷಪರಿಹಾರಕ ಬಲಿಪ್ರಾಣಿಗಳಲ್ಲಿ ಯಾವ ಪ್ರಾಣಿಯ ರಕ್ತವು ದೋಷಪರಿಹಾರಕ್ಕಾಗಿ ದೇವದರ್ಶನದ ಗುಡಾರದೊಳಗೆ ತರಲಾಗಿದೆಯೋ ಅದರ ಮಾಂಸವನ್ನು ತಿನ್ನಲೇಬಾರದು; ಅದನ್ನು ಬೆಂಕಿಯಲ್ಲಿ ಸುಟ್ಟುಬಿಡಬೇಕು.

## ಪ್ರಾಯಶ್ಚಿತ್ತ ಬಲಿನಿಯಮಗಳು

**7** "ಪ್ರಾಯಶ್ಚಿತ್ತ ಬಲಿನಿಯಮಗಳು ಹೀಗಿವೆ: ಈ ಬಲಿ ಮಹಾಪರಿಶುದ್ಧವಾದುದು. [2]ದಹನ ಬಲಿಪ್ರಾಣಿಯನ್ನು ವಧಿಸಿದ ಸ್ಥಳದಲ್ಲೇ ಈ ಪ್ರಾಯಶ್ಚಿತ್ತ ಬಲಿಪ್ರಾಣಿಯನ್ನು ವಧಿಸಬೇಕು. ಯಾಜಕನು ಅದರ ರಕ್ತವನ್ನು ಬಲಿಪೀಠದ ಸುತ್ತಲು ಚಿಮುಕಿಸಬೇಕು. [3]ಅವನು ಅದರ ಕೊಬ್ಬನ್ನೆಲ್ಲ, ಅಂದರೆ ಬಾಲದ ಕೊಬ್ಬನ್ನು, ಕರುಳಿನ ಸುತ್ತಲಿರುವ ಕೊಬ್ಬನ್ನು, [4]ಮೂತ್ರಪಿಂಡಗಳನ್ನು, ಅದರ ಮೇಲಿರುವ ಕೊಬ್ಬನ್ನು ಹಾಗು ಕಾಳಿಜದ ಉತ್ತಮ ಭಾಗವನ್ನು ತೆಗೆದು [5]ಬಲಿಪೀಠದ ಮೇಲೆ ಸರ್ವೇಶ್ವರನಿಗೆ ಹೋಮಮಾಡಬೇಕು. ಇದು ಪ್ರಾಯಶ್ಚಿತ್ತ ಬಲಿ. [6]ಹೋಮಶೇಷವನ್ನು ಯಾಜಕರಲ್ಲಿ ಗಂಡಸರೆಲ್ಲರು ತಿನ್ನಬಹುದು; ಅದು ಮಹಾ ಪರಿಶುದ್ಧವಾದುದರಿಂದ ಪವಿತ್ರ ಸ್ಥಳದೊಳಗೇ ಅದನ್ನು ತಿನ್ನಬೇಕು. [7]ಈ ಪ್ರಾಯಶ್ಚಿತ್ತ ಹಾಗು ದೋಷಪರಿಹಾರಕ ಬಲಿ ಹೋಮಶೇಷಗಳಿಗೆ ಇರುವ ವಿಧಿ ಒಂದೇ; ಈ ಹೋಮಶೇಷಗಳು ದೋಷಪರಿಹಾರವನ್ನು ಮಾಡಿಸುವ ಯಾಜಕನಿಗೆ ಸಲ್ಲತಕ್ಕವು. [8]ಯಾರಾದರು ದಹನಬಲಿಗಾಗಿ ಒಂದು ಪ್ರಾಣಿಯನ್ನು ತಂದಾಗ, ಅದರ ಚರ್ಮ ಆ ಪಶುವನ್ನು ಸಮರ್ಪಿಸುವ ಯಾಜಕನಿಗೆ ಸೇರಬೇಕು. [9]ಒಲೆಯಲ್ಲಾಗಲಿ, ಕಬ್ಬಿಣದ ಹಂಚಿನಲ್ಲಾಗಲಿ, ಬಾಂಡ್ಲಿಯಲ್ಲಾಗಲಿ, ಬೇಯಿಸಿದ ನೈವೇದ್ಯ ಪದಾರ್ಥವೆಲ್ಲ ಅದನ್ನು ಸಮರ್ಪಿಸುವ ಯಾಜಕನಿಗೆ ಸೇರತಕ್ಕದ್ದು. [10]ಆದರೆ ಎಣ್ಣೆ ಹೊಯ್ದ ಹಿಟ್ಟನ್ನಾಗಲಿ, ಬರಿ

ಹಿಟ್ಟನ್ನಾಗಲಿ, ಯಾರಾದರು ನೈವೇದ್ಯಕ್ಕಾಗಿ ತಂದಾಗ ಅದನ್ನು ಆರೋನನ ವಂಶದವರೆಲ್ಲರು ಸಮವಾಗಿ ಅನುಭವಿಸತಕ್ಕದ್ದು.

**ಶಾಂತಿಸಮಾಧಾನದ ಬಲಿನಿಯಮಗಳು**

11 "ಶಾಂತಿಸಮಾಧಾನದ ಬಲಿನಿಯಮಗಳು ಇವು: [12]ಯಾರಾದರು ಕೃತಜ್ಞತೆಯನ್ನು ಸಲ್ಲಿಸುವುದಕ್ಕಾಗಿ ಶಾಂತಿಸಮಾಧಾನದ ಬಲಿಯನ್ನು ಸರ್ವೇಶ್ವರನಿಗೆ ಅರ್ಪಿಸಲಾಶಿಸಿದರೆ ಆ ಬಲಿಪ್ರಾಣಿಯ ಸಮೇತ ಎಣ್ಣೆಮಿಶ್ರವಾದ ಹುಳಿಯಿಲ್ಲದ ಹೋಳಿಗೆಗಳನ್ನು, ಎಣ್ಣೆಹಾಕಿದ ಹುಳಿಯಿಲ್ಲದ ಕಡುಬುಗಳನ್ನು ಹಾಗು ಎಣ್ಣೆಯಿಂದ ಪೂರ್ತಿಯಾಗಿ ತೋಯಿಸಿದ ಗೋದಿಹಿಟ್ಟಿನ ಹೋಳಿಗೆಗಳನ್ನು ಸಮರ್ಪಿಸಬೇಕು. [13]ಅದೂ ಅಲ್ಲದೆ ಹುಳಿರೊಟ್ಟಿಗಳನ್ನು ಕೂಡ ಸಮರ್ಪಿಸಬೇಕು. [14]ಸಮರ್ಪಿಸುವ ಪ್ರತಿಯೊಂದು ವಿಧವಾದ ಪದಾರ್ಥಗಳಲ್ಲಿಯೂ ಒಂದೊಂದನ್ನು ಸರ್ವೇಶ್ವರನಿಗೋಸ್ಕರ ಪ್ರತ್ಯೇಕಿಸಬೇಕು. ಅವು ಪೀಠಕ್ಕೆ ಬಲಿಪ್ರಾಣಿಯ ರಕ್ತವನ್ನು ಚಿಮುಕಿಸಿದ ಯಾಜಕನಿಗೆ ಸೇರಬೇಕು. [15]ಕೃತಜ್ಞತಾಬಲಿ ಪ್ರಾಣಿಯ ಮಾಂಸವನ್ನು ಬಲಿ ನಡೆದ ದಿನದಲ್ಲೇ ಭೋಜನ ಮಾಡಬೇಕು. ಮರುದಿನದವರೆಗೆ ಕಿಂಚಿತ್ತನ್ನೂ ಉಳಿಸಬಾರದು.

16 "ಯಾರಾದರು ಹರಕೆಯನ್ನು ಸಲ್ಲಿಸುವುದಕ್ಕಾಗಿ ಅಥವಾ ಸ್ವೇಚ್ಛೆಯಿಂದ ಅಂಥ ಬಲಿಯನ್ನು ಒಪ್ಪಿಸಿದರೆ ಅದನ್ನು ಸಮರ್ಪಿಸಿದ ದಿನದಲ್ಲೇ ಅದರ ಮಾಂಸವನ್ನು ಪೂರ್ತಿಯಾಗಿ ಊಟ ಮಾಡಬೇಕಾಗಿಲ್ಲ; ಮಿಕ್ಕದ್ದನ್ನು ಮರುದಿನ ತಿನ್ನಬಹುದು. [17]ಆದರೆ ಮೂರನೆಯ ದಿನದವರೆಗೆ ಉಳಿದಿದ್ದನ್ನು ಬೆಂಕಿಯಿಂದ ಸುಟ್ಟುಬಿಡಬೇಕು. [18]ಆ ಬಲಿಪ್ರಾಣಿಯ ಮಾಂಸದಲ್ಲಿ ಸ್ವಲ್ಪವನ್ನಾದರೂ ಮೂರನೆಯ ದಿನದಲ್ಲಿ ಊಟ ಮಾಡಿದ್ದೇ ಆದರೆ ಆ ಬಲಿ ಸ್ವೀಕೃತವಾಗುವುದಿಲ್ಲ. ಅರ್ಪಿಸಿದವನಿಗೆ ಅದರಿಂದ ಫಲವೇನೂ ದೊರಕುವುದಿಲ್ಲ. ಅದು ಹೇಯವಾದುದರಿಂದ ಅದನ್ನು ತಿಂದವನು ಆ ಪಾಪದ ಫಲವನ್ನು ಅನುಭವಿಸಬೇಕು.

19 "ಶುದ್ಧವಾದ ವಸ್ತುವಿಗೆ ಸೋಂಕಿದ ಮಾಂಸವನ್ನು ಬೆಂಕಿಯಲ್ಲಿ ಸುಟ್ಟುಬಿಡಬೇಕು.

20 "ಶುದ್ಧವಾಗಿರುವವರೆಲ್ಲರು ಬಲಿಪ್ರಾಣಿಯ ಮಾಂಸವನ್ನು ತಿನ್ನಬಹುದು.

21 "ಯಾರಾದರು ಅಶುದ್ಧರಾಗಿದ್ದು ಸರ್ವೇಶ್ವರನಿಗೆ ಸಮರ್ಪಿತವಾದ ಶಾಂತಿ ಸಮಾಧಾನದ ಬಲಿಪ್ರಾಣಿಯ ಮಾಂಸವನ್ನು ತಿಂದರೆ ಅಂಥವರನ್ನು ತಮ್ಮ ಕುಲದಿಂದ ತೆಗೆದುಹಾಕಬೇಕು. [22]ಯಾರಿಗಾದರು ಮನುಷ್ಯ ದೇಹದಿಂದುಂಟಾದ ಅಶುದ್ಧ ವಸ್ತು, ಅಶುದ್ಧ ಮೃಗ, ನಿಷಿದ್ಧವಸ್ತು, ಇವುಗಳಲ್ಲಿ ಯಾವುದಾದರೂ ಸೋಂಕಿದರೆ ಅಂಥವರು ಸರ್ವೇಶ್ವರನಿಗೆ ಸಮರ್ಪಿತವಾದ ಬಲಿಪ್ರಾಣಿಯ ಮಾಂಸವನ್ನು ತಿನ್ನಕೂಡದು; ತಿಂದರೆ ಕುಲದಿಂದ ಬಹಿಷ್ಕೃತರಾಗಬೇಕು".

23 ಸರ್ವೇಶ್ವರ ಮೋಶೆಗೆ ಇಂತೆಂದರು: "ನೀನು ಇಸ್ರಯೇಲರಿಗೆ ಹೀಗೆ ಆಜ್ಞೆ ಮಾಡು: ನೀವು ಎತ್ತು, ಕುರಿ ಹಾಗು ಆಡುಗಳ ಕೊಬ್ಬನ್ನು ತಿನ್ನಬಾರದು. [24]ಅಂಥ ಪ್ರಾಣಿ ರೋಗದಿಂದ ಸತ್ತರೆ, ಇಲ್ಲವೆ ಕಾಡುಮೃಗದಿಂದ ಕೊಲ್ಲಲ್ಪಟ್ಟರೆ ಅದರ ಕೊಬ್ಬನ್ನು ಬೇರೆ ಕೆಲಸಕ್ಕೆ ಉಪಯೋಗಿಸಿ ಕೊಳ್ಳಬಹುದು; ಆದರೆ ಎಷ್ಟುಮಾತ್ರಕ್ಕೂ ತಿನ್ನಬಾರದು. [25]ಜನರು ಸರ್ವೇಶ್ವರನಿಗೆ ಹೋಮ ಮಾಡುವಂಥ ಪ್ರಾಣಿಪಶುಗಳ ಕೊಬ್ಬನ್ನು ಯಾರಾದರು ತಿಂದರೆ ಅವರು ಕುಲದಿಂದ ಬಹಿಷ್ಕೃತರಾಗಬೇಕು. [26]ಪಕ್ಷಿಯದಾಗಲಿ, ಪ್ರಾಣಿಯದಾಗಲಿ ಯಾವ ರಕ್ತವನ್ನೂ ನೀವು ಎಲ್ಲಿಯೂ ಊಟಮಾಡಬಾರದು. [27]ರಕ್ತವನ್ನು ಭೋಜನ ಮಾಡಿದವನು ಕುಲದಿಂದ ಬಹಿಷ್ಕೃತನಾಗಬೇಕು."

28 ಮೋಶೆಗೆ ಸರ್ವೇಶ್ವರ ಹೇಳಿದ್ದೇನೆಂದರೆ: [29]"ಇಸ್ರಯೇಲರಿಗೆ ಹೀಗೆಂದು ಆಜ್ಞಾಪಿಸು: ಶಾಂತಿಸಮಾಧಾನದ ಬಲಿಪ್ರಾಣಿಯನ್ನು ಸರ್ವೇಶ್ವರನಿಗೆ ಸಮರ್ಪಿಸುವವನು ಆ ಬಲಿದ್ರವ್ಯಗಳಲ್ಲಿ ಸರ್ವೇಶ್ವರನಿಗೆ ಸಲ್ಲಬೇಕಾದುದನ್ನು ತಂದು ಕೊಡಬೇಕು. [30]ಸರ್ವೇಶ್ವರನಿಗೆ ಹೋಮರೂಪವಾಗಿ ಸಮರ್ಪಿಸಬೇಕಾದುದನ್ನು ಅಂದರೆ ಪ್ರಾಣಿಯ ಕೊಬ್ಬನ್ನು ತನ್ನ ಕೈಯಿಂದಲೆ ಕೊಡಬೇಕು. ಅದರೊಂದಿಗೆ ಅದರ ಎದೆಯ ಭಾಗವನ್ನು ನೈವೇದ್ಯರೂಪವಾಗಿ ಸರ್ವೇಶ್ವರನ ಸನ್ನಿಧಿಯಲ್ಲಿ ಆರತಿಯೆತ್ತಲು ತಂದು ಸಮರ್ಪಿಸಬೇಕು. [31]ಯಾಜಕನು ಆ ಕೊಬ್ಬನ್ನು ಬಲಿಪೀಠದ ಮೇಲೆ ಹೋಮಮಾಡಬೇಕು. ಎದೆಯ ಭಾಗ ಆರೋನನಿಗೂ ಅವನ ವಂಶಜರಿಗೂ ಸೇರಬೇಕು. [32]ನೀವು ಶಾಂತಿಸಮಾಧಾನದ ಬಲಿದ್ರವ್ಯಗಳಲ್ಲಿ ಪ್ರಾಣಿಯ

ಬಲತೊಡೆಯನ್ನು ಯಾಜಕನಿಗಾಗಿ ಪ್ರತ್ಯೇಕಿಸಿ ಕೊಡಬೇಕು. [33]ಆರೋನನ ವಂಶಜರಲ್ಲಿ ಯಾವನು ಆ ಬಲಿಪ್ರಾಣಿಯ ರಕ್ತವನ್ನು ಹಾಗು ಕೊಬ್ಬನ್ನು ಅರ್ಪಿಸುತ್ತಾನೋ, ಆ ಪ್ರಾಣಿಯ ಬಲತೊಡೆ ಅವನ ಪಾಲಿಗೆ ಸೇರಬೇಕು. [34]ಶಾಂತಿಸಮಾಧಾನದ ಬಲಿಪ್ರಾಣಿಯ ಮಾಂಸದಲ್ಲಿ ನೈವೇದ್ಯರೂಪವಾಗಿ ಆರತಿಯೆತ್ತುವ ಎದೆಯ ಭಾಗವನ್ನು ಮತ್ತು ಯಾಜಕನಿಗಾಗಿ ಪ್ರತ್ಯೇಕಿಸುವ ತೊಡೆಯನ್ನು ಸರ್ವೇಶ್ವರ ಇಸ್ರಯೇಲ್ ಜನರಿಂದ ತೆಗೆದುಕೊಂಡು ಮಹಾಯಾಜಕ ಆರೋನನಿಗೂ ಅವನ ವಂಶಜರಿಗೂ ಕೊಟ್ಟು, ಅದು ಶಾಶ್ವತ ನಿಯಮವಾಗಿ ಅವರಿಗೆ ಸಲ್ಲುವಂತೆ ಮಾಡಿದ್ದಾರೆ. [35]ಸರ್ವೇಶ್ವರನಿಗೆ ಹೋಮರೂಪವಾಗಿ ಅರ್ಪಿತವಾದ ದ್ರವ್ಯಗಳಲ್ಲಿ ಇವೇ ಆರೋನನಿಗೂ ಅವನ ವಂಶಜರಿಗೂ ಶಾಶ್ವತವಾಗಿ ಸಲ್ಲತಕ್ಕ ಭಾಗಗಳು." ಮೋಶೆ ಅವರನ್ನು ಸರ್ವೇಶ್ವರನ ಸನ್ನಿಧಿಯಲ್ಲಿ ಯಾಜಕ ಸೇವಾವೃತ್ತಿಗಾಗಿ ಪ್ರತಿಷ್ಠಾಪಿಸಿದ ದಿನದಂದೇ ಇದು ನೇಮಕವಾಯಿತು. [36]ಇಸ್ರಯೇಲರು ಇವುಗಳನ್ನು ಯಾಜಕರಿಗೆ ಸಲ್ಲಿಸಬೇಕೆಂದು ಸರ್ವೇಶ್ವರ ಅವರನ್ನು ಮೋಶೆಯ ಮುಖಾಂತರ ಪ್ರತಿಷ್ಠಿಸಿ ಅಭಿಷೇಕಿಸಿದ ದಿನದಲ್ಲೇ ವಿಧಿಸಿದರು.

37 ದಹನಬಲಿದಾನ, ಧಾನ್ಯನೈವೇದ್ಯ, ದೋಷಪರಿಹಾರಕಬಲಿ, ಪ್ರಾಯಶ್ಚಿತ್ತಬಲಿ, ಯಾಜಕ ಅಭ್ಯಂಜನಬಲಿ, ಶಾಂತಿಸಮಾಧಾನಬಲಿ ಎಂಬ ಇವುಗಳ ವಿಷಯದಲ್ಲಿ ಮೇಲೆ ಹೇಳಿದ್ದೇ ಬಲಿದಾನ ವಿಧಿಗಳು. [38]ಸರ್ವೇಶ್ವರ ಸೀನಾಯಿ ಬೆಟ್ಟದಲ್ಲಿ ಮೋಶೆಗೆ ಈ ಆಜ್ಞೆಗಳನ್ನು ಕೊಟ್ಟರು. ಸೀನಾಯಿ ಮರುಭೂಮಿಯಲ್ಲಿ ಇಸ್ರಯೇಲರು ಅರ್ಪಿಸಬೇಕಾದುದನ್ನು ಸರ್ವೇಶ್ವರನಿಗೆ ಅರ್ಪಿಸಬೇಕೆಂದು ಮೋಶೆ ಆಜ್ಞಾಪಿಸಿ ಮೇಲ್ಕಂಡ ವಿಧಿಗಳನ್ನು ಕೊಟ್ಟನು.

### ಆರೋನನ ಮತ್ತು ಅವನ ಪುತ್ರರ ಯಾಜಕಾಭಿಷೇಕ

(ವಿಮೋ. 29.1–37)

**8** ಸರ್ವೇಶ್ವರಸ್ವಾಮಿ ಮೋಶೆಗೆ: [2]"ನೀನು ಆರೋನನನ್ನೂ ಅವನ ಗಂಡು ಮಕ್ಕಳನ್ನೂ ಕರೆದುಕೊಂಡು ಅವರಿಗೆ ಬೇಕಾದ ದೀಕ್ಷಾವಸ್ತ್ರಗಳನ್ನು, ಅಭಿಷೇಕ ತೈಲವನ್ನು, ದೋಷಪರಿಹಾರಕ್ಕಾಗಿ ಸಮರ್ಪಿಸಬೇಕಾದ ಹೋರಿಯನ್ನು, ಎರಡು ಟಗರುಗಳನ್ನು ಹಾಗು ಹುಳಿಯಿಲ್ಲದ ಭಕ್ಷ್ಯಗಳು ತುಂಬಿರುವ ಪುಟ್ಟಿಯನ್ನು ತೆಗೆದುಕೊಂಡು ಬಾ; [3]ಜನಸಮೂಹವನ್ನೆಲ್ಲ ದೇವದರ್ಶನದ ಗುಡಾರದ ಬಾಗಿಲ ಬಳಿಗೆ ಕರೆಯಿಸು," ಎಂದು ಆಜ್ಞೆಮಾಡಿದರು. [4]ಸರ್ವೇಶ್ವರ ಹೇಳಿದಂತೆಯೇ ಮೋಶೆ ಮಾಡಿದನು. ಜನರೆಲ್ಲರು ದೇವದರ್ಶನದ ಗುಡಾರದ ಬಾಗಿಲಿನ ಹತ್ತಿರ ಕೂಡಿಬಂದರು. [5]ಮೋಶೆ ಅವರಿಗೆ, "ನಾನು ಈಗ ಮಾಡುವ ಕಾರ್ಯ ಸರ್ವೇಶ್ವರಸ್ವಾಮಿಯೇ ಆಜ್ಞಾಪಿಸಿದ ಕಾರ್ಯ," ಎಂದು ಹೇಳಿದನು.

6 ಬಳಿಕ ಮೋಶೆ ಆರೋನನನ್ನೂ ಅವನ ಪುತ್ರರನ್ನೂ ಹತ್ತಿರಕ್ಕೆ ಬರಮಾಡಿಕೊಂಡು ಸ್ನಾನ ಮಾಡಿಸಿದನು. [7]ಆಮೇಲೆ ಸರ್ವೇಶ್ವರ ಆಜ್ಞಾಪಿಸಿದಂತೆಯೇ ಆರೋನನಿಗೆ ನಿಲುವಂಗಿಯನ್ನು ತೊಡಿಸಿ, ನಡುಕಟ್ಟನ್ನು ಸುತ್ತಿಸಿ, ಅದರಿಂದ ಅವನ ಕವಚವನ್ನು ಕಟ್ಟಿ. [8]ವೃಕ್ಷಪದಕವನ್ನು ಅವನಿಗೆ ಬಿಗಿಸಿ, ಅದರ ಚೀಲದೊಳಗೆ ಊರೀಮ್ ಹಾಗು ತುಮ್ಮೀಮ್ ಎಂಬ ದಾಳಗಳನ್ನು ಹಾಕಿ [9]ಅವನ ತಲೆಗೆ ಸಿರಿಪೇಟವನ್ನು ತೊಡಿಸಿ, ಅದರ ಮುಂಭಾಗದಲ್ಲಿ ಬಂಗಾರದ ಪಟ್ಟಿಯನ್ನು ಕಟ್ಟಿದನು; ಅದು ಅವನಿಗೆ ಪವಿತ್ರ ಕಿರೀಟದಂತಿತ್ತು.

10 ಅನಂತರ ಮೋಶೆ ಅಭಿಷೇಕದ ಎಣ್ಣೆಯನ್ನು ತೆಗೆದುಕೊಂಡು ದೇವದರ್ಶನದ ಗುಡಾರವನ್ನು ಹಾಗು ಅದರಲ್ಲಿದ್ದ ಎಲ್ಲವನ್ನು ಅಭಿಷೇಕಿಸಿ ಪ್ರತಿಷ್ಠಿಸಿದನು. [11]ಬಲಿಪೀಠದ ಮೇಲೆ ಏಳು ಸಾರಿ ಆ ಎಣ್ಣೆಯನ್ನು ಚಿಮುಕಿಸಿ ಬಲಿಪೀಠವನ್ನು, ಅದರ ಎಲ್ಲ ಉಪಕರಣಗಳನ್ನು ಹಾಗು ನೀರಿನ ತೊಟ್ಟಿಯನ್ನು ಅದರ ಪೀಠವನ್ನು ಅಭಿಷೇಕಿಸಿ ಪ್ರತಿಷ್ಠಿಸಿದನು. [12]ಆ ಎಣ್ಣೆಯಲ್ಲಿ ಸ್ವಲ್ಪವನ್ನು ಆರೋನನ ತಲೆಯ ಮೇಲೆ ಹೊಯ್ದು ಅವನನ್ನು ಅಭಿಷೇಕಿಸಿ ಪ್ರತಿಷ್ಠಿಸಿದನು.

13 ಅನಂತರ ಸರ್ವೇಶ್ವರ ಆಜ್ಞಾಪಿಸಿದಂತೆ ಮೋಶೆ ಆರೋನನ ಮಕ್ಕಳನ್ನು ಹತ್ತಿರಕ್ಕೆ ಕರೆದು, ಅವರಿಗೆ ನಿಲುವಂಗಿಗಳನ್ನು ತೊಡಿಸಿ, ನಡುಕಟ್ಟುಗಳನ್ನು ಸುತ್ತಿ, ಪೇಟಗಳನ್ನು ತೊಡಿಸಿದನು.

14 ಅನಂತರ ಅವನು ದೋಷಪರಿಹಾರಾರ್ಥವಾದ ಹೋರಿಯನ್ನು ತರಿಸಿದನು. ಆರೋನನು
ಮತ್ತು ಅವನ ಮಕ್ಕಳು ತಮ್ಮ ಕೈಗಳನ್ನು ಅದರ ತಲೆಯಮೇಲೆ ಚಾಚಿದರು. [15]ಆ ಹೋರಿಯನ್ನು ವಧಿಸಿದ
ಮೇಲೆ ಮೋಶೆ ಅದರ ರಕ್ತವನ್ನು ತನ್ನ ಬೆರಳಿನಿಂದ ಬಲಿಪೀಠದ ಕೊಂಬುಗಳಿಗೆ ಸುತ್ತಲೂ ಹಚ್ಚಿ
ಬಲಿಪೀಠವನ್ನು ಪ್ರತಿಷ್ಠಿಸಿದನು. ಮಿಕ್ಕ ರಕ್ತವನ್ನು ಬಲಿಪೀಠದ ಬುಡದಲ್ಲಿ ಸುರಿದು ಬಿಟ್ಟನು. ಹೀಗೆ ಬಲಿಪೀಠದ
ಬಗ್ಗೆ ದೋಷ ಪರಿಹಾರಕ ಆಚಾರವನ್ನು ನಡೆಸಿ ಅದನ್ನು ಪವಿತ್ರೀಕರಿಸಿ ಪ್ರತಿಷ್ಠಾಪಿಸಿದನು. [16]ಆ ಹೋರಿಯ
ಕರುಳುಗಳ ಸುತ್ತಲಿರುವ ಎಲ್ಲ ಕೊಬ್ಬನ್ನು, ಕಾಳಿಜದ ಹತ್ತಿರವಿರುವ ಕೊಬ್ಬನ್ನು, ಮೂತ್ರ ಪಿಂಡಗಳನ್ನು ಹಾಗು
ಅವುಗಳ ಮೇಲಿರುವ ಕೊಬ್ಬನ್ನು ಮೋಶೆ ತೆಗೆದುಕೊಂಡು ಬಲಿಪೀಠದ ಮೇಲೆ ಹೋಮಮಾಡಿದನು.
[17]ಸರ್ವೇಶ್ವರನ ಆಜ್ಞಾನುಸಾರ ಆ ಪ್ರಾಣಿಯ ಮಿಕ್ಕ ಭಾಗಗಳನ್ನು, ಅಂದರೆ ಅದರ ಚರ್ಮ, ಮಾಂಸ ಹಾಗು
ಕಲ್ಮಷಗಳನ್ನು ಪಾಳೆಯದ ಹೊರಗೆ ಬೆಂಕಿಯಿಂದ ಸುಡಿಸಿಬಿಟ್ಟನು.

18 ತರುವಾಯ ಅವನು ದಹನ ಬಲಿಗಾಗಿ ಟಗರನ್ನು ತರಿಸಿದನು. ಆರೋನನು ಮತ್ತು ಅವನ
ಮಕ್ಕಳು ಅದರ ತಲೆಯ ಮೇಲೆ ತಮ್ಮ ಕೈಗಳನ್ನು ಚಾಚಿದರು. [19]ಅದನ್ನು ವಧಿಸಿದ ಮೇಲೆ ಮೋಶೆ ಅದರ
ರಕ್ತವನ್ನು ಬಲಿಪೀಠದ ಸುತ್ತಲೂ ಚಿಮುಕಿಸಿದನು. [20]ಆ ಟಗರನ್ನು ತುಂಡುತುಂಡಾಗಿ ಕಡಿದಮೇಲೆ ಮೋಶೆ
ಅದರ ತಲೆಯನ್ನೂ ಮಾಂಸ ಖಂಡಗಳನ್ನೂ ಕೊಬ್ಬನ್ನೂ ಹೋಮಮಾಡಿದನು. [21]ಅದರ ಕರುಳುಗಳನ್ನೂ
ಕಾಲುಗಳನ್ನೂ ನೀರಿನಿಂದ ತೊಳೆಯಿಸಿ ಆ ಟಗರನ್ನು ಬಲಿಪೀಠದ ಮೇಲೆ ಪೂರ್ತಿಯಾಗಿ ಹೋಮ
ಮಾಡಿಬಿಟ್ಟನು. ಸರ್ವೇಶ್ವರ ಮೋಶೆಗೆ ಆಜ್ಞಾಪಿಸಿದಂತೆಯೇ ಅದು ದಹನಬಲಿ, ಸರ್ವೇಶ್ವರನಿಗೆ ಪ್ರಿಯವಾದ
ಸುಗಂಧಕರ ಬಲಿಯಾಯಿತು.

22 ಇದಾದ ಮೇಲೆ ಯಾಜಕಾಭಿಷೇಕಕ್ಕಾಗಿ ಸಮರ್ಪಿಸಬೇಕಾದ ಎರಡನೆಯ ಟಗರನ್ನು ಮೋಶೆ
ತರಿಸಿದನು. ಆರೋನನೂ ಅವನ ಮಕ್ಕಳೂ ಅದರ ತಲೆಯ ಮೇಲೆ ತಮ್ಮ ಕೈಗಳನ್ನು ಚಾಚಿದರು. [23]ಅದನ್ನು
ವಧಿಸಿದ ನಂತರ ಮೋಶೆ ಅದರ ರಕ್ತದಲ್ಲಿ ಸ್ವಲ್ಪವನ್ನು ತೆಗೆದುಕೊಂಡು ಆರೋನನ ಬಲಗಿವಿಯ ತುದಿಗೂ,
ಬಲಗೈಯ ಹೆಬ್ಬೆರಳಿಗೂ ಮತ್ತು ಬಲಗಾಲಿನ ಹೆಬ್ಬೆಟ್ಟಿಗೂ ಹಚ್ಚಿದನು. [24]ಬಳಿಕ ಆರೋನನ ಮಕ್ಕಳನ್ನು
ಹತ್ತಿರಕ್ಕೆ ಕರೆದು ಆ ರಕ್ತದಲ್ಲಿ ಕಿಂಚಿತ್ತನ್ನು ಅವರವರ ಬಲಗಿವಿಯ ತುದಿಗೂ, ಬಲಗೈಯ ಹೆಬ್ಬೆರಳಿಗೂ
ಹಾಗು ಬಲಗಾಲಿನ ಹೆಬ್ಬೆಟ್ಟಿಗೂ ಹಚ್ಚಿದನು. ಉಳಿದ ರಕ್ತವನ್ನು ಬಲಿಪೀಠದ ಸುತ್ತಲು ಚಿಮುಕಿಸಿದನು.
[25]ಹಾಗೆಯೆ ಮೋಶೆ ಆ ಟಗರಿನ ಕೊಬ್ಬನ್ನು, ಅಂದರೆ ಬಾಲದ ಕೊಬ್ಬು, ಕರುಳುಗಳ ಸುತ್ತಲಿನ ಕೊಬ್ಬು,
ಕಾಳಿಜದ ಹತ್ತಿರವಿರುವ ಕೊಬ್ಬು, ಮೂತ್ರಪಿಂಡಗಳು, ಅವುಗಳ ಮೇಲಿರುವ ಕೊಬ್ಬು, ಇವುಗಳನ್ನು ಮತ್ತು
ಬಲದೊಡೆಯನ್ನು ತೆಗೆದುಕೊಂಡನು. [26]ಸರ್ವೇಶ್ವರನ ಸನ್ನಿಧಿಯಲ್ಲಿ ಬುಟ್ಟಿಯಲ್ಲಿಟ್ಟಿದ್ದ ಹುಳಿಯಿಲ್ಲದ ತಿಂಡಿ
ಪದಾರ್ಥಗಳಲ್ಲಿ ಒಂದು ರೊಟ್ಟಿಯನ್ನು, ಎಣ್ಣೆ ಮಿಶ್ರವಾದ ಒಂದು ಹೋಳಿಗೆಯನ್ನು ಹಾಗು ಒಂದು
ಕಡುಬನ್ನು ತೆಗೆದುಕೊಂಡು ಆ ಕೊಬ್ಬಿನ ಮತ್ತು ಬಲದೊಡೆಯ ಮೇಲೆ ಇಟ್ಟನು. [27]ಇವೆಲ್ಲವುಗಳನ್ನು
ಆರೋನನ ಮತ್ತು ಅವನ ಮಕ್ಕಳ ಕೈಗಳಿಗೆ ಕೊಟ್ಟು ನೈವೇದ್ಯವೆಂದು ಸೂಚಿಸುವುದಕ್ಕಾಗಿ ಸರ್ವೇಶ್ವರನ
ಸನ್ನಿಧಿಯಲ್ಲಿ ಆರತಿಯೆತ್ತಿಸಿದನು. [28]ಆಮೇಲೆ ಮೋಶೆ ಅವುಗಳನ್ನು ಅವರ ಕೈಗಳಿಂದ ತೆಗೆದುಕೊಂಡು
ಬಲಿಪೀಠದಲ್ಲಿ ದಹನಬಲಿದ್ರವ್ಯದ ಮೇಲಿಟ್ಟು ಹೋಮಮಾಡಿದನು. ಅದು ಸರ್ವೇಶ್ವರನಿಗೆ ಪ್ರಿಯವಾದ
ಸುಗಂಧಕರ ಯಾಜಕಾಭಿಷೇಕ ಬಲಿಯಾಗಿತ್ತು. [29]ಮೋಶೆ ಬಲಿಪ್ರಾಣಿಯ ಎದೇ ಭಾಗವನ್ನು ತೆಗೆದುಕೊಂಡು
ನೈವೇದ್ಯವಾಗಿ ಸರ್ವೇಶ್ವರನ ಸನ್ನಿಧಿಯಲ್ಲಿ ಆರತಿಯೆತ್ತಿದನು. ಸರ್ವೇಶ್ವರನ ಆಜ್ಞಾನುಸಾರ ಆ
ಯಾಜಕಾಭಿಷೇಕ ಬಲಿಯ ಟಗರಿನ ಎದೆಯ ಭಾಗ ಮೋಶೆಗೆ ಸಲ್ಲತಕ್ಕದಾಗಿತ್ತು.

30 ಬಳಿಕ ಮೋಶೆ ಅಭಿಷೇಕ ಎಣ್ಣೆಯಿಂದಲೂ ಬಲಿಪೀಠದ ಮೇಲಿದ್ದ ರಕ್ತದಿಂದಲೂ ಸ್ವಲ್ಪ
ತೆಗೆದುಕೊಂಡು ಆರೋನನ ಮತ್ತು ಅವನ ವಸ್ತ್ರಗಳ ಮೇಲೂ ಅವನ ಮಕ್ಕಳ ಹಾಗು ಅವರ ವಸ್ತ್ರಗಳ
ಮೇಲೂ ಚಿಮುಕಿಸಿದನು. ಹೀಗೆ ಆರೋನನನ್ನು ಅವನ ಮಕ್ಕಳನ್ನೂ ಅವರ ವಸ್ತ್ರಗಳನ್ನೂ ಪ್ರತಿಷ್ಠಿಸಿದನು.

31 ಆರೋನನಿಗೂ ಅವನ ಮಕ್ಕಳಿಗೂ ಮೋಶೆ ಹೀಗೆಂದನು: “ಮಾಂಸವನ್ನು ನೀವು
ದೇವದರ್ಶನದ ಗುಡಾರದ ಬಾಗಿಲಿನ ಹತ್ತಿರ ಬೇಯಿಸಬೇಕು. ಅದನ್ನೂ ಯಾಜಕಾಭಿಷೇಕಕ್ಕಾಗಿ ಪುಟ್ಟಿಯಲ್ಲಿ
ಇಟ್ಟಿರುವ ರೊಟ್ಟಿಗಳನ್ನೂ ನೀವು ಅಲ್ಲೆ ಊಟ ಮಾಡಬೇಕು. ಇದು ಸರ್ವೇಶ್ವರನು ನನಗಿತ್ತ ಆಜ್ಞೆ. [32]ಆ
ಮಾಂಸದಲ್ಲಿ ಹಾಗು ರೊಟ್ಟಿಗಳಲ್ಲಿ ಮಿಕ್ಕದ್ದನ್ನು ನೀವು ಬೆಂಕಿಯಿಂದ ಸುಟ್ಟುಬಿಡಬೇಕು. [33]ಇದಲ್ಲದೆ, ಈ

ನಮ್ಮ ಯಾಜಕ ಸೇವಾವೃತ್ತಿಯ ದೀಕ್ಷೆಯನ್ನು ಪೂರೈಸುವುದಕ್ಕೆ ಏಳು ದಿವಸ ಹಿಡಿಯುವುದರಿಂದ ಆವರೆಗೂ
ನೀವು ದೇವದರ್ಶನದ ಗುಡಾರದ ಬಾಗಿಲಿನ ಆಚೆಗೆ ಹೋಗಬಾರದು. 34ನಿಮ್ಮ ದೋಷಪರಿಹಾರಕ್ಕಾಗಿ ಈ
ದಿನ ಏನೇನು ನಡೆಯಿತೋ ಅದನ್ನು ಏಳು ದಿನವೂ ನಡೆಸಬೇಕೆಂಬುದು ಸರ್ವೇಶ್ವರನ ಆಜ್ಞೆ.
35ಆದುದರಿಂದ ನೀವು ಆ ಆಜ್ಞೆಯ ಮೇರೆಗೆ ಏಳು ದಿನಗಳೂ ಹಗಲಿರುಳು ದೇವದರ್ಶನದ ಗುಡಾರದ
ಬಾಗಿಲಿನ ಹತ್ತಿರ ಇರಬೇಕು; ಇಲ್ಲದಿದ್ದರೆ ಸಾಯುವಿರಿ. ಇದು ಸರ್ವೇಶ್ವರನ ಆಜ್ಞೆ. 36ಸರ್ವೇಶ್ವರ ಮೋಶೆಯ
ಮುಖಾಂತರ ಆಜ್ಞಾಪಿಸಿದ್ದನ್ನೆಲ್ಲಾ ಆರೋನ ಮತ್ತು ಅವನ ಮಕ್ಕಳು ಮಾಡಿದರು.

### ಆರೋನನು ಅರ್ಪಿಸಿದ ಪ್ರಥಮ ಬಲಿ

**9** ಎಂಟನೆಯ ದಿನ ಮೋಶೆ ಆರೋನನನ್ನೂ ಅವನ ಮಕ್ಕಳನ್ನೂ ಹಾಗು ಇಸ್ರಯೇಲರ ಹಿರಿಯರನ್ನೂ
ಕರೆಸಿದನು. 2ಆರೋನನಿಗೆ, "ನೀನು ಪರಿಹಾರಕ ಬಲಿದಾನಕ್ಕಾಗಿ ಕಳಂಕರಹಿತವಾದ ಹೋರಿಕರುವನ್ನು
ಮತ್ತು ದಹನಬಲಿಗಾಗಿ ಕಳಂಕರಹಿತವಾದ ಟಗರನ್ನು ತೆಗೆದುಕೊಂಡು ಸರ್ವೇಶ್ವರನ ಸನ್ನಿಧಿಯಲ್ಲಿ
ನಿನಗೋಸ್ಕರ ಸಮರ್ಪಿಸು. 3ಮತ್ತು ನೀನು ಇಸ್ರಯೇಲರ ಸಂಗಡ ಮಾತಾಡಿ ಅವರಿಗೆ, 'ಈ ದಿನ
ಸರ್ವೇಶ್ವರಸ್ವಾಮಿ ಪ್ರತ್ಯಕ್ಷರಾಗುತ್ತಾರೆ. ಆದುದರಿಂದ ನೀವು ಅವರ ಸನ್ನಿಧಿಯಲ್ಲಿ ಸಮರ್ಪಿಸಲು
ದೋಷಪರಿಹಾರಕ್ಕಾಗಿ ಒಂದು ಹೋತವನ್ನು, ದಹನಬಲಿಗಾಗಿ ಒಂದು ವರ್ಷದ ಕಳಂಕರಹಿತವಾದ ಒಂದು
ಕರು ಹಾಗು ಒಂದು ಕುರಿಯನ್ನು, 4ಶಾಂತಿಸಮಾಧಾನ ಬಲಿಗಾಗಿ ಒಂದು ಹೋರಿ ಹಾಗು ಒಂದು ಟಗರನ್ನು
ಮತ್ತು ನೈವೇದ್ಯಕ್ಕಾಗಿ ಎಣ್ಣೆ ಮಿಶ್ರವಾದ ಪದಾರ್ಥವನ್ನು ತೆಗೆದುಕೊಂಡು ಬರಬೇಕೆಂದು ಆಜ್ಞಾಪಿಸು,"
ಎಂದನು.

5 ಮೋಶೆಯ ಆಜ್ಞಾನುಸಾರ ಅವರು ಕಾಣಿಕೆಗಳನ್ನೆಲ್ಲ ದೇವದರ್ಶನದ ಗುಡಾರದ ಬಳಿಗೆ ತಂದರು.
ಇಸ್ರಯೇಲ್ ಸಮಾಜದವರೆಲ್ಲರು ಹತ್ತಿರಕ್ಕೆ ಬಂದು ಸರ್ವೇಶ್ವರನ ಸನ್ನಿಧಿಯಲ್ಲಿ ನಿಂತರು. 6ಮೋಶೆ ಅವರಿಗೆ,
"ನೀವು ಇವುಗಳನ್ನೆಲ್ಲ ಮಾಡಬೇಕೆಂದು ಸರ್ವೇಶ್ವರಸ್ವಾಮಿಯೇ ಆಜ್ಞಾಪಿಸಿದ್ದಾರೆ; ಅದರಂತೆ ನೀವು
ನಡೆದುಕೊಂಡರೆ ಸರ್ವೇಶ್ವರನ ಮಹಿಮೆ ನಿಮಗೆ ಪ್ರತ್ಯಕ್ಷವಾಗುವುದು," ಎಂದು ಹೇಳಿದನು. 7ಅನಂತರ
ಮೋಶೆ ಆರೋನನಿಗೆ, "ಬಲಿಪೀಠದ ಹತ್ತಿರಕ್ಕೆ ಬಂದು ನೀನು ಮಾಡಬೇಕಾದ ದೋಷಪರಿಹಾರಕ
ಬಲಿಯನ್ನು ಮತ್ತು ದಹನಬಲಿಯನ್ನು ಸಮರ್ಪಿಸಿ ನಿನ್ನ ಹಾಗು ಜನರ ದೋಷವನ್ನು ಪರಿಹರಿಸು. ಜನರು
ತಂದದ್ದನ್ನು ಸಮರ್ಪಿಸಿ ಸರ್ವೇಶ್ವರನ ಆಜ್ಞೆಯಂತೆ ಅವರ ದೋಷವನ್ನು ಪರಿಹರಿಸು," ಎಂದು ಹೇಳಿದನು.
8ಅಂತೆಯೇ ಆರೋನನು ಬಲಿಪೀಠದ ಹತ್ತಿರಕ್ಕೆ ಹೋಗಿ ತನಗಾಗಿ ಹೋರಿಯನ್ನು ದೋಷಪರಿಹಾರಕ
ಬಲಿಯಾಗಿ ವಧಿಸಿದನು. 9ಆರೋನನ ಮಕ್ಕಳು ಆ ಬಲಿಪ್ರಾಣಿಯ ರಕ್ತವನ್ನು ಅವನಿಗೆ ಒಪ್ಪಿಸಿದಾಗ ಅವನು
ಅದರಲ್ಲಿ ತನ್ನ ಬೆರಳನ್ನು ಅದ್ದಿ, ಬಲಿಪೀಠದ ಕೊಂಬುಗಳಿಗೆ ಹಚ್ಚಿ, ಮಿಕ್ಕ ರಕ್ತವನ್ನು ಬಲಿಪೀಠದ ಬುಡದಲ್ಲಿ
ಹೊಯ್ದನು. 10ದೋಷಪರಿಹಾರಕ ಬಲಿಪ್ರಾಣಿಯ ಕೊಬ್ಬನ್ನು, ಮೂತ್ರಪಿಂಡಗಳನ್ನು, ಕಾಳಿಜದ ಹತ್ತಿರವಿರುವ
ಕೊಬ್ಬನ್ನು, ಸರ್ವೇಶ್ವರ ಮೋಶೆಯ ಮುಖಾಂತರ ಆಜ್ಞಾಪಿಸಿದಂತೆ, ಬಲಿಪೀಠದ ಮೇಲೆ
ಹೋಮಮಾಡಿದನು. 11ಅದರ ಮಾಂಸವನ್ನೂ ಚರ್ಮವನ್ನೂ ಪಾಳೆಯದ ಹೊರಗೆ ಬೆಂಕಿಯಲ್ಲಿ
ಸುಡಿಸಿಬಿಟ್ಟನು. 12ತರುವಾಯ ದಹನಬಲಿಯ ಪ್ರಾಣಿಯನ್ನು ವಧಿಸಿದನು. ಆರೋನನ ಮಕ್ಕಳು ಅದರ
ರಕ್ತವನ್ನು ತಂದು ಅವನಿಗೆ ಒಪ್ಪಿಸಿದರು. ಅವನು ಅದನ್ನು ಬಲಿಪೀಠದ ಸುತ್ತಲು ಚಿಮುಕಿಸಿದನು. 13ಅವರು
ಆ ಪ್ರಾಣಿಯ ಮಾಂಸ ಖಂಡಗಳನ್ನೂ ತಲೆಯನ್ನೂ ಒಂದೊಂದಾಗಿ ಒಪ್ಪಿಸಿದಾಗ ಅವನು ಅವುಗಳನ್ನು
ಬಲಿಪೀಠದ ಮೇಲೆ ಹೋಮಮಾಡಿದನು. 14ಅದರ ಕರುಳುಗಳನ್ನೂ, ಕಾಲುಗಳನ್ನೂ ತೊಳೆಯಿಸಿ
ಬಲಿಪೀಠದಲ್ಲಿ ದಹನ ಬಲಿದ್ರವ್ಯದ ಮೇಲಿಟ್ಟು ಹೋಮಮಾಡಿದನು.

15 ಆದಾದ ಮೇಲೆ ಜನರು ಸಮರ್ಪಿಸಿದ ಪ್ರಾಣಿಗಳನ್ನು ಆರೋನನು ತರಿಸಿ ಅವುಗಳಲ್ಲಿ ದೋಷ
ಪರಿಹಾರಕವಾದ ಹೋತವನ್ನು ಮೊದಲನೆಯ ಬಲಿಪ್ರಾಣಿಯಾಗಿ ವಧಿಸಿ ಜನರ ದೋಷ
ಪರಿಹಾರಾರ್ಥವಾಗಿ ಸಮರ್ಪಿಸಿದನು. 16ಅಂತೆಯೆ ದಹನಬಲಿಪ್ರಾಣಿಯನ್ನೂ ವಿಧಿ ಬದ್ಧವಾಗಿ
ಸಮರ್ಪಿಸಿದನು. 17ಜನರು ತಂದ ನೈವೇದ್ಯ ದ್ರವ್ಯಗಳಲ್ಲಿ ಒಂದು ಹಿಡಿಯನ್ನು ತೆಗೆದುಕೊಂಡು ಬೆಳಿಗ್ಗೆಯ

ದಹನಬಲಿಯ ಜೊತೆಗೆ ಅದನ್ನು ಪೀಠದ ಮೇಲೆ ಹೋಮಮಾಡಿದನು. 18ಅನಂತರ ಜನರ ಪರವಾಗಿ
ಶಾಂತಿಸಮಾಧಾನದ ಬಲಿದಾನಕ್ಕಾಗಿ ನೇಮಕವಾದ ಹೋರಿಯನ್ನೂ ಟಗರನ್ನೂ ವಧಿಸಿದನು. ಆರೋನನ
ಮಕ್ಕಳು ಅವುಗಳ ರಕ್ತವನ್ನು ಒಪ್ಪಿಸಿದಾಗ, ಅವನು ಅದನ್ನು ಬಲಿಪೀಠದ ಸುತ್ತಲೂ ಚಿಮುಕಿಸಿದನು. 19ಅವರು
ಆ ಹೋರಿಯ ಕೊಬ್ಬನ್ನು, ಟಗರಿನ ಬಾಲದ ಕೊಬ್ಬನ್ನು, ಕರುಳ ಸುತ್ತಲಿನ ಕೊಬ್ಬನ್ನು, ಮೂತ್ರಪಿಂಡಗಳನ್ನು
ಹಾಗು ಕಾಳಿಜದ ಹತ್ತಿರವಿರುವ ಕೊಬ್ಬನ್ನು 20ಎದೆಯ ಭಾಗಗಳ ಮೇಲೆ ಇಟ್ಟು ಒಪ್ಪಿಸಿದನು. ಆರೋನನು
ಆ ಕೊಬ್ಬನ್ನು ಬಲಿಪೀಠದ ಮೇಲೆ ಹೋಮಮಾಡಿದನು. 21ಮೋಶೆಯ ಆಜ್ಞಾನುಸಾರ ಅವನು ಅವುಗಳ
ಎದೆಯ ಭಾಗಗಳನ್ನೂ ಬಲತೊಡೆಗಳನ್ನೂ ನೈವೇದ್ಯವಾಗಿ ಸರ್ವೇಶ್ವರನ ಸನ್ನಿಧಿಯಲ್ಲಿ ಆರತಿಯೆತ್ತಿದನು.

22 ಆರೋನನು ಆ ದೋಷಪರಿಹಾರಕ ಬಲಿಯನ್ನೂ ದಹನಬಲಿಯನ್ನೂ ಶಾಂತಿಸಮಾಧಾನದ ಬಲಿಗಳನ್ನೂ ಸಮರ್ಪಿಸಿದ ನಂತರ ತನ್ನ ಕೈಗಳನ್ನು ಜನರ ಕಡೆಗೆ ಎತ್ತಿ ಅವರನ್ನು ಆಶೀರ್ವದಿಸಿದನು. ಆಮೇಲೆ ಬಲಿಪೀಠದಿಂದ ಇಳಿದು ಬಂದನು.

23 ತರುವಾಯ ಮೋಶೆ ಮತ್ತು ಆರೋನರು ದೇವದರ್ಶನದ ಗುಡಾರದೊಳಗೆ ಹೋದರು. ಅಲ್ಲಿಂದ
ಹೊರಗೆ ಬಂದು ಜನರನ್ನು ಆಶೀರ್ವದಿಸಿದರು. ಆಗ ಸರ್ವೇಶ್ವರನ ಮಹಿಮೆ ಜನರಿಗೆ ಪ್ರತ್ಯಕ್ಷವಾಯಿತು.
24ಸರ್ವೇಶ್ವರನ ಸನ್ನಿಧಿಯಿಂದ ಅಗ್ನಿ ಹೊರಟು ಬಲಿಪೀಠದ ಮೇಲಿದ್ದ ದಹನ ಬಲಿದ್ರವ್ಯವನ್ನೂ ಕೊಬ್ಬನ್ನೂ
ದಹಿಸಿಬಿಟ್ಟಿತು. ಜನರೆಲ್ಲರು ಅದನ್ನು ಕಂಡು ಜಯ ಜಯಕಾರ ಮಾಡಿದರು; ಅಡ್ಡ ಬಿದ್ದು ನಮಸ್ಕರಿಸಿದರು.

### ನಾದಾಬ್, ಅಬೀಹು ಎಂಬ ಆರೋನನ ಮಕ್ಕಳಿಬ್ಬರು ಕಟ್ಟಿಕೊಂಡ ಪಾಪ

**10** ಆರೋನನ ಮಕ್ಕಳಲ್ಲಿ ನಾದಾಬ್ ಮತ್ತು ಅಬೀಹು ಎಂಬಿಬ್ಬರು ತಮ್ಮ ತಮ್ಮ ಧೂಪ ಕಳಸಗಳಲ್ಲಿ
ಸರ್ವೇಶ್ವರಸ್ವಾಮಿ ಆಜ್ಞಾಪಿಸದೆ ಇದ್ದ ಬೇರೆ ಬೆಂಕಿಯನ್ನಿಟ್ಟು, ಅದರ ಮೇಲೆ ಸಾಂಬ್ರಾಣಿಯನ್ನು ಹಾಕಿ
ಸರ್ವೇಶ್ವರನ ಸನ್ನಿಧಿಯಲ್ಲಿ ಸಮರ್ಪಿಸಿದರು. 2ಆಗ ಸರ್ವೇಶ್ವರನ ಸನ್ನಿಧಿಯಿಂದ ಬೆಂಕಿ ಹೊರಟು ಅವರನ್ನು
ನಾಶ ಮಾಡಿತು. ಅವರು ಸರ್ವೇಶ್ವರನ ಸನ್ನಿಧಿಯಲ್ಲೇ ಸತ್ತರು. 3ಆಗ ಮೋಶೆ ಆರೋನನಿಗೆ:

" 'ನನ್ನ ಬಳಿಯಿರುವವರ ಮುಖಾಂತರವೆ
ನನ್ನ ಪರಿಶುದ್ಧತೆಯನ್ನು ತೋರ್ಪಡಿಸುವೆ;
ಜನರೆಲ್ಲರ ಸಮ್ಮುಖದಲೆ
ನನ್ನ ಮಹಿಮೆಯನು ಶೃತಪಡಿಸುವೆ,'

ಎಂಬ ಸರ್ವೇಶ್ವರನ ನುಡಿಗೆ ಇದೊಂದು ದೃಷ್ಟಾಂತವೇ ಸರಿ," ಎಂದನು. ಅದಕ್ಕೆ ಆರೋನನು ಮೌನವಾಗಿದ್ದನು.

4 ಮೋಶೆ, ಆರೋನನ ಚಿಕ್ಕಪ್ಪನಾದ ಉಜ್ಜಿಯೇಲನ ಮಕ್ಕಳಾದ ಮೀಶಾಯೇಲನನ್ನು ಮತ್ತು
ಎಲ್ಸಾಫನನ್ನು ಕರೆಸಿ, "ನೀವು ಇಲ್ಲಿಗೆ ಬಂದು ನಿಮ್ಮ ಅಣ್ಣಂದಿರ ಶವಗಳನ್ನು ದೇವ ಮಂದಿರದಿಂದ
ಪಾಳೆಯದ ಹೊರಕ್ಕೆ ಹೊತ್ತುಕೊಂಡು ಹೋಗಿ," ಎಂದನು. 5ಮೋಶೆಯ ಅಪ್ಪಣೆಯ ಮೇರೆಗೆ ಅವರು
ಬಂದು ಸತ್ತವರ ನಿಲುವಂಗಿಗಳನ್ನು ತೆಗೆಯದೆ ಅವರ ಶವಗಳನ್ನು ಎತ್ತಿ ಪಾಳೆಯದ ಹೊರಕ್ಕೆ
ಹೊತ್ತುಕೊಂಡು ಹೋದರು.

6 ಮೋಶೆ, ಆರೋನನಿಗೂ ಅವನ ಮಕ್ಕಳಾದ ಎಲ್ಲಾಜಾರ್ ಹಾಗು ಈತಾಮಾರ್ ಎಂಬವರಿಗೂ,
"ನೀವು ಸಂತಾಪ ಸೂಚಿಸಲು ಕೂದಲನ್ನು ಕೆದರಿಕೊಳ್ಳಬಾರದು; ಬಟ್ಟೆಗಳನ್ನು ಹರಿದುಕೊಳ್ಳಬಾರದು. ಹಾಗೆ
ಮಾಡಿದರೆ ನೀವು ಕೂಡ ಸಾಯುವಿರಿ; ಅದು ಮಾತ್ರವಲ್ಲ, ಇಡೀ ಜನ ಸಮೂಹದ ಮೇಲೆ ಸರ್ವೇಶ್ವರ
ಸಿಟ್ಟುಗೊಳ್ಳುವರು. ಸರ್ವೇಶ್ವರನಿಂದ ಹೊರಟ ಆ ಬೆಂಕಿಯ ನಿಮಿತ್ತ ನಿಮ್ಮ ಸೋದರರಾದ ಇಸ್ರಯೇಲ್
ಸಮಾಜದವರೇ ದುಃಖಿಸಲಿ. 7ಸರ್ವೇಶ್ವರನ ಅಭಿಷೇಕತೈಲ ನಿಮ್ಮ ಮೇಲಿರುವುದರಿಂದ ನೀವು
ದೇವದರ್ಶನದ ಗುಡಾರದ ಬಾಗಿಲನ್ನು ಬಿಟ್ಟು ಹೋಗಬಾರದು, ಹೋದರೆ ಸಾಯುವಿರಿ," ಎಂದನು.
ಮೋಶೆಯ ಮಾತಿನಂತೆಯೇ ಅವರು ನಡೆದುಕೊಂಡರು.

## ಯಾಜಕರು ಪಾಲಿಸಬೇಕಾದ ನಿಯಮಗಳು

8 ಆರೋನನಿಗೆ ಸರ್ವೇಶ್ವರ, [9]"ನೀನೂ ನಿನ್ನ ಪುತ್ರರೂ ದ್ರಾಕ್ಷಾರಸವನ್ನಾಗಲಿ, ಮದ್ಯವನ್ನಾಗಲಿ ಕುಡಿದು ದೇವದರ್ಶನದ ಗುಡಾರದೊಳಗೆ ಬರಬಾರದು, ಹಾಗೆ ಬಂದರೆ ಸಾಯುವಿರಿ. ಇದು ನಿನಗೂ ನಿನ್ನ ಸಂತತಿಯವರೆಲ್ಲರಿಗೂ ಶಾಶ್ವತ ನಿಯಮ. [10]ದೇವರಿಗೆ ಮೀಸಲಾದ ವಸ್ತ್ರಗಳಾವುವು, ಸಲ್ಲದ ವಸ್ತ್ರಗಳಾವುವು; ಶುದ್ಧ, ಅಶುದ್ಧವಾದವುಗಳಾವುವು ಎಂಬುದನ್ನು ನೀವು ವಿವೇಚಿಸಬೇಕು. [11]ಸರ್ವೇಶ್ವರನಾದ ನಾನು ಮೋಶೆಯ ಮುಖಾಂತರ ಇಸ್ರಯೇಲರಿಗೆ ಕೊಟ್ಟ ಎಲ್ಲ ಆಜ್ಞೆಗಳನ್ನು ಜನರಿಗೆ ಬೋಧಿಸಬೇಕು. ಇದು ನಿಮ್ಮ ಕರ್ತವ್ಯ," ಎಂದು ಹೇಳಿದರು.

12 ಮೋಶೆ, ಆರೋನನಿಗೂ ಅವನ ಉಳಿದ ಪುತ್ರರಾದ ಎಲ್ಲಾಜಾರ್ ಮತ್ತು ಈತಾಮಾರ್ ಅವರಿಗೂ ಹೀಗೆಂದು ಹೇಳಿದನು: "ಸರ್ವೇಶ್ವರನಿಗೆ ದಹನ ಬಲಿದಾನವಾಗಿ ಸಮರ್ಪಿತವಾದ ದ್ರವ್ಯಗಳಲ್ಲಿ ಮಿಕ್ಕಿರುವ ನೈವೇದ್ಯ ದ್ರವ್ಯವನ್ನು ತೆಗೆದುಕೊಂಡು ಅದರಿಂದ ಹುಳಿಯಿಲ್ಲದ ರೊಟ್ಟಿಗಳನ್ನು ಮಾಡಿಸಿ ಬಲಿಪೀಠದ ಬಳಿಯಲ್ಲಿ ಊಟ ಮಾಡಿ. [13]ಅದು ಮಹಾಪರಿಶುದ್ಧವಾಗಿರುವುದರಿಂದ ಪವಿತ್ರ ಸ್ಥಳದೊಳಗೇ ಅದನ್ನು ಊಟ ಮಾಡಿ. ಜನರು ಸರ್ವೇಶ್ವರನಿಗೆ ಸಮರ್ಪಿಸುವ ಹೋಮದ್ರವ್ಯಗಳಲ್ಲಿ ಅದು ನಿಮಗೂ ನಿಮ್ಮ ಮಕ್ಕಳಿಗೂ ಸಲ್ಲತಕ್ಕದೆಂದು ಅಪ್ಪಣೆಯಾಗಿದೆ. [14]ನೀವು ಯಾಜಕನಿಗೆಂದೇ ಪ್ರತ್ಯೇಕವಾಗಿ ಆರತಿ ಎತ್ತಿ ಅರ್ಪಿಸಿದ ಎದೆಯ ಭಾಗವನ್ನು ಮತ್ತು ತೊಡೆಯನ್ನು ಯಾವುದಾದರು ಒಂದು ಶುದ್ಧ ಸ್ಥಳದಲ್ಲಿ ಊಟಮಾಡಬಹುದು. ನೀವೂ ನಿಮ್ಮ ಕುಟುಂಬದವರೂ ಅದನ್ನು ತಿನ್ನಬಹುದು. ಏಕೆಂದರೆ, ಇಸ್ರಯೇಲರು ಸಮರ್ಪಿಸುವ ಶಾಂತಿ ಸಮಾಧಾನದ ಬಲಿದ್ರವ್ಯಗಳಲ್ಲಿ ಇವು ನಿಮಗೂ ನಿಮ್ಮ ಮಕ್ಕಳಿಗೂ ಸಲ್ಲಬೇಕೆಂದು ನೇಮಕವಾಗಿದೆ. [15]ಜನರು ಹೋಮಕ್ಕಾಗಿ ಕೊಬ್ಬನ್ನು ತಂದು ಸಮರ್ಪಿಸುವಾಗಲೆಲ್ಲಾ ಯಾಜಕರಿಗಾಗಿ ಪ್ರತ್ಯೇಕಿಸಿ ಆರತಿಯೆತ್ತಿ ಸಮರ್ಪಿಸುವ ಆ ಎದೆಯ ಭಾಗವನ್ನು, ತೊಡೆಯನ್ನು ಸರ್ವೇಶ್ವರನ ಸನ್ನಿಧಿಗೆ ತರಬೇಕು. ಸರ್ವೇಶ್ವರನ ಆಜ್ಞಾನುಸಾರ ಅವು ನಿಮಗೂ ನಿಮ್ಮ ವಂಶಜರಿಗೂ ಸಲ್ಲತಕ್ಕದ್ದು. ಇದು ಶಾಶ್ವತ ನಿಯಮ," ಎಂದು ಹೇಳಿದನು.

16 ಜನರೆಲ್ಲರ ದೋಷಪರಿಹಾರಕ್ಕಾಗಿ ಸಮರ್ಪಿತವಾದ ಹೋತದ ಬಗ್ಗೆ ಅದು ಏನಾಯಿತೆಂದು ಮೋಶೆ ವಿಚಾರಿಸಿದಾಗ ಅದನ್ನು ಸುಟ್ಟುಬಿಟ್ಟರೆಂದು ತಿಳಿದುಬಂದಿತು. ಇದನ್ನು ಕೇಳಿ ಮೋಶೆ, ಆರೋನನ ಉಳಿದ ಮಕ್ಕಳಾದ ಎಲ್ಲಾಜಾರ್ ಹಾಗು ಈತಾಮಾರ್ ಎಂಬವರ ಮೇಲೆ ಸಿಟ್ಟುಗೊಂಡನು. [17]"ಆ ದೋಷಪರಿಹಾರಕ ಬಲಿ ಮಹಾಪರಿಶುದ್ಧವಾದುದಲ್ಲವೆ? ನೀವು ಜನ ಸಮೂಹದ ಪಾಪಗಳನ್ನು ಪರಿಹಾರ ಮಾಡುವಂತೆ, ಅವರ ಪರವಾಗಿ ಸರ್ವೇಶ್ವರನ ಸನ್ನಿಧಿಯಲ್ಲಿ ದೋಷನಿವಾರಿಸುವಂತೆ, ಅದು ನಿಮ್ಮ ಭಾಗವಾಗಿ ನೇಮಕವಾಗಿದೆಯಲ್ಲವೆ? ಅದನ್ನೇಕೆ ನೀವು ಪರಿಶುದ್ಧ ಸ್ಥಳದಲ್ಲಿ ತಿನ್ನಲಿಲ್ಲ? [18]ಅದರ ರಕ್ತವನ್ನು ಪವಿತ್ರಸ್ಥಾನದೊಳಕ್ಕೆ ತರಲಿಲ್ಲವಾದ ಕಾರಣ ನಾನು ಆಜ್ಞಾಪಿಸಿದಂತೆ ನೀವು ಅದರ ಮಾಂಸವನ್ನು ದೇವಸ್ಥಾನದ ಪ್ರಾಕಾರದೊಳಗೇ ತಿನ್ನಬೇಕಾಗಿತ್ತು," ಎಂದನು. [19]ಅದಕ್ಕೆ ಆರೋನನು ಮೋಶೆಗೆ, "ಇವರು ಈ ದಿನ ಸರ್ವೇಶ್ವರನ ಸನ್ನಿಧಿಯಲ್ಲಿ ತಮಗೋಸ್ಕರ ದೋಷಪರಿಹಾರಕ ಬಲಿಯನ್ನು ಹಾಗು ದಹನಬಲಿಯನ್ನು ಸಮರ್ಪಿಸಿದ್ದರೂ ಈ ಆಪತ್ತು ನನಗೆ ಸಂಭವಿಸಿತು; ಹೀಗಿರುವಲ್ಲಿ ನಾನು ದೋಷಪರಿಹಾರಕ ಬಲಿ ಮಾಂಸವನ್ನು ಈ ದಿನ ಊಟ ಮಾಡಿದ್ದರೆ ಅದು ಸರ್ವೇಶ್ವರನಿಗೆ ಸರಿದೋರುತ್ತಿತ್ತೆ?" ಎಂದು ಉತ್ತರಕೊಟ್ಟನು. [20]ಆರೋನನ ಈ ಮಾತು ಮೋಶೆಗೆ ತೃಪ್ತಿತಂದಿತು.

## ಇಸ್ರಯೇಲರು ತಿನ್ನಬಹುದಾದ ಪ್ರಾಣಿಗಳು

(ಧರ್ಮೋ. 14.3–21)

**11** ಸರ್ವೇಶ್ವರಸ್ವಾಮಿ ಮೋಶೆ ಮತ್ತು ಆರೋನರ ಸಂಗಡ ಮಾತಾಡಿ ಹೀಗೆಂದು ಆಜ್ಞಾಪಿಸಿದರು: [2]"ನೀವು ಇಸ್ರಯೇಲರಿಗೆ ತಿಳಿಸಬೇಕಾದ ವಿಷಯಗಳು ಇವು– [3]ಭೂಮಿಯ ಮೇಲಿರುವ ಚತುಷ್ಪಾದ ಪ್ರಾಣಿಗಳಲ್ಲಿ ಈ ಕೆಳಕಂಡವುಗಳ ಮಾಂಸವನ್ನು ನೀವು ತಿನ್ನಬಹುದು. ಯಾವ ಪ್ರಾಣಿಯ ಕಾಲ್ಗೊರಸು ಸೀಳಿದೆಯೋ ಅದು ಮೆಲುಕು ಹಾಕುವಂಥದ್ದಾದರೆ ಅದರ ಮಾಂಸವನ್ನು ತಿನ್ನಬಹುದು. [4]ಆದರೆ ಯಾವ ಪ್ರಾಣಿ ಮೆಲುಕು

ಹಾಕಿದರೂ ಗೊರಸು ಸೀಳಿರುವುದಿಲ್ಲವೋ ಅವುಗಳ ಮಾಂಸವನ್ನು ನೀವು ತಿನ್ನಬಾರದು. ಉದಾಹರಣೆಗೆ ಒಂಟೆ ಮೆಲುಕು ಹಾಕುವಂಥದ್ದಾದರೂ ಅದಕ್ಕೆ ಸೀಳು ಗೊರಸು ಇಲ್ಲ. ಆದುದರಿಂದ ನೀವು ಅದರ ಮಾಂಸವನ್ನು ಅಶುದ್ಧವೆಂದು ತಿಳಿಯಬೇಕು. ([5]ಬಿಲದ ಮೊಲ ಮೆಲುಕುಹಾಕುವಂಥದ್ದು; ಆದರೂ ಸೀಳುಗೊರಸು ಇಲ್ಲವಾದ್ದರಿಂದ ಅದು ನಿಮಗೆ ಅಶುದ್ಧ. [6]ಮೊಲ ಮೆಲುಕುಹಾಕುವಂಥದ್ದು; ಆದರೂ ಸೀಳುಗೊರಸು ಇಲ್ಲವಾದ ಕಾರಣ ಅದು ನಿಮಗೆ ಅಶುದ್ಧ.) [7]ಹಂದಿಯ ಗೊರಸು ಸೀಳಿದೆ. ಆದರೂ ಅದು ಮೆಲುಕುಹಾಕುವುದಿಲ್ಲ. ಆದ್ದರಿಂದ ಅದು ನಿಮಗೆ ಅಶುದ್ಧ. [8]ಇಂಥವುಗಳ ಮಾಂಸವನ್ನು ನೀವು ತಿನ್ನಬಾರದು; ಅವುಗಳ ಹೆಣವನ್ನು ಮುಟ್ಟಬಾರದು. ಅವುಗಳನ್ನು ಅಶುದ್ಧವೆಂದೆಣಿಸಬೇಕು.

9 "ಜಲಜಂತುಗಳಲ್ಲಿ ನೀವು ತಿನ್ನಬಹುದಾದವುಗಳು ಯಾವುವೆಂದರೆ ಸಮುದ್ರದಲ್ಲಿ ಆಗಲಿ, ನದಿಯಲ್ಲಾಗಲಿ, ಬೇರೆ ಜಲಾಶಯದಲ್ಲಾಗಲಿ, ಯಾವ ಜಾತಿಯ ಪ್ರಾಣಿಗೆ ರೆಕ್ಕೆ ಇದ್ದು ಮೈಯೆಲ್ಲಾ ಪರೆಪರೆಯಾಗಿರುವುದೋ ಅದರ ಮಾಂಸವನ್ನು ತಿನ್ನಬಹುದು. [10]ಆದರೆ ಸಮುದ್ರದಲ್ಲಿದ್ದರೂ ನದಿಯಲ್ಲಿದ್ದರೂ ಜಲಚರಗಳಾದ ಸಕಲವಿಧವಾದ ಜೀವಜಂತುಗಳಲ್ಲಿ ಯಾವ ಜಾತಿಗೆ ರೆಕ್ಕೆಯೂ ಪರೆಪರೆಯಾದ ಮೈಯೂ ಇರುವುದಿಲ್ಲವೋ ಅದು ನಿಮಗೆ ನಿಷಿದ್ಧವಾದದ್ದು. [11]ಅಂಥವು ಸಂಪೂರ್ಣವಾಗಿ ನಿಷಿದ್ಧವಾಗಿ ಇರುವುದರಿಂದ ಅವುಗಳ ಮಾಂಸವನ್ನು ನೀವು ತಿನ್ನಬಾರದು; ಅವುಗಳ ಹೆಣಗಳು ನಿಮಗೆ ಹೇಯವಾಗಿರಬೇಕು. [12]ಜಲಜಂತುಗಳಲ್ಲಿ ಯಾವುದಕ್ಕೆ ರೆಕ್ಕೆಗಳೂ ಪರೆಪರೆಯಾದ ಮೈಯೂ ಇಲ್ಲವೋ ಅವು ನಿಮಗೆ ಹೇಯವಾಗಿರಬೇಕು.

13 "ಪಕ್ಷಿಗಳಲ್ಲಿ ಇವುಗಳು ನಿಮಗೆ ನಿಷಿದ್ಧವು: ಗರುಡ, ಬೆಟ್ಟದ ಹದ್ದು, [14]ಕ್ರೌಂಚ, ಹದ್ದು, [15]ಸಕಲ ವಿಧವಾದ ಗಿಡಗ, ಎಲ್ಲಾ ವಿಧವಾದ ಕಾಗೆ, [16]ಉಷ್ಟ್ರಪಕ್ಷಿ, ಉಲೂಕ, ಕಡಲ ಹಕ್ಕಿ, [17]ಸಕಲ ವಿಧವಾದ ಡೇಗೆ, ಗೂಬೆ, ಹೆಗ್ಗೂಬೆ, ಕರೇಟು, [18]ಚೀಲಮೂಗಿ, ರಣಹದ್ದು, ನೀರುಕಾಗೆ, ಕೊಕ್ಕರೆ, [19]ಎಲ್ಲ ವಿಧವಾದ ಬಕ, ಹೆಡೆಹಕ್ಕಿ, ಕಣ್ಣಕಪಡಿ. ಇವುಗಳ ಮಾಂಸವನ್ನು ತಿನ್ನಬಾರದು; ಇವು ಹೇಯವಾಗಿರಬೇಕು.

20 "ರೆಕ್ಕೆಯುಳ್ಳವುಗಳಾಗಿ ಕಾಲುಗಳಿಂದ ಹರಿದಾಡುವ ಕ್ರಿಮಿಕೀಟಗಳೆಲ್ಲವೂ ನಿಮಗೆ ಹೇಯವಾಗಿರಬೇಕು. [21]ಆದರೆ ಕಾಲುಳ್ಳ ಯಾವ ಕ್ರಿಮಿಕೀಟಗಳಿಗೆ ನೆಲದ ಮೇಲೆ ಹಾರುವುದಕ್ಕೋಸ್ಕರ ಮುದುರಿಕೊಂಡಿರುವ ತೊಡೆಗಳು ಇರುತ್ತವೆಯೋ ಅವುಗಳನ್ನು ನೀವು ತಿನ್ನಬಹುದು. [22]ಸಕಲವಿಧವಾದ ಮಿಡತೆಗಳನ್ನೂ ಬೋಳು ಮಿಡತೆಗಳನ್ನೂ ಜಿಟ್ಟಿ ಮಿಡತೆಗಳನ್ನೂ ಸಣ್ಣ ಮಿಡತೆಗಳನ್ನೂ ಇವುಗಳನ್ನೆಲ್ಲಾ ತಿನ್ನಬಹುದು. [23]ರೆಕ್ಕೆಯುಳ್ಳವುಗಳಾಗಿ ಕಾಲುಗಳಿಂದ ಹರಿದಾಡುವ ಸಕಲ ವಿಧವಾದ ಕ್ರಿಮಿಕೀಟಗಳು ನಿಮಗೆ ನಿಷಿದ್ಧವು.

24 "ಅದಲ್ಲದೆ ಈ ಕೆಳಗೆ ಹೇಳಿರುವ ಜಂತುಗಳಿಂದ ನಿಮಗೆ ಅಪವಿತ್ರತೆಯುಂಟಾಗುತ್ತದೆ. ಅವುಗಳ ಹೆಣ ಯಾವನಿಗೆ ಸೋಂಕುವುದೋ ಅವನು ಆ ದಿನದ ಸಾಯಂಕಾಲದವರೆಗೂ ಅಶುದ್ಧನಾಗಿರುವನು. [25]ಅವುಗಳ ಹೆಣವನ್ನು ಎತ್ತಿದವನು ತನ್ನ ಬಟ್ಟೆಗಳನ್ನು ಒಗೆದುಕೊಳ್ಳಬೇಕು, ಮತ್ತು ಸಾಯಂಕಾಲದವರೆಗೂ ಅಶುದ್ಧನಾಗಿರುವನು. [26]ಅವು ಯಾವುವೆಂದರೆ, ಯಾವ ಪ್ರಾಣಿ ಗೊರಸು ಸ್ವಲ್ಪ ಸೀಳಿದ್ದರೂ ಇಗ್ಗೊರಸಾಗಿಲ್ಲವೋ ಮತ್ತು ಮೆಲುಕು ಹಾಕುವುದಿಲ್ಲವೋ ಅದು ನಿಮಗೆ ಅಶುದ್ಧ. ಅವುಗಳು ಯಾವನಿಗೆ ಸೋಂಕುವುವೋ ಅವನು ಅಶುದ್ಧನಾಗುವನು. [27]ಚತುಷ್ಪಾದ ಪ್ರಾಣಿಗಳಲ್ಲಿ ಅಂಗಾಲುಗಳಿಂದ ನಡೆಯುವವುಗಳೆಲ್ಲಾ ನಿಮಗೆ ಅಶುದ್ಧವಾಗಿರುವುವು. ಅವುಗಳ ಹೆಣ ಯಾವನಿಗೆ ಸೋಂಕುವುದೋ ಅವನು ಆ ದಿನದ ಸಾಯಂಕಾಲದವರೆಗೂ ಅಶುದ್ಧನಾಗಿರುವನು. [28]ಅವುಗಳ ಹೆಣವನ್ನು ಎತ್ತಿದವನು ತನ್ನ ಬಟ್ಟೆಗಳನ್ನು ಒಗೆದುಕೊಳ್ಳಬೇಕು ಮತ್ತು ಆ ಸಾಯಂಕಾಲದವರೆಗೂ ಅಶುದ್ಧನಾಗಿರುವನು. ಅವು ನಿಮಗೆ ಅಶುದ್ಧ.

29 "ನೆಲದ ಮೇಲೆ ಸಂಚರಿಸುವ ಸಣ್ಣ ಜಂತುಗಳಲ್ಲಿ ಇವು ನಿಮಗೆ ಅಶುದ್ಧವಾಗಿರಬೇಕು: ಯಾವುವೆಂದರೆ – ಮುಂಗುಸಿ, ಇಲಿ, ಸಕಲ ವಿಧವಾದ ಉಡ, ಹಾವುರಾಣಿ, [30]ಊಸುರುವಳ್ಳಿ, ಹಲ್ಲಿ, ಬಸವನಹುಳ, ಚಿಟ್ಟಿಲಿ ಇವೇ. [31]ನೆಲದ ಮೇಲೆ ಸಂಚರಿಸುವ ಈ ಅಶುದ್ಧವಾದ ಸಣ್ಣ ಜಂತುಗಳ ಹೆಣವು ಯಾರಿಗೆ ಸೋಂಕುವುದೋ ಅವರು ಸಾಯಂಕಾಲದವರೆಗೂ ಅಶುದ್ಧರಾಗಿರುವರು. [32]ಇವುಗಳ ಹೆಣ ಯಾವ ವಸ್ತುವಿನ ಮೇಲೆ ಬೀಳುವುದೋ ಆ ವಸ್ತು ಅಶುದ್ಧವಾಗಿರುವುದು. ಅದು ಮರದ ವಸ್ತುವಾಗಲಿ

ಬಟ್ಟೆಯಾಗಲಿ ಚರ್ಮವಾಗಲಿ ಗೋಣಿಯಾಗಲಿ ಅದು ಎಂಥದಾದರೂ ಯಾವ ಕೆಲಸಕ್ಕೆ ಉಪಯೋಗವಾಗಿದ್ದರೂ ಅದನ್ನು ನೀರಿನಲ್ಲಿ ನೆನೆಸಬೇಕು; ಅದು ಆ ಸಾಯಂಕಾಲದವರೆಗೂ ಅಶುದ್ಧವಾಗಿರುವುದು; ತರುವಾಯ ಶುದ್ಧಿಯಾಗುವುದು.
33ಆ ಜಂತುಗಳ ಹೆಣ ಮಣ್ಣಿನ ಪಾತ್ರೆಯಲ್ಲಿ ಬಿದ್ದರೆ ಆ ಪಾತ್ರೆಯಲ್ಲಿರುವುದೆಲ್ಲಾ ಅಶುದ್ಧವಾಗಿರುವುದು. ಮತ್ತು ಆ ಪಾತ್ರೆಯನ್ನು ನೀವು ಒಡೆದುಬಿಡಬೇಕು.
34ಅದರಲ್ಲಿರುವ ತಿನ್ನತಕ್ಕ ಪದಾರ್ಥವೆಲ್ಲಾ ನೀರಿನಿಂದ ನೆನೆದದ್ದಾಗಿದ್ದರೆ ಅಶುದ್ಧವಾಗುವುವು. ಪಾನದ್ರವ್ಯವು ಆ ಪಾತ್ರೆಯಲ್ಲಿದ್ದರೆ ಅದೂ ಅಶುದ್ಧವಾಗುವುದು.
35ಆ ಜಂತುಗಳ ಹೆಣ ಯಾವ ವಸ್ತುಗಳ ಮೇಲೆ ಬಿದ್ದರೂ ಆ ವಸ್ತು ಅಶುದ್ಧವಾಗುವುದು. ಒಲೆಗಳಲ್ಲಿ ಅದು ಒಂಟಿ ಒಲೆಯಾಗಿದ್ದರೂ ಜೋಡಿ ಒಲೆಯಾಗಿದ್ದರೂ ಅದು ಅಶುದ್ಧವಾದುದರಿಂದ ಅದನ್ನು ಒಡೆದುಬಿಡಬೇಕು. ಅದು ಅಶುದ್ಧವೇ.
36ಒರತೆ ಮೊದಲಾದ ಜಲಾಶಯಗಳನ್ನು ಮಾತ್ರ ನೀವು ಶುದ್ಧವೆಂದೆಣಿಸಬೇಕು. ಆದರೆ ಇವುಗಳೊಳಗಿಂದ ಆ ಹೆಣವನ್ನು ಎತ್ತಿದವನು ಅಶುದ್ಧನಾಗುವನು.
37ಬಿತ್ತಬೇಕಾದ ಬೀಜದ ಮೇಲೆ ಈ ಜಂತುಗಳ ಹೆಣ ಬಿದ್ದರೆ ಆ ಬೀಜವು ಅಶುದ್ಧವಾಗುವುದಿಲ್ಲ.
38ನೀರು ಹಾಕಿ ನೆನೆಸಿದ ಬೀಜದ ಮೇಲೆ ಆ ಹೆಣ ಬಿದ್ದರೆ ಅದು ನಿಮಗೆ ಅಶುದ್ಧ.

39 “ಆಹಾರಕ್ಕೆ ಯೋಗ್ಯವಾಗಿರುವ ಪ್ರಾಣಿ ಸತ್ತರೆ ಅದರ ಹೆಣವನ್ನು ಮುಟ್ಟಿದವನು ಆ ದಿನದ ಸಾಯಂಕಾಲದವರೆಗೂ ಅಶುದ್ಧನಾಗಿರುವನು.
40ಆ ಹೆಣದಲ್ಲಿ ಸ್ವಲ್ಪ ತಿಂದವನು ಸಹ ತನ್ನ ಬಟ್ಟೆಗಳನ್ನು ಒಗೆದುಕೊಳ್ಳಬೇಕು. ಅವನು ಆ ದಿನದ ಸಾಯಂಕಾಲದವರೆಗೂ ಅಶುದ್ಧನಾಗಿರುವನು. ಆ ಹೆಣವನ್ನು ಹೊತ್ತವನೂ ತನ್ನ ಬಟ್ಟೆಗಳನ್ನು ಒಗೆದುಕೊಳ್ಳಬೇಕು; ಅವನು ಆ ಸಾಯಂಕಾಲ ದವರೆಗೂ ಅಶುದ್ಧನಾಗಿರುವನು.

41 “ನೆಲದ ಮೇಲೆ ಹರಿದಾಡುವ ಕ್ರಿಮಿಕೀಟಗಳೆಲ್ಲಾ ಹೇಯವಾಗಿವೆ; ಅವುಗಳ ಮಾಂಸವನ್ನು ತಿನ್ನಬಾರದು.
42ಹೊಟ್ಟೆಯಿಂದ ನಡೆಯುವಂಥದನ್ನೂ ಕಾಲಿನಿಂದ ಹರಿದಾಡುವಂಥದನ್ನೂ ಬಹಳ ಕಾಲುಳ್ಳದ್ದನ್ನೂ ಅಂತೂ ನೆಲದ ಮೇಲೆ ಹರಿದಾಡುವ ಯಾವ ಸಣ್ಣ ಜೀವಿಯನ್ನೂ ನೀವು ತಿನ್ನಬಾರದು; ಅವು ಹೇಯವಾಗಿವೆ.
43ನೀವು ಅಂಥ ಯಾವ ಸಣ್ಣ ಜೀವಿಯನ್ನೂ ತಿಂದು ನಿಮ್ಮನ್ನು ನೀವೇ ಹೇಸಿಕೆಮಾಡಿಕೊಂಡು ಅಶುದ್ಧರಾಗಬಾರದು.
44ಏಕೆಂದರೆ ನಾನು ನಿಮ್ಮ ದೇವರಾದ ಸರ್ವೇಶ್ವರ; ನೀವು ದೇವಜನರಿಗೆ ತಕ್ಕಂತಿರಬೇಕು. ನಾನು ಪರಿಶುದ್ಧನಾಗಿರುವುದರಿಂದ ನೀವೂ ಪರಿಶುದ್ಧರಾಗಿರಬೇಕು. ನೆಲದ ಮೇಲೆ ಹರಿದಾಡುವ ಯಾವ ಜಂತುವಿನಿಂದಾದರೂ ನೀವು ನಿಮ್ಮನ್ನು ಅಶುದ್ಧಮಾಡಿಕೊಳ್ಳಬಾರದು.
45ನಿಮ್ಮ ದೇವರಾಗಿರುವುದಕ್ಕೆ ನಿಮ್ಮನ್ನು ಈಜಿಪ್ಟ್‌ನಿಂದ ಬರಮಾಡಿದ ಸರ್ವೇಶ್ವರ ನಾನು; ನಾನು ಪರಿಶುದ್ಧನಾಗಿರುವುದರಿಂದ ನೀವೂ ಪರಿಶುದ್ಧರಾಗಿರಬೇಕು.”

46 ಇದೇ ಪಶು, ಪಕ್ಷಿ, ಜಲಚರ ಹಾಗು ಕ್ರಿಮಿಕೀಟಗಳ ವಿಷಯವಾದ ವಿಧಿ.
47ಇದರಿಂದ ಶುದ್ಧಾಶುದ್ಧಗಳನ್ನೂ, ಭಕ್ಷ್ಯಾಭಕ್ಷ್ಯಗಳನ್ನೂ ವಿವೇಚಿಸುವುದಕ್ಕೆ ನಿಮ್ಮಿಂದಾಗುವುದು.

### ಬಾಣಂತಿಯರ ಶುದ್ಧೀಕರಣ

**12** ಸರ್ವೇಶ್ವರಸ್ವಾಮಿ ಮೋಶೆಗೆ ಹೀಗೆಂದು ಹೇಳಿದರು:
2“ನೀನು ಇಸ್ರಯೇಲರಿಗೆ ಇಂತೆಂದು ಆಜ್ಞಾಪಿಸು – ‘ಒಬ್ಬ ಮಹಿಳೆ ಗಂಡುಮಗುವನ್ನು ಹೆತ್ತರೆ ತಾನು ತಿಂಗಳ ಮುಟ್ಟಿನಿಂದ ಹೇಗೆ ಅಶುದ್ಧಳಾಗುತ್ತಾಳೋ ಹಾಗೆಯೇ ಏಳು ದಿನಗಳ ತನಕ ಅಶುದ್ಧಳಾಗಿರಬೇಕು.
3ಎಂಟನೆಯ ದಿನ ಆ ಮಗುವಿಗೆ ಸುನ್ನತಿ ಮಾಡಿಸಬೇಕು.
4ಆಮೇಲೆ ಆಕೆ ಪೂರ್ಣ ಶುದ್ಧಳಾಗಲು ಮೂವತ್ತುಮೂರು ದಿನಗಳವರೆಗೆ ಕಾದಿರಬೇಕು. ಅದು ಮುಗಿಯುವ ತನಕ ಆಕೆ ದೇವರ ವಸ್ತುಗಳನ್ನು ಮುಟ್ಟಕೂಡದು, ದೇವಸ್ಥಾನಕ್ಕೆ ಬರಕೂಡದು.
5ಹೆಣ್ಣುಮಗುವನ್ನು ಹೆತ್ತರೆ ತಾನು ತಿಂಗಳ ಮುಟ್ಟಿನಿಂದ ಹೇಗೆ ಅಶುದ್ಧಳಾಗುತ್ತಾಳೋ ಹಾಗೆಯೇ ಎರಡು ವಾರಗಳು ಅಶುದ್ಧಳಾಗಿರಬೇಕು; ಮತ್ತು ಪೂರ್ಣಶುದ್ದಳಾಗಲು ಅರವತ್ತಾರು ದಿನಗಳು ಕಾದಿರಬೇಕು.

6 “ಗಂಡುಮಗುವನ್ನು ಹೆತ್ತರೂ ಹೆಣ್ಣು ಮಗುವನ್ನು ಹೆತ್ತರೂ ಆಕೆಯ ಶುದ್ಧೀಕರಣ ದಿನಗಳು ಮುಗಿದಾಗ ಆಕೆ ದಹನಬಲಿಗಾಗಿ ಒಂದು ವರ್ಷದ ಕುರಿಯನ್ನು, ದೋಷಪರಿಹಾರಕ್ಕಾಗಿ ಒಂದು ಮರಿಪಾರಿವಾಳವನ್ನು, ಇಲ್ಲವೆ ಬೆಳವಕ್ಕಿಯನ್ನು ದೇವದರ್ಶನದ ಗುಡಾರದ ಬಾಗಿಲಿಗೆ ತಂದು ಯಾಜಕನಿಗೆ ಒಪ್ಪಿಸಬೇಕು.
7ಯಾಜಕನು ಅವುಗಳನ್ನು ಸರ್ವೇಶ್ವರನ ಸನ್ನಿಧಿಯಲ್ಲಿ ಸಮರ್ಪಿಸಿ ಅವಳ ಪರವಾಗಿ

ದೋಷಪರಿಹಾರಮಾಡಿದಾಗ ಅವಳಿಗೆ ರಕ್ತಸ್ರಾವದಿಂದ ಆದ ಅಪರಿಶುದ್ಧತೆ ನಿವಾರಣೆಯಾಗಿ
ಶುದ್ಧಳಾಗುವಳು. ಗಂಡು ಮಗು ಹೆತ್ತಾಗಲು, ಹೆಣ್ಣು ಮಗು ಹೆತ್ತಾಗಲು ಅನುಸರಿಸಬೇಕಾದ ವಿಧಿ ಒಂದೇ.
8 "ಬಡತನದ ನಿಮಿತ್ತ ಕುರಿಯನ್ನು ಕೊಡುವುದಕ್ಕೆ ಆಗದಿದ್ದರೆ ಎರಡು ಬೆಳವಕ್ಕಿಗಳನ್ನಾಗಲಿ, ಎರಡು
ಮರಿಪಾರಿವಾಳಗಳನ್ನಾಗಲಿ ತಂದು ದಹನಬಲಿಗಾಗಿ ಒಂದನ್ನು, ದೋಷಪರಿಹಾರಕ್ಕಾಗಿ ಇನ್ನೊಂದನ್ನು
ಸಮರ್ಪಿಸಬೇಕು. ಯಾಜಕನು ಅವಳ ಪರವಾಗಿ ದೋಷಪರಿಹಾರವನ್ನು ಮಾಡಿದಾಗ ಆಕೆ
ಶುದ್ಧಳಾಗುವಳು."

**ಚರ್ಮರೋಗ ಕುರಿತ ನಿಯಮಗಳು**

**13** ಸರ್ವೇಶ್ವರಸ್ವಾಮಿ ಮೋಶೆ ಆರೋನರಿಗೆ ಹೇಳಿದ್ದೇನೆಂದರೆ: 2ಒಬ್ಬ ವ್ಯಕ್ತಿಯ ಮೈಮೇಲೆ ಬಾವಾಗಲಿ,
ಗುಳ್ಳೆಯಾಗಲಿ, ಹೊಳೆಯುವ ಮಚ್ಚೆಯಾಗಲಿ ಕಾಣಿಸಿಕೊಂಡು ಅದರಲ್ಲಿ ಕುಷ್ಠರೋಗದ ಲಕ್ಷಣಗಳು
ತೋರಿದರೆ ಅವನನ್ನು ಮಹಾಯಾಜಕ ಆರೋನನ ಬಳಿಗೆ, ಇಲ್ಲವೆ ಆರೋನನ ಮಕ್ಕಳಾದ ಯಾಜಕರಲ್ಲಿ
ಒಬ್ಬನ ಬಳಿಗೆ ಕರೆದುಕೊಂಡು ಬರಬೇಕು. 3ಯಾಜಕನು ಅವನ ಚರ್ಮದಲ್ಲಿರುವ ಮಚ್ಚೆಯನ್ನು
ಪರೀಕ್ಷಿಸಬೇಕು. ಆ ಮಚ್ಚೆಯಲ್ಲಿರುವ ರೋಮ ಬೆಳ್ಳಗಾಗಿ ಹೋಗಿದ್ದರೆ ಮತ್ತು ಆ ಮಚ್ಚೆ ಮಿಕ್ಕ ಚರ್ಮಕ್ಕಿಂತ
ತಗ್ಗಾಗಿದ್ದರೆ ಅದು ಕುಷ್ಠರೋಗ. ಯಾಜಕನು ಅದನ್ನು ಪರೀಕ್ಷಿಸಿ ಆ ವ್ಯಕ್ತಿಯನ್ನು ಅಶುದ್ಧನೆಂದು
ನಿರ್ಣಯಿಸಬೇಕು. 4ಆ ಹೊಳೆಯುವ ಮಚ್ಚೆ ಬೆಳ್ಳಗಾಗಿದ್ದು ಮಿಕ್ಕ ಚರ್ಮಕ್ಕಿಂತ ತಗ್ಗಾಗಿರದೆ ಹೋದರೆ ಮತ್ತು
ಅಲ್ಲಿರುವ ರೋಮ ಬೆಳ್ಳಗಾಗದಿದ್ದರೆ ಯಾಜಕನು ಆ ಮಚ್ಚೆಯಿದ್ದವನನ್ನು ಏಳು ದಿನಗಳವರೆಗೆ ಪ್ರತ್ಯೇಕವಾಗಿ
ಇರಿಸಬೇಕು. 5ಏಳನೆಯ ದಿನದಲ್ಲಿ ಯಾಜಕನು ಅವನನ್ನು ಪರೀಕ್ಷಿಸುವಾಗ ಆ ಮಚ್ಚೆ ದೇಹದ ಚರ್ಮದಲ್ಲಿ
ಹರಡಿಕೊಳ್ಳದೆ ಮೊದಲು ಇದ್ದಂತೆಯೇ ತೋರಿದರೆ ಯಾಜಕನು ಇನ್ನೂ ಏಳು ದಿನಗಳವರೆಗೂ ಅವನನ್ನು
ಪ್ರತ್ಯೇಕವಾಗಿ ಇರಿಸಬೇಕು. 6ಆ ಏಳು ದಿನಗಳಾದ ಮೇಲೆ ಯಾಜಕನು ಮತ್ತೆ ಅವನನ್ನು ಪರೀಕ್ಷಿಸುವಾಗ
ಆ ಮಚ್ಚೆ ದೇಹದ ಚರ್ಮದಲ್ಲಿ ಹರಡಿಕೊಳ್ಳದೆ ಮೊಬ್ಬಾಗಿದ್ದರೆ ಯಾಜಕನು ಅದು ಕೇವಲ ಗುಳ್ಳೆಯೆಂದು
ತಿಳಿದು ಅವನನ್ನು ಶುದ್ಧನೆಂದು ನಿರ್ಣಯಿಸಬೇಕು; ಅವನು ತನ್ನ ಬಟ್ಟೆಗಳನ್ನು ಒಗೆದುಕೊಂಡು
ಶುದ್ಧನಾಗುವನು. 7ಆದರೆ ಅವನು ತನ್ನ ಶುದ್ಧಿಯ ವಿಷಯದಲ್ಲಿ ತನ್ನನ್ನು ಯಾಜಕನಿಗೆ
ತೋರಿಸಿಕೊಂಡನಂತರ ಆ ಗುಳ್ಳೆ ದೇಹದ ಚರ್ಮದಲ್ಲಿ ಹರಡಿಕೊಂಡರೆ ಅವನು ಪುನಃ ಯಾಜಕನಿಗೆ
ತೋರಿಸಿಕೊಳ್ಳಬೇಕು. 8ಯಾಜಕನು ಪರೀಕ್ಷಿಸುವಾಗ ಆ ಮಚ್ಚೆ ದೇಹದ ಚರ್ಮದಲ್ಲಿ ಹರಡಿಕೊಂಡಿದ್ದರೆ
ಅದು ಕುಷ್ಠವೆಂದು ತಿಳಿದು ಆ ವ್ಯಕ್ತಿಯನ್ನು ಅಶುದ್ಧನೆಂದು ನಿರ್ಣಯಿಸಬೇಕು.
9 ಕುಷ್ಠರೋಗದ ಚಿಹ್ನೆಗಳು ಯಾವ ವ್ಯಕ್ತಿಯಲ್ಲಾದರೂ ಕಾಣಬಂದರೆ ಅವನನ್ನು ಯಾಜಕನ ಬಳಿಗೆ
ಕರೆದುಕೊಂಡು ಬರಬೇಕು. 10ಯಾಜಕನು ಅವನನ್ನು ಪರೀಕ್ಷಿಸುವಾಗ ದೇಹದ ಚರ್ಮದಲ್ಲಿ ಬೆಳ್ಳಗಾದ
ಬಾವು ಇದ್ದರೆ ಮತ್ತು ಬಾವಿನಲ್ಲಿ ಮಾಂಸ ಕಾಣಿಸಿದರೆ 11ಅದು ಹಳೇ ಕುಷ್ಠರೋಗದ ಗುರುತು. ಅವನು
ಅಶುದ್ಧನಾದ್ದರಿಂದ ಯಾಜಕನು ಅವನನ್ನು ಪ್ರತ್ಯೇಕಿಸದೆ ಆಗಲೇ ಅಶುದ್ಧನೆಂದು ನಿರ್ಣಯಿಸಬೇಕು.
12 ಆದರೆ ಒಬ್ಬ ವ್ಯಕ್ತಿಯ ಚರ್ಮದಲ್ಲಿ ತೊನ್ನು ಹತ್ತಿ ಯಾಜಕನು ನೋಡುವ ಎಲ್ಲಾ
ಕಡೆಯಲ್ಲಿಯೂ ತಲೆ ಮೊದಲುಗೊಂಡು ಅಂಗಾಲಿನವರೆಗೂ ಹರಡಿಕೊಂಡಿದ್ದರೆ ಯಾಜಕನು
ನೋಡುವಾಗ 13ಆ ತೊನ್ನು ದೇಹದಲ್ಲೆಲ್ಲಾ ವ್ಯಾಪಿಸಿಕೊಂಡಿದ್ದರೆ ಅಂಥವನನ್ನು ಶುದ್ಧನೆಂದು ಯಾಜಕನು
ನಿರ್ಣಯಿಸಬೇಕು. ಅವನ ಚರ್ಮವೆಲ್ಲಾ ಬೆಳ್ಳಗಾಗಿ ಹೋದುದರಿಂದ ಅವನು ಶುದ್ಧನು. 14ಆದರೆ ಅಂಥವನ
ದೇಹದಲ್ಲಿ ಯಾವಾಗಲಾದರೂ ಮಾಂಸ ಕಾಣಬಂದರೆ ಅವನು ಅಶುದ್ಧನಾಗುವನು. 15ಯಾಜಕನು ಆ
ಮಾಂಸವನ್ನು ನೋಡಿ ಅವನನ್ನು ಅಶುದ್ಧನೆಂದು ನಿರ್ಣಯಿಸಬೇಕು. ಅಂಥ ಮಾಂಸವು ಅಶುದ್ಧವೇ ಸರಿ:
ಅದು ಕುಷ್ಠವು. 16ಆದರೆ ಆ ಮಾಂಸವು ಅದೇ ಪ್ರಕಾರವಾಗಿ ಇರದೆ ತಿರುಗಿ ಬೆಳ್ಳಗಾದರೆ ಅವನು ಯಾಜಕನ
ಬಳಿಗೆ ಬರಬೇಕು. 17ಯಾಜಕನು ಪರೀಕ್ಷಿಸುವಾಗ ಆ ಮಚ್ಚೆ ಬೆಳ್ಳಗಾಗಿ ಹೋಗಿದ್ದರೆ ಆ ವ್ಯಕ್ತಿಯನ್ನು
ಶುದ್ಧನೆಂದು ನಿರ್ಣಯಿಸಬೇಕು; ಅವನು ಶುದ್ಧನಾಗಿದ್ದಾನೆ.

18 ಒಬ್ಬನ ದೇಹದ ಚರ್ಮದಲ್ಲಿ ಹುಣ್ಣು ಆಗಿದ್ದು 19ವಾಸಿಯಾದ ಮೇಲೆ ಅದು ಇದ್ದ ಸ್ಥಳದಲ್ಲಿ
ಬಿಳೀ ಬಾವಾಗಲಿ; ಕೆಂಪು ಬಿಳುಪು ಮಿಶ್ರವಾಗಿ ಹೊಳೆಯುವ ಕಲೆಯಾಗಲಿ ಕಂಡು ಬಂದರೆ ಅವನು
ತನ್ನನ್ನು ಯಾಜಕನಿಗೆ ತೋರಿಸಿಕೊಳ್ಳಬೇಕು. 20ಯಾಜಕನು ಪರೀಕ್ಷಿಸಿ ನೋಡುವಾಗ ಆ ಕಲೆ ಮಿಕ್ಕ
ಚರ್ಮಕ್ಕಿಂತ ತಗ್ಗಾಗಿ ತೋರಿದರೆ ಮತ್ತು ಅದರಲ್ಲಿರುವ ರೋಮ ಬೆಳ್ಳಗಾಗಿ ಹೋಗಿದ್ದರೆ ಆ ಹುಣ್ಣಿನಲ್ಲಿ
ಕುಷ್ಠ ಹುಟ್ಟಿರುವುದರಿಂದ ಅವನು ಅಶುದ್ಧನೆಂದು ಯಾಜಕನು ನಿರ್ಣಯಿಸಬೇಕು. 21ಆದರೆ ಯಾಜಕನು
ಪರೀಕ್ಷಿಸಿ ನೋಡುವಾಗ ಅದರಲ್ಲಿ ಬಿಳೀ ರೋಮವಿಲ್ಲದೆ ಹೋದರೆ ಮತ್ತು ಆ ಕಲೆ ಮಿಕ್ಕ ಚರ್ಮಕ್ಕಿಂತ
ತಗ್ಗಾಗದೆ ಮೊಬ್ಬಾಗಿದ್ದರೆ ಯಾಜಕನು ಅವನನ್ನು ಏಳುದಿನಗಳು ಪ್ರತ್ಯೇಕವಾಗಿ ಇರಿಸಬೇಕು. 22ತರುವಾಯ
ಅದು ಚರ್ಮದಲ್ಲಿ ಹರಡಿಕೊಂಡಿದ್ದರೆ ಯಾಜಕನು ಅವನನ್ನು ಅಶುದ್ಧನೆಂದು ನಿರ್ಣಯಿಸಬೇಕು; ಅದು
ಕುಷ್ಠ ರೋಗವೇ ಸರಿ. 23ಆದರೆ ಆ ಹೊಳೆಯುವ ಕಲೆ ಹರಡಿಕೊಳ್ಳದೆ ಮೊದಲಿದ್ದಂತೆಯೇ ಇದ್ದರೆ ಅದು
ಆ ಹುಣ್ಣಿನ ಕಲೆಯೆಂದು ತಿಳಿದುಕೊಂಡು ಯಾಜಕನು ಅವನನ್ನು ಶುದ್ಧನೆಂದು ನಿರ್ಣಯಿಸಬೇಕು.

24 ಒಬ್ಬ ವ್ಯಕ್ತಿಯ ಚರ್ಮದಲ್ಲಿ ಬೆಂಕಿಯಿಂದುಂಟಾದ ಬೊಬ್ಬೆ ಇರಲಾಗಿ ಆ ಬೊಬ್ಬೆಯ ಸ್ಥಳವು
ಹೊಳೆಯುವ ಕಲೆಯಾಗಿ 25ಬೆಳ್ಳಗಾಗಿಯಾಗಲಿ, ಕೆಂಪು ಬಿಳುಪು ಮಿಶ್ರವಾಗಿಯಾಗಲಿ ಇದ್ದರೆ ಯಾಜಕನು
ಅದನ್ನು ಪರೀಕ್ಷಿಸಿ ನೋಡಬೇಕು. ಅವನು ನೋಡುವಾಗ ಆ ಹೊಳೆಯುವ ಕಲೆಯಲ್ಲಿರುವ ರೋಮವು
ಬೆಳ್ಳಗಾಗಿ ಹೋಗಿದ್ದರೆ ಮತ್ತು ಆ ಕಲೆಯು ಮಿಕ್ಕ ಚರ್ಮಕ್ಕಿಂತ ತಗ್ಗಾಗಿ ತೋರಿದರೆ ಅದು ಆ ಬೊಬ್ಬೆಯಲ್ಲಿ
ಹುಟ್ಟಿದ ಕುಷ್ಠವೆಂದು ತಿಳಿದು ಯಾಜಕನು ಅವನನ್ನು ಅಶುದ್ಧನೆಂದು ನಿರ್ಣಯಿಸಬೇಕು. 26ಆದರೆ
ಯಾಜಕನು ಪರೀಕ್ಷಿಸುವಾಗ ಆ ಹೊಳೆಯುವ ಕಲೆಯಲ್ಲಿ ಬಿಳೀ ರೋಮವಿಲ್ಲದೆ ಹೋದರೆ ಮತ್ತು ಅದು
ಮಿಕ್ಕ ಚರ್ಮಕ್ಕಿಂತ ತಗ್ಗಾಗಿ ತೋರದೆ ಮೊಬ್ಬಾಗಿ ಹೋಗಿದ್ದರೆ ಯಾಜಕನು ಅವನನ್ನು ಏಳು ದಿನಗಳ ತನಕ
ಪ್ರತ್ಯೇಕವಾಗಿ ಇರಿಸಬೇಕು. 27ಏಳನೆಯ ದಿನದಲ್ಲಿ ಯಾಜಕನು ಅವನನ್ನು ನೋಡುವಾಗ ಅದು ಚರ್ಮದಲ್ಲಿ
ಹರಡಿಕೊಂಡಿದ್ದರೆ ಅದು ಕುಷ್ಠರೋಗವೆಂದು ತಿಳಿದು ಅವನನ್ನು ಅಶುದ್ಧನೆಂದು ನಿರ್ಣಯಿಸಬೇಕು. 28ಆ
ಹೊಳೆಯುವ ಕಲೆಯು ಚರ್ಮದಲ್ಲಿ ಹರಡಿಕೊಳ್ಳದೆ ಮೊದಲಿನಂತೆಯೇ ಇದ್ದು ಮೊಬ್ಬಾಗಿ ಹೋಗಿದ್ದರೆ
ಅದು ಬೆಂಕಿಸುಟ್ಟ ಬೊಬ್ಬೆಯೆಂದು ತಿಳಿದು ಯಾಜಕನು ಅವನನ್ನು ಶುದ್ಧನೆಂದು ನಿರ್ಣಯಿಸಬೇಕು.

29 ಹೆಂಗಸಿನ ತಲೆಯಲ್ಲಾಗಲಿ, ಗಂಡಸಿನ ತಲೆಯಲ್ಲಿ ಅಥವಾ ಗಡ್ಡದಲ್ಲಾಗಲಿ ಕಲೆ ಉಂಟಾದರೆ
ಯಾಜಕನು ಅದನ್ನು ಪರೀಕ್ಷಿಸಿ ನೋಡಬೇಕು. 30ಆಗ ಅದು ಮಿಕ್ಕ ಚರ್ಮಕ್ಕಿಂತ ತಗ್ಗಾಗಿ ತೋರಿದರೆ ಮತ್ತು
ಅದರಲ್ಲಿ ಹಳದಿ ಬಣ್ಣವುಳ್ಳ ಸಣ್ಣ ಕೂದಲು ಇದ್ದರೆ ಅದು ತಲೆಯಲ್ಲಾಗಲಿ ಗಡ್ಡದಲ್ಲಾಗಲಿ ಉಂಟಾದ
ಕುಷ್ಠವನ್ನು ಸೂಚಿಸುವಂಥಾದ್ದು ಆಗಿರುವುದರಿಂದ ಯಾಜಕನು ಅಂಥವನನ್ನು ಅಶುದ್ಧನೆಂದು
ನಿರ್ಣಯಿಸಬೇಕು. 31ಯಾಜಕನು ಆ ಇಸಬನ್ನು ನೋಡುವಾಗ ಅದು ಮಿಕ್ಕ ಚರ್ಮಕ್ಕಿಂತ ತಗ್ಗಾಗಿ ತೋರದೆ
ಹೋದಾಗ್ಯೂ ಅದು ಇರುವ ಕಡೆ ಕರೇ ಕೂದಲು ಇಲ್ಲದಿದ್ದರೆ ಯಾಜಕನು ಅವನನ್ನು ಏಳು ದಿನಗಳ ತನಕ
ಪ್ರತ್ಯೇಕವಾಗಿ ಇರಿಸಬೇಕು. 32ಏಳನೆಯ ದಿನದಲ್ಲಿ ಯಾಜಕನು ನೋಡುವಾಗ ಆ ಇಸುಬು ಹರಡಿಕೊಳ್ಳದೆ
ಇದ್ದರೆ ಮತ್ತು ಅದು ಇರುವ ಕಡೆ ಹಳದಿಬಣ್ಣದ ಕೂದಲು ಇಲ್ಲದಿದ್ದರೆ ಮತ್ತು ಅದು ಮಿಕ್ಕ ಚರ್ಮಕ್ಕಿಂತ
ತಗ್ಗಾಗಿ ತೋರದೆ ಹೋದರೆ 33ಅವನು ಕ್ಷೌರಮಾಡಿಸಿಕೊಳ್ಳಬೇಕು. ಆ ಇಸುಬು ಇರುವ ಭಾಗವನ್ನು ಮಾತ್ರ
ಕ್ಷೌರಮಾಡಿಸಿಕೊಳ್ಳಬಾರದು. ಯಾಜಕನು ಅವನನ್ನು ಇನ್ನೂ ಏಳು ದಿನಗಳವರೆಗೂ ಪ್ರತ್ಯೇಕಿಸಬೇಕು.
34ಏಳನೆಯ ದಿನದಲ್ಲಿ ಯಾಜಕನು ಪುನಃ ಆ ಇಸಬನ್ನು ನೋಡುವಾಗ ಅದು ಚರ್ಮದಲ್ಲಿ ಹರಡಿಕೊಳ್ಳದೆ
ಹೋಗಿದ್ದರೆ ಮಿಕ್ಕ ಚರ್ಮಕ್ಕಿಂತ ತಗ್ಗಾಗಿ ತೋರದೆ ಹೋದರೆ ಯಾಜಕನು ಅವನನ್ನು ಶುದ್ಧನೆಂದು
ನಿರ್ಣಯಿಸಬೇಕು. ಅವನು ತನ್ನ ಬಟ್ಟೆಗಳನ್ನು ಒಗೆದುಕೊಂಡಾಗ ಶುದ್ಧನಾಗುವನು. 35ಆದರೆ ಅವನು
ಶುದ್ಧನೆಂದು ನಿರ್ಣಯಿಸಲ್ಪಟ್ಟ ಮೇಲೆ ಆ ಇಸಬು ಚರ್ಮದಲ್ಲಿ ಹರಡಿಕೊಂಡರೆ 36ಯಾಜಕನು ಅವನನ್ನು
ಪರೀಕ್ಷಿಸಬೇಕು; ಆದರೆ ಹಳದಿಬಣ್ಣದ ಕೂದಲು ಇದೆಯೋ ಇಲ್ಲವೋ ಎಂದು ನೋಡಬೇಕಾದ ಅಗತ್ಯವಿಲ್ಲ;
ಅವನು ಅಶುದ್ಧನೇ. 37ಇಸಬು ಮೊದಲು ಇದ್ದಂತೆಯೇ ಇದ್ದುದರಲ್ಲಿ ಕರಿಕೂದಲು ಹುಟ್ಟಿದ್ದರೆ ಅದು
ವಾಸಿಯಾಗಿದೆ. ಅವನು ಶುದ್ಧನು; ಯಾಜಕನು ಅವನನ್ನು ಶುದ್ಧನೆಂದು ನಿರ್ಣಯಿಸಬೇಕು.

38 ಗಂಡಸಿಗಾಗಲಿ ಹೆಂಗಸಿಗಾಗಲಿ ಚರ್ಮದಲ್ಲಿ ಹೊಳೆಯುವ ಬಿಳುಪಾದ ಕಲೆಗಳು ಅಲ್ಲಲ್ಲಿ
ಹುಟ್ಟಿದ್ದರೆ 39ಯಾಜಕನು ಅವುಗಳನ್ನು ಪರೀಕ್ಷಿಸಬೇಕು. ಆ ಹೊಳೆಯುವ ಕಲೆಗಳು ಮೊಬ್ಬಾದ ಬಿಳೀ
ಬಣ್ಣದಾಗಿದ್ದರೆ ಅದು ದೇಹದ ಚರ್ಮದಲ್ಲಿ ಹುಟ್ಟಿದ ಚಿಬ್ಬು, ಅವನು ಶುದ್ಧನು.

40 ಒಬ್ಬ ವ್ಯಕ್ತಿಯ ತಲೆಯ ಕೂದಲು ಉದುರಿ ಹೋದುದರಿಂದ ಬೋಳು ತಲೆಯವನಾದರೂ
ಅವನು ಶುದ್ಧನೇ. 41ಮುಂದಲೆಯ ಕೂದಲು ಉದುರಿದರೆ ಅವನು ಪಟ್ಟೆತಲೆಯವನಾದರೂ ಶುದ್ಧನೇ.
42ಆದರೆ ಬೋಳುತಲೆಯಲ್ಲಾಗಲಿ, ಪಟ್ಟೆತಲೆಯಲ್ಲಾಗಲಿ ಕೆಂಪು ಬಿಳುಪು ಮಿಶ್ರವಾದ ಮಚ್ಚೆ ಹುಟ್ಟಿದರೆ ಅದು
ಕುಷ್ಠವೇ. 43ಯಾಜಕನು ಅವನನ್ನು ಪರೀಕ್ಷಿಸಬೇಕು. ಆಗ ಅದರಿಂದುಂಟಾದ ಬಾವು ಕೆಂಪು ಬಿಳುಪು
ಮಿಶ್ರವಾಗಿ ಚರ್ಮದಲ್ಲಿನ ಕುಷ್ಠದಂತೆ ತೋರಿದರೆ ಅವನು ಕುಷ್ಠರೋಗಿ; ಅಶುದ್ಧನು. 44ಅವನ ತಲೆಯ
ಮೇಲೆ ಕುಷ್ಠದ ಗುರುತು ಕಾಣಿಸಿದ್ದರಿಂದ ಅವನು ಅಶುದ್ಧನೆಂದು ಯಾಜಕನು ನಿರ್ಣಯಿಸಬೇಕು.

45 ಯಾರಲ್ಲಿ ಕುಷ್ಠದ ಗುರುತು ಕಾಣಬಂತೋ ಆ ವ್ಯಕ್ತಿ ತನ್ನ ಬಟ್ಟೆಗಳನ್ನು ಹರಿದುಕೊಂಡು
ತಲೆಯನ್ನು ಕೆದರಿಕೊಂಡು ಬಾಯಿಯನ್ನು ಬಟ್ಟೆಯಿಂದ ಮುಚ್ಚಿಕೊಂಡು – 'ನಾನು ಅಶುದ್ಧನು, ಅಶುದ್ಧನು'
ಎಂದು ಕೂಗಿಕೊಳ್ಳಬೇಕು. 46ಆ ರೋಗದ ಗುರುತುಗಳು ಅವನಲ್ಲಿ ಇರುವ ದಿನಗಳೆಲ್ಲಾ ಅವನು
ಅಶುದ್ಧನಾಗಿರುವನು. ಅವನು ಅಶುದ್ಧನಾದುದರಿಂದ ಪ್ರತ್ಯೇಕವಾಗಿಯೇ ವಾಸವಾಗಿರಬೇಕು. ಅವನ ನಿವಾಸ
ಪಾಳೆಯದ ಹೊರಗೆ ಇರಬೇಕು.

**ಕುಷ್ಠ ಸೋಂಕಿದ ಬಟ್ಟೆಬರೆ**

47 ಕುಷ್ಠರೋಗದ ಗುರುತು ಬಟ್ಟೆಯಲ್ಲಿ ಕಂಡು ಬಂದಾಗ ಅದು ಉಣ್ಣೆಯ ಬಟ್ಟೆಯಾಗಲಿ, ನಾರಿನ
ಬಟ್ಟೆಯಾಗಲಿ, 48ನಾರಿನ ಅಥವಾ ಉಣ್ಣೆಯ ನೆಯಿಗೆಯಲ್ಲಾಗಲಿ, ಹೆಣಿಗೆಯಲ್ಲೆ ಆಗಲಿ, ಇಲ್ಲವೆ
ತೊಗಲಿನಲ್ಲಾಗಲಿ, ತೊಗಲಿನಿಂದ ಮಾಡಲ್ಪಟ್ಟ ವಸ್ತುವಿನಲ್ಲಾಗಲಿ, 49ಆ ಬಟ್ಟೆ, ತೊಗಲು, ಹಾಸು, ಹೊಕ್ಕು,
ತೊಗಲಿನ ಸಾಮಾನುಗಳಲ್ಲಿ ಹಸುರಾಗಿ ಇಲ್ಲವೆ ಕೆಂಪಾಗಿ ಮಚ್ಚೆಕಾಣಿಸಿದರೆ ಅದು ಕುಷ್ಠದ ಗುರುತು; ಅದನ್ನು
ಯಾಜಕನಿಗೆ ತೋರಿಸಬೇಕು. 50ಯಾಜಕನು ಅದನ್ನು ನೋಡಿ ಏಳು ದಿನಗಳವರೆಗೆ ಪ್ರತ್ಯೇಕವಾಗಿ
ಇಡಿಸಬೇಕು. 51ಏಳನೆಯ ದಿನದಲ್ಲಿ ಅವನು ಅದನ್ನು ನೋಡುವಾಗ ಆ ಬಟ್ಟೆಯ ನೆಯಿಗೆಯಲ್ಲಾಗಲಿ
ಹೆಣಿಗೆಯಲ್ಲಾಗಲಿ ಇಲ್ಲವೇ ಯಾವುದಾದರೂ ಒಂದು ಕೆಲಸಕ್ಕೆ ಉಪಯೋಗ ಆಗಿರುವ ಆ ತೊಗಲಿನಲ್ಲಿ
ಆ ಮಚ್ಚೆ ಹರಡಿಕೊಂಡಿದ್ದರೆ ಅದು ಪ್ರಾಣಕ್ಕೆ ಅಪಾಯಕರವಾದ ಕುಷ್ಠವೇ; ಆ ವಸ್ತು ಅಶುದ್ಧ. 52ಆ ವಸ್ತುವು
ಬಟ್ಟೆಯಾದರೂ ನೆಯಿಗೆಯಾದರೂ ಹೆಣಿಗೆಯಾದರೂ ಉಣ್ಣೆಯದಾದರೂ ನಾರಿನದಾದರೂ
ತೊಗಲಿನದಾದರೂ ಅದರಲ್ಲಿ ಪ್ರಾಣಕ್ಕೆ ಅಪಾಯಕರವಾದ ಕುಷ್ಠವಿರುವುದರಿಂದ ಅದನ್ನು ಬೆಂಕಿಯಿಂದ
ಸುಡಿಸಿಬಿಡಬೇಕು. 53ಆದರೆ ಯಾಜಕನು ಪರೀಕ್ಷಿಸುವಾಗ ಆ ವಸ್ತುವಿನಲ್ಲಿ ಅಂದರೆ ಆ ಬಟ್ಟೆ, ನೆಯಿಗೆ,
ಹೆಣಿಗೆ, ತೊಗಲಿನ ಸಾಮಾನು ಇವುಗಳಲ್ಲಿ ಆ ಮಚ್ಚೆ ಹರಡಿಕೊಳ್ಳದಿದ್ದರೆ 54ಅದನ್ನು ನೀರಿನಿಂದ
ತೊಳೆಯಬೇಕೆಂದು ಯಾಜಕನು ಅಪ್ಪಣೆಕೊಟ್ಟು ಇನ್ನೂ ಏಳು ದಿನಗಳ ತನಕ ಅದನ್ನು ಪ್ರತ್ಯೇಕವಾಗಿ
ಇಡಿಸಬೇಕು. 55ಆ ಮಚ್ಚೆ ಇದ್ದ ವಸ್ತುವನ್ನು ತೊಳೆಸಿದ ಮೇಲೆ ಯಾಜಕನು ನೋಡುವಾಗ ಆ ಮಚ್ಚೆಯು
ಹರಡಿಕೊಳ್ಳದೆ ಇದ್ದಾಗ್ಯೂ ಅದರ ಬಣ್ಣ ಮೊದಲಿದ್ದಂತೆಯೇ ಇದ್ದರೆ ಆ ವಸ್ತು ಅಶುದ್ಧ. ಕುಷ್ಠ ರೋಗದ
ಗುರುತು ಅದರ ಮೇಲಿನ ಕಡೆಯಿಂದ ಆಗಲಿ ಕೆಳಗಿನ ಕಡೆಯಿಂದಾಗಲಿ ಆ ವಸ್ತುವಿನೊಳಗೆ ವ್ಯಾಪಿಸಿದ್ದರಿಂದ
ಅದನ್ನು ಬೆಂಕಿಯಿಂದ ಸುಟ್ಟುಬಿಡಬೇಕು. 56ಆದರೆ ತೊಳೆದ ಬಟ್ಟೆಯನ್ನು ಯಾಜಕನು ನೋಡುವಾಗ
ಅದರಲ್ಲಿದ್ದ ಮಚ್ಚೆ ಮೊಬ್ಬಾಗಿ ಹೋಗಿದ್ದರೆ ಅವನು ಆ ಮಚ್ಚೆ ಇರುವ ಭಾಗವನ್ನು ಬಟ್ಟೆಯಿಂದಾಗಲಿ
ತೊಗಲಿನಿಂದಾಗಲಿ ನೆಯಿಗೆಯಿಂದಾಗಲಿ ಹೆಣಿಗೆಯಿಂದಾಗಲಿ ಕತ್ತರಿಸಿ ಬಿಡಬೇಕು. 57ಆಮೇಲೆಯೂ ಕುಷ್ಠದ
ಮಚ್ಚೆ ಆ ಬಟ್ಟೆಯಲ್ಲಾಗಲಿ ನೆಯಿಗೆಯಲ್ಲಾಗಲಿ ಹೆಣಿಗೆಯಲ್ಲಾಗಲಿ ತೊಗಲಿನ ಸಾಮಾನಿನಲ್ಲಾಗಲಿ
ಕಂಡುಬಂದರೆ ಕುಷ್ಠರೋಗವು ಇನ್ನೂ ಅದರಲ್ಲಿ ಉಂಟೆಂದು ತಿಳಿದುಕೊಳ್ಳಬೇಕು. ಆ ಮಚ್ಚೆ ಇರುವ
ವಸ್ತುವನ್ನೇ ಬೆಂಕಿಯಿಂದ ಸುಟ್ಟುಬಿಡಬೇಕು. 58ಆ ಬಟ್ಟೆಯಲ್ಲಾಗಲಿ ನೆಯಿಗೆಯಲ್ಲಾಗಲಿ ಹೆಣಿಗೆಯಲ್ಲಾಗಲಿ
ತೊಗಲಿನ ಸಾಮಾನಿನಲ್ಲಾಗಲಿ ತೊಳೆದ ನಂತರ ಆ ಮಚ್ಚೆ ಕಾಣದೆ ಹೋದರೆ ಅದನ್ನು ಎರಡನೆಯ ಸಾರಿ
ತೊಳೆಯಬೇಕು; ಆಗ ಅದು ಶುದ್ಧವಾಗುವುದು.

59 ಉಣ್ಣೇ ಬಟ್ಟೆಯಲ್ಲಾಗಲಿ ನಾರಿನ ಬಟ್ಟೆಯಲ್ಲಾಗಲಿ ನೆಯಿಗೆಯಲ್ಲಾಗಲಿ ಹೆಣಿಗೆಯಲ್ಲಾಗಲಿ ತೊಗಲಿನ ಸಾಮಾನಿನಲ್ಲಾಗಲಿ ಕಾಣಬಂದ ಕುಷ್ಠರೋಗದ ಗುರುತಿನ ವಿಷಯವಾದ ವಿಧಿ ಇದೇ. ಅದು ಶುದ್ಧವೆಂದು ನಿರ್ಣಯಿಸಬೇಕೋ ಅಶುದ್ಧವೆಂದು ನಿರ್ಣಯಿಸಬೇಕೋ ಎಂಬುದು ಇದರಿಂದ ತಿಳಿಯುವುದು.

## ಚರ್ಮರೋಗ ಗುಣವಾದ ಮೇಲೆ ಶುದ್ಧೀಕರಣ

**14** ಸರ್ವೇಶ್ವರಸ್ವಾಮಿ ಮೋಶೆಗೆ ಹೇಳಿದ್ದು ಏನೆಂದರೆ – [2]ಕುಷ್ಠರೋಗಿ ಶುದ್ಧನಾಗುವ ದಿನದಲ್ಲಿ ಅವನ
ವಿಷಯದಲ್ಲಿ ಅನುಸರಿಸಬೇಕಾದ ಕ್ರಮ ಇದು: ಅವನನ್ನು ಯಾಜಕನಿಗೆ ತೋರಿಸಬೇಕು. [3]ಯಾಜಕನು
ಪಾಳೆಯದ ಹೊರಕ್ಕೆ ಹೋಗಿ ಅವನನ್ನು ಪರೀಕ್ಷಿಸಬೇಕು. ಆಗ ಅವನಲ್ಲಿದ್ದ ಕುಷ್ಠವು ವಾಸಿಯಾಯಿತೆಂದು
ಕಂಡರೆ [4]ಶುದ್ಧಮಾಡಿಸಿಕೊಳ್ಳುವವನ ಪರವಾಗಿ ಸಜೀವವಾದ ಎರಡು ಶುದ್ಧಪಕ್ಷಿಗಳನ್ನು ದೇವದಾರಿನ
ಕಟ್ಟಿಗೆಯನ್ನೂ ರಕ್ತವರ್ಣವುಳ್ಳ ದಾರವನ್ನೂ ಹಿಸ್ಸೋಪ್ ಗಿಡದ ಬರಲನ್ನೂ ತರಬೇಕೆಂದು ಯಾಜಕನು
ಆಜ್ಞಾಪಿಸಬೇಕು. [5]ಆ ಪಕ್ಷಿಗಳಲ್ಲಿ ಒಂದನ್ನು ಒರತೆ ನೀರಿನ ಮೇಲೆ ಮಣ್ಣಿನ ಪಾತ್ರೆಯಲ್ಲಿ ವಧಿಸಬೇಕೆಂದು
ಯಾಜಕನು ಆಜ್ಞಾಪಿಸಿ, ಮತ್ತೊಂದು ಪಕ್ಷಿಯನ್ನೂ [6]ಆ ದೇವದಾರಿನ ಕಟ್ಟಿಗೆಯನ್ನೂ ರಕ್ತವರ್ಣವುಳ್ಳ
ದಾರವನ್ನೂ ಹಿಸ್ಸೋಪ್‍ಗಿಡದ ಬರಲನ್ನೂ ತೆಗೆದುಕೊಂಡು ಒರತೆ ನೀರಿನ ಮೇಲೆ ವಧಿಸಿದ ಆ
ಮೊದಲನೆಯ ಪಕ್ಷಿಯ ರಕ್ತದಲ್ಲಿ ಅವುಗಳನ್ನೆಲ್ಲಾ ಆ ಪಕ್ಷಿಯನ್ನು ಕೂಡ ಸಜೀವವಾಗಿಯೇ ಅದ್ದಿ
[7]ಕುಷ್ಠರೋಗದ ವಿಷಯದಲ್ಲಿ ಶುದ್ಧಮಾಡಿಸಿಕೊಳ್ಳುವವನ ಮೇಲೆ ಏಳು ಸಾರಿ ಆ ರಕ್ತವನ್ನು ಚಿಮುಕಿಸಿ
ಅವನನ್ನು ಶುದ್ಧನೆಂದು ನಿರ್ಣಯಿಸಿ ಆ ಜೀವವುಳ್ಳ ಪಕ್ಷಿಯನ್ನು ಅಡವಿಯ ಕಡೆಗೆ ಬಿಟ್ಟು ಬಿಡಬೇಕು. [8]ಆಗ
ಶುದ್ಧಮಾಡಿಸಿಕೊಳ್ಳುವವನು ತನ್ನ ಬಟ್ಟೆಗಳನ್ನು ಒಗೆದುಕೊಂಡು ಸರ್ವಾಂಗ ಕ್ಷೌರ ಮಾಡಿಸಿಕೊಂಡು
ಸ್ನಾನಮಾಡಿದ ಮೇಲೆ ಶುದ್ಧನಾಗುವನು. ತರುವಾಯ ಅವನು ಪಾಳೆಯದೊಳಗೆ ಬರಬಹುದು; ಆದರೂ
ಏಳು ದಿನಗಳ ತನಕ ತನ್ನ ಡೇರೆಯ ಹೊರಗೇ ಇರಬೇಕು. [9]ಏಳನೆಯ ದಿನದಲ್ಲಿ ತನ್ನ ತಲೆಗೂದಲು, ಗಡ್ಡ,
ಹುಬ್ಬು, ಮೈಗೂದಲು ಇವುಗಳನ್ನೆಲ್ಲಾ ಕ್ಷೌರ ಮಾಡಿಸಿಕೊಂಡು ತನ್ನ ಬಟ್ಟೆಗಳನ್ನು ಒಗೆದುಕೊಂಡು
ಜಲಸ್ನಾನಮಾಡಬೇಕು. ಆಗಿನಿಂದ ಶುದ್ಧನಾಗುವನು.

10 ಎಂಟನೆಯ ದಿನದಲ್ಲಿ ಅವನು ಪೂರ್ಣಾಂಗವಾದ ಎರಡು ಟಗರುಗಳನ್ನೂ ಪೂರ್ಣಾಂಗವಾದ
ಒಂದು ವರುಷದ ಕುರಿಯನ್ನೂ ನೈವೇದ್ಯಕ್ಕಾಗಿ ಎಣ್ಣೆ ಕಲಸಿದ ಒಂಬತ್ತು ಸೇರು ಗೋದಿ ಹಿಟ್ಟನ್ನೂ ಒಂದು
ಸೇರು ಎಣ್ಣೆಯನ್ನೂ ತೆಗೆದುಕೊಂಡು ಬರಬೇಕು. [11]ಶುದ್ಧಿಮಾಡುವ ಯಾಜಕನು ಶುದ್ಧ
ಮಾಡಿಸಿಕೊಳ್ಳುವವನನ್ನು ಇವುಗಳೊಂದಿಗೆ ದೇವದರ್ಶನದ ಗುಡಾರದ ಬಾಗಿಲಲ್ಲಿ [12]ಸರ್ವೇಶ್ವರನ
ಸನ್ನಿಧಿಯಲ್ಲಿ ನಿಲ್ಲಿಸಿ ಆ ಟಗರುಗಳಲ್ಲಿ ಒಂದನ್ನೂ ಆ ಒಂದು ಸೇರು ಎಣ್ಣೆಯನ್ನೂ ಪ್ರಾಯಶ್ಚಿತ್ತ ಬಲಿಯಾಗಿ
ಸಮರ್ಪಿಸಬೇಕು; ಅವುಗಳನ್ನು ನೈವೇದ್ಯವಾಗಿ ಸರ್ವೇಶ್ವರನ ಸನ್ನಿಧಿಯಲ್ಲಿ ಆರತಿ ಎತ್ತಬೇಕು.
[13]ದೋಷಪರಿಹಾರಕ ಬಲಿಪ್ರಾಣಿಯನ್ನೂ ದಹನ ಬಲಿಪ್ರಾಣಿಯನ್ನೂ ವಧಿಸುವ ಸ್ಥಳದಲ್ಲೇ, ಅಂದರೆ
ದೇವಸ್ಥಾನದ ಪ್ರಕಾರದೊಳಗೆ ಆ ಟಗರನ್ನು ವಧಿಸಬೇಕು. ಏಕೆಂದರೆ ದೋಷಪರಿಹಾರಕ ಬಲಿ
ದ್ರವ್ಯದಂತೆಯೇ ಪ್ರಾಯಶ್ಚಿತ್ತ ಬಲಿದ್ರವ್ಯವೂ ಯಾಜಕನಿಗೆ ಸಲ್ಲತಕ್ಕದ್ದು; ಅದು ಮಹಾ ಪರಿಶುದ್ಧವಾದದ್ದು;
[14]ಆಗ ಯಾಜಕನು ಆ ಪ್ರಾಯಶ್ಚಿತ್ತ ಬಲಿಪ್ರಾಣಿಯ ರಕ್ತದಲ್ಲಿ ಸ್ವಲ್ಪ ತೆಗೆದುಕೊಂಡು ಶುದ್ಧಮಾಡಿಸಿಕೊಳ್ಳುವವನ
ಬಲಗಿವಿಯ ತುದಿಗೂ ಬಲಗೈಯ ಹೆಬ್ಬೆರಳಿಗೂ ಬಲಗಾಲಿನ ಹೆಬ್ಬೆಟ್ಟಿಗೂ ಹಚ್ಚಬೇಕು. [15]ಆಗ ಯಾಜಕನು
ಆ ಸೇರು ಎಣ್ಣೆಯಲ್ಲಿ ಸ್ವಲ್ಪವನ್ನು ತನ್ನ ಎಡಗೈಯಲ್ಲಿ ಹೊಯ್ದುಕೊಂಡು [16]ತನ್ನ ಬಲಗೈಯ ಬೆರಳನ್ನು
ಅದರಲ್ಲಿ ಅದ್ದಿ ಸರ್ವೇಶ್ವರನ ಸನ್ನಿಧಿಯಲ್ಲಿ ಏಳು ಸಾರಿ ಬೆರಳಿನಿಂದ ಚಿಮುಕಿಸಬೇಕು. [17]ಅವನು ತನ್ನ
ಕೈಯಲ್ಲಿರುವ ಮಿಕ್ಕ ಎಣ್ಣೆಯಲ್ಲಿ ಸ್ವಲ್ಪವನ್ನು ಶುದ್ಧಮಾಡಿಸಿಕೊಳ್ಳುವವನ ಬಲಗಿವಿಯ ತುದಿಗೂ ಬಲಗೈಯ
ಹೆಬ್ಬೆರಳಿಗೂ ಬಲಗಾಲಿನ ಹೆಬ್ಬೆರಳಿಗೂ ಪ್ರಾಯಶ್ಚಿತ್ತ ಬಲಿಪ್ರಾಣಿಯ ರಕ್ತವನ್ನು ಹಚ್ಚಿದ ಸ್ಥಳಗಳಲ್ಲಿಯೇ ಹಚ್ಚಿ
[18]ಕೈಯಲ್ಲಿರುವ ಮಿಕ್ಕ ಎಣ್ಣೆಯನ್ನು ಶುದ್ಧಮಾಡಿಸಿಕೊಳ್ಳುವವನ ತಲೆಯ ಮೇಲೆ ಹೊಯ್ದುಬಿಡಬೇಕು. ಹೀಗೆ
ಯಾಜಕನು ಸರ್ವೇಶ್ವರನ ಸನ್ನಿಧಿಯಲ್ಲಿ ಅವನ ದೋಷವನ್ನು ಪರಿಹರಿಸುವನು.

19 ಅದಲ್ಲದೆ, ಯಾಜಕನು ಶುದ್ಧಮಾಡಿಸಿಕೊಳ್ಳುವವನ ಅಪವಿತ್ರತೆಯನ್ನು ಹೋಗಲಾಡಿಸು ವುದಕ್ಕೆ
ಆ ಕುರಿಯನ್ನು ದೋಷಪರಿಹಾರಕ ಬಲಿಯಾಗಿ ಸಮರ್ಪಿಸಿ ಅವನ ದೋಷವನ್ನು ಪರಿಹರಿಸುವನು.
ಆಮೇಲೆ ಯಾಜಕನು ಆ ಎರಡನೆಯ ಟಗರುಮರಿಯನ್ನು ದಹನಬಲಿ ಆಗಿ ವಧಿಸಬೇಕು. [20]ಅವನು ಆ
ದಹನಬಲಿಯನ್ನೂ ನೈವೇದ್ಯವನ್ನೂ ಬಲಿಪೀಠದ ಮೇಲೆ ಸಮರ್ಪಿಸಬೇಕು. ಯಾಜಕನು ಅವನ ಪರವಾಗಿ
ಹೀಗೆ ದೋಷಪರಿಹಾರ ಮಾಡಿದಾಗ ಅವನು ಶುದ್ಧನಾಗುವನು.
21 ಅವನು ಬಡವನಾಗಿದ್ದು ಅಷ್ಟನ್ನು ಸಮರ್ಪಿಸುವುದಕ್ಕೆ ಅಶಕ್ತನಾಗಿದ್ದರೆ ಪ್ರಾಯಶ್ಚಿತ್ತ ಬಲಿಗಾಗಿ
ಒಂದು ಟಗರು ಮರಿಯನ್ನು ತಂದು ದೋಷಪರಿಹಾರ ಮಾಡಿಸಿಕೊಳ್ಳಲು (ಯಾಜಕನ ಕೈಯಿಂದ)
ನೈವೇದ್ಯವಾಗಿ ಆರತಿಯೆತ್ತಿಸಬೇಕು; ಮತ್ತು ಧಾನ್ಯನೈವೇದ್ಯಕ್ಕಾಗಿ ಎಣ್ಣೆ ಕಲಸಿದ ಒಂದು ಕಿಲೋಗ್ರಾಂ
ಗೋದಿಹಿಟ್ಟನ್ನೂ ಸುಮಾರು ಕಾಲು ಲೀಟರ್ ಎಣ್ಣೆಯನ್ನೂ ತರಬೇಕು. [22]ಅದಲ್ಲದೆ ತನ್ನ ಸ್ಥಿತಿಗೆ ತಕ್ಕಂತೆ
ಎರಡು ಬೆಳವಕ್ಕಿಗಳನ್ನಾಗಲಿ ಎರಡು ಪಾರಿವಾಳದ ಮರಿಗಳನ್ನಾಗಲಿ ತಂದು ದೋಷಪರಿಹಾರಕ ಬಲಿಯಾಗಿ
ಒಂದನ್ನೂ ದಹನ ಬಲಿಯಾಗಿ ಮತ್ತೊಂದನ್ನೂ ಸಮರ್ಪಿಸಬೇಕು. [23]ಅವನು ತನ್ನ ಶುದ್ಧೀಕರಣಕ್ಕಾಗಿ
ಎಂಟನೆಯ ದಿನದಲ್ಲಿ ಇವುಗಳನ್ನು ದೇವದರ್ಶನದ ಗುಡಾರದ ಬಾಗಿಲಿಗೆ ಸರ್ವೇಶ್ವರನ ಸನ್ನಿಧಿಗೆ ತಂದು
ಯಾಜಕನಿಗೆ ಒಪ್ಪಿಸಬೇಕು. [24]ಯಾಜಕನು ಪ್ರಾಯಶ್ಚಿತ್ತ ಬಲಿಯ ಕುರಿಯನ್ನೂ ಆ ಸೇರು ಎಣ್ಣೆಯನ್ನೂ
ಸರ್ವೇಶ್ವರನ ಸನ್ನಿಧಿಯಲ್ಲಿ ನೈವೇದ್ಯವಾಗಿ ಆರತಿಯೆತ್ತಬೇಕು. [25]ಪ್ರಾಯಶ್ಚಿತ್ತ ಬಲಿಯ ಕುರಿಯನ್ನು ವಧಿಸಿದ
ನಂತರ ಯಾಜಕನು ಅದರ ರಕ್ತದಲ್ಲಿ ಸ್ವಲ್ಪ ತೆಗೆದುಕೊಂಡು ಶುದ್ಧ ಮಾಡಿಸಿಕೊಳ್ಳುವವನ ಬಲಗಿವಿಯ
ತುದಿಗೂ ಬಲಗೈಯ ಹೆಬ್ಬೆರಳಿಗೂ ಬಲಗಾಲಿನ ಹೆಬ್ಬೆಟ್ಟಿಗೂ ಹಚ್ಚಬೇಕು. [26]ಮತ್ತು ಯಾಜಕನು ಆ
ಎಣ್ಣೆಯಲ್ಲಿ ಸ್ವಲ್ಪವನ್ನು ತನ್ನ ಎಡಗೈಯಲ್ಲಿ ಹೊಯ್ದುಕೊಂಡು [27]ಅದರಲ್ಲಿ ಸ್ವಲ್ಪವನ್ನು ಬಲಗೈಯ ಬೆರಳಿನಿಂದ
ಏಳು ಸಾರಿ ಸರ್ವೇಶ್ವರನ ಸನ್ನಿಧಿಯಲ್ಲಿ ಚಿಮುಕಿಸಬೇಕು. [28]ಮತ್ತು ಯಾಜಕನು ತನ್ನ ಕೈಯಲ್ಲಿರುವ
ಎಣ್ಣೆಯಲ್ಲಿ ಸ್ವಲ್ಪವನ್ನು ಶುದ್ಧಿಮಾಡಿಸಿಕೊಳ್ಳುವವನ ಬಲಗಿವಿಯ ತುದಿಗೂ ಬಲಗೈಯ ಹೆಬ್ಬೆರಳಿಗೂ
ಬಲಗಾಲಿನ ಹೆಬ್ಬೆಟ್ಟಿಗೂ ಪ್ರಾಯಶ್ಚಿತ್ತ ಬಲಿಪ್ರಾಣಿಯ ರಕ್ತವನ್ನು ಹಚ್ಚಿದ ಸ್ಥಳಗಳಲ್ಲಿಯೇ ಹಚ್ಚಬೇಕು.
[29]ಶುದ್ಧಮಾಡಿಸಿಕೊಳ್ಳುವವನ ಪರವಾಗಿ ಸರ್ವೇಶ್ವರನ ಸನ್ನಿಧಿಯಲ್ಲಿ ದೋಷಪರಿಹಾರವನ್ನು
ಮಾಡುವುದಕ್ಕಾಗಿ ಯಾಜಕನು ತನ್ನ ಕೈಯಲ್ಲಿರುವ ಮಿಕ್ಕ ಎಣ್ಣೆಯನ್ನೆಲ್ಲಾ ಅವನ ತಲೆಯ ಮೇಲೆ
ಹೊಯ್ಯಬೇಕು. [30]ತರುವಾಯ ಅವನು ತನ್ನ ಸ್ಥಿತಿಗೆ ತಕ್ಕಂತೆ ತಂದ ಎರಡು ಬೆಳವಕ್ಕಿಗಳಲ್ಲಾಗಲಿ
[31]ಪಾರಿವಾಳದ ಮರಿಗಳಲ್ಲಾಗಲಿ ದೋಷಪರಿಹಾರಕ ಬಲಿಯಾಗಿ ಒಂದನ್ನೂ ಹಾಗು ದಹನಬಲಿಯಾಗಿ
ಒಂದನ್ನೂ ನೈವೇದ್ಯದ್ರವ್ಯವನ್ನೂ ಸಮರ್ಪಿಸಬೇಕು. ಹೀಗೆ ಯಾಜಕನು ಶುದ್ಧಿಮಾಡಿಸಿಕೊಳ್ಳುವವನ
ಪರವಾಗಿ ಸರ್ವೇಶ್ವರನ ಸನ್ನಿಧಿಯಲ್ಲಿ ದೋಷಪರಿಹಾರವನ್ನು ಮಾಡುವನು.
32 ಶುದ್ಧೀಕರಣ ಬಲಿಗಳನ್ನು ಅರ್ಪಿಸುವುದಕ್ಕೆ ಗತಿಯಿಲ್ಲದ ಕುಷ್ಠರೋಗಿಯ ವಿಷಯದಲ್ಲಿ ಇದೇ
ವಿಧಿಯನ್ನು ಅನುಸರಿಸಬೇಕು.

## ಕುಷ್ಠ ಹತ್ತಿದ ಮನೆ

33 ಸರ್ವೇಶ್ವರಸ್ವಾಮಿ ಮೋಶೆ ಮತ್ತು ಆರೋನರಿಗೆ ಹೇಳಿದ್ದೇನೆಂದರೆ – [34]“ನಿಮಗೆ ಸ್ವದೇಶವಾಗಿ
ನಾನು ಕೊಡುವ ಕಾನಾನ್ ನಾಡಿಗೆ ನೀವು ಬಂದ ನಂತರ ಆ ನಾಡಿನ ಯಾವ ಮನೆಯ ಗೋಡೆಗಳಲ್ಲಿ
ನಾನು ಕುಷ್ಠದ ಗುರುತನ್ನು ಸೂಚಿಸುತ್ತೇನೋ [35]ಆ ಮನೆಯ ಒಡೆಯನು ಯಾಜಕನ ಬಳಿಗೆ ಬಂದು –
‘ನನ್ನ ಮನೆಯಲ್ಲಿ ಕುಷ್ಠರೋಗದ ಗುರುತು ಇರುವಂತೆ ತೋರುತ್ತದೆ’, ಎಂದು ಅವನಿಗೆ ತಿಳಿಸಬೇಕು.
[36]ಯಾಜಕನು ತಾನು ಆ ರೋಗದ ಗುರುತನ್ನು ನೋಡಲು ಬರುವುದಕ್ಕೆ ಮುಂಚೆ ಆ ಮನೆಯನ್ನು ಬರಿದು
ಮಾಡಲು ಆಜ್ಞಾಪಿಸಬೇಕು. ಹಾಗೆ ಬರಿದು ಮಾಡದಿದ್ದರೆ ಆ ಮನೆಯಲ್ಲಿರುವ ಎಲ್ಲಾ ವಸ್ತುಗಳೂ
ಅಶುದ್ಧವಾಗುವುವು. ಬರಿದುಮಾಡಿದ ಮೇಲೆ ಯಾಜಕನು ಆ ಮನೆಯನ್ನು ಪರೀಕ್ಷಿಸುವುದಕ್ಕೆ ಒಳಗೆ
ಹೋಗಬೇಕು. [37]ಅವನು ಮನೆಯ ಗೋಡೆಗಳಲ್ಲಿರುವ ರೋಗದ ಗುರುತುಗಳನ್ನು ನೋಡುವಾಗ ಆ
ಗುರುತುಗಳು ಹಸುರಾಗಿ ಅಥವಾ ಕೆಂಪಾಗಿ ಇದ್ದು ಗೋಡೆಯ ಮಟ್ಟಕ್ಕಿಂತ ತಗ್ಗಾಗಿ ತೋರಿದರೆ ಯಾಜಕನು
ಹೊರಗೆ ಬಂದು [38]ಆ ಮನೆಯನ್ನು ಏಳು ದಿನಗಳವರೆಗೂ ಮುಚ್ಚಿಸಿ ಬಿಡಬೇಕು. [39]ಏಳನೆಯ ದಿನದಲ್ಲಿ

ಯಾಜಕನು ಬಂದು ನೋಡುವಾಗ ಆ ಗುರುತು ಮನೆಯ ಗೋಡೆಗಳಲ್ಲಿ ಹಬ್ಬಿಕೊಂಡಿದ್ದರೆ [40]ಆ
ಗುರುತುಗಳು ಇರುವ ಕಲ್ಲುಗಳನ್ನು ತೆಗಿಸಿಬಿಟ್ಟು ಊರಿನ ಹೊರಗೆ ಅಪವಿತ್ರವಾದ ಸ್ಥಳದಲ್ಲಿ ಹಾಕಿಸಬೇಕು.
[41]ಅದಲ್ಲದೆ ಅವನು ಆ ಮನೆಯ ಗೋಡೆಗಳ ಒಳಗಡೆಯನ್ನೆಲ್ಲಾ ಗೀಚಿಸಿ, ಗೀಚಿದ ಮಣ್ಣನ್ನು ಊರಿನ
ಹೊರಗೆ ಅಪವಿತ್ರ ಸ್ಥಳದಲ್ಲಿ ಹಾಕಿಸಬೇಕು. [42]ಆಗ ಬೇರೆ ಕಲ್ಲುಗಳನ್ನು ತರಿಸಿ ಮೊದಲಿದ್ದ ಕಲ್ಲುಗಳ ಸ್ಥಳದಲ್ಲಿ
ಹಾಕಿಸಿ ಹೊಸ ಮಣ್ಣನ್ನು ತರಿಸಿ ಆ ಗೋಡೆಗಳಿಗೆ ಮೆತ್ತಬೇಕು.

43 ಅವನು ಆ ಕಲ್ಲುಗಳನ್ನು ತೆಗೆಸಿ ಮನೆಯ ಗೋಡೆಗಳನ್ನು ಗೀಚಿಸಿ ಮಣ್ಣು ಮೆತ್ತಿದ ಮೇಲೆ ಆ
ರೋಗದ ಗುರುತು ತಿರಿಗಿ ಕಾಣಬಂದರೆ ಯಾಜಕನು ಬಂದು ಪರೀಕ್ಷಿಸಬೇಕು. [44]ಆ ಗುರುತು ಮನೆಯ
ಗೋಡೆಗಳಲ್ಲಿ ಹಬ್ಬಿಕೊಂಡಿದ್ದರೆ ಅದು ಪ್ರಾಣಹಾನಿಕರವಾದ ಕುಷ್ಠವೇ ಸರಿ; ಆ ಮನೆ ಅಶುದ್ಧವಾಗಿರುವುದು.
[45]ಅವನು ಆ ಮನೆಯನ್ನು ಕೆಡವಿ ಅದರ ಎಲ್ಲಾ ಕಲ್ಲುಗಳನ್ನೂ ತೊಲೆಗಳನ್ನೂ ಮಣ್ಣನ್ನೂ ಊರಿನ ಹೊರಗೆ
ಅಪವಿತ್ರ ಸ್ಥಳದಲ್ಲಿ ಹಾಕಿಸಬೇಕು. [46]ಆ ಮನೆಯು ಮುಚ್ಚಿರುವ ದಿನಗಳಲ್ಲಿ ಯಾವನಾದರೂ ಒಳಕ್ಕೆ
ಹೋದರೆ ಅವನು ಆ ದಿನದ ಸಂಜೆಯವರೆಗೆ ಅಶುದ್ಧನಾಗಿರುವನು. [47]ಆ ಮನೆಯಲ್ಲಿ ಮಲಗಿಕೊಂಡವನು
ತನ್ನ ಬಟ್ಟೆಗಳನ್ನು ಒಗೆದುಕೊಳ್ಳಬೇಕು; ಅಲ್ಲಿ ಊಟ ಮಾಡಿದವನೂ ಬಟ್ಟೆಗಳನ್ನು ಒಗೆದುಕೊಳ್ಳಬೇಕು.

48 ಆದರೆ ತಾನು ಆ ಮನೆಗೆ ಹೊಸದಾಗಿ ಮಣ್ಣು ಮೆತ್ತಿಸಿದ ಮೇಲೆ ಯಾಜಕನು ಬಂದು
ನೋಡುವಾಗ ಆ ರೋಗದ ಗುರುತು ಕಾಣಿಸದೆ ಹೋದರೆ ರೋಗಪರಿಹಾರವಾಗಿ ಆ ಮನೆ
ಶುದ್ಧವಾಯಿತೆಂದು ನಿರ್ಣಯಿಸಬೇಕು. [49]ಆ ಮನೆಯ ಶುದ್ಧೀಕರಣಕ್ಕಾಗಿ ಅವನು ಎರಡು ಪಕ್ಷಿಗಳನ್ನೂ
ದೇವದಾರಿನ ಕಟ್ಟಿಗೆಯನ್ನೂ ರಕ್ತವರ್ಣವುಳ್ಳ ದಾರವನ್ನೂ ಹಿಸ್ಸೋಪ್‍ಗಿಡದ ಬರಲನ್ನೂ ತೆಗೆದುಕೊಂಡು,
ಒಂದು ಪಕ್ಷಿಯನ್ನು [50]ಒರತೆ ನೀರಿನ ಮೇಲೆ ಮಣ್ಣಿನ ಪಾತ್ರೆಯಲ್ಲಿ ವಧಿಸಿ [51]ಆ ದೇವದಾರಿನ ಕಟ್ಟಿಗೆಯನ್ನೂ
ಹಿಸ್ಸೋಪಿನ ಬರಲನ್ನೂ ರಕ್ತವರ್ಣವುಳ್ಳ ದಾರವನ್ನೂ ಸಜೀವವಾದ ಮತ್ತೊಂದು ಪಕ್ಷಿಯನ್ನೂ
ತೆಗೆದುಕೊಂಡು ತಾನು ವಧಿಸಿದ ಪಕ್ಷಿಯ ರಕ್ತದಲ್ಲಿಯೂ ಒರತೆಯ ನೀರಿನಲ್ಲಿಯೂ ಅದ್ದಿ ಏಳು ಸಾರಿ ಆ
ಮನೆಯ ಗೋಡೆಗಳಿಗೆ ಪ್ರೋಕ್ಷಿಸಬೇಕು. [52]ಹಾಗೆ ಆ ಪಕ್ಷಿಯ ರಕ್ತ, ಒರತೆ ನೀರು, ಸಜೀವಪಕ್ಷಿ, ದೇವದಾರಿನ
ಆ ಕಟ್ಟಿಗೆ, ಹಿಸ್ಸೋಪು, ರಕ್ತವರ್ಣದ ದಾರ ಇವುಗಳಿಂದ ಆ ಮನೆಯನ್ನು ಶುದ್ಧಿಮಾಡುವನು. [53]ಅವನು
ಆ ಜೀವವುಳ್ಳ ಪಕ್ಷಿಯನ್ನು ಊರ ಹೊರಕ್ಕೆ ಅಡವಿಯ ಕಡೆಗೆ ಬಿಟ್ಟುಬಿಡಬೇಕು. ಹೀಗೆ ಅವನು ಆ ಮನೆಗಾಗಿ
ದೋಷಪರಿಹಾರ ಮಾಡಿದಾಗ ಅದು ಶುದ್ಧವಾಗಿರುವುದು.

54 ನಾನಾ ವಿಧವಾದ ಕುಷ್ಠರೋಗದ ಗುರುತುಗಳು, ಅಂದರೆ ಕೂದಲು ಬೆಳೆಯದ ಇಸಬು,
[55]ಬಟ್ಟೆಯಲ್ಲಿ ಅಥವಾ ಮನೆಯ ಗೋಡೆಯಲ್ಲಿ ಕಾಣಿಸುವ ಕುಷ್ಠರೋಗದ ಗುರುತು, [56]ಶರೀರದ ಚರ್ಮದ
ಮೇಲೆ ಉಂಟಾಗುವ ಬಾವು, ಗುಳ್ಳೆ, ಹೊಳೆಯುವ ಕಲೆ [57]ಇವುಗಳಲ್ಲಿ ಶುದ್ಧಾಶುದ್ಧ ಬೇಧವನ್ನು
ನಿರ್ಣಯಿಸುವ ನಿಯಮಗಳು ಇವು.

### ದೇಹದಿಂದುಂಟಾಗುವ ಅಪರಿಶುದ್ಧತೆ

**15** ಸರ್ವೇಶ್ವರಸ್ವಾಮಿ ಮೋಶೆ ಮತ್ತು ಆರೋನರಿಗೆ ಹೀಗೆಂದರು: [2]“ನೀವು ಇಸ್ರಯೇಲರಿಗೆ
ಆಜ್ಞಾಪಿಸಬೇಕಾದದ್ದೇನೆಂದರೆ – ಒಬ್ಬ ವ್ಯಕ್ತಿಯ ಜನನೇಂದ್ರಿಯದಿಂದ ಮೇಹಸ್ರಾವವಾದರೆ ಆ ಕಾರಣ ಆ
ವ್ಯಕ್ತಿ ಅಶುದ್ಧನು. [3]ಆ ಸ್ರಾವವು ಹರಿಯುತ್ತಿದ್ದರೂ ನಿಂತುಹೋಗಿದ್ದರೂ ಆ ದೇಹಸ್ಥಿತಿಯಿಂದ ಅವನು
ಅಶುದ್ಧನು. [4]ಅಂಥವನು ಮಲಗಿರುವ ಪ್ರತಿಯೊಂದು ಹಾಸಿಗೆಯೂ ಕೂತಿರುವ ಪ್ರತಿಯೊಂದು ಆಸನವೂ
ಅಶುದ್ಧ. [5]ಅವನ ಹಾಸಿಗೆಯನ್ನು ಮುಟ್ಟಿದವನು ತನ್ನ ಬಟ್ಟೆಗಳನ್ನು ಒಗೆದುಕೊಂಡು ಸ್ನಾನ ಮಾಡಬೇಕು;
ಅವನು ಆ ದಿನದ ಸಂಜೆಯವರೆಗೆ ಅಶುದ್ಧನು. [6]ಸ್ರಾವವುಳ್ಳವನು ಕುಳಿತಿದ್ದ ಆಸನದ ಮೇಲೆ
ಕುಳಿತುಕೊಂಡವನು ತನ್ನ ಬಟ್ಟೆಗಳನ್ನು ಒಗೆದುಕೊಂಡು ಸ್ನಾನಮಾಡಬೇಕು; ಅವನು ಆ ಸಂಜೆಯವರೆಗೆ
ಅಶುದ್ಧನಾಗಿರುವನು. [7]ಅವನ ಶರೀರವನ್ನು ಮುಟ್ಟಿದವನು ತನ್ನ ಬಟ್ಟೆಗಳನ್ನು ಒಗೆದುಕೊಂಡು
ಸ್ನಾನಮಾಡಬೇಕು; ಅವನು ಆ ಸಂಜೆಯವರೆಗೆ ಅಶುದ್ಧನಾಗಿರುವನು. [8]ಶುದ್ಧನಾಗಿರುವವನ ಮೇಲೆ
ಸ್ರಾವವುಳ್ಳವನು ಉಗುಳಿದರೆ ಅವನು ತನ್ನ ಬಟ್ಟೆಗಳನ್ನು ಒಗೆದುಕೊಂಡು ಸ್ನಾನ ಮಾಡಬೇಕು; ಅವನು ಆ

ಸಂಜೆಯವರೆಗೆ ಅಶುದ್ಧನಾಗಿರುವನು. 9ಸ್ರಾವವುಳ್ಳವನು ಕುಳಿತಿದ್ದ ತಡಿಯು ಅಶುದ್ಧ. 10ಅವನ ಕೆಳಗಿದ್ದ
ಯಾವ ವಸ್ತುವನ್ನಾದರೂ ಮುಟ್ಟಿದವನು ಆ ಸಂಜೆಯವರೆಗೆ ಅಶುದ್ಧನಾಗಿರುವನು. ಅಂಥ ವಸ್ತುವನ್ನು
ಎತ್ತಿದವನು ತನ್ನ ಬಟ್ಟೆಗಳನ್ನು ಒಗೆದುಕೊಂಡು ಸ್ನಾನಮಾಡಬೇಕು. ಅವನು ಆ ಸಂಜೆಯವರೆಗೆ
ಅಶುದ್ಧನಾಗಿರುವನು. 11ಸ್ರಾವಉಳ್ಳವನು ಕೈಗಳನ್ನು ತೊಳೆದುಕೊಳ್ಳದೆ ಯಾರನ್ನು ಮುಟ್ಟಿದರೂ ಆ
ಮನುಷ್ಯನು ತನ್ನ ಬಟ್ಟೆಗಳನ್ನು ಒಗೆದುಕೊಂಡು ಸ್ನಾನಮಾಡಬೇಕು; ಅವನು ಆ ಸಂಜೆಯವರೆಗೆ
ಅಶುದ್ಧನಾಗಿರುವನು. 12ಸ್ರಾವ ಉಳ್ಳವನು ಮುಟ್ಟಿದ ಮಣ್ಣಿನಪಾತ್ರೆಯನ್ನು ಒಡೆದು ಬಿಡಬೇಕು. ಅವನು
ಮರದ ಪಾತ್ರೆಯನ್ನು ಮುಟ್ಟಿದರೆ ಅದನ್ನು ನೀರಿನಿಂದ ತೊಳೆಯಬೇಕು.

13 "ಸ್ರಾವವುಳ್ಳವನ ಸ್ರಾವವು ನಿಂತು ವಾಸಿ ಆದಾಗ ಅವನು ಶುದ್ಧ ಮಾಡಿಸಿಕೊಳ್ಳುವುದಕ್ಕೆ
ಆಗಿನಿಂದ ಏಳು ದಿನಗಳನ್ನು ಎಣಿಸಿಕೊಂಡು ತನ್ನ ಬಟ್ಟೆಗಳನ್ನು ಒಗೆದುಕೊಂಡು ಒರತೆ ನೀರಿನಿಂದ ತನ್ನ
ಶರೀರವನ್ನು ತೊಳೆದುಕೊಂಡು ಶುದ್ಧನಾಗುವನು. 14ಎಂಟನೆಯ ದಿನ ಎರಡು ಬೆಳವಕ್ಕಿಗಳನ್ನಾಗಲಿ, ಎರಡು
ಮರಿಪಾರಿವಾಳಗಳನ್ನಾಗಲಿ ತೆಗೆದುಕೊಂಡು ದೇವದರ್ಶನದ ಗುಡಾರದ ಬಾಗಿಲಿಗೆ ಸರ್ವೇಶ್ವರನ ಸನ್ನಿಧಿಗೆ
ಬಂದು ಯಾಜಕನಿಗೆ ಒಪ್ಪಿಸಬೇಕು. 15ಯಾಜಕನು ದೋಷಪರಿಹಾರ ಬಲಿಯಾಗಿ ಒಂದನ್ನೂ ದಹನಬಲಿ
ಆಗಿ ಇನ್ನೊಂದನ್ನೂ ಸಮರ್ಪಿಸಬೇಕು. ಹೀಗೆ ಯಾಜಕನು ಅವನ ಸ್ರಾವದ ವಿಷಯದಲ್ಲಿ ಸರ್ವೇಶ್ವರನ
ಸನ್ನಿಧಿಯಲ್ಲಿ ಅವನ ಪರವಾಗಿ ದೋಷಪರಿಹಾರ ಮಾಡುವನು.

16 "ಒಬ್ಬನಿಗೆ ವೀರ್ಯಸ್ಖಲನವಾದರೆ ಅವನು ಸರ್ವಾಂಗಸ್ನಾನ ಮಾಡಬೇಕು; ಅವನು ಆ
ಸಾಯಂಕಾಲದವರೆಗೆ ಅಶುದ್ಧನಾಗಿರುವನು. 17ಯಾವ ಬಟ್ಟೆಯ ಮೇಲಾಗಲಿ, ತೊಗಲಿನ ಮೇಲಾಗಲಿ
ವೀರ್ಯವು ಬಿದ್ದರೆ ಅದನ್ನು ನೀರಿನಿಂದ ತೊಳೆಯಬೇಕು, ಅದು ಸಾಯಂಕಾಲದವರೆಗೆ ಅಶುದ್ಧವಾಗಿರುವುದು.
18ಪುರುಷನಿಗೆ ಸ್ತ್ರೀಸಂಗದಿಂದ ವೀರ್ಯಸ್ಖಲನವಾದರೆ ಅವರಿಬ್ಬರೂ ಸ್ನಾನ ಮಾಡಿಕೊಳ್ಳಬೇಕು; ಅವರು
ಸಂಜೆಯವರೆಗೆ ಅಶುದ್ಧರಾಗಿರುವರು.

19 "ಮಹಿಳೆಗೆ ರಕ್ತಸ್ರಾವವಾದರೆ ಅವಳು ಏಳು ದಿನಗಳ ತನಕ ಪ್ರತ್ಯೇಕವಾಗಿರಬೇಕು. ಅವಳನ್ನು
ಮುಟ್ಟಿದವರು ಆ ದಿನದ ಸಂಜೆಯವರೆಗೆ ಅಶುದ್ಧರಾಗುವರು. 20ಅವಳು ಮುಟ್ಟಾಗಿ ಇರುವಾಗ ಯಾವುದರ
ಮೇಲೆ ಮಲಗಿದರೂ ಕುಳಿತುಕೊಂಡರೂ ಅದು ಅಶುದ್ಧವಾಗಿರುವುದು. 21ಅವಳ ಹಾಸಿಗೆಯನ್ನು
ಮುಟ್ಟಿದವನು ತನ್ನ ಬಟ್ಟೆಗಳನ್ನು ಒಗೆದುಕೊಂಡು ಸ್ನಾನಮಾಡಬೇಕು. ಅವನು ಸಂಜೆಯವರೆಗೆ
ಅಶುದ್ಧನಾಗಿರುವನು. 22ಅವಳು ಯಾವುದರ ಮೇಲೆ ಕುಳಿತಿದ್ದಳೋ ಅದನ್ನು ಮುಟ್ಟಿದವನು ತನ್ನ
ಬಟ್ಟೆಗಳನ್ನು ಒಗೆದುಕೊಂಡು ಸ್ನಾನಮಾಡಬೇಕು. ಅವನು ಸಂಜೆಯವರೆಗೆ ಅಶುದ್ಧನಾಗಿರುವನು. 23ಅವಳು
ಮಲಗಿದ್ದ ಹಾಸಿಗೆಯ ಮೇಲಾಗಲಿ, ಕುಳಿತಿದ್ದ ಸ್ಥಳದ ಮೇಲಾಗಲಿ ಇದ್ದ ಯಾವುದನ್ನಾದರೂ ಮುಟ್ಟಿದವನು
ಸಂಜೆಯವರೆಗೆ ಅಶುದ್ಧನಾಗಿರುವನು. 24ಪುರುಷನು ಒಂದು ವೇಳೆ ಅಂಥವಳೊಡನೆ ಸಂಗಮಿಸಿ ಅವಳ
ರಜಸ್ಸು ಅವನಿಗೆ ತಗಲಿದರೆ ಅವನು ಏಳು ದಿನಗಳ ತನಕ ಅಶುದ್ಧನಾಗಿರುವನು. ಅಷ್ಟರಲ್ಲಿ ಅವನು ಯಾವ
ಹಾಸಿಗೆಯ ಮೇಲೆ ಮಲಗಿಕೊಂಡರೂ ಅದು ಅಶುದ್ಧವಾಗಿರುವುದು.

25 "ಮಹಿಳೆಗೆ ಮುಟ್ಟಿನ ಕಾಲದಲ್ಲಿ ಮಾತ್ರವಲ್ಲದೆ ಬೇರೆ ದಿನಗಳಲ್ಲೂ ರಕ್ತಸ್ರಾವವಾದರೆ, ಇಲ್ಲವೆ
ಮುಟ್ಟಿನ ಕಾಲಕ್ಕೆ ತಕ್ಕದ್ದಕ್ಕಿಂತ ಹೆಚ್ಚು ದಿನಗಳು ರಕ್ತಸ್ರಾವವಾದರೆ, ಅವಳು ತಿಂಗಳಿನ ಮುಟ್ಟಿನಿಂದ ಹೇಗೆ
ಅಶುದ್ಧಳೋ ಹಾಗೆಯೇ ಆ ಸ್ರಾವವಾಗುವ ದಿನಗಳೆಲ್ಲಾ ಅಶುದ್ಧಳಾಗಿರುವಳು. 26ಆ ಸ್ರಾವವಿರುವ ತನಕ
ಅವಳು ಯಾವ ಹಾಸಿಗೆಯ ಮೇಲೆ ಮಲಗಿದರೂ, ಅದು ಮುಟ್ಟಿನ ಕಾಲದಲ್ಲಿ ಮಲಗಿದ
ಹಾಸಿಗೆಯಂತೆಯೇ, ಅಶುದ್ಧವಾಗುವುದು. ಅವಳು ಯಾವುದರ ಮೇಲೆ ಕುಳಿತು ಕೊಂಡರೂ ಅದು ಮುಟ್ಟಿನ
ಕಾಲದಲ್ಲಿ ಕುಳಿತುಕೊಂಡ ವಸ್ತುವಿನಂತೆ ಅಶುದ್ಧವಾಗಿರುವುದು. 27ಆ ವಸ್ತುಗಳನ್ನು ಮುಟ್ಟಿದವನು
ಅಶುದ್ಧನಾದುದರಿಂದ ತನ್ನ ಬಟ್ಟೆಗಳನ್ನು ಒಗೆದುಕೊಂಡು ಸ್ನಾನಮಾಡಬೇಕು; ಅವನು ಸಂಜೆಯವರೆಗೆ
ಅಶುದ್ಧನಾಗಿರುವನು. 28ಅವಳಿಗೆ ರಕ್ತಸ್ರಾವ ನಿಂತ ದಿನದಿಂದ ಅವಳು ಏಳು ದಿನಗಳನ್ನು ಲೆಕ್ಕಿಸಿಕೊಂಡು
ತರುವಾಯ ಶುದ್ಧಳಾಗುವಳು. 29ಎಂಟನೆಯ ದಿನದಲ್ಲಿ ಅವಳು ಎರಡು ಬೆಳವಕ್ಕಿಗಳನ್ನಾಗಲಿ, ಎರಡು
ಪಾರಿವಾಳದ ಮರಿಗಳನ್ನಾಗಲಿ, ದೇವದರ್ಶನದ ಗುಡಾರದ ಬಾಗಿಲಿಗೆ ಯಾಜಕನ ಬಳಿಗೆ ತರಬೇಕು.
30ಯಾಜಕನು ದೋಷಪರಿಹಾರಕ ಬಲಿಗಾಗಿ ಒಂದನ್ನೂ ದಹನಬಲಿಗಾಗಿ ಇನ್ನೊಂದನ್ನೂ

ಸಮರ್ಪಿಸಬೇಕು. ಹೀಗೆ ಯಾಜಕನು ಅವಳ ಸ್ರಾವದಿಂದುಂಟಾದ ಅಪರಿಶುದ್ಧತೆಯ ವಿಷಯವಾಗಿ
ಸರ್ವೇಶ್ವರನ ಸನ್ನಿಧಿಯಲ್ಲಿ ಅವಳ ಪರವಾಗಿ ದೋಷಪರಿಹಾರ ಮಾಡುವನು.

31 “ಇಸ್ರಯೇಲರು ಅಶುದ್ಧತೆಗೆ ದೂರವಾಗಿ ಇರುವಂತೆ ನೀವು ಅವರನ್ನು ಈ ರೀತಿಯಾಗಿ
ಕಾಪಾಡಬೇಕು. ಅವರು ಅಪವಿತ್ರರಾಗಿದ್ದು ತಮ್ಮ ಮಧ್ಯದಲ್ಲಿರುವ ನನ್ನ ಗುಡಾರವನ್ನು ಹೊಲೆ ಮಾಡಿದರೆ
ನಾಶವಾದಾರು.

32 “ಮೇಹಸ್ರಾವವುಳ್ಳವನು, ವೀರ್ಯಸ್ಖಲನದಿಂದ ಅಶುದ್ಧನಾದವನು. 33ಮುಟ್ಟಾದ ಮಹಿಳೆ,
ಸ್ರಾವವುಂಟಾಗುವ ಸ್ತ್ರೀಪುರುಷರು ಹಾಗು ಅಶುದ್ಧಳಾದ ಮಹಿಳೆಯನ್ನು ಸಂಗಮಿಸಿದವನು ಇವರ
ವಿಷಯವಾದ ನಿಯಮಗಳು ಇವು.”

**ಪಾಪಪರಿಹಾರಕವಾದ ಮಹಾದಿನ**

**16** ಆರೋನನ ಇಬ್ಬರು ಮಕ್ಕಳು ಸರ್ವೇಶ್ವರಸ್ವಾಮಿಯ ಸನ್ನಿಧಿಗೆ ಬಂದು ನಾಶವಾದ ಮೇಲೆ 2ಮೋಶೆಯ
ಸಂಗಡ ಸರ್ವೇಶ್ವರ ಮಾತಾಡಿ ಹೇಳಿದ್ದೇನೆಂದರೆ – “ನಿನ್ನ ಅಣ್ಣನಾದ ಆರೋನನು ಮನಸ್ಸಿಗೆ ಬಂದಾಗೆಲ್ಲಾ
ತೆರೆಯನ್ನು ದಾಟಿ, ಮಹಾಪವಿತ್ರಸ್ಥಾನದೊಳಕ್ಕೆ ಮಂಜೂಷದ ಮೇಲಿನ ಕೃಪಾಸನದ ಹತ್ತಿರಕ್ಕೆ
ಬರಬಾರದೆಂದು ಅವನಿಗೆ ಹೇಳು. ಬಂದರೆ ನಾಶವಾಗುವನು. ಏಕೆಂದರೆ ನಾನು ಕೃಪಾಸನದ ಮೇಲೆ
ಮೇಘದಲ್ಲಿ ಕಾಣಿಸಿಕೊಳ್ಳುವೆನು. 3ಆರೋನನು ಮಹಾಪವಿತ್ರ ಸ್ಥಾನದೊಳಗೆ ಬರುವಾಗ ಈ ರೀತಿಯಾಗಿ
ಬರಬೇಕು: ದೋಷಪರಿಹಾರಕ ಬಲಿಗಾಗಿ ಹೋರಿಯನ್ನೂ ದಹನಬಲಿಗಾಗಿ ಟಗರನ್ನೂ ತರಬೇಕು. 4ಅವನು
ಪರಿಶುದ್ಧವಾದ ನಾರಿನ ನಿಲುವಂಗಿಯನ್ನೂ ತೊಟ್ಟುಕೊಂಡು ನಾರಿನ ಚಡ್ಡಿಯನ್ನು ಹಾಕಿಕೊಂಡು ನಾರಿನ
ನಡುಕಟ್ಟನ್ನು ಕಟ್ಟಿಕೊಂಡು ತಲೆಗೆ ಪೇಟವನ್ನು ಸುತ್ತಿಕೊಳ್ಳಬೇಕು. ಅವು ದೀಕ್ಷಾವಸ್ತ್ರಗಳಾದುದರಿಂದ ಅವನು
ಅವುಗಳನ್ನು ಧರಿಸಿಕೊಳ್ಳುವುದಕ್ಕೆ ಮುಂಚೆ ಸ್ನಾನ ಮಾಡಬೇಕು. 5ಇಸ್ರಯೇಲರ ಸಮಾಜದಿಂದ
ದೋಷಪರಿಹಾರಕ ಬಲಿಗಾಗಿ ಎರಡು ಹೋತಗಳನ್ನೂ ದಹನಬಲಿಗಾಗಿ ಒಂದು ಟಗರನ್ನೂ ತೆಗೆದುಕೊಂಡು
ಬರಬೇಕು. 6ಆರೋನನು ತನಗಾಗಿ ತಂದ ಹೋರಿಯನ್ನು ಸಮರ್ಪಿಸಿ ತನ್ನ ಹಾಗು ತನ್ನ ಮನೆತನದವರ
ಪರವಾಗಿ ಪಶ್ಚಾತ್ತಾಪ ವಿಧಿಯನ್ನು ನೆರವೇರಿಸಬೇಕು. 7ಆ ಎರಡು ಹೋತಗಳನ್ನು ಅವನು ದೇವದರ್ಶನದ
ಗುಡಾರದ ಬಾಗಿಲಲ್ಲಿ ಸರ್ವೇಶ್ವರನ ಸನ್ನಿಧಿಯಲ್ಲಿ ನಿಲ್ಲಿಸಬೇಕು. 8ಆಗ ಅವನು ಆ ಹೋತಗಳಲ್ಲಿ ಯಾವುದು
ಸರ್ವೇಶ್ವರನಿಗೆ, ಯಾವುದು ಅಜಾಜೇಲನಿಗೆ ಎಂದು ತಿಳಿದುಕೊಳ್ಳಲು ದಾಳಹಾಕಬೇಕು. 9ಯಾವ ಹೋತ
ಸರ್ವೇಶ್ವರನದೆಂದು ಗೊತ್ತಾಗುವುದೋ ಅದನ್ನು ಆರೋನನು ದೋಷಪರಿಹಾರಕ ಬಲಿಯಾಗಿ
ಸಮರ್ಪಿಸಬೇಕು. 10ಯಾವ ಹೋತ ಅಜಾಜೇಲನದೆಂದು ಗೊತ್ತಾಗುವುದೋ ಅದನ್ನು ಸರ್ವೇಶ್ವರನ
ಸನ್ನಿಧಿಯಲ್ಲಿ ಸಜೀವವಾಗಿಯೇ ನಿಲ್ಲಿಸಿ, ಅದರ ಮೇಲೆ ದೋಷಹೊರಿಸಿ, ಮರುಭೂಮಿಗೆ ಅಜಾಜೇಲನಿಗಾಗಿ
ಬಿಡಿಸಿಬಿಡಬೇಕು.

11 “ಆರೋನನು ತನಗಾಗಿ ದೋಷಪರಿಹಾರಕ ಬಲಿಯ ಹೋರಿಯನ್ನು ಸಮರ್ಪಿಸಿ ತನ್ನ ಹಾಗು
ತನ್ನ ಮನೆತನದವರ ಪರವಾಗಿ ಪ್ರಾಯಶ್ಚಿತ್ತವಿಧಿಯನ್ನು ನೆರವೇರಿಸಬೇಕು. 12ಅವನು ತನಗೋಸ್ಕರವಾದ ಆ
ಹೋರಿಯನ್ನು ವಧಿಸಿದ ಮೇಲೆ ಸರ್ವೇಶ್ವರನ ಸನ್ನಿಧಿಯಲ್ಲಿರುವ ವೇದಿಕೆಯಿಂದ ಕೆಂಡಗಳನ್ನು
ಧೂಪಾರತಿಯಲ್ಲಿ ತುಂಬಿಸಿ ಪರಿಮಳ ಧೂಪದ್ರವ್ಯದ ಚೂರ್ಣದಲ್ಲಿ ಎರಡು ಹಿಡಿ ತೆಗೆದುಕೊಂಡು
ತೆರೆಯನ್ನು ದಾಟಿ, 13ಆ ಧೂಪವನ್ನು ಸರ್ವೇಶ್ವರನ ಸನ್ನಿಧಿಯಲ್ಲಿಯೇ ಕೆಂಡಗಳ ಮೇಲೆ ಹಾಕಬೇಕು.
ಅವನಿಗೆ ಪ್ರಾಣನಷ್ಟವಾಗದಂತೆ ಧೂಪದ ಹೊಗೆ ಮೇಘದೋಪಾದಿಯಲ್ಲಿ ಆಜ್ಞಾಶಾಸನಗಳ ಮೇಲಣ
ಕೃಪಾಸನವನ್ನು ಮುಚ್ಚುವುದು. 14ಆಗ ಆ ಹೋರಿಯ ರಕ್ತದಲ್ಲಿ ಸ್ವಲ್ಪ ತೆಗೆದುಕೊಂಡು ಕೃಪಾಸನದ ಪೂರ್ವ
ಭಾಗದ ಮೇಲೆ ಬೆರಳಿನಿಂದ ಚಿಮುಕಿಸಿ ಕೃಪಾಸನದ ಎದುರಾಗಿಯೂ ಏಳು ಸಾರಿ ಚಿಮುಕಿಸಬೇಕು.

15 “ತರುವಾಯ ಅವನು ಜನರ ಪರವಾಗಿ ದೋಷಪರಿಹಾರಕ ಬಲಿಯ ಹೋತವನ್ನು ವಧಿಸಿ
ಅದರ ರಕ್ತವನ್ನು ತೆರೆಯೊಳಗೆ ತಂದು ಹೋರಿಯ ರಕ್ತದಿಂದ ಮಾಡಿದಂತೆಯೇ ಇದರ ರಕ್ತದಿಂದಲೂ
ಮಾಡಿ ಕೃಪಾಸನದ ಮೇಲೆಯೂ ಎದುರಾಗಿಯೂ ಚಿಮುಕಿಸಬೇಕು. 16ಹೀಗೆ ಇಸ್ರಯೇಲರು ನಾನಾ

ವಿಧವಾದ ಅಶುದ್ಧತ್ವ, ಅಪರಾಧ, ದ್ರೋಹ ಇವುಗಳಿಂದ ಮಹಾಪವಿತ್ರ ಸ್ಥಾನಕ್ಕೆ ಉಂಟುಮಾಡಿದ ದೋಷವನ್ನು ಆರೋನನು ಪರಿಹರಿಸುವನು. ಅಶುದ್ಧರಾದ ಅವರ ನಡುವೆ ಇರುವ ದೇವದರ್ಶನದ ಗುಡಾರಕ್ಕೂ ಹಾಗೆಯೇ ದೋಷಪರಿಹಾರಮಾಡುವನು. [17]ಅವನು ದೋಷಪರಿಹಾರ ಮಾಡುವುದಕ್ಕಾಗಿ ಮಹಾಪವಿತ್ರಸ್ಥಾನದೊಳಗೆ ಹೋಗಿ ಹೊರಗೆ ಬರುವ ತನಕ ಯಾರೂ ದೇವದರ್ಶನದ ಗುಡಾರದೊಳಗೆ ಹೋಗಕೂಡದು. ಹಾಗೆ ತನ್ನ ಹಾಗು ಮನೆತನದವರ ಪರವಾಗಿ ಮತ್ತು ಇಸ್ರಯೇಲರ ಇಡೀ ಸಮಾಜದ ಪರವಾಗಿ ಪ್ರಾಯಶ್ಚಿತ್ತ ಮಾಡುವನು. [18]ತರುವಾಯ ಅವನು ಹೊರಗೆ ಬಂದು ಸರ್ವೇಶ್ವರನ ಸನ್ನಿಧಿಯಲ್ಲಿರುವ ಬಲಿಪೀಠದ ಬಳಿಗೆ ಹೋಗಿ ಅದಕ್ಕಾಗಿ ದೋಷಪರಿಹಾರ ಮಾಡಬೇಕು. ಆ ಹೋರಿಯ ರಕ್ತದಲ್ಲೂ ಆ ಹೋತದ ರಕ್ತದಲ್ಲೂ ಸ್ವಲ್ಪ ಸ್ವಲ್ಪ ತೆಗೆದುಕೊಂಡು ಪೀಠದ ಕೊಂಬುಗಳಿಗೆ ಸುತ್ತಲೂ ಹಚ್ಚಬೇಕು. [19]ಅವನು ಆ ರಕ್ತದಲ್ಲಿ ಸ್ವಲ್ಪವನ್ನು ಅದರ ಮೇಲೆ ಏಳು ಸಾರಿ ಬೆರಳಿನಿಂದ ಚಿಮಕಿಸಿ ಇಸ್ರಯೇಲರಿಂದ ಅದಕ್ಕುಂಟಾದ ಅಶುದ್ಧತ್ವವನ್ನು ಹೋಗಲಾಡಿಸಿ ಅದನ್ನು ಪರಿಶುದ್ಧಪಡಿಸಬೇಕು.

## ಪಾಪಹೊತ್ತ ಹೋತ

20 “ಮಹಾಪವಿತ್ರಸ್ಥಾನ, ದೇವದರ್ಶನದ ಗುಡಾರ, ಪೀಠ, ಇವುಗಳಿಗೋಸ್ಕರ ಆರೋನನು ದೋಷಪರಿಹಾರ ಮಾಡಿ ಮುಗಿಸಿದ ಮೇಲೆ, ಆ ಸಜೀವವಾದ ಹೋತವನ್ನು ತರಿಸಿ, [21]ಅದರ ತಲೆಯ ಮೇಲೆ ಎರಡು ಕೈಗಳನ್ನೂ ಇಟ್ಟು ಇಸ್ರಯೇಲರ ಎಲ್ಲಾ ಪಾಪಗಳನ್ನೂ ದ್ರೋಹಗಳನ್ನೂ ಅಪರಾಧಗಳನ್ನೂ ಸರ್ವೇಶ್ವರನಿಗೆ ಅರಿಕೆಮಾಡಿ ಆ ಹೋತದ ತಲೆಯ ಮೇಲೆ ಹೊರಿಸಿ, ಅದನ್ನು ಆ ಕೆಲಸಕ್ಕೆ ನೇಮಕವಾದವನ ಕೈಯಿಂದ ಮರುಭೂಮಿಗೆ ಕಳಿಸಿಬಿಡಬೇಕು. [22]ಆ ಹೋತ ಅವರ ಎಲ್ಲಾ ಪಾಪಗಳನ್ನೂ ತನ್ನ ಮೇಲೆ ಹೊತ್ತುಕೊಂಡು ದುರ್ಗಮವಾದ ಪ್ರದೇಶಕ್ಕೆ ಒಯ್ಯುವಂತೆ ಆ ಮನುಷ್ಯನು ಅದನ್ನು ಮರುಭೂಮಿಗೆ ತೆಗೆದುಕೊಂಡು ಹೋಗಿ ಅಲ್ಲೇ ಬಿಟ್ಟುಬಿಡಬೇಕು.

23 “ತರುವಾಯ ಆರೋನನು ದೇವದರ್ಶನದ ಗುಡಾರದೊಳಗೆ ಬಂದು, ತಾನು ಮಹಾಪವಿತ್ರ ಸ್ಥಾನದೊಳಗೆ ಹೋಗುವುದಕ್ಕಾಗಿ ಧರಿಸಿಕೊಂಡಿದ್ದ ನಾರುಮಡಿಗಳನ್ನು ತೆಗೆದು ಅಲ್ಲೇ ಇಟ್ಟು, [24]ಪ್ರಾಕಾರದಲ್ಲಿ ಸ್ನಾನಮಾಡಿ ತನ್ನ ವಸ್ತ್ರಗಳನ್ನು ಧರಿಸಿಕೊಳ್ಳಬೇಕು. ಆಗ ಅವನು ಹೊರಗೆ ಬಂದು ತನ್ನ ಹಾಗು ಜನಸಮೂಹದ ಪರವಾಗಿ ದಹನ ಬಲಿಗಳನ್ನು ಸಮರ್ಪಿಸಿ ತನ್ನ ಮತ್ತು ಜನರ ಪರವಾಗಿ ಪ್ರಾಯಶ್ಚಿತ್ತ ವಿಧಿಯನ್ನು ನೆರವೇರಿಸಬೇಕು. [25]ಅವನು ದೋಷಪರಿಹಾರಕ ಬಲಿಪ್ರಾಣಿಗಳ ಕೊಬ್ಬನ್ನು ಬಲಿಪೀಠದ ಮೇಲೆ ಹೋಮ ಮಾಡಬೇಕು.

26 “ಅಜಾಜೇಲನಿಗೆ ಹೋತವನ್ನು ಬಿಟ್ಟು ಬಂದವನು ತನ್ನ ಬಟ್ಟೆಗಳನ್ನು ಒಗೆದುಕೊಂಡು ಸ್ನಾನಮಾಡಿಯೇ ಪಾಳೆಯಕ್ಕೆ ಬರಬೇಕು. [27]ದೋಷಪರಿಹಾರಕ ಬಲಿಪ್ರಾಣಿಗಳಾದ ಹೋರಿಹೋತಗಳ ರಕ್ತವನ್ನು ಮಹಾಪವಿತ್ರಸ್ಥಾನದಲ್ಲಿ ದೋಷಪರಿಹಾರ ಮಾಡುವುದಕ್ಕಾಗಿ ತಂದ ಮೇಲೆ ಅವುಗಳ ದೇಹಗಳನ್ನು ಪಾಳೆಯದ ಆಚೆಗೆ ತೆಗೆದುಕೊಂಡುಹೋಗಿ ಚರ್ಮ, ಮಾಂಸ, ಕಲ್ಮಷಗಳೆಲ್ಲವನ್ನೂ ಬೆಂಕಿಯಿಂದ ಸುಡಿಸಿಬಿಡಬೇಕು. [28]ಅವುಗಳನ್ನು ಸುಟ್ಟವನು ತನ್ನ ಬಟ್ಟೆಗಳನ್ನು ಒಗೆದುಕೊಂಡು ಸ್ನಾನಮಾಡಿಯೇ ಪಾಳೆಯದೊಳಗೆ ಬರಬೇಕು.

## ಪ್ರಾಯಶ್ಚಿತ್ತ ದಿನಾಚರಣೆ

29 “ಇದು ನಿಮಗೆ ಶಾಶ್ವತವಾದ ನಿಯಮ: ಸ್ವದೇಶಿಯರಾದ ನೀವೂ ನಿಮ್ಮಲ್ಲಿ ವಾಸಮಾಡುವ ಅನ್ಯದೇಶದವರೆಲ್ಲರೂ ಏಳನೆಯ ತಿಂಗಳಿನ ಹತ್ತನೆಯ ದಿನ ಸಕಲ ವಿಧವಾದ ದುಡಿಮೆಗಳನ್ನು ಬಿಟ್ಟು ತಮ್ಮನ್ನೇ ಪರಿತ್ಯಜಿಸಿಕೊಳ್ಳಬೇಕು. [30]ಏಕೆಂದರೆ ನೀವು ಪರಿಶುದ್ಧರಾಗುವಂತೆ ಈ ದಿನ ನಿಮ್ಮ ಪರವಾಗಿ ಪ್ರಾಯಶ್ಚಿತ್ತ ಮಾಡಲಾಗುವುದು. ಸರ್ವೇಶ್ವರನ ದೃಷ್ಟಿಯಲ್ಲಿ ನಿಮ್ಮ ಎಲ್ಲಾ ದೋಷಗಳು ನಿವಾರಣೆಯಾಗುವುವು. [31]ಇದು ನಿಮಗೆ ಪೂರ್ತಿ ದುಡಿಮೆ ನಿಲ್ಲಿಸಬೇಕಾದ ಸಬ್ಬತ್ ದಿನವಾಗಿರಬೇಕು; ಇದರಲ್ಲಿ ನೀವು ಉಪವಾಸ ಇರಬೇಕು; ನಿಮಗಿದು ಶಾಶ್ವತ ನಿಯಮ.

32 “ಆರೋನನ ವಂಶದವರಲ್ಲಿ ಯಾವನಿಗೆ ಪಿತೃಸ್ಥಾನದಲ್ಲಿ ಮಹಾಯಾಜಕನ ಸೇವಾವೃತ್ತಿ ಯನ್ನು ನಡೆಸುವುದಕ್ಕೆ ಪಟ್ಟಾಭಿಷೇಕವಾಗುವುದೋ ಅವನೇ ಈ ದೋಷಪರಿಹಾರ ಕಾರ್ಯವನ್ನು ನೆರವೇರಿಸಬೇಕು.
33ಅವನೇ ಆ ನಾರುಮಡಿಗಳನ್ನು ಧರಿಸಿಕೊಂಡು ಪರಿಶುದ್ಧವಾದ ದೇವಸ್ಥಾನ, ದೇವದರ್ಶನದ ಗುಡಾರ, ಬಲಿಪೀಠ, ಯಾಜಕರು, ಜನಸಮೂಹದವರು ಈ ಎಲ್ಲರ ಪರವಾಗಿ ಪ್ರಾಯಶ್ಚಿತ್ತ ವಿಧಿಯನ್ನು ನೆರವೇರಿಸಬೇಕು.
34ಇಸ್ರಯೇಲರ ಎಲ್ಲಾ ದೋಷಗಳನ್ನು ನಿವಾರಣೆ ಮಾಡುವುದಕ್ಕಾಗಿ ಅವರಿಗೋಸ್ಕರ ವರ್ಷಕ್ಕೆ ಒಂದಾವರ್ತಿ ಪ್ರಾಯಶ್ಚಿತ್ತ ಮಾಡಬೇಕಾದುದು ನಿಮಗೆ ಶಾಶ್ವತ ನಿಯಮವಾಗಿರಬೇಕು.” ಸರ್ವೇಶ್ವರ ಮೋಶೆಗೆ ಆಜ್ಞಾಪಿಸಿದಂತೆಯೇ ಆರೋನನು ಮಾಡಿದನು.

## ದೇಹಕ್ಕೆ ರಕ್ತವೇ ಪ್ರಾಣಾಧಾರ

**17** ಸರ್ವೇಶ್ವರಸ್ವಾಮಿ ಮೋಶೆಗೆ ಹೀಗೆ ಎಂದರು:
2“ನೀನು ಆರೋನನಿಗೂ ಅವನ ಮಕ್ಕಳಿಗೂ ಹಾಗು ಇಸ್ರಯೇಲರಿಗೂ ಹೇಳಬೇಕಾದುದು ಇದು:
3ಇಸ್ರಯೇಲರಲ್ಲಿ ಯಾರಾದರು ಹೋರಿಯನ್ನಾಗಲಿ, ಕುರಿಯನ್ನಾಗಲಿ, ಆಡನ್ನಾಗಲಿ ಬಲಿಕೊಡುವಾಗ ಅದನ್ನು ಸರ್ವೇಶ್ವರನಿಗೆ ಸಮರ್ಪಿಸಲು ದೇವ ಗುಡಾರದ ಬಾಗಿಲಿಗೆ ತರದೆ
4ಪಾಳೆಯದ ಒಳಗಾಗಲಿ, ಹೊರಗಾಗಲಿ ಕೊಯ್ದರೆ ಅಂಥವನನ್ನು ಕೊಲೆಪಾತ ಮಾಡಿದವನೆಂದು ನೀವು ನಿರ್ಣಯಿಸಬೇಕು. ಅವನು ರಕ್ತವನ್ನು ಸುರಿಸಿದವನಾದ್ದರಿಂದ ಕುಲದಿಂದ ಬಹಿಷ್ಕೃತನಾಗಬೇಕು.
5ಏಕೆಂದರೆ ಬಲಿಪ್ರಾಣಿಗಳನ್ನು ಬಯಲಿನಲ್ಲಿ ವಧಿಸುತ್ತಿದ್ದ ಇಸ್ರಯೇಲರು ಇನ್ನು ಮೇಲೆ ಅವುಗಳನ್ನು ದೇವದರ್ಶನದ ಗುಡಾರದ ಬಾಗಿಲಿಗೆ, ಯಾಜಕನ ಬಳಿಗೆ ತಂದು ಸರ್ವೇಶ್ವರನ ಮುಂದೆ ಶಾಂತಿ ಸಮಾಧಾನದ ಬಲಿಯಾಗಿ ಸರ್ವೇಶ್ವರನಿಗೆ ಸಮರ್ಪಿಸಬೇಕು.
6ಯಾಜಕನು ಅವುಗಳ ರಕ್ತವನ್ನು ದೇವದರ್ಶನದ ಗುಡಾರದ ಬಾಗಿಲಿನ ಮುಂದಿರುವ ಬಲಿಪೀಠಕ್ಕೆ ಚಿಮುಕಿಸಿ, ಅವುಗಳ ಕೊಬ್ಬನ್ನು ಹೋಮಮಾಡಿ, ಸರ್ವೇಶ್ವರನಿಗೆ ಸುವಾಸನೆಯನ್ನುಂಟು ಮಾಡಬೇಕು.
7ಅವರು ಇದುವರೆಗೆ ಪೂಜಿಸುತ್ತಿದ್ದ ಅಜ ದೇವತೆಗಳಿಗೆ ಇನ್ನು ಮುಂದೆ ಬಲಿಕೊಟ್ಟು ದೇವದ್ರೋಹಿಗಳಾಗಬಾರದು. ಅವರಿಗೂ ಅವರ ಸಂತತಿಯವರಿಗೂ ಇದು ಶಾಶ್ವತ ನಿಯಮ.
8 “ಇದಲ್ಲದೆ ನೀನು ಅವರಿಗೆ ಹೀಗೆಂದು ಆಜ್ಞಾಪಿಸು: ಇಸ್ರಯೇಲರಲ್ಲಿ ಆಗಲಿ, ಅವರ ನಡುವೆ ವಾಸಿಸುವ ಅನ್ಯದೇಶದವರಲ್ಲಿ ಆಗಲಿ ಯಾವನಾದರು ದಹನಬಲಿಯನ್ನು ಅಥವಾ ಬೇರೆ ವಿಧವಾದ ಬಲಿದಾನವನ್ನು ಮಾಡುವಾಗ
9ಆ ಪ್ರಾಣಿಯನ್ನು ಸರ್ವೇಶ್ವರನಿಗೆ ಸಮರ್ಪಿಸುವುದಕ್ಕಾಗಿ ದೇವದರ್ಶನದ ಗುಡಾರದ ಬಾಗಿಲಿಗೆ ತರದಿದ್ದರೆ ಅವನನ್ನು ಕುಲದಿಂದ ತೆಗೆದುಹಾಕಬೇಕು.
10 “ಅಷ್ಟು ಮಾತ್ರವಲ್ಲ, ಇಸ್ರಯೇಲರಲ್ಲಾಗಲಿ, ಅವರ ನಡುವೆ ವಾಸಿಸುವ ಅನ್ಯದೇಶದವರಲ್ಲಾಗಲಿ ಯಾರಾದರು ರಕ್ತಭೋಜನ ಮಾಡಿದರೆ ಸರ್ವೇಶ್ವರ ಅಂಥ ವ್ಯಕ್ತಿಯ ವಿರುದ್ಧ ಉಗ್ರಕೋಪಗೊಳ್ಳುವರು; ಅವನನ್ನು ತನ್ನ ಪ್ರಜೆಯಿಂದ ತೆಗೆದುಹಾಕುವರು.
11ಏಕೆಂದರೆ ದೇಹಕ್ಕೆ ರಕ್ತವೇ ಪ್ರಾಣಾಧಾರ. ಆ ರಕ್ತವನ್ನು ನೀವು ಬಲಿಪೀಠಕ್ಕೆ ಪ್ರೋಕ್ಷಿಸಿ ನಿಮ್ಮ ನಿಮ್ಮ ದೋಷಪರಿಹಾರ ಮಾಡಿಕೊಳ್ಳಬೇಕೆಂದು ಸರ್ವೇಶ್ವರ ಅನುಗ್ರಹಿಸಿದ್ದಾರೆ. ರಕ್ತವು ಪ್ರಾಣಾಧಾರವಾಗಿರುವ ಕಾರಣ ಅದರಿಂದ ದೋಷಪರಿಹಾರವಾಗುತ್ತದೆ.
12ಎಂದೇ ನಿಮ್ಮಲ್ಲಿಯಾಗಲಿ, ನಿಮ್ಮ ನಡುವೆ ವಾಸಮಾಡುವ ಅನ್ಯದೇಶೀಯವರಲ್ಲಾಗಲಿ ಯಾರೂ ರಕ್ತಭೋಜನ ಮಾಡಬಾರದೆಂದು ಸರ್ವೇಶ್ವರ ಇಸ್ರಯೇಲರಿಗೆ ಆಜ್ಞಾಪಿಸಿದ್ದಾರೆ.
13 “ಇಸ್ರಯೇಲರಲ್ಲಾಗಲಿ ಅವರ ನಡುವೆ ವಾಸಮಾಡುವ ಅನ್ಯದೇಶೀಯರಲ್ಲಾಗಲಿ ಯಾರಾದರು ಬೇಟೆಮಾಡಿ ತಿನ್ನಬಹುದಾದ ಪ್ರಾಣಿಯನ್ನು ಅಥವಾ ಪಕ್ಷಿಯನ್ನು ಹಿಡಿದರೆ ಅವನು ಅದರ ರಕ್ತವನ್ನು ಸುರಿದು ಮಣ್ಣಿನಿಂದ ಮುಚ್ಚಿಡಬೇಕು.
14ಏಕೆಂದರೆ ಪ್ರತಿ ದೇಹಕ್ಕೂ ರಕ್ತವೇ ಪ್ರಾಣಾಧಾರ. ಆದಕಾರಣ ಸರ್ವೇಶ್ವರ ಇಸ್ರಯೇಲರಿಗೆ, ‘ಪ್ರತಿ ಪ್ರಾಣಿಗೂ ರಕ್ತವೇ ಪ್ರಾಣಾಧಾರವಾದ್ದರಿಂದ ನೀವು ಯಾವಾ ವಿಧವಾದ ಪ್ರಾಣಿಯ ರಕ್ತವನ್ನೂ ಉಣ್ಣಬಾರದು; ರಕ್ತಭೋಜನ ಮಾಡಿದವನಿಗೆ ಬಹಿಷ್ಕಾರ ಹಾಕಬೇಕು,’ ಎಂದು ಆಜ್ಞಾಪಿಸಿದ್ದಾರೆ.

15 “ತಾನಾಗಿ ಸತ್ತುಬಿದ್ದದ್ದನ್ನಾಗಲಿ, ಕಾಡುಮೃಗ ಕೊಂದದ್ದನ್ನಾಗಲಿ ತಿಂದವನು ಸ್ವದೇಶದವನಾಗಿರಲಿ, ಅಥವಾ ಅನ್ಯದೇಶೀಯನಾಗಿರಲಿ ಅಂಥವನು ತನ್ನ ಬಟ್ಟೆಗಳನ್ನು ಒಗೆದುಕೊಂಡು ಸ್ನಾನಮಾಡಬೇಕು; ಆ ದಿನದ ಸಂಜೆಯವರೆಗೆ ಅಶುದ್ಧನಾಗಿದ್ದು ಬಳಿಕ ಶುದ್ಧನಾಗುವನು. [16]ಅವನು ತನ್ನ ಬಟ್ಟೆಗಳನ್ನು ಒಗೆದುಕೊಳ್ಳದೆ ಹಾಗು ಸ್ನಾನಮಾಡಿಕೊಳ್ಳದೆ ಹೋದರೆ ತನ್ನ ಪಾಪದ ಫಲವನ್ನು ಅನುಭವಿಸಬೇಕು.”

## ಲೈಂಗಿಕ ನಿಯಮಗಳು

**18** ಇಸ್ರಯೇಲರಿಗೆ ಈ ಆಜ್ಞೆಗಳನ್ನು ಕೊಡಬೇಕೆಂದು ಸರ್ವೇಶ್ವರಸ್ವಾಮಿ ಮೋಶೆಗೆ ತಿಳಿಸಿದರು: [2]“ನಾನು
ನಿಮ್ಮ ದೇವರಾಗಿರುವ ಸರ್ವೇಶ್ವರ. [3]ನೀವು ವಾಸವಾಗಿದ್ದ ಈಜಿಪ್ಟಿನ ಆಚಾರಗಳನ್ನು ಅನುಸರಿಸಬಾರದು;
ನಾನು ನಿಮ್ಮನ್ನು ಕರೆದೊಯ್ಯುತ್ತಿರುವ ಕಾನಾನ್ ನಾಡಿನ ಆಚರಣೆಗಳನ್ನು ಕೂಡ ನೀವು ಅನುಸರಿಸಬಾರದು.
ಅವರಲ್ಲಿರುವ ನಿಯಮಗಳಿಗೆ ನೀವು ಒಳಗಾಗಕೂಡದು. [4]ಸರ್ವೇಶ್ವರನೆಂಬ ನಾನೇ ನಿಮ್ಮ
ದೇವರಾಗಿರುವುದರಿಂದ ನನ್ನ ನಿರ್ಣಯಗಳ ಪ್ರಕಾರವೇ ನೀವು ನಡೆಯಬೇಕು; ನನ್ನ ವಿಧಿಗಳನ್ನೇ
ಅನುಸರಿಸಬೇಕು. [5]ನನ್ನ ಆಜ್ಞಾವಿಧಿಗಳ ಪ್ರಕಾರ ನಡೆದುಕೊಳ್ಳುವವರು ಆ ಆಜ್ಞಾವಿಧಿಗಳಿಂದ ಜೀವಿಸುವರು.
ಆದುದರಿಂದ ನೀವು ಅವುಗಳನ್ನೇ ಅನುಸರಿಸಬೇಕು. ನಾನೇ ಸರ್ವೇಶ್ವರ.

6 “ನಿಮ್ಮಲ್ಲಿ ಯಾರೂ ರಕ್ತಸಂಬಂಧವುಳ್ಳವರೊಡನೆ ಮೈಗೂಡಿಸಕೂಡದು; ನಾನೇ ಸರ್ವೇಶ್ವರ.

7 “ನಿನ್ನ ತಂದೆಯೊಡನೆ ಆಗಲಿ, ತಾಯಿಯೊಡನೆ ಆಗಲಿ ಸಂಭೋಗಿಸಕೂಡದು. ತಾಯಿಯೊಡನೆ ಎಷ್ಟು ಮಾತ್ರವೂ ಸಂಗಮಿಸಬಾರದು. ಆಕೆ ನಿನ್ನ ಹೆತ್ತ ತಾಯಿ.

8 “ಮಲತಾಯಿಯನ್ನು ಸಂಭೋಗಿಸಬಾರದು; ಹಾಗೆ ಮಾಡಿದರೆ ತಂದೆಗೆ ಮಾನಭಂಗವಾಗುವುದು. ಆಕೆ ನಿನ್ನ ತಂದೆಯ ಅರ್ಧಾಂಗಿ.

9 “ತಂದೆಯ ಮಗಳನ್ನಾಗಲಿ, ತಾಯಿಯ ಮಗಳನ್ನಾಗಲಿ ಸಂಭೋಗಿಸಬಾರದು; ಅವರು ಒಡಹುಟ್ಟಿದವರು; ಪರಸ್ತ್ರೀಯರಲ್ಲಿ ಹುಟ್ಟಿದವರಾದರೂ ಅವರು ನಿಮಗೆ ಅಕ್ಕತಂಗಿಯರು.

10 “ಮಗನ ಮಗಳನ್ನಾಗಲಿ ಮಗಳ ಮಗಳನ್ನಾಗಲಿ ಸಂಭೋಗಿಸಬಾರದು; ಅವರು ನಿಮಗೆ ಮಕ್ಕಳಂಥವರು.

11 “ತಂದೆಯ ಮತ್ತೊಬ್ಬ ಹೆಂಡತಿಯಲ್ಲಿ ಹುಟ್ಟಿದವಳನ್ನು ಸಂಭೋಗಿಸಬಾರದು; ಆಕೆ ಸಹೋದರಿ.

12 “ತಂದೆಯ ಒಡಹುಟ್ಟಿದವಳೊಡನೆ ಸಂಭೋಗ ಮಾಡಬಾರದು; ಆಕೆ ತಂದೆಯ ರಕ್ತಸಂಬಂಧಿ.

13 “ತಾಯಿಯ ಒಡಹುಟ್ಟಿದವಳೊಡನೆ ಸಂಭೋಗ ಮಾಡಬಾರದು; ಆಕೆ ತಾಯಿಯ ರಕ್ತಸಂಬಂಧಿ.

14 “ತಂದೆಯ ಅಣ್ಣತಮ್ಮಂದಿರ ಹೆಂಡತಿಯನ್ನು ಸಂಭೋಗಿಸಬಾರದು; ಅವರು ದೊಡ್ಡಮ್ಮ, ಚಿಕ್ಕಮ್ಮ ನಿಮಗೆ.

15 “ಸೊಸೆಯನ್ನು ಸಂಗಮಿಸಬಾರದು; ಆಕೆ ಮಗನ ಹೆಂಡತಿ.

16 “ಅತ್ತಿಗೆ ನಾದಿನಿಯರನ್ನು ಸಂಭೋಗಿಸಬಾರದು; ಅವರು ಅಣ್ಣತಮ್ಮಂದಿರ ಹೆಂಡತಿಯರು.

17 “ಮದುವೆ ಮಾಡಿಕೊಂಡವಳ ಮಗಳನ್ನು ಆಗಲಿ ಮೊಮ್ಮಗಳನ್ನಾಗಲಿ ಸಂಗಮಿಸಬಾರದು. ಅವರು ರಕ್ತಸಂಬಂಧಿಗಳು, ಅದು ಅಧರ್ಮ.

18 “ಹೆಂಡತಿ ಜೀವಂದಿದಿರುವಾಗಲೆ ಆಕೆಯ ಒಡಹುಟ್ಟಿದವಳನ್ನು ಮದುವೆಮಾಡಿಕೊಂಡು ಹೆಂಡತಿಗೆ ಮನಸ್ತಾಪವನ್ನುಂಟು ಮಾಡಬಾರದು.

19 “ಮುಟ್ಟಿನಿಂದ ಅಶುದ್ಧಳಾದ ಮಹಿಳೆಯನ್ನು ಸಂಗಮಿಸಬಾರದು. [20]ಪರಸ್ತ್ರೀ ಸಂಭೋಗದಿಂದ
ಅಶುದ್ಧರಾಗಬಾರದು. [21]ನಿಮ್ಮ ಮಕ್ಕಳಲ್ಲಿ ಯಾರನ್ನೂ ಮೋಲೆಕ ದೇವತೆಗೆ ಸಮರ್ಪಿಸಿ ನಿಮ್ಮ ದೇವರ
ಹೆಸರನ್ನು ಅಪಕೀರ್ತಿಗೆ ಗುರಿಮಾಡಬಾರದು; ಸರ್ವೇಶ್ವರ ನಾನೇ. [22]ಸ್ತ್ರೀಯನ್ನು ಸಂಗಮಿಸುವಂತೆ
ಪುರುಷನನ್ನು ಸಂಗಮಿಸಬಾರದು; ಅದು ಹೇಸಿಗೆಯಾದುದು. [23]ಪ್ರಾಣಿ ಸಂಗಮವನ್ನು ಮಾಡಿ

ಅಶುದ್ಧರಾಗಬಾರದು; ಯಾವ ಸ್ತ್ರೀಯೂ ಸಂಗಮಕ್ಕಾಗಿ ಪ್ರಾಣಿಯನ್ನು ಸಂಪರ್ಕಿಸಬಾರದು; ಅದು
ವ್ಯತಿರಿಕ್ತವಾದುದು.
24 "ಇಂಥ ದುರಾಚಾರಗಳಾವುದರಿಂದಲೂ ನೀವು ಅಶುದ್ಧರಾಗಬಾರದು. ಏಕೆಂದರೆ ನಾನು
ನಿಮಗೆ ಮುಂಚಿತವಾಗಿ ಹೊರಡಿಸುವ ಜನಾಂಗಗಳವರು ಇಂಥ ಅನಾಚಾರಗಳಿಂದಲೇ ಅಶುದ್ಧರಾದರು.
25ಹೀಗೆ ಅವರ ನಾಡು ಅಶುದ್ಧವಾಗಿ ಹೋದುದರಿಂದ ಅವರ ಪಾಪಕೃತ್ಯಗಳಿಗಾಗಿ ಅವರನ್ನು ಶಿಕ್ಷಿಸಿದ್ದೇನೆ.
ಆ ನಾಡು ತನ್ನಲ್ಲಿ ವಾಸಿಸಿದವರನ್ನು ಕಕ್ಕಿಬಿಟ್ಟಿತು. 26ಆದುದರಿಂದ ಸ್ವದೇಶದವರಾದ ನಿಮ್ಮಲ್ಲಾಗಲಿ, ನಿಮ್ಮ
ನಡುವೆ ವಾಸಿಸುವ ಅನ್ಯದೇಶೀಯರಲ್ಲಾಗಲಿ ಯಾರೂ ಇಂಥ ಹೇಸಿಗೆಯಾದ ಕಾರ್ಯಗಳಲ್ಲಿ ಒಂದನ್ನೂ
ಮಾಡದೆ ಎಲ್ಲರೂ ನನ್ನ ಆಜ್ಞೆಗಳನ್ನು ಅನುಸರಿಸಿ ನಡೆಯಬೇಕು. 27ನಿಮಗಿಂತ ಮುಂಚೆ ನಾಡಿನಲ್ಲಿ
ಇದ್ದವರು ಇಂಥ ಅಸಹ್ಯವಾದ ಕೆಲಸಗಳನ್ನು ಮಾಡಿದ್ದರಿಂದ ಆ ನಾಡು ಕೆಟ್ಟುಹೋಯಿತು. 28ನಿಮಗಿಂತ
ಮುಂಚೆಯಿದ್ದ ಜನಾಂಗಗಳನ್ನು ಆ ನಾಡು ಕಕ್ಕಿಬಿಟ್ಟ ಪ್ರಕಾರವೇ ಅದು ನಿಮ್ಮಿಂದ ಮಲಿನವಾದರೆ ನಿಮ್ಮನ್ನೂ
ಅಂತೆಯೇ ಕಕ್ಕಿಬಿಡುವುದು. 29ಯಾರಾದರು ಈ ಅಸಹ್ಯವಾದ ಕಾರ್ಯಗಳಲ್ಲಿ ಒಂದನ್ನು ಮಾಡಿದ್ದೇ ಆದರೆ
ಅವನನ್ನು ಕುಲದಿಂದ ತೆಗೆದುಬಿಡಬೇಕು. 30ಆದುದರಿಂದ ನಿಮಗಿಂತ ಮುಂಚೆ ನಡೆಯುತ್ತಿದ್ದ ಅಸಹ್ಯವಾದ
ಆಚರಣೆಗಳನ್ನು ನಡೆಸಿ ನಿಮ್ಮನ್ನೇ ಅಶುದ್ಧಮಾಡಿಕೊಳ್ಳದೆ ನನ್ನ ವಿಧಿಗಳನ್ನು ಅನುಸರಿಸಿ ನಡೆಯಬೇಕು.
ನಾನೇ ನಿಮ್ಮ ದೇವರಾದ ಸರ್ವೇಶ್ವರ."

## ನೈತಿಕ ಹಾಗು ಧಾರ್ಮಿಕ ನಿಯಮಗಳು

**19** ಇಸ್ರಯೇಲ್ ಸಮಾಜದವರಿಗೆ ಹೀಗೆ ಆಜ್ಞಾಪಿಸುವಂತೆ ಸರ್ವೇಶ್ವರಸ್ವಾಮಿ ಮೋಶೆಗೆ ಹೇಳಿದರು:
2"ನಿಮ್ಮ ದೇವರಾದ ಸರ್ವೇಶ್ವರನೆಂಬ ನಾನು ಪರಿಶುದ್ಧನಾಗಿರುವಂತೆ ನೀವು ಕೂಡ ಪರಿಶುದ್ಧರಾಗಿರಬೇಕು.
3ಪ್ರತಿಯೊಬ್ಬ ವ್ಯಕ್ತಿಯು ತನ್ನ ತಂದೆತಾಯಿಗಳ ವಿಷಯದಲ್ಲಿ ಭಯಭಕ್ತಿಯಿಂದ ನಡೆದುಕೊಳ್ಳಬೇಕು. ನಾನು
ನೇಮಿಸಿರುವ ಸಬ್ಬತ್ ದಿನಗಳನ್ನು ಆಚರಿಸಬೇಕು. ನಾನೇ ನಿಮ್ಮ ದೇವರಾದ ಸರ್ವೇಶ್ವರ.
4 "ಶೂನ್ಯ ದೇವರುಗಳ ಕಡೆ ತಿರುಗಿಕೊಳ್ಳಬೇಡಿ; ದೇವರೆಂದು ಎರಕದ ವಿಗ್ರಹಗಳನ್ನು
ಮಾಡಿಕೊಳ್ಳಬೇಡಿ. ನಾನೇ ನಿಮ್ಮ ದೇವರಾದ ಸರ್ವೇಶ್ವರ.
5 "ಶಾಂತಿಸಮಾಧಾನದ ಬಲಿಗಳನ್ನು ಸರ್ವೇಶ್ವರನಿಗೆ ಸಮರ್ಪಿಸುವಾಗ ಅವರಿಗೆ ಮೆಚ್ಚುಗೆ ಆಗುವ
ರೀತಿಯಲ್ಲಿ ಸಮರ್ಪಿಸಬೇಕು. 6ನೀವು ಮಾಡುವ ಬಲಿದಾನದ ಮಾಂಸವನ್ನು ಅದೇ ದಿನದಲ್ಲಿ ಅಥವಾ
ಮರುದಿನದಲ್ಲಿ ಊಟ ಮಾಡಿಬಿಡಬೇಕು. ಮೂರನೆಯ ದಿನದವರೆಗೆ ಏನಾದರೂ ಮಿಕ್ಕಿದ್ದರೆ ಅದನ್ನು
ಬೆಂಕಿಯಲ್ಲಿ ಸುಟ್ಟುಬಿಡಬೇಕು. 7ಮೂರನೆಯ ದಿನದ ತನಕ ಉಳಿದದ್ದು ಅಳಿಸಿಹೋದದ್ದು. ಆದುದರಿಂದ
ಅದರಲ್ಲಿ ಏನನ್ನಾದರು ತಿಂದರೆ ಆ ಬಲಿದಾನ ಸರ್ವೇಶ್ವರನಿಗೆ ಸ್ವೀಕೃತವಾಗುವುದಿಲ್ಲ. 8ಅದರಲ್ಲಿ
ಏನನ್ನಾದರೂ ತಿಂದವನು ಸರ್ವೇಶ್ವರನ ದ್ರವ್ಯವಾದ ಪರಿಶುದ್ಧತೆಯನ್ನು ಹೊಲೆಮಾಡುತ್ತಾನೆ. ಆದುದರಿಂದ
ತನ್ನ ಪಾಪದ ಫಲವನ್ನು ಅನುಭವಿಸಲೇಬೇಕು. ಅವನು ಕುಲದಿಂದ ಬಹಿಷ್ಕೃತನಾಗಬೇಕು.
9 "ನೀವು ಹೊಲಕೊಯ್ಯುವಾಗ ಮೂಲೆ ಮೂಲೆಗಳಲ್ಲಿರುವುದನ್ನೆಲ್ಲಾ ಕೊಯ್ಯಬಾರದು; ಕೊಯ್ದಾದ
ಮೇಲೆ ಹಕ್ಕಲಾಯಬಾರದು; 10ದ್ರಾಕ್ಷಿ ತೋಟಗಳಲ್ಲೂ ಹಕ್ಕಲಾಯಕೂಡದು. ಉದುರಿದ ಹಣ್ಣುಗಳನ್ನು
ಆರಿಸಿಕೊಳ್ಳದೆ ಬಡಬಗ್ಗರಿಗೂ ಪರದೇಶಿಗಳಿಗೂ ಅವುಗಳನ್ನು ಬಿಟ್ಟು ಬಿಡಬೇಕು. ನಿಮ್ಮ ದೇವರಾದ
ಸರ್ವೇಶ್ವರ ನಾನೇ.
11 "ಕಳಬೇಡ; ಹುಸಿಯನುಡಿಯಲು ಬೇಡ; ಒಬ್ಬರನ್ನೊಬ್ಬರು ಮೋಸಗೊಳಿಸುವುದು ಬೇಡ. 12ನನ್ನ
ಹೆಸರಿನ ಮೇಲೆ ಸುಳ್ಳಾಣೆಯಿಟ್ಟು ನಿನ್ನ ದೇವರ ನಾಮಕ್ಕೆ ಅಪಕೀರ್ತಿ ತರಬೇಡ. ನಾನೇ ಸರ್ವೇಶ್ವರ.
13 "ಮತ್ತೊಬ್ಬನನ್ನು ಬಲಾತ್ಕರಿಸಬೇಡ; ಅವನ ಸೊತ್ತನ್ನು ಅಪಹರಿಸಬೇಡ. ಕೂಲಿಯವನ
ಕೂಲಿಯನ್ನು ಮರುದಿನದವರೆಗೆ ನಿನ್ನ ಬಳಿಯಲ್ಲೇ ಇಟ್ಟುಕೊಳ್ಳಬೇಡ. 14ಕಿವುಡರನ್ನು ದೂಷಿಸಬೇಡ;
ಕುರುಡರು ನಡೆಯುವ ದಾರಿಯಲ್ಲಿ ಎಡರು ಕಲ್ಲನ್ನು ಇಡಬೇಡ. ನಿನ್ನ ದೇವರಲ್ಲಿ ಭಯಭಕ್ತಿಯಿರಲಿ. ನಾನೇ
ಸರ್ವೇಶ್ವರ.

15 “ವ್ಯಾಜ್ಯತೀರಿಸುವಾಗ ಅನ್ಯಾಯವಾದ ತೀರ್ಪನ್ನು ಕೊಡಬೇಡ. ಬಡವನ ಬಡತನ ವನ್ನಾಗಲಿ,
ದೊಡ್ಡವನ ಘನತೆಯನ್ನಾಗಲಿ ಲಕ್ಷ್ಯಮಾಡದೆ ಪಕ್ಷಪಾತವಿಲ್ಲದ ತೀರ್ಪನ್ನು ಕೊಡು.
16 “ನಿನ್ನ ಜನರ ನಡುವೆ ಚಾಡಿಕೋರನಾಗಿ ತಿರುಗಾಡಬೇಡ; ಮತ್ತೊಬ್ಬನಿಗೆ ಮರಣಶಿಕ್ಷೆ
ಆಗಲೇಬೇಕೆಂದು ಛಲ ಹಿಡಿಯಬೇಡ. ನಾನೇ ಸರ್ವೇಶ್ವರ.
17 “ಸಹೋದರರ ಬಗ್ಗೆ ಒಳಗೊಳಗೇ ಹಗೆ ಇಟ್ಟುಕೊಳ್ಳಬೇಡ. ನೆರೆಯವನ ದೋಷಕ್ಕೆ ನೀನು
ಒಳಗಾಗದಂತೆ ಅವನ ತಪ್ಪನ್ನು ಅವನಿಗೆ ಎತ್ತಿ ತೋರಿಸಲೇಬೇಕು. 18ನಿನ್ನ ಸ್ವಜನರಲ್ಲಿ ಯಾರಿಗೂ ಕೇಡಿಗೆ
ಕೇಡು ಮಾಡಬೇಡ, ಅವರಿಗೆ ವಿರುದ್ಧ ಮತ್ಸರ ಇಟ್ಟುಕೊಳ್ಳಬೇಡ, ನಿನ್ನ ನೆರೆಯವನನ್ನು ನಿನ್ನಂತೆಯೇ
ಪ್ರೀತಿಸು. ನಾನು ಸರ್ವೇಶ್ವರ.
19 “ನನ್ನ ಆಜ್ಞೆಗಳನ್ನು ನೀನು ಅನುಸರಿಸಿ ನಡೆಯಬೇಕು. ನಿನ್ನ ಜಾನುವಾರುಗಳಿಂದ ಬೆರಕೆ
ತಳಿಯನ್ನು ಪಡೆಯಲು ಅವಕಾಶವೀಯಬಾರದು; ನಿನ್ನ ಹೊಲದಲ್ಲಿ ಇಬ್ಬಗೆಯ ಬೀಜವನ್ನು ಬಿತ್ತಬಾರದು;
ನಾರು ಮತ್ತು ಉಣ್ಣೆಯಿಂದ ನೇಯ್ದ ಬಟ್ಟೆಯನ್ನು ಹಾಕಿಕೊಳ್ಳಬಾರದು.
20 “ಒಬ್ಬನ ಅಧೀನದಲ್ಲಿರುವ ದಾಸಿ ಹಣ ಕೊಡುವುದರಿಂದಾಗಲಿ, ಉಚಿತವಾಗಿಯಾಗಲಿ
ಬಿಡುಗಡೆ ಹೊಂದದೆ ಇರುವಾಗ ಇನ್ನೊಬ್ಬ ವ್ಯಕ್ತಿ ಅವಳನ್ನು ಕೂಡಿದರೆ ಅವರಿಗೆ ವಿಧಿಸಬೇಕಾದ ಶಿಕ್ಷೆಯ
ಬಗ್ಗೆ ನ್ಯಾಯವಿಚಾರಣೆ ಆಗಬೇಕು. ಆದರೆ ಮರಣಶಿಕ್ಷೆ ವಿಧಿಸಬಾರದು. ಏಕೆಂದರೆ ಅವಳು ಇನ್ನೂ ದಾಸಿ.
21ಆ ವ್ಯಕ್ತಿ ಪ್ರಾಯಶ್ಚಿತ್ತ ಬಲಿಗಾಗಿ ಸರ್ವೇಶ್ವರನ ಸನ್ನಿಧಿಗೆ, ದೇವದರ್ಶನದ ಗುಡಾರದ ಬಾಗಿಲಿಗೆ ಒಂದು
ಟಗರನ್ನು ತರಬೇಕು. 22ಅವನ ದೋಷಪರಿಹಾರಕ್ಕಾಗಿ ಯಾಜಕನು ಆ ಟಗರನ್ನು ಪ್ರಾಯಶ್ಚಿತ್ತ ಬಲಿಯಾಗಿ
ಸರ್ವೇಶ್ವರನಿಗೆ ಸಮರ್ಪಿಸಿ ಅವನ ಪರವಾಗಿ ದೋಷಪರಿಹಾರ ಮಾಡಿದಾಗ ಅವನಿಗೆ ಕ್ಷಮೆ ದೊರಕುವುದು.
23 “ನೀವು ಆ ಕಾನಾನ್ ನಾಡನ್ನು ಸೇರಿದಾಗ ಆಹಾರಕ್ಕಾಗಿ ಯಾವ ಜಾತಿಯ ಹಣ್ಣಿನ ಸಸಿಯನ್ನು
ನೆಟ್ಟರೂ ಅದರ ಫಲವನ್ನು ಮೂರು ವರ್ಷದ ತನಕ ಅಶುದ್ಧವೆಂದೆಣಿಸಿ ಅದನ್ನು ತಿನ್ನದಿರಬೇಕು.
24ನಾಲ್ಕನೆಯ ವರ್ಷ ಅದರ ಎಲ್ಲಾ ಹಣ್ಣುಗಳೂ ದೇವರವಾಗಿರಬೇಕು; ಅವುಗಳನ್ನು ಸರ್ವೇಶ್ವರನಿಗೆ
ಕೃತಜ್ಞತೆಯ ಕಾಣಿಕೆಯನ್ನಾಗಿ ಸಮರ್ಪಿಸಬೇಕು. 25ಐದನೆಯ ವರ್ಷದಲ್ಲಿ ಅಂದು ಮೊದಲ್ಗೊಂಡು ಅದರ
ಫಲಗಳನ್ನು ನೀವು ತಿನ್ನಬಹುದು. ನಿಮಗೆ ಹೆಚ್ಚು ಫಲ ದೊರಕುವುದು. ನಿಮ್ಮ ದೇವರಾದ ಸರ್ವೇಶ್ವರ
ನಾನೇ.

26 “ರಕ್ತಸಹಿತವಾದ ಯಾವ ಮಾಂಸವನ್ನೂ ತಿನ್ನಬೇಡ. ತಂತ್ರಮಂತ್ರಗಳನ್ನು ಮಾಡಬೇಡ;
ಶಕುನಗಳನ್ನು ನೋಡಬೇಡ. 27ಚಂಡಿಕೆ ಬಿಡಬೇಡ; ಗಡ್ಡವನ್ನು ವಿಕಾರಗೊಳಿಸಬೇಡ. 28ಸತ್ತವರಿಗಾಗಿ
ಸಂತಾಪ ಸೂಚಿಸಲು ದೇಹವನ್ನು ಗಾಯಗೊಳಿಸಿ ಕೊಳ್ಳಬೇಡ. ಶರೀರದ ಮೇಲೆ ಹಚ್ಚೆಚುಚ್ಚಿಸಿಕೊಳ್ಳಬೇಡ.
ನಾನು ಸರ್ವೇಶ್ವರ.
29 “ಮಗಳನ್ನು ಬಸವಿಬಿಟ್ಟು ವೇಶ್ಯೆಯನ್ನಾಗಿ ಮಾಡಬೇಡ. ಹಾಗೆ ಮಾಡಿದರೆ ಸೂಳೆಗಾರಿಕೆ
ಪ್ರಬಲವಾಗಿ ನಾಡಿನಲ್ಲೆಲ್ಲಾ ತುಂಬಿ ಹೋಗುವುದು. 30ನಾನು ನೇಮಿಸಿರುವ ಸಬ್ಬತ್ ದಿನಗಳನ್ನು
ಆಚರಿಸಬೇಕು. ನನ್ನ ಆಲಯದ ಬಗ್ಗೆ ಭಯಭಕ್ತಿಯುಳ್ಳವರಾಗಿರಬೇಕು. ನಾನು ಸರ್ವೇಶ್ವರ.
31 “ಭೂತಪ್ರೇತಗಳನ್ನು ವಿಚಾರಿಸುವವರ ಬಳಿಗೆ ಹೋಗಬೇಡ; ಅವರ ಆಲೋಚನೆಯನ್ನು ಕೇಳಿ
ಅಶುದ್ಧನಾಗಬೇಡ. ನಾನು ಸರ್ವೇಶ್ವರ.
32 “ತಲೆನರೆತ ವೃದ್ಧರ ಮುಂದೆ ಎದ್ದುನಿಂತು ಅವರನ್ನು ಸನ್ಮಾನಿಸಬೇಕು. ನಿನ್ನ ದೇವರಲ್ಲಿ ಭಯ
ಭಕ್ತಿಯುಳ್ಳವನಾಗಿರಬೇಕು. ನಾನು ಸರ್ವೇಶ್ವರ.
33 “ನಿಮ್ಮ ನಾಡಿನಲ್ಲಿ ತಂಗಿರುವ ಹೊರನಾಡಿಗರಿಗೆ ಅನ್ಯಾಯವೇನೂ ಮಾಡಬಾರದು. 34ಅವರು
ನಿಮಗೆ ಸ್ವಂತನಾಡಿನವರಂತೆಯೇ ಇರಬೇಕು. ಅವರನ್ನು ನಿಮ್ಮಂತೆಯೇ ಪ್ರೀತಿಸಬೇಕು. ಈಜಿಪ್ಟಿನಲ್ಲಿದ್ದಾಗ
ನೀವು ಕೂಡ ಅನ್ಯರಾಗಿದ್ದಿರಲ್ಲವೆ? ನಾನು ನಿಮ್ಮ ದೇವರಾದ ಸರ್ವೇಶ್ವರ.
35 “ನ್ಯಾಯ ವಿಚಾರಣೆ, ತೂಕ, ಅಳತೆ, ಪರಿಮಾಣ ಇವುಗಳಲ್ಲಿ ನೀವು ನ್ಯಾಯವಿರುದ್ಧವಾಗಿ
ನಡೆಯಬಾರದು. 36ತಕ್ಕಡಿ, ತೂಕದ ಕಲ್ಲು, ಕೊಳಗ, ಸೇರು ಇವುಗಳೆಲ್ಲವು ನ್ಯಾಯಬದ್ಧ ಆಗಿಯೇ ಇರಬೇಕು.

ಈಜಿಪ್ಟಿನಿಂದ ನಿಮ್ಮನ್ನು ಬರಮಾಡಿದ ನಿಮ್ಮ ದೇವರಾದ ಸರ್ವೇಶ್ವರ ನಾನೇ. [37]ಆದುದರಿಂದ ನನ್ನ ಆಜ್ಞಾವಿಧಿಗಳನ್ನೆಲ್ಲಾ ನೀವು ಅನುಸರಿಸಿ ನಡೆಯಬೇಕು. ನಾನು ಸರ್ವೇಶ್ವರ."

## ದೈವಾಜ್ಞೆ ಮೀರಿದವರಿಗೆ ಆಗಬೇಕಾದ ಶಿಕ್ಷೆಗಳು

**20** ಇಸ್ರಯೇಲರಿಗೆ ಹೀಗೆ ಆಜ್ಞಾಪಿಸಬೇಕೆಂದು ಸರ್ವೇಶ್ವರಸ್ವಾಮಿ ಮೋಶೆಗೆ ಹೇಳಿದರು:

2 "ಇಸ್ರಯೇಲರಲ್ಲೇ ಆಗಲಿ, ಅವರ ಮಧ್ಯೆ ವಾಸಿಸುವ ಅನ್ಯದೇಶೀಯರಲ್ಲೇ ಆಗಲಿ ಯಾವನಾದರು
ತನ್ನ ಮಕ್ಕಳಲ್ಲಿ ಒಂದನ್ನು ಮೋಲೆಕ ದೇವತೆಗೆ ಅರ್ಪಿಸಿದರೆ ಅವನಿಗೆ ಮರಣ ಶಿಕ್ಷೆ ಆಗಬೇಕು; ನಾಡಿನ
ಜನರು ಅವನನ್ನು ಕಲ್ಲೆಸೆದು ಕೊಲ್ಲಬೇಕು. [3]ಅವನು ತನ್ನ ಮಕ್ಕಳಲ್ಲಿ ಒಂದನ್ನು ಮೋಲೆಕ ದೇವತೆಗೆ ಅರ್ಪಿಸಿ
ನನ್ನ ದೇವಸ್ಥಾನವನ್ನು ಅಶುದ್ಧಮಾಡಿ ನನ್ನ ಪವಿತ್ರ ನಾಮಕ್ಕೆ ಅಪಕೀರ್ತಿ ತಂದಿದ್ದಾನೆ. ಆದ್ದರಿಂದ ನಾನು
ಅವನಿಗೆ ವಿಮುಖನಾಗಿ ಅವನನ್ನು ನನ್ನ ಜನತೆಯಿಂದ ತೆಗೆದುಹಾಕುವೆನು. [4]ಆ ವ್ಯಕ್ತಿ ತನ್ನ ಮಕ್ಕಳಲ್ಲಿ
ಒಂದನ್ನು ಮೋಲೆಕ ದೇವತೆಗೆ ಅರ್ಪಿಸಿದ್ದರೂ ನಾಡಿನವರು ಅವನನ್ನು ಕೊಲ್ಲದೆ ಅವನು ಮಾಡಿದ
ಕೃತ್ಯವನ್ನು ನೋಡಿಯೂ ನೋಡದವರಂತೆ ವರ್ತಿಸಿದರೆ [5]ನಾನು ಆ ವ್ಯಕ್ತಿಗೂ ಅವನ ಕುಟುಂಬದವರಿಗೂ
ವಿಮುಖನಾಗುವೆನು; ಅವನನ್ನು ಮಾತ್ರವಲ್ಲ, ಅವನನ್ನು ಹೊಂದಿಕೊಂಡು ದೇವದ್ರೋಹಿಗಳಾಗಿ ಮೋಲೆಕ
ದೇವತೆಗೆ ಶರಣಾದವರೆಲ್ಲರನ್ನು ತಮ್ಮ ಜನತೆಯಿಂದ ತೆಗೆದುಹಾಕುವೆನು.

6 "ಯಾರಾದರು ಭೂತ-ಪ್ರೇತಗಳನ್ನು ವಿಚಾರಿಸುವವರ ಬಳಿಗೆ ಹೋಗಿ, ಅವರ
ಆಲೋಚನೆಯನ್ನು ಕೇಳಿ, ದೇವದ್ರೋಹಿಯಾದರೆ ನಾನು ಅಂಥ ವ್ಯಕ್ತಿಗೆ ವಿಮುಖನಾಗಿ ಅವನನ್ನು ತನ್ನ
ಜನತೆಯಿಂದ ತೆಗೆದುಹಾಕುವೆನು. [7]ನಾನು ನಿಮ್ಮ ದೇವರಾದ ಸರ್ವೇಶ್ವರನಾಗಿರುವ ಕಾರಣ ನೀವು
ನನ್ನವರಾಗಿ ಪರಿಶುದ್ಧರಾಗಿರಬೇಕು. [8]ನನ್ನ ಆಜ್ಞೆಗಳನ್ನು ಅನುಸರಿಸಿ ನಡೆಯಬೇಕು. ನಾನು ನಿಮ್ಮನ್ನು
ಪವಿತ್ರಜನರಾಗುವಂತೆ ಮಾಡುವ ಸರ್ವೇಶ್ವರ.

9 "ತಂದೆಗಾಗಲಿ, ತಾಯಿಗಾಗಲಿ ಶಾಪಹಾಕುವವರಿಗೆ ಮರಣಶಿಕ್ಷೆಯಾಗಬೇಕು. ತಂದೆ ತಾಯಿಗಳಿಗೆ
ಶಾಪ ಹಾಕುವುದರಿಂದ ಅವರಿಗೆ ಸಂಭವಿಸುವ ಮರಣ ಶಿಕ್ಷೆಗೆ ಅವರೇ ಕಾರಣ.

10 "ಯಾವನಾದರು ಪರಪತ್ನಿಯೊಡನೆ ವ್ಯಭಿಚಾರ ಮಾಡಿದರೆ ಅವರಿಬ್ಬರಿಗೂ ಮರಣ
ಶಿಕ್ಷೆಯಾಗಬೇಕು. [11]ಯಾವನಾದರು ಮಲತಾಯಿಯನ್ನು ಕೂಡಿದರೆ ಅವನು ತಂದೆಗೆ ಮಾನಭಂಗ
ಮಾಡಿದಂತಾಯಿತು. ಅವರಿಬ್ಬರಿಗೂ ಮರಣ ಶಿಕ್ಷೆಯಾಗಬೇಕು. ಆ ಶಿಕ್ಷೆಗೆ ಅವರೇ ಕಾರಣರು.
[12]ಯಾವನಾದರು ಸೊಸೆಯನ್ನು ಸಂಭೋಗಿಸಿದರೆ ಅವರಿಬ್ಬರಿಗೂ ಮರಣ ಶಿಕ್ಷೆಯಾಗಬೇಕು. ಅವರು
ಅಧರ್ಮಕಾರ್ಯವನ್ನು ಮಾಡಿದ್ದರಿಂದ ಆ ಶಿಕ್ಷೆಗೆ ಅವರೇ ಕಾರಣರು. [13]ಯಾವನಾದರು ಸ್ತ್ರೀಯನ್ನು
ಸಂಭೋಗಿಸುವಂತೆ ಪುರುಷನನ್ನು ಸಂಭೋಗಿಸಿದರೆ ಅವರಿಬ್ಬರೂ ಹೇಸಿಗೆಯ ಕೃತ್ಯ ಮಾಡಿದ್ದರಿಂದ
ಅವರಿಗೆ ಮರಣಶಿಕ್ಷೆಯಾಗಬೇಕು; ಆ ಶಿಕ್ಷೆಗೆ ಅವರೇ ಕಾರಣರು. [14]ಯಾವನಾದರೂ ಒಬ್ಬ ಸ್ತ್ರೀಯನ್ನೂ
ಅವಳ ತಾಯಿಯನ್ನೂ ಇಟ್ಟುಕೊಂಡರೆ ಅದು ಅತಿ ದುಷ್ಟಕಾರ್ಯವಾದುದರಿಂದ ಆ ಮೂರು
ಮಂದಿಯನ್ನೂ ಬೆಂಕಿಯಿಂದ ಸುಡಿಸಿಬಿಡಬೇಕು; ಅಂಥ ದುರಾಚಾರವು ನಿಮ್ಮಲ್ಲಿ ಎಷ್ಟು ಮಾತ್ರವೂ
ನಡೆಯಬಾರದು. [15]ಯಾವನಾದರೂ ಪ್ರಾಣಿಸಂಗಮಾಡಿದರೆ ಅವನಿಗೆ ಮರಣಶಿಕ್ಷೆ ಆಗಬೇಕು. ಆ
ಪ್ರಾಣಿಯನ್ನು ಕೊಲ್ಲಿಸಬೇಕು. [16]ಯಾವ ಸ್ತ್ರೀಯಾದರೂ ಪ್ರಾಣಿಯಿಂದ ಸಂಗಮ ಮಾಡಿಸಿಕೊಂಡರೆ ಆ
ಸ್ತ್ರೀಯನ್ನೂ ಪ್ರಾಣಿಯನ್ನೂ ಕೊಲ್ಲಿಸಬೇಕು; ಅವಳಿಗೂ ಅದಕ್ಕೂ ಮರಣವೇ ವಿಧಿ. ಆ ಮರಣ ಶಿಕ್ಷೆಗೆ
ತಾವೇ ಕಾರಣರು. [17]ಯಾವನಾದರೂ ತನ್ನ ಒಡಹುಟ್ಟಿದವಳನ್ನು ಅಂದರೆ, ತಂದೆಯ ಮಗಳನ್ನಾಗಲಿ
ತಾಯಿಯ ಮಗಳನ್ನಾಗಲಿ ಕರೆದುಕೊಂಡು ಅವಳ ಮಾನವನ್ನು ಇವನೂ ಇವನ ಮಾನವನ್ನು ಅವಳೂ
ನೋಡಿದರೆ ಅದು ನಾಚಿಕೆಗೇಡಾದ ಕೆಲಸವಾಗಿರುವುದರಿಂದ ಅವರ ಕುಲದವರ ಎದುರಾಗಿಯೇ ಅವರಿಗೆ
ಮರಣಶಿಕ್ಷೆಯನ್ನು ಮಾಡಿಸಬೇಕು. ಆ ಮನುಷ್ಯನು ಒಡಹುಟ್ಟಿದವಳನ್ನು ಸಂಗಮಿಸಿದುದರಿಂದ ತನ್ನ ಪಾಪದ
ಫಲವನ್ನು ಅನುಭವಿಸಬೇಕು. [18]ಯಾವನಾದರೂ ಮುಟ್ಟಾದ ಸ್ತ್ರೀಯನ್ನು ಸಂಗಮಿಸಿದರೆ ಅವನು ಅವಳ
ಶೋಣಿತಸ್ಥಾನವನ್ನು ಬಯಲು ಪಡಿಸಿದವನು, ಅವಳು ಬಯಲುಪಡಿಸಿ ಕೊಂಡವಳು; ಆದ್ದರಿಂದ

ಅವರಿಬ್ಬರೂ ಕುಲದಿಂದ ತೆಗೆದು ಹಾಕಲ್ಪಡಬೇಕು. 19ತಂದೆಯ ಅಥವಾ ತಾಯಿಯ ಒಡಹುಟ್ಟಿದವಳ
ಸಂಗಮಾಡಬಾರದು; ಹಾಗೆ ಮಾಡಿದವನು ರಕ್ತ ಸಂಬಂಧಿಯನ್ನು ಸಂಗಮಿಸಿದವನಾದುದರಿಂದ
ಅವರಿಬ್ಬರೂ ತಮ್ಮ ಪಾಪದ ಫಲವನ್ನು ಅನುಭವಿಸಬೇಕು. 20ಯಾವನಾದರೂ ದೊಡ್ಡಮ್ಮನನ್ನಾಗಲಿ
ಚಿಕ್ಕಮ್ಮನನ್ನಾಗಲಿ ಸಂಗಮಿಸಿದರೆ ಅವನು ದೊಡ್ಡಪ್ಪ ಚಿಕ್ಕಪ್ಪನವರ ಮಾನವನ್ನು ಭಂಗಪಡಿಸಿದವನಾದು
ದರಿಂದ ಆ ಸ್ತ್ರೀಪುರುಷರು ಆ ಪಾಪದ ಫಲವನ್ನು ಅನುಭವಿಸಬೇಕು; ಅವರು ಸಂತಾನವಿಲ್ಲದೆ
ಸಾಯುವರು. 21ಯಾವನಾದರೂ ಅತ್ತಿಗೆ ನಾದಿನಿಯವರನ್ನು ಇಟ್ಟುಕೊಂಡರೆ ಅದು ಅಶುದ್ಧವಾದ ಕೆಲಸ;
ಅವನು ಅಣ್ಣತಮ್ಮಂದಿರ ಮಾನವನ್ನೇ ಭಂಗಪಡಿಸಿದವನು. ಅವರಿಗೆ ಸಂತಾನವಿರುವುದಿಲ್ಲ.

22 "ಈ ನನ್ನ ಆಜ್ಞಾವಿಧಿಗಳನ್ನೆಲ್ಲಾ ನೀವು ಅನುಸರಿಸಿ ನಡೆಯಬೇಕು; ಹಾಗೆ ನಡೆದರೆ ನಾನು
ನಿಮ್ಮನ್ನು ಯಾವ ದೇಶಕ್ಕೆ ಬರಮಾಡಿ ಅದನ್ನು ನಿವಾಸಕ್ಕಾಗಿ ಕೊಡುತ್ತೇನೋ ಆ ದೇಶವು ನಿಮ್ಮನ್ನು
ಕಾರಿಬಿಡುವುದಿಲ್ಲ. 23ನಾನು ನಿಮ್ಮ ಎದುರಿನಿಂದ ಹೊರಡಿಸುವ ಜನಾಂಗದ ಆಚಾರಗಳನ್ನು ನೀವು
ಅನುಸರಿಸಬಾರದು; ಅವರು ಈ ದುರಾಚಾರಗಳನ್ನೆಲ್ಲಾ ನಡೆಸಿದುದರಿಂದ ನನಗೆ ಹೇಸಿಗೆಯಾದರು.
24ನಿಮಗಾದರೋ – ನೀವು ಅವರ ದೇಶವನ್ನು ಸ್ವಾಧೀನಪಡಿಸಿಕೊಳ್ಳುವಿರಿ; ಹಾಲೂ ಜೇನೂ ಹರಿಯುವಂಥ
ಆ ದೇಶವನ್ನು ನಿಮಗೆ ಸ್ವದೇಶವಾಗುವುದಕ್ಕೆ ಕೊಡುವೆನು ಎಂದು ನಾನು ಮಾತುಕೊಟ್ಟೆನಲ್ಲವೇ? ನಾನು
ನಿಮ್ಮನ್ನು ಇತರ ಜನಾಂಗಗಳಿಂದ ಪ್ರತ್ಯೇಕಿಸಿದ ನಿಮ್ಮ ದೇವರಾದ ಸರ್ವೇಶ್ವರ.

25 "ನೀವು ಶುದ್ಧಾಶುದ್ಧ ಜಂತುಗಳನ್ನು ಪಕ್ಷಿಗಳನ್ನು ವಿವೇಚನೆಮಾಡಿ ನಾನು ಅಶುದ್ಧವೆಂದು
ನಿರ್ಣಯಿಸಿರುವ ಯಾವ ಪ್ರಾಣಿಪಕ್ಷಿ, ಕ್ರಿಮಿಕೀಟಗಳಿಂದಲೂ ನಿಮ್ಮನ್ನು ಹೇಯಮಾಡಿಕೊಳ್ಳಬಾರದು.
26ಸರ್ವೇಶ್ವರನೆಂಬ ನಾನು ಪರಿಶುದ್ಧನಾಗಿದ್ದೇನೆ, ಮತ್ತು ನೀವು ನನ್ನ ಜನರಾಗುವಂತೆ ನಿಮ್ಮನ್ನು ಇತರ
ಜನಾಂಗಗಳಿಂದ ಪ್ರತ್ಯೇಕಿಸಿದ್ದೇನೆ; ಆದ್ದರಿಂದ ನೀವು ನನಗೆ ಮೀಸಲಾಗಿರಬೇಕು.

27 "ಭೂತಪ್ರೇತಗಳನ್ನು ವಿಚಾರಿಸುವವರು ಸ್ತ್ರೀಯರಾಗಲಿ, ಪುರುಷರಾಗಲಿ ಮರಣಶಿಕ್ಷೆ
ಹೊಂದಬೇಕು. ಕಲ್ಲೆಸೆದು ಅವರನ್ನು ಕೊಲ್ಲಬೇಕು; ಆ ಶಿಕ್ಷೆಗೆ ಅವರೇ ಕಾರಣರು."

### ಯಾಜಕರು ಪರಿಶುದ್ಧರಾಗಿರಬೇಕು

**21** ಆರೋನನ ಮಕ್ಕಳಾದ ಯಾಜಕರಿಗೆ ಈ ಕೆಳಕಂಡಂತೆ ಆಜ್ಞಾಪಿಸಬೇಕೆಂದು ಸರ್ವೇಶ್ವರಸ್ವಾಮಿ
ಮೋಶೆಗೆ ತಿಳಿಸಿದರು:

2 "ಯಾಜಕರಲ್ಲಿ ಯಾವನೂ ತನ್ನ ಕುಲದಲ್ಲಿ ಸತ್ತವರ ನಿಮಿತ್ತ ತನ್ನನ್ನೇ ಅಪವಿತ್ರಮಾಡಿ
ಕೊಳ್ಳಬಾರದು. ಆದರೂ ಸಮೀಪ ರಕ್ತಸಂಬಂಧಿಗಳಾದ ತಾಯಿ, ತಂದೆ, ಮಕ್ಕಳು ಹಾಗು ಅಣ್ಣತಮ್ಮಂದಿರು
ಇವರ ವಿಷಯದಲ್ಲಿ ಈ ವಿಧಿ ಅನ್ವಯಿಸುವುದಿಲ್ಲ:

3 "ಇದಲ್ಲದೆ ಮದುವೆಯಾಗದೆ ತನ್ನ ಆಶ್ರಯದಲ್ಲಿರುವ ತಂಗಿಯ ವಿಷಯದಲ್ಲೂ ಈ ವಿಧಿ
ಅನ್ವಯಿಸುವುದಿಲ್ಲ. 4ಅವನು ಕುಲನಾಯಕ ಆಗಿರುವುದರಿಂದ ತನ್ನನ್ನೇ ಅಪವಿತ್ರಮಾಡಿ ಕೊಳ್ಳಕೂಡದು.
ಮಾಡಿಕೊಂಡರೆ ಯಾಜಕ ಸೇವಾವೃತ್ತಿಗೆ ಅಯೋಗ್ಯನಾಗುವನು.

5 "ಯಾಜಕರು ತಲೆ ಬೋಳಿಸಿಕೊಳ್ಳಬಾರದು; ಗಡ್ಡವನ್ನು ಕತ್ತರಿಸಿ ವಿಕಾರಗೊಳಿಸಿ ಕೊಳ್ಳಬಾರದು;
ದೇಹವನ್ನು ಗಾಯಮಾಡಿಕೊಳ್ಳಬಾರದು. 6ಅವರು ದೇವರಿಗೆ ಮೀಸಲಾಗಿರಬೇಕು; ತಾವು ಸೇವೆಮಾಡುವ
ದೇವರ ಹೆಸರಿಗೆ ಅಪಕೀರ್ತಿತರಬಾರದು. ತಮ್ಮ ದೇವರ ಆಹಾರವನ್ನು, ಅಂದರೆ ಸರ್ವೇಶ್ವರನ
ಹೋಮದ್ರವ್ಯಗಳನ್ನು ಅವರು ಸಮರ್ಪಿಸುವವರಾಗಿರುವುದರಿಂದ ಪವಿತ್ರರಾಗಿರಬೇಕು. 7ಯಾಜಕರು ತಮ್ಮ
ದೇವರಿಗೆ ಮೀಸಲಾಗಿರುವುದರಿಂದ ವೇಶ್ಯೆಯನ್ನಾಗಲಿ, ಶೀಲಭ್ರಷ್ಟ ಸ್ತ್ರೀಯನ್ನಾಗಲಿ, ಗಂಡನಿಂದ
ಬಿಡಲ್ಪಟ್ಟವಳನ್ನಾಗಲಿ ಹೆಂಡತಿಯನ್ನಾಗಿ ತೆಗೆದುಕೊಳ್ಳಬಾರದು. 8ಯಾಜಕರು ನಿಮ್ಮ ದೇವರಾದ ನನಗೆ
ಆಹಾರವನ್ನು ಸಮರ್ಪಿಸುವವರಾದ ಕಾರಣ ನೀವು ಅವರನ್ನು ದೇವರ ದಾಸರೆಂದು ಭಾವಿಸಬೇಕು.
ನಿಮ್ಮನ್ನು ನನ್ನ ಸೇವೆಗೆ ಪ್ರತಿಷ್ಠಿಸಿಕೊಂಡಿರುವ ಸರ್ವೇಶ್ವರನೆಂಬ ನಾನು ಪರಿಶುದ್ಧನಾಗಿರುವುದರಿಂದ
ಅವರನ್ನೂ ಪರಿಶುದ್ಧರೆಂದು ನೀವು ಭಾವಿಸಬೇಕು. 9ಯಾಜಕನ ಮಗಳು ಸೂಳೆತನದಿಂದ ನಿಂದೆಗೆ

ಒಳಗಾದರೆ ತನ್ನ ತಂದೆಯನ್ನೂ ನಿಂದೆಗೆ ಒಳಪಡಿಸಿದವಳಾದಳು; ಅವಳನ್ನು ಬೆಂಕಿಯಿಂದ ಸುಟ್ಟುಬಿಡಬೇಕು.

10 "ಯಾಜಕರಲ್ಲಿ ಪ್ರಧಾನನು, ಅಂದರೆ ಯಾವನು ತೈಲಾಭಿಷೇಕ ಹೊಂದಿ ದೀಕ್ಷಾವಸ್ತ್ರಗಳನ್ನು ಧರಿಸಿ, ಪಟ್ಟಕ್ಕೆ ಬರುವನೋ ಅವನು ಸಂತಾಪಸೂಚನೆಗಾಗಿ ತನ್ನ ತಲೆಗೂದಲನ್ನು ಕೆದರಿಕೊಳ್ಳಬಾರದು; ಬಟ್ಟೆಗಳನ್ನು ಹರಿದುಕೊಳ್ಳಬಾರದು. [11]ಅವನು ಶವವಿರುವ ಯಾವ ಸ್ಥಳಕ್ಕೂ ಹೋಗಬಾರದು. ತಂದೆತಾಯಿಗಳ ಮರಣದ ನಿಮಿತ್ತ ತನ್ನನ್ನು ಅಪವಿತ್ರಮಾಡಿಕೊಳ್ಳಬಾರದು. [12]ಇದಕ್ಕಾಗಿ ದೇವಸ್ಥಾನವನ್ನು ಬಿಡಲೇಬಾರದು; ಬಿಟ್ಟು ಹೋದರೆ ತಾನು ಸೇವೆ ಮಾಡುವ ದೇವಮಂದಿರದ ಗೌರವಕ್ಕೆ ಕುಂದುಬರುವುದು. ಏಕೆಂದರೆ ತನ್ನ ದೇವರ ಅಭಿಷೇಕ ತೈಲವನ್ನು ತಲೆಯ ಮೇಲೆ ಹೊಯ್ಯಿಸಿಕೊಂಡು ಪ್ರತಿಷ್ಠಿತನಾಗಿದ್ದಾನೆ. ನಾನು ಸರ್ವೇಶ್ವರ. [13]ಅವನು ಪುರುಷಸಂಪರ್ಕವೇ ಇಲ್ಲದ ಯುವತಿಯನ್ನು ಮದುವೆಮಾಡಿಕೊಳ್ಳಬೇಕೇ ಹೊರತು [14]ವಿಧವೆಯನ್ನಾಗಲಿ, ಗಂಡನಿಂದ ಬಿಡಲ್ಪಟ್ಟವಳನ್ನಾಗಲಿ, ಶೀಲಭ್ರಷ್ಟ ಸ್ತ್ರೀಯನ್ನಾಗಲಿ, ವೇಶ್ಯೆಯನ್ನಾಗಲಿ ಮದುವೆ ಮಾಡಿಕೊಳ್ಳಬಾರದು. ಸ್ವದೇಶದವರಲ್ಲಿಯೇ ಹೆಣ್ಣನ್ನು ಪರಿಗ್ರಹಿಸಬೇಕು; [15]ಇಲ್ಲವಾದರೆ ಅವನ ಸಂತತಿ ಸ್ವಜನರೊಳಗೆ ಅಪವಾದಕ್ಕೆ ಗುರಿಯಾಗುವುದು. ಅವನನ್ನು ನನ್ನ ಸೇವೆಗೆ ಪ್ರತಿಷ್ಠಿಸಿಕೊಂಡ ಸರ್ವೇಶ್ವರ ನಾನು."

16 ಆರೋನನಿಗೆ ಹೀಗೆ ಆಜ್ಞಾಪಿಸಬೇಕೆಂದು ಮೋಶೆಗೆ ಸರ್ವೇಶ್ವರ ತಿಳಿಸಿದರು: [17]"ನಿನ್ನ ಸಂತತಿಯವರಲ್ಲಿ, ತಲತಲಾಂತರದವರೆಗೂ, ಯಾವ ಅಂಗವಿಕಲನೂ ದೇವ ಆಹಾರವನ್ನು ಸಮರ್ಪಿಸಲು ನನ್ನ ಸನ್ನಿಧಿಗೆ ಬರಬಾರದು. ಅಂಗವಿಕಲನು ಈ ಸೇವೆಯನ್ನು ವಹಿಸಿಕೊಳ್ಳಲೇ ಕೂಡದು. [18]ಅವನು ಕುರುಡನಾಗಲಿ, ಕುಂಟನಾಗಲಿ, ಕೊರೆಮೂಗನಾಗಲಿ, [19]ಕೈಕಾಲು ಮುರುಕನಾಗಲಿ, [20]ಗೂನುಗುಜ್ಜಾರಿಯಾಗಲಿ, ಹೂಗಣ್ಣ ಕಾಯಿಗಣ್ಣನಾಗಲಿ, ಕಜ್ಜಿತುರಿಗಳುಳ್ಳವನಾಗಲಿ, [21]ನಪುಂಸಕನಾಗಲಿ, ಬೇರೆ ಯಾವ ಕಳಂಕವಿದ್ದವನಾಗಲಿ ಸರ್ವೇಶ್ವರನಿಗೆ ಹೋಮದ್ರವ್ಯಗಳನ್ನು ಸಮರ್ಪಿಸುವುದಕ್ಕೆ ಸನ್ನಿಧಿಗೆ ಬರಬಾರದು. ಅಂಥವನು ದೇಹದಲ್ಲಿ ದೋಷವಿರುವುದರಿಂದ ದೇವರ ಆಹಾರವನ್ನು ಸಮರ್ಪಿಸಲೇಬಾರದು. [22]ದೇವರಿಗೆ ನೈವೇದ್ಯವಾದ ಆಹಾರದಲ್ಲಿ ಪರಿಶುದ್ಧವಾದುದನ್ನೂ ಮಹಾಪರಿಶುದ್ಧವಾದುದನ್ನೂ ಅವನು ಊಟಮಾಡಬಹುದು. [23]ಆದರೆ ಅವನಿಗೆ ಕಳಂಕ ಇರುವುದರಿಂದ ತೆರೆಯನ್ನು ದಾಟಿ ಒಳಗೆ ಬರಬಾರದು; ಬಲಿಪೀಠದ ಬಳಿಗೆ ಬರಬಾರದು; ನನ್ನ ಪವಿತ್ರಸ್ಥಾನಗಳ ಗೌರವಕ್ಕೆ ಅವನಿಂದ ಕುಂದು ಉಂಟಾಗಬಾರದು; ಆ ಸ್ಥಾನಗಳನ್ನು ನನ್ನ ಸೇವೆಗೆ ಪ್ರತಿಷ್ಠಿಸಿಕೊಂಡ ಸರ್ವೇಶ್ವರ ನಾನು."

24 ಮೋಶೆ ಆರೋನನಿಗೂ ಅವನ ಮಕ್ಕಳಿಗೂ ಇಸ್ರಯೇಲರೆಲ್ಲರಿಗೂ ಈ ಆಜ್ಞೆಗಳನ್ನು ತಿಳಿಸಿದನು.

### ದೇವಾರ್ಪಿತವಾದ ಕಾಣಿಕೆಗಳು ಪವಿತ್ರವಾದುವು

**22** ಸರ್ವೇಶ್ವರಸ್ವಾಮಿ ಮೋಶೆಗೆ ಹೀಗೆಂದು ತಿಳಿಸಿದರು: [2]"ಆರೋನನು ಮತ್ತು ಅವನ ಮಕ್ಕಳು ಅಶುದ್ಧರಾಗಿರುವಾಗ ಇಸ್ರಯೇಲರಿಂದ ನನಗೆ ಸಮರ್ಪಿತವಾದ ಪರಿಶುದ್ಧ ಪದಾರ್ಥಗಳನ್ನು ಮುಟ್ಟಬಾರದೆಂದು ಆಜ್ಞಾಪಿಸು. ಅವರು ನನ್ನ ಪವಿತ್ರ ನಾಮದ ಘನತೆಗೆ ಕುಂದು ತರಬಾರದು. ನಾನು ಸರ್ವೇಶ್ವರ. [3]ಅವರಿಗೆ ಹೀಗೆಂದು ವಿಧಿಸು: ನಿಮ್ಮಲ್ಲಿಯಾಗಲಿ, ನಿಮ್ಮ ಸಂತತಿಯವರಲ್ಲಿಯಾಗಲಿ ಯಾವನಾದರು ಅಶುದ್ಧನಾಗಿರುವಾಗ, ಸರ್ವೇಶ್ವರಸ್ವಾಮಿಗೆ ಮೀಸಲೆಂದು ಇಸ್ರಯೇಲರು ಸಮರ್ಪಿಸುವ ಕಾಣಿಕೆಗಳ ಬಳಿಗೆ ಬಂದರೆ, ಅವನನ್ನು ನನ್ನ ಸಾನ್ನಿಧ್ಯ ಸೇವೆಯಿಂದ ತೆಗೆದುಹಾಕಬೇಕು. ನಾನು ಸರ್ವೇಶ್ವರ.

4 "ಆರೋನನ ಸಂತತಿಯವರಲ್ಲಿ ಯಾವನಿಗಾದರು ಕುಷ್ಠರೋಗವಾಗಲಿ, ಮೇಹವಾಗಲಿ ಇದ್ದರೆ ಅವನು ಶುದ್ಧನಾಗುವ ತನಕ ದೇವರಿಗೆ ನೈವೇದ್ಯವಾದ ಪದಾರ್ಥಗಳನ್ನು ತಿನ್ನಕೂಡದು. ಹೆಣದ ಸಂಪರ್ಕದಿಂದ ಅಶುದ್ಧವಾದುದನ್ನು ಮುಟ್ಟಿದವನು, ವೀರ್ಯಸ್ಖಲನ ಮಾಡಿಕೊಂಡವನು, [5]ಅಶುದ್ಧವಾದ ಕ್ರಿಮಿಕೀಟಮೂಷಕಾದಿಗಳನ್ನು ಅಥವಾ ಅಶುದ್ಧನಾದ ಮನುಷ್ಯನನ್ನು ಮುಟ್ಟಿದವನು ಆ ದಿನದ ಸಂಜೆಯವರೆಗೆ ಅಶುದ್ಧನಾಗಿರುವನು. [6]ಆದುದರಿಂದ ಸ್ನಾನಮಾಡುವ ತನಕ ನೈವೇದ್ಯ ಪದಾರ್ಥಗಳನ್ನು ತಿನ್ನಕೂಡದು. [7]ಹೊತ್ತು ಮುಳುಗಿದ ನಂತರ ಅವನು ಶುದ್ಧನಾಗಿ ನೈವೇದ್ಯ ಪದಾರ್ಥಗಳನ್ನು

ಊಟಮಾಡಬಹುದು. ಏಕೆಂದರೆ ಅದು ಅವನ ಜೀವನಾಂಶ. 8ತಾನಾಗಿ ಸತ್ತುಬಿದ್ದದ್ದನ್ನು ಅಥವಾ
ಕಾಡುಮೃಗ ಕೊಂದದ್ದನ್ನು ಅವನು ತಿಂದು ಅಪವಿತ್ರಮಾಡಿಕೊಳ್ಳಬಾರದು. ನಾನು ಸರ್ವೇಶ್ವರ.

9 “ಈ ನನ್ನ ಆಜ್ಞೆಗಳನ್ನು ಅವರು ಅನುಸರಿಸಿ ನಡೆಯಬೇಕು. ಇವುಗಳನ್ನು ಮೀರಿ ನನ್ನ
ನೈವೇದ್ಯವನ್ನು ಅಪವಿತ್ರಪಡಿಸಿದರೆ ಆ ದೋಷದ ಫಲವನ್ನು ಅನುಭವಿಸಿ ಸಾಯುವರು. ಅವರನ್ನು ನನ್ನ
ಸೇವೆಗೆ ಪ್ರತಿಷ್ಠಿಸಿಕೊಂಡ ಸರ್ವೇಶ್ವರ ನಾನು.

10 “ಯಾಜಕನಲ್ಲದವನು ನೈವೇದ್ಯ ಪದಾರ್ಥಗಳನ್ನು ಊಟಮಾಡಕೂಡದು. ಅಂತೆಯೇ
ಯಾಜಕನ ಅತಿಥಿಯಾಗಲಿ, ಕೂಲಿಯಾಳಾಗಲಿ ಅದನ್ನು ಊಟ ಮಾಡಬಾರದು. 11ಆದರೆ ಯಾಜಕನು
ಕೊಂಡುಕೊಂಡ ಗುಲಾಮರು, ಅವನ ಮನೆಯಲ್ಲಿ ಹುಟ್ಟಿದ ಗುಲಾಮರು ಅದನ್ನು ಊಟ ಮಾಡಬಹುದು.
12ಯಾಜಕನ ಮಗಳು ಯಾಜಕನಲ್ಲದವನಿಗೆ ಮದುವೆಯಾಗಿದ್ದರೆ ಅವಳು ಆ ನೈವೇದ್ಯ ಪದಾರ್ಥಗಳನ್ನು
ತಿನ್ನಕೂಡದು. 13ಯಾಜಕನ ಮಗಳು ವಿಧವೆಯಾಗಿದ್ದರೆ, ಗಂಡ ಬಿಟ್ಟವಳಾಗಿದ್ದರೆ, ಮಕ್ಕಳಿಲ್ಲದೆ ಇದ್ದರೆ,
ಬಾಲ್ಯದಲ್ಲಿ ತಂದೆಯ ಬಳಿ ಇದ್ದಂತೆಯೇ ಮತ್ತೆ ತಂದೆಯ ಮನೆಸೇರಿದ್ದರೆ ಆಕೆ ತಂದೆಯ ಆಹಾರದಲ್ಲಿ
ಭಾಗಿಯಾಗಬಹುದು. ಯಾಜಕರಲ್ಲದ ಇತರರು ಅದನ್ನು ಊಟಮಾಡಲೇಬಾರದು.

14 “ಯಾಜಕನಲ್ಲದವನು ತಿಳಿಯದೆ ನೈವೇದ್ಯವಾದುದ್ದನ್ನು ಊಟಮಾಡಿದರೆ ಅಷ್ಟನ್ನೂ ಹಾಗು
ಅದರ ಐದನೆಯ ಒಂದು ಭಾಗವನ್ನೂ ಯಾಜಕನಿಗೆ ತೆರಬೇಕು. 15ಇಸ್ರಯೇಲರ ಸರ್ವೇಶ್ವರನಿಗೆ
ಮೀಸಲೆಂದು ಇಟ್ಟ ನೈವೇದ್ಯ ಪದಾರ್ಥಗಳನ್ನು ಸಾಧಾರಣವೆಂದು ಅಸಡ್ಡೆ ಮಾಡಬಾರದು. 16ಹಾಗೆ
ಮಾಡಿದರೆ ತಾವು ಆ ನೈವೇದ್ಯಗಳನ್ನು ಊಟಮಾಡುವುದರಿಂದ ಪಾಪಕ್ಕೆ ಒಳಗಾಗಿ ಶಿಕ್ಷೆಗೆ ಗುರಿಯಾಗುವರು.
ನನ್ನ ಸೇವೆಗೆ ಯಾಜಕರನ್ನು ಪ್ರತಿಷ್ಠಿಸಿಕೊಂಡ ಸರ್ವೇಶ್ವರ ನಾನು.”

17 ಆರೋನನಿಗೆ, ಅವನ ಮಕ್ಕಳಿಗೆ ಹಾಗು ಇಸ್ರಯೇಲರೆಲ್ಲರಿಗೆ ಈ ಕೆಳಕಂಡಂತೆ
ಆಜ್ಞಾಪಿಸಬೇಕೆಂದು ಸರ್ವೇಶ್ವರ ಮೋಶೆಗೆ ಹೇಳಿದರು: 18“ಇಸ್ರಯೇಲರೇ ಆಗಲಿ, ಅವರ ನಡುವೆ
ವಾಸಿಸುವವರೇ ಆಗಲಿ ಹರಕೆಯಾಗಿ ಅಥವಾ ಕಾಣಿಕೆಯಾಗಿ ಸರ್ವೇಶ್ವರನಾದ ನನಗೆ ದಹನ ಬಲಿದಾನ
ಮಾಡುವಾಗ 19ಅದು ಸ್ವೀಕೃತವಾಗಬೇಕಾದರೆ ಆ ಪ್ರಾಣಿ ಕಳಂಕರಹಿತವಾದ ಗಂಡಾಗಿರಬೇಕು; ಹೋರಿ,
ಟಗರು ಅಥವಾ ಹೋತವೇ ಆಗಿರಬೇಕು. 20ಕುಂದುಕೊರತೆ ಇರುವಂಥದನ್ನು ಒಪ್ಪಿಸಬಾರದು; ಅದು
ಸ್ವೀಕೃತವಾಗುವುದಿಲ್ಲ. 21ಹರಕೆಯಾಗಿ ಅಥವಾ ಕಾಣಿಕೆಯಾಗಿ ಯಾರಾದರು ಶಾಂತಿಸಮಾಧಾನದ
ಬಲಿಯನ್ನರ್ಪಿಸಲು ಆಶಿಸಿದರೆ ಅವರು ತರುವ ದನಕರುಗಳು, ಆಡುಕುರಿಗಳು ಕಳಂಕರಹಿತವಾಗಿರಬೇಕು.
ಯಾವುದಾದರೂ ಕುಂದುಕೊರತೆ ಇದ್ದರೆ ಆ ಬಲಿದಾನ ಸ್ವೀಕೃತವಾಗುವುದಿಲ್ಲ. 22ಕುರುಡಾದುದು,
ಕುಂಟಾದುದು, ಗಾಯಗೊಂಡದ್ದು, ಹುಣ್ಣು, ಕಜ್ಜಿ, ತುರಿಉಳ್ಳದ್ದು ಇಂಥ ಪ್ರಾಣಿಗಳನ್ನು ಸರ್ವೇಶ್ವರನಿಗೆ
ಸಮರ್ಪಿಸಬಾರದು; ಬಲಿಪೀಠದ ಮೇಲೆ ಹೋಮ ಮಾಡಕೂಡದು. 23ಹೋರಿಯ ಇಲ್ಲವೆ ಕುರಿಯ
ಅವಯವಗಳಲ್ಲಿ ಏನಾದರೂ ಹೆಚ್ಚುಕಡಿಮೆ ಇದ್ದರೆ ಅದನ್ನು ಕಾಣಿಕೆಯಾಗಿ ಸಮರ್ಪಿಸಬಹುದೇ ಹೊರತು
ಹರಕೆಯಾಗಿ ಒಪ್ಪಿಸಿದರೆ ಅದು ಸ್ವೀಕೃತವಾಗುವುದಿಲ್ಲ. 24ಬೀಜ ಹೊಡೆದ, ಕುಟ್ಟಿದ, ಒಡೆದ, ಕೊಯ್ದ
ಪ್ರಾಣಿಯನ್ನು ಸರ್ವೇಶ್ವರನಿಗೆ ಸಮರ್ಪಿಸಕೂಡದು. ನಿಮ್ಮ ನಾಡಿನಲ್ಲಿ ಪ್ರಾಣಿಗಳಿಗೆ ಹೀಗೆ ಮಾಡಲೇಬಾರದು.
25ಅನ್ಯ ದೇಶದವನಿಂದ ತೆಗೆದುಕೊಂಡ ಅಂಥ ಪ್ರಾಣಿಯನ್ನು ನಿಮ್ಮ ದೇವರಿಗೆ ಆಹಾರವಾಗಿ ಒಪ್ಪಿಸಬಾರದು.
ಅದು ಕುಂದುಳ್ಳದ್ದು, ಕಳಂಕಿತವಾದದ್ದು, ಆದಕಾರಣ ಸ್ವೀಕೃತವಾಗದು.”

26 ಮೋಶೆಗೆ ಸರ್ವೇಶ್ವರ ಹೀಗೆಂದರು, 27“ಕರುವಾಗಲಿ, ಕುರಿಮರಿಯಾಗಲಿ, ಆಡುಮರಿಯಾಗಲಿ
ಹುಟ್ಟಿ ಏಳು ದಿವಸ ಆದ ಬಳಿಕ ಅದನ್ನು ಸರ್ವೇಶ್ವರನಿಗೆ ಹೋಮವಾಗಿ ಸಮರ್ಪಿಸಿದರೆ
ಅಂಗೀಕೃತವಾಗುವುದು. 28ಈದ ಹಸುವನ್ನೂ ಅದರ ಎಳೇಕರುವನ್ನೂ ಅಂತೆಯೆ ಈದ ಆಡುಕುರಿಗಳನ್ನೂ
ಅವುಗಳ ಎಳೇ ಮರಿಗಳನ್ನೂ ಒಂದೇ ದಿನದಲ್ಲಿ ವಧಿಸಬಾರದು.

29 “ನೀವು ಧನ್ಯವಾದ ಸಲ್ಲಿಸಲು ಸರ್ವೇಶ್ವರನಿಗೆ ಮಾಡುವ ಬಲಿದಾನವನ್ನು ಮೆಚ್ಚುಗೆಯಾದ
ರೀತಿಯಲ್ಲಿ ಸಮರ್ಪಿಸಬೇಕು. 30ಅದೇ ದಿವಸದಲ್ಲಿ ಅದನ್ನು ಊಟ ಮಾಡಬೇಕು. ಮರುದಿನದವರೆಗೆ
ಕಿಂಚಿತ್ತನ್ನೂ ಮಿಗಿಸಬಾರದು. ನಾನು ಸರ್ವೇಶ್ವರ.

31 “ಈ ನನ್ನ ಆಜ್ಞೆಗಳನ್ನು ನೀವು ಅನುಸರಿಸಿ ನಡೆಯಬೇಕು. ನಾನು ಸರ್ವೇಶ್ವರ. 32ನನ್ನ ಪವಿತ್ರ
ನಾಮದ ಘನತೆಗೆ ಕುಂದು ತರಬಾರದು. ಇಸ್ರಯೇಲರೆಲ್ಲರು ನನ್ನನ್ನು ಪರಿಶುದ್ಧನೆಂದು ಪರಿಗಣಿಸಬೇಕು.
ನಿಮ್ಮನ್ನು ನನ್ನ ಸೇವೆಗೆ ಪ್ರತಿಷ್ಠಿಸಿಕೊಂಡ ಸರ್ವೇಶ್ವರನು ನಾನು. 33ನಿಮಗೆ ದೇವರಾಗಿರಬೇಕೆಂದು ನಿಮ್ಮನ್ನು
ಈಜಿಪ್ಟಿನಿಂದ ಬರಮಾಡಿದೆ. ನಾನು ಸರ್ವೇಶ್ವರ.”

## ಧಾರ್ಮಿಕ ಹಬ್ಬಾಚರಣೆಗಳು

**23** ಇಸ್ರಯೇಲರಿಗೆ ಈ ಪ್ರಕಾರ ಆಜ್ಞಾಪಿಸಬೇಕೆಂದು ಸರ್ವೇಶ್ವರಸ್ವಾಮಿ ಮೋಶೆಗೆ ಹೇಳಿದರು:
2“ಸರ್ವೇಶ್ವರನಿಂದ ನೇಮಕವಾದ ಹಬ್ಬದಿನಗಳಲ್ಲಿ ದೇವಾರಾಧನೆಗಾಗಿ ಜನರು ಸಭೆಸೇರಬೇಕು. ಹಾಗೆ
ನೇಮಕವಾದ ಹಬ್ಬದ ದಿನಗಳು ಇವು: 3ಆರು ದಿನಗಳಲ್ಲಿ ನೀವು ದುಡಿದು ಕೆಲಸಮಾಡಬೇಕು. ಏಳನೆಯ
ದಿನ ಯಾವ ದುಡಿಮೆಯನ್ನೂ ಮಾಡಬಾರದ ಸಬ್ಬತ್‌ದಿನ. ಅಂದು ದೇವರ ಆರಾಧನೆಗಾಗಿ ಸಭೆಸೇರಬೇಕು.
ಆ ದಿನದಲ್ಲಿ ಯಾವ ವಿಧವಾದ ದುಡಿಮೆಯನ್ನೂ ಮಾಡಕೂಡದು. ನಿಮ್ಮ ನಿಮ್ಮ ನಿವಾಸಸ್ಥಳಗಳಲ್ಲೇ ಅದು
ಸರ್ವೇಶ್ವರನಿಗೆ ಮೀಸಲಾದ ವಿಶ್ರಾಂತಿ ದಿನವಾಗಿರಬೇಕು. 4ಸರ್ವೇಶ್ವರನಿಂದ ನೇಮಕವಾದ ಹಬ್ಬದ
ಕಾಲಗಳಲ್ಲಿ ದೇವರ ಆರಾಧನೆಗಾಗಿ ಸಭೆಸೇರಬೇಕು. ಆ ಹಬ್ಬದ ದಿನಗಳನ್ನು ನಿಯಮಿತ ಕಾಲದಲ್ಲಿ
ಪ್ರಕಟಿಸಬೇಕು:

## ಪಾಸ್ಕ ಮತ್ತು ಹುಳಿರಹಿತ ರೊಟ್ಟಿಯ ಹಬ್ಬ

(ಸಂಖ್ಯಾ. 28.16–25)

5 “ಮೊದಲನೆಯ ತಿಂಗಳಿನ ಹದಿನಾಲ್ಕನೆಯ ದಿನದ ಸಂಜೆ ವೇಳೆಯಲ್ಲಿ ಸರ್ವೇಶ್ವರ ನೇಮಿಸಿದ
ಪಾಸ್ಕಹಬ್ಬವಾಗಬೇಕು. 6ಅದೇ ತಿಂಗಳಿನ ಹದಿನೈದನೆಯ ದಿನದಲ್ಲಿ ಹುಳಿಯಿಲ್ಲದ ರೊಟ್ಟಿಯನ್ನು ತಿನ್ನುವ
ಹಬ್ಬವನ್ನು ಸರ್ವೇಶ್ವರನ ಗೌರವಾರ್ಥ ಆಚರಿಸಬೇಕು. ಅಂದು ಮೊದಲ್ಗೊಂಡು ಏಳು ದಿನಗಳಲ್ಲೂ
ಹುಳಿರಹಿತ ರೊಟ್ಟಿಯನ್ನು ಊಟ ಮಾಡಬೇಕು. 7ಮೊದಲನೆಯ ದಿನ ದೇವಾರಾಧನೆಗಾಗಿ ಸಭೆಸೇರಬೇಕು.
ಆ ದಿನ ಯಾವ ದುಡಿಮೆಯನ್ನೂ ಮಾಡಬಾರದು. 8ಆ ಏಳು ದಿನಗಳಲ್ಲೂ ನೀವು ಸರ್ವೇಶ್ವರನಿಗೆ
ದಹನಬಲಿಗಳನ್ನು ಸಮರ್ಪಿಸಬೇಕು. ಏಳನೆಯ ದಿನ ದೇವಾರಾಧನೆಗಾಗಿ ಸಭೆಸೇರಬೇಕು. ಅಂದು ಯಾವ
ದುಡಿಮೆಯನ್ನೂ ಕೈಗೊಳ್ಳಬಾರದು.”

9 ಮೋಶೆಯ ಮುಖಾಂತರ ಇಸ್ರಯೇಲರಿಗೆ ಸರ್ವೇಶ್ವರ ಹೀಗೆ ಆಜ್ಞಾಪಿಸಿದರು: 10“ನಾನು ನಿಮಗೆ
ಕೊಡುವ ನಾಡನ್ನು ನೀವು ಸೇರಿದ ನಂತರ ಅಲ್ಲಿನ (ಜವೆಗೋದಿ) ಪೈರನ್ನು ಕೊಯ್ಯುವಾಗ ಪ್ರಥಮ ಫಲದ
ಸಿವುಡನ್ನು ಯಾಜಕನ ಬಳಿಗೆ ತಂದೊಪ್ಪಿಸಬೇಕು. 11ನೀವು ಅಂಗೀಕೃತರಾಗುವಂತೆ ಯಾಜಕನು ಅದನ್ನು
ಸರ್ವೇಶ್ವರನ ಸನ್ನಿಧಿಯಲ್ಲಿ ನೈವೇದ್ಯವಾಗಿ ಆರತಿಯೆತ್ತಬೇಕು. ಆ ಸಿವುಡನ್ನು ನೈವೇದ್ಯವಾಗಿ ಆರತಿಯೆತ್ತುವ
ದಿನದಂದೇ 12ನೀವು ಒಂದು ವರ್ಷದ ಕಳಂಕರಹಿತವಾದ ಟಗರನ್ನು ದಹನಬಲಿಯಾಗಿ ಸರ್ವೇಶ್ವರನಿಗೆ
ಸಮರ್ಪಿಸಬೇಕು. 13ಅದರ ಸಮೇತ ಎಣ್ಣೆಬೆರೆತ ಎರಡು ಕಿಲೋಗ್ರಾಂ ಹಿಟ್ಟನ್ನು ಧಾನ್ಯನೈವೇದ್ಯವಾಗಿ
ಅರ್ಪಿಸಬೇಕು. ಸರ್ವೇಶ್ವರನಿಗೆ ಪ್ರಿಯವಾದ ಸುವಾಸನೆಯುಂಟುಮಾಡುವುದಕ್ಕೆ ಅದನ್ನು ಬೆಂಕಿಯಲ್ಲಿ
ಹೋಮಮಾಡಬೇಕು. ಅದರೊಂದಿಗೆ ಸಮರ್ಪಿಸಬೇಕಾದ ಪಾನದ್ರವ್ಯ ಒಂದು ಲೀಟರ್ ದ್ರಾಕ್ಷಾರಸ. 14ನೀವು
ನಿಮ್ಮ ದೇವರಿಗೆ ಸಲ್ಲಿಸಬೇಕಾದ ಕಾಣಿಕೆಯನ್ನು ತಂದುಕೊಡುವವರೆಗೆ ಆ ವರ್ಷದ ಬೆಳೆಯ
ರೊಟ್ಟಿಯನ್ನಾಗಲಿ, ಸುಟ್ಟ ತೆನೆಗಳನ್ನಾಗಲಿ, ಅಥವಾ ಹಸಿತೆನೆಗಳನ್ನಾಗಲಿ ತಿನ್ನಲೇಕೂಡದು. ನೀವು
ಎಲ್ಲಿದ್ದರೂ ನಿಮಗೂ ನಿಮ್ಮ ಸಂತತಿಯವರಿಗೂ ಇದು ಶಾಶ್ವತ ನಿಯಮವಾಗಿದೆ.

## ಸುಗ್ಗಿ ಹಬ್ಬ

(ಸಂಖ್ಯಾ. 28.26–31)

15 “ಸಬ್ಬತ್‍ದಿನದ ಮಾರನೆಯ ದಿನ ಮೊದಲ್ಗೊಂಡು, ಅಂದರೆ ಆ ಪ್ರಥಮ ಸಿವುಡನ್ನು
ನೈವೇದ್ಯವಾಗಿ ಆರತಿ ಎತ್ತಿದ ದಿನ ಮೊದಲುಗೊಂಡು, ಪೂರ್ಣವಾಗಿ ಏಳುವಾರಗಳು ಮುಗಿಯುವಂತೆ,
ಐವತ್ತು ದಿನಗಳನ್ನು ಎಣಿಸಬೇಕು. [16]ಏಳನೆಯ ಸಬ್ಬತ್‍ದಿನದ ಮರುದಿನದಲ್ಲಿ ಸರ್ವೇಶ್ವರನಿಗೆ ಹೊಸ
ಬೆಳೆಯ ನೈವೇದ್ಯವನ್ನು ಸಮರ್ಪಿಸಬೇಕು. [17]ನಿಮ್ಮ ನಿವಾಸಗಳಿಂದ ತಂದ ಹಿಟ್ಟಿನಲ್ಲಿ ಎರಡೆರಡು ಕಿಲೋಗ್ರಾಂ
ಹಿಟ್ಟಿನಿಂದ ಎರಡು ನೈವೇದ್ಯದ ರೊಟ್ಟಿಗಳನ್ನು ಮಾಡಬೇಕು. ಇವುಗಳನ್ನು ಹುಳಿಹಾಕಿದ ಗೋದಿಯ
ಹಿಟ್ಟಿನಿಂದ ಮಾಡಿ ಪ್ರಥಮಫಲವಾಗಿ ಸರ್ವೇಶ್ವರನಿಗೆ ಸಮರ್ಪಿಸಬೇಕು. [18]ಆ ರೊಟ್ಟಿಗಳೊಡನೆ ಒಂದು
ವರ್ಷದ ಕಳಂಕರಹಿತವಾದ ಏಳು ಕುರಿಗಳನ್ನೂ ಒಂದು ಹೋರಿಯನ್ನೂ ಎರಡು ಟಗರುಗಳನ್ನೂ
ಸಮರ್ಪಿಸಬೇಕು. ಇವು ಧಾನ್ಯದ್ರವ್ಯದೊಡನೆಯೂ ಪಾನದ್ರವ್ಯದೊಡನೆಯೂ ಅಗ್ನಿ ಮೂಲಕ ಸರ್ವೇಶ್ವರನಿಗೆ
ಪ್ರಿಯವಾದ ಸುವಾಸನೆಯನ್ನುಂಟು ಮಾಡುವ ದಹನಬಲಿದಾನಗಳಾಗುವುವು. [19]ಅದಲ್ಲದೆ,
ದೋಷಪರಿಹಾರಕ ಬಲಿ ಆಗಿ ಒಂದು ಹೋತವನ್ನೂ, ಶಾಂತಿಸಮಾಧಾನ ಬಲಿಯಾಗಿ ಒಂದು ವರ್ಷದ
ಎರಡು ಟಗರುಗಳನ್ನೂ ಸಮರ್ಪಿಸಬೇಕು. [20]ಯಾಜಕನು ಇವುಗಳನ್ನೂ ಪ್ರಥಮಫಲದ ರೊಟ್ಟಿಗಳನ್ನೂ
ಎರಡು ಕುರಿಗಳನ್ನೂ ಸರ್ವೇಶ್ವರನ ಸನ್ನಿಧಿಯಲ್ಲಿ ನೈವೇದ್ಯವಾಗಿ ಆರತಿಯೆತ್ತಬೇಕು. ಅವು ಸರ್ವೇಶ್ವರನಿಗೆ
ಮೀಸಲಾಗಿ ಯಾಜಕನಿಗೆ ಸಲ್ಲಬೇಕು. [21]ಆ ದಿವಸದಲ್ಲಿ ದೇವಾರಾಧನೆಗಾಗಿ ಸಭೆಕೂಡಬೇಕೆಂದು
ಪ್ರಕಟಿಸಬೇಕು. ಅಂದು ಯಾವ ದುಡಿಮೆಯನ್ನೂ ಕೈಗೊಳ್ಳಬಾರದು. ನೀವು ಎಲ್ಲೇ ಇರಲಿ, ಇದು ನಿಮಗೂ
ನಿಮ್ಮ ಸಂತತಿಯವರಿಗೂ ಶಾಶ್ವತ ನಿಯಮವಾಗಿರುವುದು.

22 “ನಿಮ್ಮ ನಾಡಿನ ಹೊಲ ಕೊಯ್ಯುವಾಗ ಮೂಲೆ ಮೂಲೆಗಳಲ್ಲಿರುವುದನ್ನೆಲ್ಲಾ ಕೊಯ್ಯಬಾರದು,
ಹಕ್ಕಲನ್ನೂ ಆಯಬಾರದು. ಬಡವರಿಗಾಗಿ ಹಾಗು ಪರದೇಶಿಗಳಿಗಾಗಿ ಬಿಟ್ಟುಬಿಡಬೇಕು. ನಾನು ನಿಮ್ಮ
ದೇವರಾಗಿರುವ ಸರ್ವೇಶ್ವರ.”

## ಹೊಸವರ್ಷದ ಹಬ್ಬ

(ಸಂಖ್ಯಾ. 29.1–6)

23 ಸರ್ವೇಶ್ವರ ಇಸ್ರಯೇಲರಿಗೆ ಹೀಗೆ ಆಜ್ಞಾಪಿಸಬೇಕೆಂದು ಹೇಳಿದರು: [24]“ನೀನು ಏಳನೆಯ
ತಿಂಗಳಿನ ಮೊದಲನೆಯ ದಿನ ನಿಮಗೆ ಸಂಪೂರ್ಣ ವಿರಾಮವಿರಬೇಕು. ಅದನ್ನು ತುತೂರಿಗಳ ಧ್ವನಿಯಿಂದ
ಪ್ರಕಟಪಡಿಸಬೇಕು. ದೇವಾರಾಧನೆಗಾಗಿ ಸಭೆಕೂಡಬೇಕು. [25]ಆ ದಿನ ಯಾವ ದುಡಿಮೆಯನ್ನೂ
ಮಾಡಬಾರದು; ಸರ್ವೇಶ್ವರನಿಗೆ ದಹನಬಲಿಯನ್ನು ಸಮರ್ಪಿಸಬೇಕು.”

## ಪಾಪಪರಿಹಾರಕ ದಿನ

(ಸಂಖ್ಯಾ. 29.7–11)

26 ಸರ್ವೇಶ್ವರ ಮೋಶೆಗೆ ಹೇಳಿದ ಮಾತುಗಳಿವು: [27]“ಅದೇ ಏಳನೆಯ ತಿಂಗಳಿನ ಹತ್ತನೆಯ
ದಿನವನ್ನು ಸರ್ವದೋಷಪರಿಹಾರ ದಿನವನ್ನಾಗಿ ಆಚರಿಸಬೇಕು. ಅಂದು ದೇವಾರಾಧನೆಗಾಗಿ
ಸಭೆಕೂಡಬೇಕು. ಪೂರ್ಣವಾಗಿ ಉಪವಾಸ ಮಾಡಬೇಕು. ಸರ್ವೇಶ್ವರನ ಸನ್ನಿಧಿಯಲ್ಲಿ ದಹನ
ಬಲಿದಾನಮಾಡಬೇಕು. [28]ಆ ದಿನದಂದು ಯಾವ ದುಡಿಮೆಯನ್ನೂ ಕೈಗೊಳ್ಳಬಾರದು. ಅದು ದೋಷ
ಪರಿಹಾರಕ ದಿನ. ಅಂದು ನಿಮ್ಮ ಪರವಾಗಿ ನಿಮ್ಮ ದೇವರಾದ ಸರ್ವೇಶ್ವರನ ಸನ್ನಿಧಿಯಲ್ಲಿ ದೋಷಪರಿಹಾರಕ
ಆಚರಣೆ ನಡೆಯುವುದು. [29]ಯಾವನಾದರು ಆ ದಿನದಲ್ಲಿ ಉಪವಾಸ ಮಾಡದೆ ಹೋದರೆ ಅವನನ್ನು
ಕುಲದಿಂದ ತೆಗೆದುಹಾಕಬೇಕು. [30]ಯಾವನಾದರು ಆ ದಿನ ಕಿಂಚಿತ್ತಾದರು ದುಡಿದರೆ ಅವನನ್ನು
ಇಸ್ರಯೇಲರಿಂದ ಅಳಿಸಿ ಬಿಡುವೆನು. [31]ಆ ದಿನ ಯಾವ ದುಡಿಮೆಯನ್ನೂ ಮಾಡಬಾರದು. ನೀವು ಎಲ್ಲೇ
ವಾಸವಾಗಿದ್ದರೂ, ನಿಮಗೂ ನಿಮ್ಮ ಸಂತತಿಯವರಿಗೂ ಇದು ಶಾಶ್ವತ ನಿಯಮ. [32]ಆ ದಿನವು ಸಂಪೂರ್ಣ

ವಿರಾಮವುಳ್ಳ ವಿಶ್ರಾಂತಿ ದಿನವಾಗಿರಬೇಕು. ಅಂದು ಉಪವಾಸದಿಂದಿರಬೇಕು. ಆ ತಿಂಗಳಿನ ಒಂಬತ್ತನೆಯ ದಿನದ ಸಂಜೆ ಪ್ರಾರಂಭಿಸಿ ಮರುದಿನದ ಸಂಜೆಯವರೆಗೆ ನೀವು ಆ ವಿರಾಮ ದಿನವನ್ನು ಆಚರಿಸಬೇಕು."

## ಪರ್ಣಕುಟೀರಗಳ ಹಬ್ಬ

(ಸಂಖ್ಯಾ. 29.12–40)

33 ಇಸ್ರಯೇಲರಿಗೆ ಹೀಗೆ ಆಜ್ಞಾಪಿಸಬೇಕೆಂದು ಸರ್ವೇಶ್ವರ ಮೋಶೆಗೆ ತಿಳಿಸಿದರು: [34]"ಏಳನೆಯ
ತಿಂಗಳಿನ ಹದಿನೈದನೆಯ ದಿನ ಮೊದಲ್ಗೊಂಡು ಏಳು ದಿನದವರೆಗೆ ಪರ್ಣಕುಟೀರಗಳ ಜಾತ್ರೆಯನ್ನು
ಸರ್ವೇಶ್ವರನ ಗೌರವಾರ್ಥ ಆಚರಿಸಬೇಕು. [35]ಮೊದಲನೆಯ ದಿನ ದೇವಾರಾಧನೆಗಾಗಿ ಸಭೆ ಸೇರಬೇಕು;
ಯಾವ ದುಡಿಮೆಯನ್ನೂ ಕೈಗೊಳ್ಳಬಾರದು. [36]ಆ ಏಳು ದಿನಗಳಲ್ಲೂ ನೀವು ಸರ್ವೇಶ್ವರನ ಸನ್ನಿಧಿಯಲ್ಲಿ
ದಹನಬಲಿದಾನ ಮಾಡಬೇಕು. ಎಂಟನೆಯ ದಿನದಂದು ದೇವ ಆರಾಧನೆಗಾಗಿ ಸಭೆಸೇರಬೇಕು.
ಸರ್ವೇಶ್ವರನ ಸನ್ನಿಧಿಯಲ್ಲಿ ದಹನಬಲಿದಾನ ಮಾಡಬೇಕು. ಅದು ಸಭೆಸೇರುವ ದಿನವಾದುದರಿಂದ ಅಂದು
ಎಲ್ಲ ದುಡಿಮೆಯನ್ನು ನಿಲ್ಲಿಸಬೇಕು.

37 "ಸರ್ವೇಶ್ವರ ನೇಮಿಸಿರುವ ಸಬ್ಬತ್ ದಿನಗಳನ್ನು ಮತ್ತು ಮೇಲೆ ಹೇಳಿದ ಸ್ವಾಮಿಯ ಹಬ್ಬದ
ದಿನಗಳನ್ನು ನೀವು ಆಚರಿಸಬೇಕು. ಆ ದಿನಗಳಲ್ಲಿ ದೇವಾರಾಧನೆಗಾಗಿ ಸಭೆಸೇರುವಂತೆ ಜನರಿಗೆ
ಪ್ರಕಟಿಸಬೇಕು. [38]ಸರ್ವೇಶ್ವರನಿಗೆ ಒಪ್ಪಿಸಬೇಕಾದ ಕಪ್ಪಕಾಣಿಕೆಗಳನ್ನೂ ಹರಕೆಗಳನ್ನೂ ಸಲ್ಲಿಸಬೇಕಲ್ಲವೆ, ಮೇಲೆ
ಸೂಚಿಸಿರುವ ಹಬ್ಬಗಳಲ್ಲಿ ಆಯಾ ದಿನಕ್ಕೆ ನೇಮಿಸಿರುವ ಪ್ರಕಾರ ದಹನಬಲಿ, ನೈವೇದ್ಯದ್ರವ್ಯ, ಶಾಂತಿ
ಸಮಾಧಾನದ ಬಲಿ, ಪಾನದ್ರವ್ಯ ಇವುಗಳನ್ನು ತಂದು ಸರ್ವೇಶ್ವರನ ಸನ್ನಿಧಿಯಲ್ಲಿ ಹೋಮಮಾಡಬೇಕು.

39 "ಏಳನೆಯ ತಿಂಗಳಿನ ಹದಿನೈದನೆಯ ದಿನದಲ್ಲಿ ನೀವು ತೋಟ-ತೋಪುಗಳ ಬೆಳೆಯನ್ನು
ಕೂಡಿಸಿದ ನಂತರ ಸರ್ವೇಶ್ವರ ನೇಮಿಸಿದ ಪರ್ಣಕುಟೀರಗಳ ಜಾತ್ರೆಯನ್ನು ಏಳು ದಿನದವರೆಗೂ
ಆಚರಿಸಬೇಕು. ಮೊದಲನೆಯ ದಿನದಲ್ಲಿ ಹಾಗು ಎಂಟನೆಯ ದಿನದಲ್ಲಿ ಎಲ್ಲ ದುಡಿಮೆಯನ್ನು ನಿಲ್ಲಿಸಿ
ಸಂಪೂರ್ಣ ವಿರಾಮದಿಂದಿರಬೇಕು.

40 "ಮೊದಲನೆಯ ದಿನ ಮರಗಳಿಂದ ಒಳ್ಳೊಳ್ಳೆಯ ಹಣ್ಣುಗಳನ್ನು, ಖರ್ಜೂರ ಮರದ
ಗರಿಗಳನ್ನು, ಎಲೆಗಳು ದಟ್ಟವಾಗಿರುವ ಮರಗಳ ಕೊಂಬೆಗಳನ್ನು ಮತ್ತು ನೀರಿನ ಕಾಲುವೆಗಳ ಬಳಿ
ಬೆಳೆಯುವ ನೀರವಂಜಿ ಚಿಗುರುಗಳನ್ನು ತೆಗೆದುಕೊಂಡು ಬಂದು ಸರ್ವೇಶ್ವರನ ಸನ್ನಿಧಿಯಲ್ಲಿ ಏಳುದಿನಗಳೂ
ಸಂಭ್ರಮದಿಂದಿರಬೇಕು. [41]ಹೀಗೆ ಪ್ರತಿವರ್ಷ ಏಳು ದಿನಗಳ ತನಕ ಈ ಉತ್ಸವವನ್ನು ಆಚರಿಸಬೇಕು.
ನಿಮಗೂ ನಿಮ್ಮ ಸಂತತಿಯವರಿಗೂ ಇದು ಶಾಶ್ವತ ನಿಯಮ. ಏಳನೆಯ ತಿಂಗಳಲ್ಲಿ ಇದನ್ನು ಆಚರಿಸಬೇಕು.
[42]ಆ ಏಳು ದಿನಗಳು ನೀವು ಪರ್ಣಕುಟೀರಗಳಲ್ಲೇ ವಾಸವಾಗಿರಬೇಕು. ಸ್ವದೇಶೀಯರಾದ ಇಸ್ರಯೇಲರೆಲ್ಲರು
ಪರ್ಣಕುಟೀರಗಳಲ್ಲೇ ವಾಸವಾಗಿರಬೇಕು. [43]ನಾನು ನಿಮ್ಮನ್ನು ಈಜಿಪ್ಟಿನಿಂದ ಬರಮಾಡಿದಾಗ ಇಸ್ರಯೇಲರು
ಪರ್ಣಕುಟೀರಗಳಲ್ಲಿ ವಾಸವಾಗಿ ಇರುವಂತೆ ಮಾಡಿದೆನೆಂಬುದಾಗಿ ಇದರಿಂದ ನಿಮ್ಮ ಸಂತತಿಯವರಿಗೆ
ತಿಳಿಯುವುದು. ನಾನು ನಿಮ್ಮ ದೇವರಾದ ಸರ್ವೇಶ್ವರ."

44 ಹೀಗೆ ಮೋಶೆ ಸರ್ವೇಶ್ವರಸ್ವಾಮಿಯಿಂದ ನೇಮಕವಾದ ಹಬ್ಬಗಳ ವಿಷಯವಾಗಿ ಇಸ್ರಯೇಲರಿಗೆ
ವಿವರಿಸಿದನು.

## ವೃಕ್ಷಾಕಾರದ ದೀಪಸ್ತಂಭ

(ವಿಮೋ. 27.20–21)

**24** ಸರ್ವೇಶ್ವರಸ್ವಾಮಿ ಮೋಶೆಗೆ ಹೀಗೆ ಎಂದು ತಿಳಿಸಿದರು: [2]"ದೇವಸ್ಥಾನದಲ್ಲಿರುವ ದೀಪಗಳನ್ನು
ಪ್ರತಿನಿತ್ಯವೂ ಉರಿಸಬೇಕು. ಇದಕ್ಕಾಗಿ ಇಸ್ರಯೇಲರು ಎಣ್ಣೇಮರದ ಕಾಯಿಗಳನ್ನು ಕುಟ್ಟಿ ತೆಗೆದ
ನಿರ್ಮಲವಾದ ಅಪ್ಪಟ ಎಣ್ಣೆಯನ್ನು ನಿನಗೆ ತಂದುಕೊಡಬೇಕೆಂದು ಅವರಿಗೆ ಆಜ್ಞಾಪಿಸು. [3]ದೇವದರ್ಶನದ
ಗುಡಾರದಲ್ಲಿ ಆಜ್ಞಾಶಾಸನಗಳ ಮಂಜೂಷದ ಮುಂದಿರುವ ತೆರೆಯ ಹೊರಗೆ ಆ ದೀಪಗಳು

ಉರಿಯುತ್ತಿರಬೇಕು. ಅವು ಸರ್ವೇಶ್ವರನ ಸನ್ನಿಧಿಯಲ್ಲಿ ಸಾಯಂಕಾಲದಿಂದ ಉದಯದವರೆಗೆ ಉರಿಯುತ್ತಿರುವಂತೆ ಆರೋನನು ಅವುಗಳನ್ನು ಸರಿಪಡಿಸಬೇಕು. ಇದು ನಿಮಗೂ ನಿಮ್ಮ ಸಂತತಿಯವರಿಗೂ ಶಾಶ್ವತವಾದ ನಿಯಮ. 4ಆರೋನನು ಪ್ರತಿನಿತ್ಯವೂ ಸರ್ವೇಶ್ವರನ ಸನ್ನಿಧಿಯಲ್ಲಿ ಹಣತೆಗಳನ್ನು ಆ ಚೊಕ್ಕ ಬಂಗಾರದ ದೀಪವೃಕ್ಷದ ಮೇಲೆ ಸರಿಯಾಗಿ ಇಡಬೇಕು.

**ದೇವರಿಗೆ ಅರ್ಪಿತವಾದ ರೊಟ್ಟಿ**

5 “ನೀನು ಗೋದಿಯ ಹಿಟ್ಟಿನಿಂದ ಹನ್ನೆರಡು ರೊಟ್ಟಿಗಳನ್ನು ಮಾಡಬೇಕು. ಪ್ರತಿಯೊಂದು ರೊಟ್ಟಿ
ಎರಡೆರಡು ಕಿಲೋಗ್ರಾಂ ಆಗಿರಬೇಕು. 6ಅವುಗಳನ್ನು ಆರಾರರ ಮೇರೆಗೆ ಎರಡು ರಾಶಿಗಳಾಗಿ ಚೊಕ್ಕ
ಬಂಗಾರದ ಮೇಜಿನ ಮೇಲೆ ಸರ್ವೇಶ್ವರನ ಸಮ್ಮುಖದಲ್ಲಿ ಇಡಬೇಕು. 7ಒಂದೊಂದು ರಾಶಿಯ ಮೇಲೆ
ಸ್ವಚ್ಛವಾದ ಸಾಂಬ್ರಾಣಿಯನ್ನು ಇಡಬೇಕು. ಆ ರೊಟ್ಟಿಗಳ ನೈವೇದ್ಯವನ್ನು ಸೂಚಿಸಲು ಆ ಸಾಂಬ್ರಾಣಿಯನ್ನು
ಸರ್ವೇಶ್ವರನಿಗೆ ಹೋಮಮಾಡಬೇಕು. 8ಶಾಶ್ವತವಾದ ನಿಬಂಧನೆಯ ಮೇರೆಗೆ ಯಾಜಕನು ಯಾವಾಗಲು
ಪ್ರತಿ ಸಬ್ಬತ್‍ದಿನದಲ್ಲಿ ರೊಟ್ಟಿಗಳನ್ನು ತಂದು ಸರ್ವೇಶ್ವರನ ಸನ್ನಿಧಿಯಲ್ಲಿ ಕ್ರಮಪಡಿಸಿ, ಅವುಗಳನ್ನು
ಇಸ್ರಯೇಲರ ಪರವಾಗಿ ಸರ್ವೇಶ್ವರನಿಗೆ ಸಮರ್ಪಿಸಬೇಕು. 9ಅವು ಆರೋನನಿಗೂ ಅವನ
ಸಂತತಿಯವರಿಗೂ ಸಲ್ಲಬೇಕು. ಮಹಾ ಪರಿಶುದ್ಧವಾದ ಆ ರೊಟ್ಟಿಗಳನ್ನು ದೇವಸ್ಥಾನದ ಪ್ರಾಕಾರದಲ್ಲೇ
ತಿನ್ನಬೇಕು. ಅವು ಸರ್ವೇಶ್ವರನಿಗೆ ಸಮರ್ಪಿತವಾದ ದಹನದ್ರವ್ಯಗಳಿಗೆ ಸೇರಿದವುಗಳಾದುದರಿಂದ ಶಾಶ್ವತ
ನಿಯಮದ ಪ್ರಕಾರ ಯಾಜಕರಿಗೆ ಸಲ್ಲಬೇಕು.”

**ದೇವದೂಷಣೆಗೆ ತಕ್ಕ ದಂಡನೆ**

10 ಇಸ್ರಯೇಲ್ ಮಹಿಳೆಯೊಬ್ಬಳಿಗೆ ಈಜಿಪ್ಟಿನ ಪುರುಷನಿಂದ ಹುಟ್ಟಿದ ಒಬ್ಬ ವ್ಯಕ್ತಿ ಇದ್ದನು. ಇವನು
ಇಸ್ರಯೇಲರ ಪಾಳ್ಯಕ್ಕೆ ಬಂದು ಇಸ್ರಯೇಲನೊಬ್ಬನ ಸಂಗಡ ಜಗಳವಾಡಿ, ಬೈದ ಮಾತ್ರವಲ್ಲದೆ
ಸರ್ವೇಶ್ವರಸ್ವಾಮಿಯನ್ನು ದೂಷಿಸಿ ಶಾಪ ಹಾಕಿದನು. 11ಅವನನ್ನು ಮೋಶೆಯ ಬಳಿಗೆ ಹಿಡಿದು ತಂದರು.
ಆ ವ್ಯಕ್ತಿಯ ತಾಯಿ ದಾನ್ ಕುಲದ ದಿಬ್ರೀಯ ಮಗಳು; ‘ಶೆಲೋಮಿೂತ್’ ಎಂದು ಅವಳ ಹೆಸರು. 12ಅವನ
ವಿಷಯವಾಗಿ ಸರ್ವೇಶ್ವರನ ತೀರ್ಪನ್ನು ತಿಳಿದುಕೊಳ್ಳುವಷ್ಟು ಕಾಲ ಅವನನ್ನು ಕಾವಲಲ್ಲಿ ಇರಿಸಲಾಯಿತು.
13 ಆಗ ಮೋಶೆಗೆ ಸರ್ವೇಶ್ವರ ಹೀಗೆಂದು ತಿಳಿಸಿದರು: 14“ಆ ದೇವದೂಷಕನನ್ನು ಪಾಳೆಯದ
ಹೊರಗೆ ಒಯ್ಯಬೇಕು. ಅವನಾಡಿದ ದೂಷಣೆಯ ಮಾತುಗಳನ್ನು ಕೇಳಿದವರೆಲ್ಲರು ಅವನ ತಲೆಯ ಮೇಲೆ
ಕೈಚಾಚಬೇಕು. ಅನಂತರ ಸಮಾಜದವರೆಲ್ಲರು ಅವನನ್ನು ಕಲ್ಲೆಸೆದು ಕೊಲ್ಲಬೇಕು. 15ಮತ್ತು ಇಸ್ರಯೇಲರಿಗೆ
ನೀನು ಹೀಗೆ ಹೇಳಬೇಕು: ತನ್ನ ದೇವರನ್ನು ದೂಷಿಸಿದವನು ಆ ದೋಷದ ಫಲವನ್ನು ಅನುಭವಿಸಬೇಕು.
16ಸರ್ವೇಶ್ವರನ ಹೆಸರನ್ನು ನಿಂದಿಸಿದವನಿಗೆ ಮರಣಶಿಕ್ಷೆ ಯಾಗಬೇಕು; ಸಮಾಜದವರೆಲ್ಲರು ಅವನನ್ನು
ಕಲ್ಲೆಸೆದು ಕೊಲ್ಲಬೇಕು. ಅನ್ಯದೇಶೀಯನಾಗಿರಲಿ, ಸ್ವದೇಶೀಯನಾಗಿರಲಿ ಸರ್ವೇಶ್ವರನ ಹೆಸರನ್ನು
ನಿಂದಿಸಿದವನಿಗೆ ಮರಣಶಿಕ್ಷೆ ಆಗಬೇಕು.
17 “ಕೊಲೆ ಮಾಡಿದವನಿಗೆ ಮರಣದಂಡನೆ ಆಗಬೇಕು. 18ಪಶುಪ್ರಾಣಿಯನ್ನು ಹೊಡೆದು
ಕೊಂದವನಿಂದ ಅದಕ್ಕೆ ಪ್ರತಿಯಾಗಿ ಈಡನ್ನು ಕೊಡಿಸಬೇಕು; ಪ್ರಾಣಿಗೆ ಪ್ರತಿಯಾಗಿ ಪ್ರಾಣಿಯನ್ನು
ಕೊಡಿಸಬೇಕು. 19ಯಾವನಾದರು ಮತ್ತೊಬ್ಬನನ್ನು ಅಂಗಹೀನನನ್ನಾಗಿ ಮಾಡಿದರೆ ಅವನು ಮಾಡಿದಂತೆಯೆ
ಅವನಿಗೆ ಮಾಡಿಸಬೇಕು. 20ಅವಯವವನ್ನು ಮುರಿಯುವುದೇ ಶಿಕ್ಷೆ. ಕಣ್ಣಿಗೆ ಪ್ರತಿಯಾಗಿ ಕಣ್ಣು, ಹಲ್ಲಿಗೆ
ಪ್ರತಿಯಾಗಿ ಹಲ್ಲು ಕೀಳಿಸಬೇಕು. ಮತ್ತೊಬ್ಬನನ್ನು ಅಂಗವಿಕಲನನ್ನಾಗಿ ಮಾಡಿದವನಿಗೆ ಅದೇ ರೀತಿ ಪ್ರತೀಕಾರ
ಮಾಡಿಸಬೇಕು. 21ಪಶುಪ್ರಾಣಿಯನ್ನು ಕೊಂದವನು ಅದಕ್ಕೆ ಬದಲಾಗಿ ಈಡುಕೊಡಬೇಕು; ಮನುಷ್ಯನನ್ನು
ಕೊಂದವನಿಗೆ ಮರಣಶಿಕ್ಷೆಯಾಗಬೇಕು. 22ಅನ್ಯರಿಗಾಗಲಿ ಸ್ವಜನರಿಗಾಗಲಿ ಪಕ್ಷಪಾತವಿಲ್ಲದೆ ಒಂದೇ
ನಿಯಮವಿರಬೇಕು. ನಾನು ನಿಮ್ಮ ದೇವರಾದ ಸರ್ವೇಶ್ವರ.”

23 ಮೋಶೆ ಈ ಮಾತುಗಳನ್ನು ಇಸ್ರಯೇಲರಿಗೆ ತಿಳಿಸಿದನು. ಅವರು ಆ ದೂಷಕನನ್ನು ಪಾಳೆಯದ ಹೊರಕ್ಕೆ ತೆಗೆದುಕೊಂಡು ಹೋಗಿ ಕಲ್ಲೆಸೆದು ಕೊಂದರು. ಸರ್ವೇಶ್ವರಸ್ವಾಮಿ ಮೋಶೆಗೆ ಆಜ್ಞಾಪಿಸಿದಂತೆಯೇ ಇಸ್ರಯೇಲರು ಮಾಡಿದರು.

## ಜೂಬಿಲಿ ವರ್ಷ

(ಧರ್ಮೋ. 15.1-11)

**25** ಇಸ್ರಯೇಲರಿಗೆ ಹೀಗೆ ಆಜ್ಞಾಪಿಸಬೇಕೆಂದು ಸರ್ವೇಶ್ವರಸ್ವಾಮಿ ಮೋಶೆಗೆ ಸೀನಾಯಿ ಬೆಟ್ಟದಲ್ಲಿ ಹೇಳಿದರು:

2 "ಸರ್ವೇಶ್ವರ ನಿಮಗೆ ಕೊಡುವ ನಾಡಿಗೆ ನೀವು ಬಂದಾಗ ಆ ನಾಡು ಸರ್ವೇಶ್ವರನ ಗೌರವಾರ್ಥ
ಸಬ್ಬತ್ ವಿಶ್ರಾಂತಿಯನ್ನು ಆಚರಿಸಬೇಕು. 3ಆರು ವರ್ಷಗಳು ನೀವು ಹೊಲದಲ್ಲಿ ಬಿತ್ತನೆ ಮಾಡಬಹುದು.
ದ್ರಾಕ್ಷಿತೋಟದ ಕೆಲಸವನ್ನು ಮಾಡಬಹುದು. ಹೊಲ ತೋಟಗಳ ಬೆಳೆಗಳನ್ನು ಸಂಗ್ರಹಿಸಬಹುದು. 4ಆದರೆ
ಏಳನೆಯ ವರ್ಷ ಯಾವ ವ್ಯವಸಾಯವನ್ನೂ ಮಾಡಬಾರದು. ಅದು ವಿಶ್ರಾಂತಿ ಕಾಲವಾಗಿಯೂ
ಸರ್ವೇಶ್ವರನ ಗೌರವಾರ್ಥ ಸಬ್ಬತ್ ಕಾಲವಾಗಿಯೂ ಇರಬೇಕು. ಆ ವರ್ಷ ಹೊಲದಲ್ಲಿ ವ್ಯವಸಾಯ
ಮಾಡಬಾರದು; ದ್ರಾಕ್ಷೀ ತೋಟದ ಕೆಲಸವನ್ನೂ ಕೈಬಿಡಬೇಕು. 5ಹೊಲದಲ್ಲಿ ತಾನಾಗಿ ಬೆಳೆದ ಫಸಲನ್ನು
ನೀವು ಕೂಡಿಸಿಟ್ಟುಕೊಳ್ಳಬಾರದು; ತಾನಾಗಿಯೇ ಬೆಳೆದ ದ್ರಾಕ್ಷಿಹಣ್ಣನ್ನು ಶೇಖರಿಸಿಟ್ಟುಕೊಳ್ಳಬಾರದು. ಆ ವರ್ಷ
ಪೂರ್ತಿ ಭೂಮಿಗೆ ಸಂಪೂರ್ಣ ವಿಶ್ರಾಂತಿಯಿರಬೇಕು. 6ಆದರೆ ಅಂಥ ಸಬ್ಬತ್ ಸಂವತ್ಸರದಲ್ಲಿ ಭೂಮಿ
ತಾನಾಗಿಯೇ ಬೆಳೆದದ್ದು ನಿಮಗೆ, ನಿಮ್ಮ ದಾಸ ದಾಸಿಯರಿಗೆ, ಕೂಲಿಯವರಿಗೆ 7ಮತ್ತು ನಿಮ್ಮಲ್ಲಿ ತಂಗಿರುವ
ಪರದೇಶೀಯರಿಗೆ ಹಾಗು ನಿಮ್ಮ ಪಶುಪ್ರಾಣಿಗಳಿಗೆ ಮತ್ತು ನಾಡಿನ ಕಾಡು ಮೃಗಗಳಿಗೆ ಆಹಾರವಾಗಬಹುದು.

## ಜೂಬಿಲಿ ವರ್ಷ ಪ್ರಾಯಶ್ಚಿತ್ತ ವರ್ಷ

8 "ಅದಲ್ಲದೆ, ಏಳುವರ್ಷಕ್ಕೆ ಒಂದರಂತೆ ಏಳು ಸಬ್ಬತ್ ವರ್ಷಗಳನ್ನು ಎಣಿಸಬೇಕು. ಆ ಏಳು
ಸಬ್ಬತ್ ಸಂವತ್ಸರಗಳ ಕಾಲ, ಅಂದರೆ ನಾಲ್ವತ್ತೊಂಬತ್ತು ವರ್ಷಗಳು ಕಳೆದ ಮೇಲೆ 9ಏಳನೆಯ ತಿಂಗಳಿನ
ಹತ್ತನೆಯ ದಿವಸ ನಿಮ್ಮ ನಾಡಿನಲ್ಲೆಲ್ಲಾ ಕೊಂಬೂದಿಸಬೇಕು. 10ನೀವು ಆ ಐವತ್ತನೆಯ ವರ್ಷವನ್ನು ದೇವರಿಗೆ
ಮೀಸಲಾದ ವರ್ಷವೆಂದು ಭಾವಿಸಬೇಕು. ಆ ವರ್ಷ ನಾಡಿನ ನಿವಾಸಿಗಳೆಲ್ಲರಿಗೂ ಬಿಡುಗಡೆಯಾಯಿತೆಂದು
ಸಾರಬೇಕು. ಅದು 'ಜೂಬಿಲಿ' ಸಂವತ್ಸರವಾದುದರಿಂದ ನೀವೆಲ್ಲರು ನಿಮ್ಮ ನಿಮ್ಮ ಸ್ವಂತ ಭೂಮಿಗಳಿಗೂ
ಹಾಗು ಸ್ವಜನರ ಬಳಿಗೂ ಹೋಗಿ ಇರಬಹುದು. 11ಆ ಐವತ್ತನೆಯ ವರ್ಷದಲ್ಲಿ, ಅಂದರೆ 'ಜೂಬಿಲಿ'
ಸಂವತ್ಸರದಲ್ಲಿ ನೀವು ಬಿತ್ತನೆ ಮಾಡಬಾರದು; ತಾನಾಗಿ ಬೆಳೆದ ಫಸಲನ್ನು ಕೂಡಿಸಿಟ್ಟುಕೊಳ್ಳಬಾರದು; ನೀವು
ಕೃಷಿಮಾಡದೆ ಬಿಟ್ಟ ದ್ರಾಕ್ಷಿತೋಟದ ಹಣ್ಣನ್ನು ಸಂಗ್ರಹಿಸಬಾರದು. 12ಅದು ಜೂಬಿಲಿ ವರ್ಷವಾದುದರಿಂದ
ನೀವು ಅದನ್ನು ಮೀಸಲಾದದ್ದೆಂದು ಭಾವಿಸಬೇಕು. ಹೊಲದಲ್ಲಿ ತಾನಾಗಿ ಬೆಳೆದದ್ದನ್ನು
ಊಟಮಾಡಬಹುದು.

13 ಜೂಬಿಲಿ ವರ್ಷದಲ್ಲಿ ನಿಮ್ಮ ನಿಮ್ಮ ಸ್ವಂತ ಭೂಮಿಗಳು ಮರಳಿ ನಿಮ್ಮ ವಶಕ್ಕೆ ಬರುವುವು.
14ನೀವು ಸ್ಥಿರಸೊತ್ತನ್ನು ಸ್ವದೇಶದವರೊಡನೆ ಕ್ರಯ-ವಿಕ್ರಯ ಮಾಡುವಾಗ ಇದರ ವಿಷಯದಲ್ಲಿ ಅನ್ಯಾಯ
ಮಾಡಬಾರದು. 15ಕಳೆದ ಜೂಬಿಲಿ ವರ್ಷದಿಂದ ಇಷ್ಟು ವರ್ಷ ಆಯಿತೆಂದು ಲೆಕ್ಕಿಸಿ ಸ್ವದೇಶದವನಿಂದ
ಕ್ರಯಕ್ಕೆ ತೆಗೆದುಕೊಳ್ಳಬೇಕು; ಅಂತೆಯೇ ಮಾರುವವನು ಇಷ್ಟು ವರ್ಷಗಳ ಬೆಳೆಯಾಯಿತೆಂದು ಲೆಕ್ಕಿಸಿ ಕ್ರಯಕ್ಕೆ
ಕೊಡಬೇಕು. 16ಮುಂದಣ ಜೂಬಿಲಿ ಸಂವತ್ಸರದ ತನಕ ಹೆಚ್ಚು ವರ್ಷಗಳಾದರೆ ಭೂಮಿಯ ಕ್ರಯವನ್ನು
ಹೆಚ್ಚಿಸಬೇಕು; ಕಡಿಮೆಯಾದರೆ ತಗ್ಗಿಸಬೇಕು. ಏಕೆಂದರೆ ಮಾರುವವನು ಭೂಮಿಯನ್ನಲ್ಲ, ಬೆಳೆಗಳನ್ನು ಲೆಕ್ಕಿಸಿ
ಮಾರುತ್ತಾನಷ್ಟೆ. 17ಆದುದರಿಂದ ನೀವು ಒಬ್ಬರಿಗೊಬ್ಬರು ಅನ್ಯಾಯ ಮಾಡಬಾರದು. ನಿಮ್ಮ ದೇವರಲ್ಲಿ
ಭಯಭಕ್ತಿ ಉಳ್ಳವರಾಗಿರಬೇಕು. ನಾನು ನಿಮ್ಮ ದೇವರಾದ ಸರ್ವೇಶ್ವರ.

## ಸಬ್ಬತ್ ಸಂವತ್ಸರದ ಸಮಸ್ಯೆ

18 “ನನ್ನ ಆಜ್ಞಾವಿಧಿಗಳನ್ನು ನೀವು ಅನುಸರಿಸಿ ನಡೆಯಬೇಕು. ಆಗ ನೀವು ನಾಡಿನಲ್ಲಿ
ನಿರ್ಭಯವಾಗಿ ಬಾಳುವಿರಿ. 19ನಿಮ್ಮ ಭೂಮಿ ಫಲವತ್ತಾಗುವುದು; ನಿಮಗೆ ಸಮೃದ್ಧಿಯಾದ ಊಟ
ದೊರಕುವುದು ಮತ್ತು ಆ ನಾಡಿನಲ್ಲಿ ನಿರ್ಭಯವಾಗಿ ವಾಸಮಾಡುವಿರಿ.

20 “ಆದರೆ ಆ ಏಳನೆಯ ವರ್ಷದಲ್ಲಿ ಬಿತ್ತನೆ ಮಾಡುವುದಕ್ಕಾಗಲಿ, ಬೆಳೆದದ್ದನ್ನು ಕೂಡಿಸಿಟ್ಟು
ಕೊಳ್ಳುವುದಕ್ಕಾಗಲಿ ಅಪ್ಪಣೆಯಿರುವುದಿಲ್ಲ. ಹಾಗಾದರೆ ಆ ವರ್ಷ ಏನು ತಿನ್ನಬೇಕೆಂದು ವಿಚಾರಿಸುತ್ತೀರೋ?
ನಾನು ಹೇಳುವುದನ್ನು ಕೇಳಿ: 21ಆರನೆಯ ವರ್ಷದ ಬೆಳೆ ನನ್ನ ಪೂರ್ಣಾನುಗ್ರಹದಿಂದ ಮೂರು ವರ್ಷಗಳ
ಬೆಳೆಯಷ್ಟಾಗುವುದು. 22ಎಂಟನೆಯ ವರ್ಷದಲ್ಲಿ ಬಿತ್ತನೆ ಮಾಡಿ ಅದರ ಬೆಳೆ ದೊರೆಯುವ ತನಕ, ಅಂದರೆ
ಒಂಬತ್ತನೆಯ ವರ್ಷದವರೆಗೆ ಹಿಂದಿನ ಬೆಳೆಯಿಂದಲೇ ಜೀವನ ಮಾಡುವಿರಿ.

## ಆಸ್ತಿಪಾಸ್ತಿಗಳ ಬಿಡುಗಡೆ

23 “ಭೂಮಿಯನ್ನು ಶಾಶ್ವತವಾಗಿ ವಿಕ್ರಯಿಸಿ ಬಿಡಬಾರದು. ಏಕೆಂದರೆ ಭೂಮಿ ನನ್ನದು.
ನೀವಾದರೋ ಪರವಾಸಿಗಳು, ನನ್ನ ಆಶ್ರಯದಲ್ಲಿ ತಂಗಿರುವವರು.

24 “ನಿಮ್ಮಲ್ಲಿ ಮತ್ತೊಬ್ಬನ ಸೊತ್ತು ನಿಮ್ಮ ವಶಕ್ಕೆ ಬಂದರೆ ಅದನ್ನು ಈಡುಕೊಟ್ಟು ಬಿಡಿಸಿಕೊಳ್ಳುವ
ಹಕ್ಕು, ಕೊಟ್ಟವನಿಗೆ ಇರಬೇಕು. 25ನಿಮ್ಮ ಸ್ವಜನರಲ್ಲಿ ಒಬ್ಬನು ಬಡವನಾಗಿ ತನ್ನ ಭೂಮಿಯನ್ನು ಏನಾದರು
ಮಾರಿಕೊಂಡರೆ ಅವನ ಸಮೀಪ ನೆಂಟನು ಇದನ್ನು ಬಿಡಿಸಿಕೊಳ್ಳಬೇಕು. 26ಬಿಡಿಸಬಲ್ಲ ನೆಂಟನು ಇಲ್ಲದೆ
ಹೋದರೆ, ಮಾರಿದವನೇ ಮತ್ತೆ ಬಿಡಿಸಿಕೊಳ್ಳುವಷ್ಟು ಉತ್ತಮ ಸ್ಥಿತಿಗೆ ಬಂದರೆ, 27ಆ ಭೂಮಿಯನ್ನು
ಮಾರಿದಂದಿನಿಂದ ಕಳೆದ ವರ್ಷಗಳನ್ನು ಬಿಟ್ಟು, ಉಳಿದ ಅವಧಿಗೆ ಕ್ರಯ ಕೊಟ್ಟು ತನ್ನ ಭೂಮಿಯನ್ನು
ಸ್ವಾಧೀನಪಡಿಸಿಕೊಳ್ಳಬಹುದು. 28ಅವನು ಆ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗದೆ ಹೋದರೆ ಅದು
ಜೂಬಿಲಿ ಸಂವತ್ಸರದ ತನಕ ಕೊಂಡುಕೊಂಡವನ ವಶದಲ್ಲೇ ಇರಬೇಕು. ಜೂಬಿಲಿ ವರ್ಷದಲ್ಲಿ ಅದು
ಬಿಡುಗಡೆಯಾಗುವುದು. ಆಗ ಆ ಭೂಮಿ ಮರಳಿ ಅವನ ವಶಕ್ಕೆ ಬರುವುದು.

29 “ಯಾವನಾದರು ಕೋಟೆಯಿರುವ ಪಟ್ಟಣದ ಮನೆಯನ್ನು ಮಾರಿದರೆ ಅದನ್ನು ಮಾರಿದ
ದಿನದಿಂದ ಒಂದು ವರ್ಷಪೂರ್ತಿ ಆಗುವುದರೊಳಗೆ ಈಡುಕೊಟ್ಟು ಬಿಡಿಸಬಹುದು. ಒಂದು ವರ್ಷಪೂರ್ತಿ
ಅದನ್ನು ಬಿಡಿಸುವ ಹಕ್ಕು ಅವನಿಗೆ ಇರುವುದು. 30ಕೋಟೆಯಿರುವ ಪಟ್ಟಣದ ಆ ಮನೆಯನ್ನು ಒಂದು
ವರ್ಷದೊಳಗೆ ಬಿಡಿಸಲು ಆಗದೆ ಹೋದರೆ ಅದು ಜೂಬಿಲಿ ಸಂವತ್ಸರದಲ್ಲೂ ಬಿಡುಗಡೆ ಆಗದೆ
ಕ್ರಯಕೊಟ್ಟವನಿಗೂ ಅವನ ಸಂತತಿಯವರಿಗೂ ಶಾಶ್ವತವಾಗಿ ಉಳಿಯುವುದು. 31ಕೋಟೆಯಿಲ್ಲದ
ಊರುಗಳಲ್ಲಿರುವ ಮನೆಗಳಲ್ಲಿ ಬಯಲಿನ ಹೊಲಗಳಂತೆ ಎಣಿಸಬೇಕು. ಅವುಗಳನ್ನು ಬಿಡಿಸಿಕೊಳ್ಳುವ ಹಕ್ಕು
ಇರುವುದು. ಜೂಬಿಲಿ ಸಂವತ್ಸರದಲ್ಲಿ ಅವು ಬಿಡುಗಡೆಯಾಗುವುವು. 32ಆದರೆ ಲೇವಿಯರ ಸೊತ್ತಾಗಿ ಇರುವ
ಪೇಟೆಗಳಲ್ಲಿನ ಮನೆಗಳು ಮಾರಲ್ಪಟ್ಟರೆ ಅವುಗಳನ್ನು ಬಿಡಿಸಿಕೊಳ್ಳುವ ಹಕ್ಕು ಲೇವಿಯರಿಗೆ ಯಾವಾಗಲು
ಇರುವುದು. 33ಲೇವಿಯರಲ್ಲಿ ಯಾರೂ ಅದನ್ನು ಬಿಡಿಸದೆ ಹೋದರೆ ಲೇವಿಯರ ಸೊತ್ತಾದ ಅಂಥ
ಪೇಟೆಮನೆ ಮಾರಾಟವಾಗಿ ಇದ್ದರೂ ಜೂಬಿಲಿ ಸಂವತ್ಸರದಲ್ಲಿ ಬಿಡುಗಡೆ ಆಗುವುದು. ಏಕೆಂದರೆ
ಇಸ್ರಯೇಲರ ಮಧ್ಯೆ ಇರುವ ಲೇವಿಯರ ಪೇಟೆಮನೆಗಳು ಅವರ ಶಾಶ್ವತ ಸೊತ್ತು. 34ಅವರು ತಮ್ಮ
ಪೇಟೆಗಳಿಗೆ ಸೇರಿರುವ ಹುಲ್ಲುಗಾವಲನ್ನು ಮಾರಲೇಕೂಡದು. ಅದು ಅವರಿಗೆ ಶಾಶ್ವತವಾದ ಸೊತ್ತು.

## ಬಡಬಗ್ಗರ ಬಿಡುಗಡೆ

35 “ನಿಮ್ಮಲ್ಲಿ ಒಬ್ಬ ಸಹೋದರನು ಬಡತನದಿಂದ ಗತಿಹೀನನಾದರೆ ನೀವು ಅವನನ್ನು ನಿಮ್ಮ
ನಡುವೆ ತಂಗಿರುವ ಆಗಂತುಕನೆಂದು ಭಾವಿಸಿ ಸಹಾಯಮಾಡಬೇಕು. 36ಅವನಿಂದ ಬಡ್ಡಿಯನ್ನಾಗಲಿ,
ಲಾಭವನ್ನಾಗಲಿ ತೆಗೆದುಕೊಳ್ಳಬಾರದು. ನೀವು ದೇವರಲ್ಲಿ ಭಯಭಕ್ತಿಯಿಟ್ಟು, ಅವನು ನಿಮ್ಮ ಬಳಿಯಲ್ಲಿ
ಬದುಕುವಂತೆ ನೋಡಿಕೊಳ್ಳಬೇಕು. 37ನೀವು ಅವನಿಗೆ ಸಾಲಕೊಟ್ಟರೆ ಲಾಭ ಕೇಳಬೇಡಿ. 38ನಾನು ನಿಮ್ಮ

ದೇವರಾದ ಸರ್ವೇಶ್ವರ. ನಿಮಗೆ ದೇವರಾಗಿರಲು, ನಿಮಗೆ ಕಾನಾನ್ ನಾಡನ್ನು ನೀಡಲು, ನಿಮ್ಮನ್ನು ಈಜಿಪ್ಟಿನಿಂದ ಬರಮಾಡಿದವನು ನಾನೇ.

39 "ನಿಮ್ಮಲ್ಲಿ ಒಬ್ಬ ಸಹೋದರನು ಬಡವನಾಗಿ ತನ್ನನ್ನೇ ಮಾರಿಕೊಂಡರೆ ಅವನನ್ನು ಗುಲಾಮನಂತೆ ನಡೆಸಿಕೊಳ್ಳಬಾರದು. [40]ಅವನು ಕಾರ್ಮಿಕನಂತೆ, ಆಗಂತುಕನಂತೆ ನಿಮ್ಮ ಬಳಿಯಲ್ಲೆ ಇದ್ದು, ಜೂಬಿಲಿ ಸಂವತ್ಸರದ ತನಕ ನಿಮ್ಮ ಸೇವೆ ಮಾಡಲಿ. [41]ಆಗ ಅವನನ್ನೂ ಅವನ ಮಕ್ಕಳನ್ನೂ ಬಿಡುಗಡೆಮಾಡಬೇಕು; ಆಗ ಅವನು ಸ್ವಜನರ ಬಳಿಗೂ ಪಿತ್ರಾರ್ಜಿತ ಸೊತ್ತಿಗೂ ಹಿಂದಿರುಗಬಹುದು. [42]ಅಂಥವರು ನನಗೇ ದಾಸರು. ನಾನು ಅವರನ್ನು ಈಜಿಪ್ಟಿನಿಂದ ಬರಮಾಡಿದೆ. ಗುಲಾಮರನ್ನು ಮಾರುವಂತೆ ನೀವು ಅವರನ್ನು ವಿಕ್ರಯಿಸಬಾರದು. [43]ಅವರಿಂದ ಕಠಿಣವಾದ ಸೇವೆಮಾಡಿಸಿ ಕೊಳ್ಳಬಾರದು. ನಿಮ್ಮ ದೇವರಲ್ಲಿ ಭಯ ಭಕ್ತಿ ಇರಲಿ. [44]ಗುಲಾಮಗಿರಿಗಾಗಿ ನಿಮಗೆ ಸ್ತ್ರೀ ಪುರುಷರು ಬೇಕಾದರೆ ಸುತ್ತಮುತ್ತಲಿರುವ ಅನ್ಯರನ್ನು ಕೊಂಡುಕೊಳ್ಳಬಹುದು; [45]ನಿಮ್ಮ ನಡುವೆ ಇರುವ ಪರವಾಸಿಗಳನ್ನೂ ನಿಮ್ಮ ನಾಡಿನಲ್ಲೇ ಅವರಿಂದ ಹುಟ್ಟಿದವರನ್ನೂ ಕೊಂಡುಕೊಳ್ಳಬಹುದು. ಅಂಥವರು ನಿಮಗೆ ಸೊತ್ತಾಗಬಹುದು. [46]ಅಂಥವರನ್ನು ಸ್ವಾಧೀನಪಡಿಸಿಕೊಂಡು ನಿಮ್ಮ ತರುವಾಯ ನಿಮ್ಮ ಸಂತತಿಯವರಿಗೆ ಶಾಶ್ವತ ಸೊತ್ತಾಗಿ ಕೊಟ್ಟುಬಿಡಬಹುದು. ಅವರನ್ನು ಜೀತದಾರರನ್ನಾಗಿ ಮಾಡಿಕೊಳ್ಳಬಹುದು. ಆದರೆ ಇಸ್ರಯೇಲರಾದ ನೀವೆಲ್ಲರು ಸಹೋದರರು. ಆದುದರಿಂದ ಒಬ್ಬರಿಂದೊಬ್ಬರು ಕ್ರೂರವಾಗಿ ಸೇವೆ ಮಾಡಿಸಿಕೊಳ್ಳಬಾರದು.

47 "ನಿಮ್ಮ ಸಹೋದರರಲ್ಲಿ ಒಬ್ಬನು ಬಡವನಾಗಿ ನಿಮ್ಮ ನಡುವೆ ಮನೆಮಾಡಿಕೊಂಡ ಧನವಂತನಾದ ಅನ್ಯದೇಶದವನಿಗಾಗಲಿ, ಅವನಿಗೆ ಸೇರಿದವನಿಗಾಗಲಿ ತನ್ನನ್ನು ಮಾರಿಕೊಂಡಿದ್ದರೂ ಅವನಿಗೆ ಬಿಡುಗಡೆಯಾಗಬಹುದು. [48]ಅವನ ಬಂಧುಗಳಲ್ಲಿ ಯಾರಾದರೂ ಈಡುಕೊಟ್ಟು ಅವನನ್ನು ಬಿಡಿಸಬಹುದು. [49]ಅವನ ದೊಡ್ಡಪ್ಪ ಚಿಕ್ಕಪ್ಪಂದಿರಾಗಲಿ, ಇವರ ಮಕ್ಕಳಾಗಲಿ ಅಥವಾ ಸಮೀಪ ಬಂಧುಗಳಲ್ಲಿ ಯಾರೇ ಆಗಲಿ ಈಡುಕೊಟ್ಟು ಅವನನ್ನು ಬಿಡಿಸಬಹುದು. ಬೇಕಾದಷ್ಟು ಹಣವು ದೊರೆತರೆ ತನ್ನನ್ನು ತಾನೇ ಬಿಡಿಸಿಕೊಳ್ಳಬಹುದು. [50]ಅವನು ತನ್ನನ್ನು ಮಾರಿಕೊಂಡ ವರ್ಷ ಮೊದಲುಗೊಂಡು ಮುಂದೆ ಜೂಬಿಲಿ ಸಂವತ್ಸರದ ತನಕ ದಣಿಯ ಸಂಗಡ ವರ್ಷಗಳ ಲೆಕ್ಕವನ್ನು ಮಾಡಿ ಆ ಲೆಕ್ಕದ ಮೇರೆಗೆ ಬಿಡುಗಡೆಯ ಕ್ರಯವನ್ನು ಕೊಡಬೇಕು. ಕೂಲಿಯವನ ವಿಷಯದಲ್ಲಿ ಲೆಕ್ಕಿಸುವಂತೆ ಅವನ ವಿಷಯದಲ್ಲಿ ಲೆಕ್ಕಿಸಬೇಕು. [51]ಜೂಬಿಲಿ ಸಂವತ್ಸರವು ಬರುವುದಕ್ಕೆ ಇನ್ನು ಅನೇಕ ವರ್ಷಗಳಿದ್ದರೆ ಹೆಚ್ಚು ಭಾಗವನ್ನೂ [52]ಕೆಲವು ವರ್ಷಗಳು ಮಾತ್ರ ಉಳಿದರೆ ಸ್ವಲ್ಪ ಭಾಗವನ್ನೂ ದಣಿಗೆ ಕೊಟ್ಟು ತನ್ನನ್ನು ಬಿಡಿಸಿಕೊಳ್ಳಬೇಕು. [53]ಅವನು ವರುಷ ವರುಷಕ್ಕೆ ಗೊತ್ತುಮಾಡಿಕೊಂಡ ಕೂಲಿಯವನಂತೆಯೇ ದಣಿಯ ಬಳಿಯಲ್ಲಿರಬೇಕು. ಆ ದಣಿ ಅವನಿಂದ ಕಠಿಣವಾಗಿ ಸೇವೆ ಮಾಡಿಸಿ ಕೊಳ್ಳುವುದನ್ನು ನೀವು ನೋಡಿ ಸುಮ್ಮನೆ ಇರಬಾರದು. [54]ಮೇಲೆ ಹೇಳಿದ ರೀತಿಯಲ್ಲಿ ಅವನು ಬಿಡಿಸಿಕೊಳ್ಳದೆ ಹೋದರೆ ಜೂಬಿಲಿ ಸಂವತ್ಸರದಲ್ಲಿ ಅವನೂ ಅವನ ಮಕ್ಕಳೂ ಬಿಡುಗಡೆಯಾಗಬೇಕು. [55]ಏಕೆಂದರೆ ಇಸ್ರಯೇಲರು ನನ್ನ ದಾಸರೇ; ನಾನು ಅವರನ್ನು ಈಜಿಪ್ಟಿನಿಂದ ಬರಮಾಡಿದೆನಲ್ಲವೇ? ನಾನು ನಿಮ್ಮ ದೇವರಾದ ಸರ್ವೇಶ್ವರ.

### ವಿಧೇಯತೆ ತರುವ ಆಶೀರ್ವಾದ

(ಧರ್ಮೋ. 7.12–24; 28.1–14)

**26** "ನೀವು ವಿಗ್ರಹಗಳನ್ನು ಮಾಡಿಸಿಕೊಳ್ಳಬೇಡಿ; ಕೆತ್ತಿದ ಪ್ರತಿಮೆಯನ್ನಾಗಲಿ, ಕಲ್ಲಿನ ಕಂಬವನ್ನಾಗಲಿ ನಿಲ್ಲಿಸಿಕೊಳ್ಳಬೇಡಿ; ಆರಾಧನೆಗಾಗಿ ವಿಚಿತ್ರವಾಗಿ ಕೆತ್ತಿದ ಸ್ತಂಭಗಳನ್ನು ನಿಮ್ಮ ನಾಡಿನಲ್ಲಿ ಇಡಬೇಡಿ. ನಾನೇ ನಿಮ್ಮ ಸರ್ವೇಶ್ವರನಾದ ದೇವರು. [2]ನಾನು ನೇಮಿಸಿರುವ ಸಬ್ಬತ್‍ದಿನಗಳನ್ನು ನೀವು ಆಚರಿಸಬೇಕು. ನನ್ನ ದೇವಸ್ಥಾನದ ವಿಷಯದಲ್ಲಿ ಭಯಭಕ್ತಿಯುಳ್ಳವರಾಗಿರಬೇಕು. ನಾನು ಸರ್ವೇಶ್ವರ.

3 "ನೀವು ನನ್ನ ನಿಯಮಗಳನ್ನು ಕೈಗೊಂಡು ನನ್ನ ಆಜ್ಞೆಗಳನ್ನು ಅನುಸರಿಸಿ ನಡೆದರೆ [4]ನಾನು ಮುಂಗಾರು ಹಿಂಗಾರು ಮಳೆಗಳನ್ನು ಕಾಲಕಾಲಕ್ಕೆ ಸರಿಯಾಗಿ ಬರಮಾಡುವೆನು. ನಿಮ್ಮ ಹೊಲಗಳು ಒಳ್ಳೆಯ ಬೆಳೆಯನ್ನು ಕೊಡುವುವು. ತೋಟದ ಮರಗಳು ಹೇರಳವಾದ ಫಲಕೊಡುವುವು. [5]ಕಣ ತುಳಿಸುವ ಕೆಲಸ

ದ್ರಾಕ್ಷಿ ಬೆಳೆಯ ಪರ್ಯಂತರವೂ ದ್ರಾಕ್ಷಿ ಬೆಳೆಯನ್ನು ಕೂಡಿಸುವ ಕೆಲಸ ಬಿತ್ತನೆಯ ಕಾಲದ ಪರ್ಯಂತರವೂ ನಡೆಯುವುವು. ಸಮೃದ್ಧಿ ಆಗಿ ಊಟಮಾಡುವಿರಿ, ನಾಡಿನಲ್ಲಿ ನಿರ್ಭಯವಾಗಿ ವಾಸಮಾಡುವಿರಿ.

6 "ನಿಮ್ಮ ನಾಡಿಗೆ ಸುಕ್ಷೇಮವನ್ನು ಅನುಗ್ರಹಿಸುವೆನು. ಯಾರ ಭಯವೂ ಇಲ್ಲದೆ ನೀವು ನಿದ್ರಿಸುವಿರಿ; ದುಷ್ಟಮೃಗಗಳ ಕಾಟ ನಿಮ್ಮ ನಾಡಿಗಿರದು; ನಿಮ್ಮ ನಾಡು ಶತ್ರುಗಳ ಕತ್ತಿಗೆ ತುತ್ತಾಗದು. [7]ನೀವೇ ನಿಮ್ಮ ವೈರಿಗಳನ್ನು ಓಡಿಸುವಿರಿ; ಕತ್ತಿಯಿಂದ ಸಂಹರಿಸುವಿರಿ. [8]ನಿಮ್ಮಲ್ಲಿ ಐದು ಮಂದಿ ನೂರು ಮಂದಿಯನ್ನು, ನೂರು ಮಂದಿ ಹತ್ತು ಸಾವಿರ ಮಂದಿಯನ್ನು ಓಡಿಸುವರು. ಶತ್ರುಗಳು ನಿಮ್ಮ ಕತ್ತಿಯಿಂದ ಹತರಾಗುವರು. [9]ನಾನು ನಿಮ್ಮ ಮೇಲೆ ಕರುಣೆಯಿಟ್ಟು, ಹೆಚ್ಚು ಸಂತಾನಪ್ರಾಪ್ತಿಯನ್ನು ಕೊಟ್ಟು ಅಭಿವೃದ್ಧಿಗೊಳಿಸಿ, ನಿಮಗೆ ಮಾಡಿದ ವಾಗ್ದಾನವನ್ನು ನೆರವೇರಿಸುವೆನು. [10]ನೀವು ಬಹುದಿನದಿಂದ ಕೂಡಿಸಿಟ್ಟುಕೊಂಡಿರುವ ಹಳೆಯ ಧಾನ್ಯವನ್ನು ಊಟಮಾಡುವಿರಿ. ಹೊಸ ದವಸಧಾನ್ಯಗಳಿಗೆ ಕಣಜ ಸಾಲದೆ ಹಳೆಯದನ್ನು ತೆಗೆದುಬಿಡುವಿರಿ. [11]ನಾನು ನಿಮ್ಮ ಮಧ್ಯೆ ನಿವಾಸಿಸುವೆನು. ನಿಮ್ಮನ್ನು ಕೈಬಿಡೆನು. [12]ನಿಮ್ಮ ನಡುವೆ ಸಂಚರಿಸುತ್ತಾ ನಿಮಗೆ ದೇವರಾಗಿರುವೆನು. ನೀವು ನನಗೆ ಪ್ರಜೆಗಳಾಗಿ ಇರುವಿರಿ. [13]ನೀವು ಈಜಿಪ್ಟಿನವರಿಗೆ ಗುಲಾಮರಾಗಿ ಇರಬಾರದೆಂದು ನಿಮ್ಮನ್ನು ಅವರ ದೇಶದಿಂದ ಬರಮಾಡಿದ ನಿಮ್ಮ ದೇವರಾದ ಸರ್ವೇಶ್ವರನು ನಾನೇ. ನಿಮ್ಮ ನೊಗವನ್ನು ಮುರಿದು ನೀವು ನೆಟ್ಟಗೆ ನಿಂತು ನಡೆಯುವಂತೆ ಮಾಡಿದವನು ನಾನಲ್ಲವೆ?

### ಅವಿಧೇಯತೆ ತರುವ ದಂಡನೆ

(ಧರ್ಮೋ. 28.15-68)

14 "ಆದರೆ ನೀವು ನನ್ನ ಮಾತನ್ನು ಕೇಳದೆ, ಈ ಆಜ್ಞೆಗಳನ್ನೆಲ್ಲಾ ಅನುಸರಿಸದೆ, [15]ನನ್ನ ನಿಯಮಗಳನ್ನು ಅಲ್ಲಗಳೆದು, ನನ್ನ ವಿಧಿಗಳನ್ನು ತಳ್ಳಿಬಿಟ್ಟು, ನನ್ನ ಆಜ್ಞೆಗಳಿಗೆ ವಿಧೇಯರಾಗದೆ ನಿಬಂಧನೆಗಳನ್ನೂ ಮೀರಿನಡೆದರೆ [16]ನೀವು ಈ ದಂಡನೆಗಳಿಗೆ ಗುರಿಯಾಗುವಿರಿ: ನಿಮಗೆ ಕ್ಷಯರೋಗ, ಚಳಿಜ್ವರ ಮುಂತಾದ ಭೀಕರ ವ್ಯಾಧಿಗಳು ಬರುವಂತೆ ಮಾಡುವೆನು. ಇವುಗಳ ನಿಮಿತ್ತ ನೀವು ಕಂಗೆಡುವಿರಿ. ಮನಗುಂದಿಹೋಗುವಿರಿ. ನಿಮ್ಮ ಬಿತ್ತನೆಯ ಫಲ ನಿಮಗೆ ಸಿಗದೆ ಹೋಗುವುದು. ಅದು ಶತ್ರುಗಳ ಪಾಲಾಗುವುದು. [17]ನಾನು ನಿಮ್ಮ ಮೇಲೆ ಕಡುಗೋಪಗೊಳ್ಳುವೆನು; ನೀವು ನಿಮ್ಮ ಶತ್ರುಗಳ ಮುಂದೆಯೇ ಸೋತುಬೀಳುವಿರಿ; ನಿಮ್ಮ ವೈರಿಗಳು ನಿಮ್ಮನ್ನು ಆಳುವರು. ಯಾರೂ ಬೆನ್ನಟ್ಟಿ ಬರದಿದ್ದರೂ ನೀವು ಹೆದರಿ ಓಡುವಿರಿ.

18 "ಇಷ್ಟಾದರೂ ನೀವು ನನ್ನ ಮಾತಿಗೆ ಲಕ್ಷ್ಯಗೊಡದೆ ಹೋದರೆ ನಾನು ನಿಮ್ಮ ಪಾಪಗಳ ನಿಮಿತ್ತ ಏಳರಷ್ಟು ಹೆಚ್ಚಾಗಿ ದಂಡಿಸುವೆನು; ನಿಮ್ಮ ಗರ್ವವನ್ನು ಅಡಗಿಸುವೆನು. [19]ನಿಮ್ಮ ಮೇಲಿರುವ ಆಕಾಶವನ್ನು ಕಬ್ಬಿಣವಾಗಿಸುವೆನು, ನೀವು ಸಾಗುವಳಿ ಮಾಡುವ ಭೂಮಿಯನ್ನು ತಾಮ್ರವಾಗಿಸುವೆನು. [20]ನೀವು ದುಡಿದದ್ದೆಲ್ಲಾ ವ್ಯರ್ಥವಾಗುವುದು. ನಿಮ್ಮ ಹೊಲಗದ್ದೆಗಳಲ್ಲಿ ಬೆಳೆಯಾಗದು; ನಿಮ್ಮ ತೋಟತೋಪುಗಳ ಮರಗಳು ಫಲಿಸವು.

21 "ನೀವು ನನ್ನ ಮಾತನ್ನು ಕೇಳಲೊಲ್ಲದೆ ನನಗೆ ವಿರೋಧವಾಗಿ ನಡೆದರೆ ನಿಮ್ಮ ಪಾಪದ ನಿಮಿತ್ತ ಇನ್ನೂ ಏಳುಪಟ್ಟು ಹೆಚ್ಚಾಗಿ ಬಾಧಿಸುವೆನು. [22]ನಿಮ್ಮ ಮೇಲೆ ಕ್ರೂರಪ್ರಾಣಿಗಳನ್ನು ಬರಮಾಡುವೆನು. ಅವು ನಿಮ್ಮ ಮಕ್ಕಳನ್ನು ಕೊಂದುಹಾಕುವುವು; ನಿಮ್ಮ ಪಶುಪ್ರಾಣಿಗಳನ್ನು ನಾಶಮಾಡುವುವು; ನಿಮ್ಮನ್ನು ಅಲ್ಪಸಂಖ್ಯಾತರನ್ನಾಗಿ ಮಾಡುವುವು. ನಿಮ್ಮ ದಾರಿಗಳು ಪಾಳು ಬೀಳುವುವು.

23 "ಇಷ್ಟು ಶಿಕ್ಷೆಗಳಿಂದಲೂ ನೀವು ನನ್ನ ಆಜ್ಞೆಗೆ ತಲೆಬಾಗದೆ ನನಗೆ ವಿರೋಧವಾಗಿ ನಡೆದರೆ [24]ನಾನೇ ನಿಮಗೆ ವಿರೋಧವಾಗಿ ನಡೆಯುವೆನು. ನಿಮ್ಮ ಪಾಪಗಳ ಕಾರಣ ನಾನೇ ನಿಮ್ಮನ್ನು ಏಳರಷ್ಟು ದಂಡಿಸುವೆನು. [25]ಶತ್ರುಗಳ ಕತ್ತಿಯ ಮೂಲಕ ನಿಮ್ಮನ್ನು ಸಂಹರಿಸುವೆನು. ನೀವು ನನ್ನ ನಿಬಂಧನವನ್ನು ಮೀರಿದುದರಿಂದ ಆ ಕತ್ತಿ ಪ್ರತಿ ದಂಡನೆ ಮಾಡುವುದು. ನೀವು ನಿಮ್ಮ ಪಟ್ಟಣ ಗಳಲ್ಲಿ ಕೂಡಿರುವಾಗ ಅಂಟುರೋಗ ಉಂಟಾಗುವಂತೆ ಮಾಡುವೆನು. ಹೀಗೆ ನೀವು ಶತ್ರುಗಳಿಗೆ ಶರಣಾಗುವಿರಿ. [26]ನಿಮ್ಮ ನಿಮ್ಮ ಜೀವನಾಧಾರವನ್ನು ನಾನು ತೆಗೆದುಬಿಟ್ಟಾಗ ಹತ್ತು ಮಂದಿ ಹೆಂಗಸರು ಒಂದೇ ಒಲೆಯಲ್ಲಿ ರೊಟ್ಟಿ ಸುಟ್ಟು, ಅದನ್ನು ಪಡಿ ಪ್ರಕಾರ ಹಂಚಿಕೊಡುವರು. ನೀವು ಅದನ್ನು ತಿಂದರೂ ತೃಪ್ತಿಯಾಗದು.

27 “ಇದನ್ನೆಲ್ಲಾ ನೀವು ಅನುಭವಿಸಿದ ಮೇಲೂ ನನ್ನ ಮಾತಿಗೆ ಕಿವಿಗೊಡದೆ ನನಗೆ ವಿರೋಧವಾಗಿ
ನಡೆದರೆ, 28ನಾನು ನಿಮಗೆ ವಿರುದ್ಧ ಕೋಪದಿಂದ ವರ್ತಿಸುವೆನು. ನಿಮ್ಮ ಪಾಪಗಳ ಕಾರಣ ಏಳ್ಮಡಿಯಾಗಿ
ಶಿಕ್ಷಿಸುವೆನು. 29ನೀವು ನಿಮ್ಮ ಗಂಡುಹೆಣ್ಣು ಮಕ್ಕಳ ಮಾಂಸವನ್ನೇ ತಿನ್ನುವಿರಿ. 30ನಿಮ್ಮ ಪೂಜಾಸ್ಥಳಗಳನ್ನು
ಇಲ್ಲದಂತೆ ಮಾಡುವೆನು. ನೀವು ಸೂರ್ಯನ ಪೂಜೆಗೆ ಇಟ್ಟಿರುವ ಕಂಬಗಳನ್ನು ಕಡಿದು ಹಾಕುವೆನು. ನಿಮ್ಮ
ಬೊಂಬೆಗಳ ಬುರುಡೆಗಳ ಮೇಲೆ ನಿಮ್ಮ ಬುರುಡೆಗಳನ್ನು ಬಿಸಾಡುವೆನು; ನಿಮ್ಮ ಬಗ್ಗೆ ಅಸಹ್ಯ ಪಡುವೆನು.
31ನಿಮ್ಮ ಪಟ್ಟಣಗಳನ್ನು ಹಾಳು ಮಾಡುವೆನು; ನಿಮ್ಮ ದೇವಸ್ಥಾನಗಳನ್ನು ನೆಲ ಸಮಮಾಡುವೆನು; ನೀವು
ಸಮರ್ಪಿಸುವ ಸುಗಂಧದ್ರವ್ಯಗಳ ಸುವಾಸನೆಯನ್ನು ನಾನು ಮೂಸಿಯೂ ನೋಡುವುದಿಲ್ಲ. 32ನಾನು ನಿಮ್ಮ
ನಾಡನ್ನು ಸಂಪೂರ್ಣವಾಗಿ ಹಾಳುಮಾಡಿದಾಗ ಅದರಲ್ಲಿ ನೆಲಸುವ ಶತ್ರುಗಳು ಅದನ್ನು ನೋಡಿ
ಚಕಿತರಾಗುವರು. 33ನಿಮ್ಮನ್ನು ಅನ್ಯಜನಗಳ ನಡುವೆ ಚದರಿಸಿ ನಿಮ್ಮ ಹಿಂದೆ ಕತ್ತಿಬೀಸುವೆನು. ನಿಮ್ಮ ನಾಡು
ನಾಶವಾಗುವುದು, ಪಟ್ಟಣಗಳು ಪಾಳುಬೀಳುವುವು. 34ನೀವು ನಿಮ್ಮ ಶತ್ರುಗಳ ದೇಶದಲ್ಲಿ
ಸೆರೆಸೇರಿಸುವಾಗಲೆಲ್ಲಾ ನಿಮ್ಮ ನಾಡು ಹಾಳುಬಿದ್ದು, ತನಗೆ ಸಲ್ಲಬೇಕಾಗಿದ್ದ ಸಬ್ಬತ್ ಕಾಲವನ್ನು
ಅನುಭವಿಸುವುದು. ಅದು ವಿಶ್ರಾಂತಿಯನ್ನು ಹೊಂದಿ ಸಬ್ಬತ್ ಕಾಲವನ್ನು ಸವಿಯುವುದು. 35ನೀವು ಅದರಲ್ಲಿ
ವಾಸವಾಗಿದ್ದಾಗ ಅದಕ್ಕೆ ದೊರಕದ ಸಕಾಲದ ವಿಶ್ರಾಂತಿಯನ್ನು ಅದು ಹಾಳು ಬಿದ್ದಿರುವ ದಿನಗಳಲ್ಲಿ
ಸುದೀರ್ಘವಾಗಿ ಅನುಭವಿಸುವುದು.

36 “ನಿಮ್ಮಲ್ಲಿ ಯಾರ್‍ಯಾರು ಶತ್ರುದೇಶಗಳಲ್ಲಿ ಅಳಿದುಳಿದಿರುವಿರೋ ಅವರ ಅಂತರಾಳದಲ್ಲಿ
ಭಯಭೀತಿಯನ್ನು ಹುಟ್ಟಿಸುವೆನು. ಗಾಳಿಗೆ ತೂರಾಡುವ ತರಗೆಲೆಯ ಸಪ್ಪಳವೂ ಅವರಲ್ಲಿ ದಿಗಿಲು
ಹುಟ್ಟಿಸುವುದು. ಆ ಸಪ್ಪಳ ಕೇಳಿ, ಖಡ್ಗಕ್ಕೆ ಹೆದರಿ ಓಡಿಹೋಗುವವರಂತೆ ಪೇರಿಕೀಳುವರು. ಯಾರೂ
ಬೆನ್ನಟ್ಟಿಬಾರದಿದ್ದರೂ ಅವರು ಎದ್ದು ಬಿದ್ದು ಓಡುವರು. 37ಯಾರೂ ಓಡಿಸದಿದ್ದರೂ ಕತ್ತಿಗೆ ಹೆದರಿ
ಓಡುವವರಂತೆ ಒಬ್ಬರ ಮೇಲೊಬ್ಬರು ಬೀಳುವರು. ಶತ್ರುಗಳ ಮುಂದೆ ನಿಲ್ಲಲಾರಿರಿ. 38ಅನ್ಯಜನಗಳಲ್ಲಿ
ಚದರಿಹೋಗಿ ಕಣ್ಮರೆ ಆಗುವಿರಿ. ಶತ್ರುಗಳ ದೇಶ ನಿಮ್ಮನ್ನು ಕಬಳಿಸಿ ಬಿಡುವುದು. 39ನಿಮ್ಮಲ್ಲಿ ಅಳಿದುಳಿದವರು
ತಮ್ಮ ಪಾಪದ ಪ್ರಯುಕ್ತ ಹಾಗು ತಮ್ಮ ಪಿತೃಗಳ ಪಾಪದ ಪ್ರಯುಕ್ತ ಅವರಂತೆಯೇ ಶತ್ರುಗಳ ನಾಡುಗಳಲ್ಲಿ
ಕ್ಷೀಣವಾಗಿ ಹೋಗುವರು.

40 “ಆದರೆ ಅವರು, ತಾವೂ ತಮ್ಮ ಪಿತೃಗಳೂ ನನಗೆ ದ್ರೋಹಿಗಳಾಗಿ ಪಾಪ ಮಾಡಿದವರೆಂದು
ಒಪ್ಪಿಕೊಂಡು, ನನಗೆ ವಿರೋಧವಾಗಿ ನಡೆದದ್ದರಿಂದಲೇ 41ನಾನು ಅವರಿಗೆ ವಿರುದ್ಧವಾಗಿ ವರ್ತಿಸಿ
ಶತ್ರುದೇಶದಲ್ಲಿ ಸೆರೆ ಸೇರಿಸಬೇಕಾಯಿತೆಂದು ಅರಿತುಕೊಂಡು, ತಮ್ಮ ಮೊಂಡುತನವನ್ನು ಬಿಟ್ಟು, ನನ್ನ ಆಜ್ಞೆಗೆ
ತಲೆಬಾಗಿ, ತಮ್ಮ ಪಾಪಪರಿಣಾಮದ ಶಿಕ್ಷೆಯನ್ನು ಸ್ವೀಕರಿಸಿದ್ದೇ ಆದರೆ, 42ಯಕೋಬ್, ಇಸಾಕ್ ಹಾಗು
ಅಬ್ರಹಾಮ್ ಇವರಿಗೆ ಮಾಡಿದ ವಾಗ್ದಾನಗಳನ್ನು ನೆನಪಿಗೆ ತಂದುಕೊಳ್ಳುವೆನು. ಅವುಗಳನ್ನು
ನೆರವೇರಿಸುವೆನು. ಅವರ ಸ್ವಂತ ನಾಡನ್ನು ಕರುಣೆಯಿಂದ ಜ್ಞಾಪಿಸಿಕೊಳ್ಳುವೆನು. 43ಆದರೆ ಅವರು
ಬಿಟ್ಟುಹೋದ ಸ್ವಂತ ನಾಡು ಮೊಟ್ಟಮೊದಲು ನಿರ್ಜನವಾಗಬೇಕು; ಅದು ತನಗೆ ಸಲ್ಲಬೇಕಾದ ಸಬ್ಬತ್
ವಿಶ್ರಾಂತಿಯನ್ನು ಅನುಭವಿಸಬೇಕು; ಅವರು ಸರ್ವೇಶ್ವರನ ಆಜ್ಞೆ ಬೇಡವೆಂದು ಆತನ ವಿಧಿಗಳನ್ನು ತಾತ್ಸಾರ
ಮಾಡಿದ ಕಾರಣ ತಮ್ಮ ಪಾಪದ ಫಲವನ್ನು ಸವಿಯಬೇಕು. 44ಅವರು ಶತ್ರುಗಳ ದೇಶದಲ್ಲಿರುವಾಗಲೂ
ನಾನು ಅವರನ್ನು ಬೇಡವೆನ್ನುವುದಿಲ್ಲ, ತಾತ್ಸಾರ ಮಾಡುವುದಿಲ್ಲ, ನಾನು ಅವರಿಗೆ ಮಾಡಿದ ವಾಗ್ದಾನವನ್ನು
ಮೀರುವುದಿಲ್ಲ. ನಾನು ಅವರ ದೇವರಾದ ಸರ್ವೇಶ್ವರನಲ್ಲವೆ? 45ಅವರ ಪೂರ್ವಜರ ಸಂಗಡ
ಮಾಡಿಕೊಂಡ ಒಡಂಬಡಿಕೆಯನ್ನು ನೆನಪಿಗೆ ತಂದುಕೊಂಡು ಅವರಿಗೆ ಹಿತವನ್ನೇ ಮಾಡುವೆನು. ನಾನು
ಅವರಿಗೆ ದೇವರಾಗಿರಬೇಕೆಂದೇ ಅವರ ಪೂರ್ವಜರನ್ನು ಎಲ್ಲ ಜನಾಂಗಗಳ ಕಣ್ಮುಂದೆಯೇ ಈಜಿಪ್ಟಿನಿಂದ
ಬರಮಾಡಿದೆನು. ನಾನು ಸರ್ವೇಶ್ವರ.”

46 ಸರ್ವೇಶ್ವರಸ್ವಾಮಿ ಸೀನಾಯಿ ಬೆಟ್ಟದಲ್ಲಿ ಮೋಶೆಯ ಮುಖಾಂತರ ಇಸ್ರಯೇಲರ ಸಂಗಡ
ಒಡಂಬಡಿಕೆಯನ್ನು ಮಾಡಿಕೊಂಡು ಅವರಿಗೆ ಕೊಟ್ಟ ಆಜ್ಞಾವಿಧಿಗಳು ಇವುಗಳೇ.

## ಹರಕೆಗಳಿಂದ ಬಿಡುಗಡೆಯಾಗಲು ತೆರಬೇಕಾದ ಈಡು

**27** ಇಸ್ರಯೇಲರಿಗೆ ಈ ಕೆಳಕಂಡಂತೆ ಆಜ್ಞಾಪಿಸಬೇಕೆಂದು ಸರ್ವೇಶ್ವರಸ್ವಾಮಿ ಮೋಶೆಗೆ ತಿಳಿಸಿದರು:
2"ಯಾರಾದರು ನರಮಾನವರ ಪ್ರಾಣವನ್ನು ಸರ್ವೇಶ್ವರನಿಗೆ ಹರಕೆಮಾಡಿ ಪ್ರತಿಷ್ಠಿಸಿದ್ದರೆ, ಅವುಗಳನ್ನು
ಬಿಡಿಸುವುದಕ್ಕೆ ದೇವರ ಸೇವೆಗೆ ನೇಮಕವಾದ ಬೆಳ್ಳಿನಾಣ್ಯದ ಮೇರೆಗೆ ನೀವು ಅವರಿಂದ ಕೊಡಿಸಬೇಕಾದ
ಈಡಿನ ವಿವರ ಹೀಗಿದೆ: 3ಇಪ್ಪತ್ತರಿಂದ ಅರವತ್ತು ವರ್ಷ ವಯಸ್ಸುಳ್ಳ ಪುರುಷನ ಪರವಾಗಿ ಐವತ್ತು
ಬೆಳ್ಳಿನಾಣ್ಯಗಳನ್ನು ಹಾಗು 4ಸ್ತ್ರೀಯ ಪರವಾಗಿ ಮೂವತ್ತು ಬೆಳ್ಳಿನಾಣ್ಯಗಳನ್ನು ಕೊಡಿಸಬೇಕು. 5ಐದರಿಂದ
ಇಪ್ಪತ್ತು ವರ್ಷ ವಯಸ್ಸುಳ್ಳ ಪುರುಷನ ಪರವಾಗಿ ಇಪ್ಪತ್ತು ಬೆಳ್ಳಿ ನಾಣ್ಯಗಳನ್ನು ಹಾಗು ಸ್ತ್ರೀಯ ಪರವಾಗಿ
ಹತ್ತು ಬೆಳ್ಳಿನಾಣ್ಯಗಳನ್ನು ಕೊಡಿಸಬೇಕು. 6ಒಂದು ತಿಂಗಳ ವಯಸ್ಸಿನಿಂದ ಐದು ವರ್ಷ ವಯಸ್ಸಿನ ಹುಡುಗನ
ಪರವಾಗಿ ಐದು ಬೆಳ್ಳಿನಾಣ್ಯಗಳನ್ನು ಹಾಗು ಹುಡುಗಿಯ ಪರವಾಗಿ ಮೂರು ಬೆಳ್ಳಿನಾಣ್ಯಗಳನ್ನೂ
ಕೊಡಿಸಬೇಕು. 7ಅರವತ್ತು ವರ್ಷ ವಯಸ್ಸು ದಾಟಿದ ಪುರುಷನ ಪರವಾಗಿ ಹದಿನೈದು ಬೆಳ್ಳಿ ನಾಣ್ಯಗಳನ್ನು
ಹಾಗು ಸ್ತ್ರೀಯ ಪರವಾಗಿ ಹತ್ತು ಬೆಳ್ಳಿನಾಣ್ಯಗಳನ್ನು ಕೊಡಿಸಬೇಕು. 8ಯಾವನಾದರು ಬಡವನಾಗಿದ್ದು
ನೇಮಕವಾದ ನಾಣ್ಯವನ್ನು ಕೊಡಲಾಗದೆ ಹೋದರೆ ಅವನು ಹರಕೆಮಾಡಿ ಪ್ರತಿಷ್ಠಿಸಿದ ವ್ಯಕ್ತಿಯನ್ನು
ಯಾಜಕನ ಮುಂದೆ ನಿಲ್ಲಿಸಬೇಕು. ಯಾಜಕನು ಹರಕೆ ಮಾಡಿದವನ ಸ್ಥಿತಿಗಳಿಗೆ ತಕ್ಕಂತೆ ಅವನು ತೆರಬೇಕಾದ
ನಾಣ್ಯ ಇಷ್ಟೆಂದು ನಿಗದಿಮಾಡಬೇಕು.

9 "ಸರ್ವೇಶ್ವರನಿಗೆ ಸಮರ್ಪಿಸಬಹುದಾದ ಪ್ರಾಣಿಯನ್ನು ಯಾವನಾದರೂ ಹರಕೆಮಾಡಿ
ಪ್ರತಿಷ್ಠಿಸಿದ್ದರೆ ಅದು ದೇವರ ಸೊತ್ತಾಗಿರಬೇಕು. 10ಅದನ್ನು ಬದಲಾಯಿಸಕೂಡದು, ಕೆಟ್ಟದ್ದಕ್ಕೆ ಬದಲಾಗಿ
ಒಳ್ಳೆಯದನ್ನು, ಒಳ್ಳೆಯದಕ್ಕೆ ಬದಲಾಗಿ ಕೆಟ್ಟದ್ದನ್ನು ಹಾಗು ಒಂದಕ್ಕೆ ಬದಲಾಗಿ ಮತ್ತು ಒಂದನ್ನು
ಕೊಡಕೂಡದು. ಅವನು ಗೊತ್ತು ಮಾಡಿದ ಪ್ರಾಣಿಗೆ ಬದಲಾಗಿ ಬೇರೊಂದು ಪ್ರಾಣಿಯನ್ನು ಪ್ರತ್ಯೇಕಿಸಿಟ್ಟಿದ್ದರೆ
ಮೊದಲನೆಯ ಪ್ರಾಣಿ ಹಾಗು ಅದಕ್ಕೆ ಬದಲಾಗಿ ಇಟ್ಟ ಪ್ರಾಣಿ ಎರಡೂ ಸರ್ವೇಶ್ವರನಿಗೆ ಸೇರಬೇಕು.
11ಸರ್ವೇಶ್ವರನಿಗೆ ಸಮರ್ಪಿಸಕೂಡದ ಬೇರೆ ಜಾತಿಯ ಪ್ರಾಣಿಯನ್ನು ಪ್ರತಿಷ್ಠಿಸಿದ್ದರೆ ಅದನ್ನು ಯಾಜಕನ
ಮುಂದೆ ನಿಲ್ಲಿಸಬೇಕು. 12ಅದು ಒಳ್ಳೆಯದೋ ಕೆಟ್ಟದ್ದೋ ಎಂದು ಯಾಜಕನು ನೋಡಿ ಅದರ ಬೆಲೆ
ಇಷ್ಟೆಂದು ನಿರ್ಧರಿಸಬೇಕು. ಯಾಜಕನು ನಿರ್ಧರಿಸಿದ ಬೆಲೆಯೇ ಅಂತಿಮವಾದುದು. 13ಹರಕೆ
ಮಾಡುವವನು ಬಿಡಿಸಿಕೊಳ್ಳಬೇಕು ಎಂದಿದ್ದರೆ ಅದರ ಕ್ರಯದೊಡನೆ ಐದನೆಯ ಒಂದು ಭಾಗವನ್ನು ಹೆಚ್ಚಾಗಿ
ಕೊಡಬೇಕು.

14 "ಯಾವನಾದರು ತನ್ನ ಮನೆಯನ್ನು ಸರ್ವೇಶ್ವರನಿಗೆ ಮೀಸಲಾಗಿ ಪ್ರತಿಷ್ಠಿಸಿದ್ದರೆ ಯಾಜಕನು
ಅದು ಉತ್ತಮವಾದ ಮನೆಯೋ ಅಲ್ಲವೋ ಎಂದು ಪರೀಕ್ಷಿಸಿ ಬೆಲೆಯನ್ನು ಗೊತ್ತು ಮಾಡಬೇಕು;
ಯಾಜಕನು ಗೊತ್ತುಮಾಡಿದ ಬೆಲೆಯನ್ನು ಬದಲಾಯಿಸುವಂತಿಲ್ಲ. 15ಹರಕೆ ಮಾಡಿದವನು ಆ ಮನೆಯನ್ನು
ಬಿಡಿಸಿಕೊಳ್ಳಬೇಕೆಂದಿದ್ದರೆ ಅದರ ಕ್ರಯದ ಜೊತೆಗೆ ಐದನೆಯ ಒಂದು ಭಾಗವನ್ನು ಹೆಚ್ಚಾಗಿ ಕೊಡಬೇಕು.
ಆಗ ಆ ಮನೆ ಅವನದಾಗುವುದು.

16 "ಯಾವನಾದರು ಪಿತ್ರಾರ್ಜಿತ ಭೂಮಿಯಲ್ಲಿ ಒಂದು ಭಾಗವನ್ನು ಸರ್ವೇಶ್ವರನಿಗೆ ಹರಕೆಮಾಡಿ
ಪ್ರತಿಷ್ಠಿಸಿದ್ದರೆ ಅದಕ್ಕೆ ಬಿತ್ತನೆಬೀಜ ಎಷ್ಟು ಬೇಕಾಗುತ್ತದೆ ಎಂಬುದರ ಆಧಾರದ ಮೇಲೆ ನೀವು ಅದರ
ಬೆಲೆಯನ್ನು ನಿರ್ಣಯಿಸಬೇಕು. ಇಪ್ಪತ್ತು ಕಿಲೋಗ್ರಾಂ ಜವೆಗೋದಿಯನ್ನು ಬಿತ್ತಬಹುದಾದಂಥ ಭೂಮಿಗೆ
ಐವತ್ತು ಬೆಳ್ಳಿ ನಾಣ್ಯಗಳನ್ನು ಕೊಡಬೇಕಾಗುವುದು. 17ಅವನು ಜೂಬಿಲಿ ಸಂವತ್ಸರದಿಂದ ಆ ಹೊಲವನ್ನು
ಪ್ರತಿಷ್ಠಿಸಿದ್ದರೆ ಈ ಕ್ರಯ ಅಂತಿಮವಾಗಿರುವುದು. 18ಜೂಬಿಲಿ ಸಂವತ್ಸರದ ತರುವಾಯ ಭೂಮಿಯನ್ನು ಹರಕೆ
ಮಾಡಿದರೆ, ಮುಂದಿನ ಜೂಬಿಲಿ ಸಂವತ್ಸರಕ್ಕೆ ಕಳೆಯಬೇಕಾದ ವರ್ಷಗಳ ಸಂಖ್ಯೆಯ ಮೇರೆಗೆ ಅದರ
ಬೆಲೆಯನ್ನು ಕಮ್ಮಿ ಮಾಡಬೇಕು. 19ಹರಕೆಮಾಡಿದವನು ಅದನ್ನು ಬಿಡಿಸಿಕೊಳ್ಳಲಾಶಿಸಿದರೆ, ಅದರ
ಕ್ರಯದೊಡನೆ ಐದನೆಯ ಒಂದು ಭಾಗವನ್ನು ಹೆಚ್ಚಾಗಿ ಕೊಡಬೇಕು. ಆಗ ಆ ಹೊಲ ಅವನದಾಗುವುದು.
20ತಾನು ಅದನ್ನು ಬಿಡಿಸಿ ಕೊಳ್ಳದೆ ಮತ್ತೊಬ್ಬನಿಗೆ ಮಾರಿದರೆ ಮುಂದೆ ಅದನ್ನು ಬಿಡಿಸಿಕೊಳ್ಳುವ ಹಕ್ಕು

ಇರುವುದಿಲ್ಲ. [21]ಬಿಡುಗಡೆಯಾಗುವ ಜೂಬಿಲಿ ಸಂವತ್ಸರದಲ್ಲಿ ಆ ಹೊಲ ಸರ್ವೇಶ್ವರನ ಸ್ವಕೀಯ
ಹೊಲವಾದಂತೆ ಅವರ ಸೊತ್ತಾಗಿಯೇ ಇರಬೇಕು. ಅದು ಯಾಜಕರ ವಶದಲ್ಲಿ ಇರಬೇಕು.
22 “ಯಾವನಾದರು ಕ್ರಯಕ್ಕೆ ತೆಗೆದುಕೊಂಡ ಹೊಲವನ್ನು, ಅಂದರೆ ಪಿತ್ರಾರ್ಜಿತ ಭೂಮಿಗೆ
ಸೇರದಿರುವ ಹೊಲವನ್ನು ಹರಕೆ ಮಾಡಿ ಪ್ರತಿಷ್ಠಿಸಿದರೆ [23]ಯಾಜಕನು ಮುಂದಿನ ಜೂಬಿಲಿ ಸಂವತ್ಸರದ
ತನಕ ಇರುವ ವರ್ಷಗಳಿಗೆ ತಕ್ಕಂತೆ ಅದರ ಬೆಲೆಯನ್ನು ನಿರ್ಣಯಿಸಬೇಕು. ಪ್ರತಿಷ್ಠಿಸಿದವನು
ನಿರ್ಣಯಿಸಲಾದ ಹಣವನ್ನು ಸರ್ವೇಶ್ವರನಿಗೆ ಮೀಸಲಾದುದೆಂದು ಭಾವಿಸಿ ಅದೇ ದಿನದಲ್ಲಿ
ಕೊಟ್ಟುಬಿಡಬೇಕು. [24]ಜೂಬಿಲಿ ಸಂವತ್ಸರದಲ್ಲಿ ಆ ಹೊಲವು ಮಾರಿದವನಿಗೆ, ಅಂದರೆ ಯಾರ ಪಿತ್ರಾರ್ಜಿತ
ಭೂಮಿಗೆ ಸೇರಿದೆಯೋ ಅವರಿಗೆ ಅದನ್ನು ಮರಳಿಸಬೇಕು. [25]ದೇವರ ಸೇವೆಯಲ್ಲಿ ಬಳಕೆಯಲ್ಲಿರುವ ‘ಶೆಕೆಲ್’
ಒಂದಕ್ಕೆ ಇಪ್ಪತ್ತು ‘ಗೇರಾ’ ತೂಕದ ನಾಣ್ಯದ ಮೇರೆಗೆ ಬೆಲೆಯನ್ನು ನಿಗದಿಮಾಡಬೇಕು.
26 “ಶುದ್ಧ ಪ್ರಾಣಿಯಲ್ಲಿ ಚೊಚ್ಚಲಾಗಿ ಹುಟ್ಟಿದ್ದು ಸರ್ವೇಶ್ವರನಿಗೆ ಸೇರಿದ್ದು. ಆದ್ದರಿಂದ ಅದನ್ನು
ಯಾರೂ ಹರಕೆಯಾಗಿ ಕೊಡಕೂಡದು. ಚೊಚ್ಚಲುಮರಿ ಹೋರಿಯೇ ಆಗಿರಲಿ, ಆಡುಕುರಿಯೇ ಆಗಿರಲಿ,
ಅದು ಸರ್ವೇಶ್ವರನ ಸೊತ್ತು. [27]ಅಶುದ್ಧ ಪ್ರಾಣಿಯಲ್ಲಿ ಹುಟ್ಟಿದ ಚೊಚ್ಚಲು ಮರಿಯನ್ನು ಹರಕೆ ಮಾಡಿದ್ದರೆ,
ಹರಕೆಮಾಡಿದವನು ನಿಗದಿಯಾದ ಬೆಲೆಯೊಂದಿಗೆ ಐದನೆಯ ಒಂದು ಭಾಗವನ್ನು ಹೆಚ್ಚಾಗಿ ಕೊಟ್ಟು ಅದನ್ನು
ಬಿಡಿಸಿಕೊಳ್ಳಬಹುದು. ಅವನು ಬಿಡಿಸದೆ ಹೋದರೆ ಅದನ್ನು ನಿಗದಿಯಾದಕ್ಕೆ ಮಾರಬೇಕು.
28 “ಯಾರಾದರು ನರಮಾನವನನ್ನಾಗಲಿ, ಪಶುಪ್ರಾಣಿಯನ್ನಾಗಲಿ, ಪಿತ್ರಾರ್ಜಿತ
ಭೂಮಿಯನ್ನಾಗಲಿ, ಬೇರೆ ಯಾವುದನ್ನೇ ಆಗಲಿ ಯಾವ ಷರತ್ತೂ ಇಲ್ಲದೆ ಸಂಪೂರ್ಣವಾಗಿ
ಸರ್ವೇಶ್ವರನದಾಗಿರಲು ಹರಕೆ ಮಾಡಿಕೊಟ್ಟರೆ ಅದನ್ನು ಮಾರಲೂಕೂಡದು, ಬಿಡಿಸಿಕೊಳ್ಳಲೂಬಾರದು.
ಸಂಪೂರ್ಣ ಸರ್ವೇಶ್ವರನದಾಗಿರಲು ಸಮರ್ಪಿಸುವಂಥದೆಲ್ಲಾ ಸರ್ವೇಶ್ವರನಿಗೆ ಮೀಸಲಾಗಿಯೇ ಇರಬೇಕು.
[29]ಸಂಪೂರ್ಣ ಸರ್ವೇಶ್ವರನ ಸೊತ್ತಾಗುವುದಕ್ಕೆ ಒಪ್ಪಿಸಲಾದದ್ದು ನರಜಾತಿಯಾದಾದರೆ ಬಿಡಿಸುವುದಕ್ಕಾಗದು;
ಅವನಿಗೆ ಮರಣವೇ ಆಗಬೇಕು.
30 “ಹೊಲದ ದವಸಧಾನ್ಯವಾಗಲಿ, ತೋಟದ ಹಣ್ಣುಹಂಪಲು ಆಗಲಿ, ಭೂಮಿಯಿಂದುಂಟಾದ
ಎಲ್ಲ ಆದಾಯದಲ್ಲಿ ಹತ್ತನೆಯ ಒಂದು ಪಾಲು ಸರ್ವೇಶ್ವರನದಾಗಿರಬೇಕು. ಅದು ಸರ್ವೇಶ್ವರನಿಗೆ
ಮೀಸಲಾದದ್ದು. [31]ಯಾವನಾದರು ತಾನು ಕೊಡಬೇಕಾದ ಹತ್ತನೆಯ ಪಾಲಿನಲ್ಲಿ ಏನಾದರು ಬಿಡಿಸಿಕೊಳ್ಳ
ಬೇಕೆಂದಿದ್ದರೆ ಅದರ ಮೌಲ್ಯದೊಡನೆ ಐದನೆಯ ಒಂದು ಭಾಗವನ್ನು ಹೆಚ್ಚಾಗಿ ಕೊಡಬೇಕು. [32]ದನಕರುಗಳೇ
ಆಗಲಿ, ಆಡುಕುರಿಗಳೇ ಆಗಲಿ, ಒಡೆಯನು ಲೆಕ್ಕಿಸಿದ ಎಲ್ಲ ಪಶುಪ್ರಾಣಿಗಳಲ್ಲಿ ಪ್ರತಿ ಹತ್ತನೆಯದು
ಸರ್ವೇಶ್ವರನಿಗೆ ಮೀಸಲಾಗಿರಬೇಕು. [33]ಆ ಪಶುಪ್ರಾಣಿ ಒಳ್ಳೆಯದೋ ಕೆಟ್ಟದೋ ಎಂದು ನೋಡಬಾರದು.
ಅದನ್ನು ಬದಲಾಯಿಸಬಾರದು. ಕೊಡಬೇಕಾದವನು ಅದನ್ನು ಬದಲಾಯಿಸಿದ್ದಾದರೆ ಅವನು ಮೊದಲು
ಲೆಕ್ಕಿಸಿದ್ದು ಹಾಗು ಅದಕ್ಕೆ ಬದಲಾಗಿ ಇಟ್ಟಿದ್ದು ಎರಡೂ ಸರ್ವೇಶ್ವರನದಾಗಿರಬೇಕು. ಅದನ್ನು ಬಿಡಿಸಿಕೊಳ್ಳುವ
ಹಕ್ಕು ಇರುವುದಿಲ್ಲ.”
34 ಇವೇ ಸರ್ವೇಶ್ವರನು ಸೀನಾಯಿ ಬೆಟ್ಟದಲ್ಲಿ ಮೋಶೆಯ ಮುಖಾಂತರ ಇಸ್ರಯೇಲರಿಗೆ ಕೊಟ್ಟ
ಆಜ್ಞೆಗಳು.